


ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಜೂನ್ 7 ಬುಧವಾರ 2023
ಸಂಪುಟ: 44 | ಸಂಚಿಕೆ: 52 | ಪುಟಗಳು: 10
₹4
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಪ್ರತ್ಯೇಕ ಮೀಟರ್ ಇದ್ದರೆ ಬಾಡಿಗೆದಾರರಿಗೂ ಉಚಿತ ವಿದ್ಯುತ್

● ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ● 200 ಯೂನಿಟ್ ಒಳಗೆ ವಿದ್ಯುತ್ ಬಳಸುವವರಿಗೆ ಇದು ಅನ್ವಯ



ಬೆಂಗಳೂರು, ಜೂ.6(ಕೆಎಂಶಿ)– ಇನ್ನೂರು ಯುನಿಟ್‌ಗಳ ಒಳಗೆ ವಿದ್ಯುತ್ ಬಳಕೆ ಮಾಡುವ ಬಾಡಿಗೆದಾರರಿಗೂ ಉಚಿತ ವಿದ್ಯುತ್ ಸೌಲಭ್ಯ ದೊರೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಮಂಗಳವಾರ ಸ್ಪಷ್ಟಪಡಿಸಿದ್ದಾರೆ.

ಉಚಿತ ವಿದ್ಯುತ್ ಸೌಲಭ್ಯ ಕಲ್ಪಿಸಿರುವ ಸಂಬಂಧ ನಿನ್ನೆ ರಾಜ್ಯ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಯಲ್ಲಿ ಕುಟುಂಬದ ಒಂದು ಮನೆಗೆ ಮಾತ್ರ ಯೋಜನೆ ಅನ್ವಯವಾಗುತ್ತದೆ ಎಂಬ ನಿಯಮ ರೂಪಿಸಲಾಗಿತ್ತು. ನಿಯಮಾವಳಿ ಪ್ರಕಟವಾದ ನಂತರ ಅಪಸ್ವರಗಳು ಕೇಳಿಬಂದ ಹಿನ್ನೆಲೆಯಲ್ಲಿ ಬಾಡಿಗೆದಾರರಿಗೂ ಪ್ರತ್ಯೇಕ ಮೀಟರ್ ಇದ್ದರೆ ಸೌಲಭ್ಯ ದೊರೆಯುತ್ತದೆ ಎಂದು ತಿಳಿಸಿದ್ದಾರೆ.

ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸು ಅವರ 41ನೇ ಪುಣ್ಯಸ್ಮರಣೆ ಅಂಗವಾಗಿ ವಿಧಾನ ಸೌಧದ ಆವರಣದಲ್ಲಿರುವ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜುಲೈ ಒಂದರಿಂದ ಗೃಹ ಜ್ಯೋತಿ ಯೋಜನೆ ಜಾರಿಗೊಂಡು ಆಗಸ್ಟ್ ತಿಂಗಳಲ್ಲಿ 200 ಯುನಿಟ್ ಒಳಗೆ ಬಳಕೆ ಮಾಡುವ ಗ್ರಾಹಕರು ವಿದ್ಯುತ್ ಬಿಲ್ ಪಾವತಿಸುವ ಅಗತ್ಯವಿಲ್ಲ. ಎಲ್ಲಾ ಅರ್ಹರಿಗೂ ನಮ್ಮ ಗ್ಯಾರಂಟಿ ಯೋಜನೆಗಳು ಅವರ ಮನೆ ಬಾಗಿಲಿಗೆ ತಲುಪಲಿವೆ. ಇದಕ್ಕಾಗಿ ನಿರಂತರವಾಗಿ ಅಧಿಕಾರಿಗಳ ಜೊತೆ ಸಭೆ ನಡೆಸುತ್ತಿದ್ದೇನೆ. ಐದು ಗ್ಯಾರಂಟಿಗಳಲ್ಲಿ ನಾಲ್ಕು ಗ್ಯಾರಂಟಿಗಳ ಬಗ್ಗೆ ಮಾರ್ಗಸೂಚಿ ಹೊರಬಿದ್ದಿದೆ. ಇವುಗಳ ಅನುಷ್ಠಾನ ಬರುವ ಭಾನುವಾರದಿಂದ ಹಂತ ಹಂತವಾಗಿ ಆಗಲಿದೆ. ಗೃಹ ಜ್ಯೋತಿ ಯೋಜನೆಗೆ ಸಂಬಂಧಿಸಿದಂತೆ ಮಾರ್ಗಸೂಚಿ ಹೊರಬಿದ್ದ ನಂತರ ಸಾರ್ವಜನಿಕರು ಕೆಲವು ಸಂಶಯಗಳನ್ನು ಹೊರಹಾಕಿದ್ದಾರೆ. ಸರ್ಕಾರ ಜನರ ನಾಡಿಮಿಡಿತಕ್ಕೆ ತಕ್ಕಂತೆ ನಡೆದುಕೊಳ್ಳುತ್ತದೆ. ಕೇವಲ ಮಾಲೀಕರಿಗಷ್ಟೇ ಅಲ್ಲ, ಬಾಡಿಗೆದಾರರಿಗೆ ಈ ಸೌಲಭ್ಯ ಕಲ್ಪಿಸಲು ನಾನು, ಇಂಧನ ಸಚಿವರು ಅಧಿಕಾರಿಗಳ ಸಭೆ ನಡೆಸಿ ಸಣ್ಣಪುಟ್ಟ ಲೋಪ ಸರಿಪಡಿಸಿ ನಮ್ಮ ಯೋಜನೆಗಳು ಅರ್ಹರಿಗೆ ದೊರೆಯುವಂತೆ ಮಾಡುತ್ತೇವೆ ಎಂದರು. 200 ಯುನಿಟ್ ಒಳಗೆ ವಿದ್ಯುತ್ ಬಳಕೆ ಮಾಡುವ ಗ್ರಾಹಕರು ಆಗಸ್ಟ್‌ನಿಂದ ವಿದ್ಯುತ್ ಬಿಲ್ ಕಟ್ಟುವಂತಿಲ್ಲ.

ವಾಣಿಜ್ಯ ಕಟ್ಟಡ ಹಾಗೂ ಸಣ್ಣ ಉದ್ದಿಮೆದಾರರಿಗೆ ಈ ಯೋಜನೆ ಅನ್ವಯವಾಗುವುದಿಲ್ಲ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

ನಾವು ದಿ.ದೇವರಾಜ ಅರಸು ಅವರ ಆದರ್ಶದ ಅಡಿಯಲ್ಲಿ ಕೆಲಸ ಮಾಡಿಕೊಂಡು ಬಂದವರು. ನಮಗೆ ರೈತರು, ಬಡವರು, ತುಳಿತಕ್ಕೆ ಒಳಗಾದವರೊಂದಿಗೆ ಚಿಂತನೆ ಮಾಡುವ ಶಕ್ತಿ ಇದೆ. ಅರಸು ಅವರು ಮುಖ್ಯಮಂತ್ರಿಯಾಗಿ ಹಾಗೂ ಅವರ ಜೀವಿತ ಕಾಲದಲ್ಲಿ ಮಾಡಿದ ಕೆಲಸ ನಮಗೆ ಸ್ಫೂರ್ತಿ. ಸಾಮಾಜಿಕ ನ್ಯಾಯದ ಹರಿಕಾರ ಅನೇಕ ಕ್ರಾಂತಿಕಾರಿ ತೀರ್ಮಾನಗಳನ್ನು ಕೈಗೊಂಡಿದ್ದರು. ಅನೇಕ ಜನರನ್ನು ಶಾಸಕರನ್ನಾಗಿಸಿ ಅವರಿಗೆ ಪ್ರಾತಿನಿಧ್ಯ ನೀಡುವ ಕೆಲಸ ಮಾಡಿದರು. ರಾಜಕೀಯ ವ್ಯವಸ್ಥೆಯಲ್ಲೂ ಸಾಮಾಜಿಕ ನ್ಯಾಯ ತರಲು ಶ್ರಮಿಸಿದರು. ಅಧಿಕಾರ ಎಲ್ಲರಿಗೂ ದೊರೆಯಬೇಕು ಎಂಬ ನಂಬಿಕೆ ಉಳ್ಳವರಾಗಿದ್ದರು.

ಅವರ ಚಿಂತನೆಯಲ್ಲಿ ಬೆಳೆದ ನಾವು ಬಡವರು ಮತ್ತು ಮಧ್ಯಮ ವರ್ಗದವರಿಗೆ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶದಿಂದ 5 ಗ್ಯಾರಂಟಿಗಳನ್ನು ಪಕ್ಷ ತಂದಿದ್ದು, ಕಾಂಗ್ರೆಸ್ ಸರ್ಕಾರ ಅನುಷ್ಠಾನಗೊಳಿಸುತ್ತಿದೆ ಎಂದರು.



ಅಂತ್ಯೋದಯ, ಬಿಪಿಎಲ್, ಎಪಿಎಲ್ ಪಡಿತರ ಚೀಟಿಯಲ್ಲಿರುವ ಕುಟುಂಬದ ಯಜಮಾನಿಯೇ 'ಗೃಹಲಕ್ಷ್ಮಿ'

● ಸರ್ಕಾರದ ಆದೇಶ; ಕುಟುಂಬದಲ್ಲಿ ಎಷ್ಟೇ ಮಹಿಳೆಯರಿದ್ದರೂ ಒಬ್ಬರಿಗೆ ಮಾತ್ರ 2000 ರೂ.

● ಜೂ. 15ರಿಂದ ಅರ್ಜಿ ಸಲ್ಲಿಕೆಗೆ ಅವಕಾಶ; ಆ. 15ರಿಂದ ಮಹಿಳೆ ಬ್ಯಾಂಕ್ ಖಾತೆಗೆ ಹಣ ಜಮಾ



ಬೆಂಗಳೂರು, ಜೂ.6–ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಐದು ಗ್ಯಾರಂಟಿಗಳ ಪೈಕಿ ಒಂದಾಗಿರುವ ಪ್ರತಿ ಕುಟುಂಬದ ಯಜಮಾನಿಗೆ ಮಾಸಿಕ 2 ಸಾವಿರ ರೂ. ನೀಡುವ ಗೃಹಲಕ್ಷ್ಮಿ ಯೋಜನೆ ಸಂಬಂಧ ಇಂದು ಆದೇಶ ಹೊರಬಿದ್ದಿದೆ. ಗೃಹಜ್ಯೋತಿ, ಶಕ್ತಿ ಯೋಜನೆ ಇತ್ಯಾದಿ ಗ್ಯಾರಂಟಿ ಕುರಿತು ಆದೇಶ ಹೊರಡಿಸಿದ್ದ ರಾಜ್ಯ ಸರ್ಕಾರ ಇದೀಗ ಗೃಹಲಕ್ಷ್ಮಿ ಯೋಜನೆ ಸಂಬಂಧವೂ ಆದೇಶಿಸಿದೆ. ▶ 8ನೇ ಪುಟಕ್ಕೆ

ಮಾರ್ಗಸೂಚಿಗಳು ಇಂತಿವೆ

- ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯು ಈ ಯೋಜನೆಯ ಅರ್ಹ ಫಲಾನುಭವಿ ಆಗಿರುತ್ತಾರೆ.
- ಒಂದೇ ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಮಹಿಳೆಯರಿದ್ದಲ್ಲಿ, ಒಬ್ಬ ಮಹಿಳೆಗೆ ಮಾತ್ರ ಯೋಜನೆ ಅನ್ವಯಿಸತಕ್ಕದ್ದು.
- ಈ ಯೋಜನೆಯ ಫಲಾನುಭವಿಗಳು 2023ರ ಜೂನ್ 15ರಿಂದ ಜುಲೈ 15ರವರೆಗೆ ಅರ್ಜಿ ಸಲ್ಲಿಸುವುದು. ನಂತರ ಜುಲೈ 15ರಿಂದ ಫಲಾನುಭವಿಗಳ ಆಯ್ಕೆ ಮಾಡಲಾಗುವುದು. ಆಯ್ಕೆಗೊಂಡ ಫಲಾನುಭವಿಗಳಿಗೆ ಆಗಸ್ಟ್ 15ರಂದು ಅವರ ಬ್ಯಾಂಕ್ ಖಾತೆಗೆ ಹಣವನ್ನು ವರ್ಗಾವಣೆ ಮಾಡಲಾಗುವುದು.
- ಅರ್ಜಿದಾರರು ಸೇವಾ ಸಿಂಧು ಪೋರ್ಟಲ್ ಮೂಲಕವಾಗಲೀ ಅಥವಾ ಭೌತಿಕವಾಗಿಯಾಗಲೀ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುತ್ತದೆ.
- ಅರ್ಜಿದಾರರು ಸಲ್ಲಿಸುವ ಪೂರ್ಣಪ್ರಮಾಣದ ಅರ್ಜಿಯಲ್ಲಿನ ಸ್ವಯಂಘೋಷಣೆ ಆಧಾರದ ಮೇಲೆ ಮಂಜೂರಾತಿ ನೀಡುವುದು. ಅರ್ಜಿಯಲ್ಲಿನ ಅಂಶಗಳ ಬಗ್ಗೆ ತದನಂತರ ಪರಿಶೀಲನೆ ಮಾಡುವುದು. ತಪ್ಪು ಮಾಹಿತಿ ನೀಡಿ ಸೌಲಭ್ಯ ಪಡೆದಿರುವುದು ಕಂಡುಬಂದಲ್ಲಿ, ಈಗಾಗಲೇ ಪಾವತಿಸಲಾಗಿರುವ ಹಣವನ್ನು ಅರ್ಜಿದಾರರಿಂದ ವಸೂಲು ಮಾಡಲಾಗುವುದು ಮತ್ತು ಅಂತಹವರ ವಿರುದ್ಧ ಸೂಕ್ತಕ್ರಮ ಕೈಗೊಳ್ಳಲಾಗುವುದು.
- ಈ ಯೋಜನೆಯ ಸೌಲಭ್ಯ ಪಡೆಯಲು ಫಲಾನುಭವಿಯ ಬ್ಯಾಂಕ್ ಖಾತೆ ಮತ್ತು ಆಧಾರ್ ಕಾರ್ಡ್‌ಗಳನ್ನು ಜೋಡಣೆ ಮಾಡುವುದು.
- ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಅಥವಾ ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಜಿಎಸ್‌ಟಿ ರಿಟರ್ನ್ಸ್ ಸಲ್ಲಿಸುವವರಾಗಿದ್ದಲ್ಲಿ ಅಂಥವರಿಗೆ ಈ ಯೋಜನೆ ಅನ್ವಯಿಸುವುದಿಲ್ಲ

ಕೆಬಿಜಿಯವರ ಛೂಮಂತ್ರ... ಛೂಮಂತ್ರ...



ಹೊಸ ಕಾಂಗ್ರೆಸ್ ಸರ್ಕಾರ, ಹೊಸ ಬೆಳಕು

ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಸಾಂವಿಧಾನಿಕ ಧರ್ಮದ ಅನ್ವಯ ಮತದಾನದ ಬದಲು ಎಲ್ಲೋ ಒಂದು ಕಡೆ ವ್ಯಾಪಾರ ಧರ್ಮದ ಪ್ರಕಾರ ಮತ ವಿನಿಮಯ ಆಗಿದೆಯಾ? ■ ಪುಟ–4

3 ದಿನದಲ್ಲಿ ಪ್ರತಿಪಕ್ಷ ನಾಯಕನ ಆಯ್ಕೆ

ಕೇಂದ್ರ ಸಚಿವ ಪ್ರಹ್ಲಾದ್‌ಜೋಶಿ ಮಾಹಿತಿ



ಬೆಂಗಳೂರು, ಜೂ.6–ಕರ್ನಾಟಕ ವಿಧಾನಸಭಾ ಚುನಾವಣೆ ಫಲಿತಾಂಶ ಪ್ರಕಟಗೊಂಡು 24 ದಿನಗಳು ಕಳೆದಿವೆ. ಆದರೆ ಬಿಜೆಪಿಯು ರಾಜ್ಯದಲ್ಲಿ ಶಾಸಕಾಂಗ ಪಕ್ಷದ ನೂತನ ನಾಯಕನನ್ನು, ಅಂದರೆ ಪ್ರತಿಪಕ್ಷದ ನಾಯಕನನ್ನು ಇನ್ನೂ ಆಯ್ಕೆ ಮಾಡಿಲ್ಲ. ಈ ವಿಚಾರವಾಗಿ ದೆಹಲಿಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ, ಮುಂದಿನ ಮೂರು ದಿನಗಳಲ್ಲಿ ಪಕ್ಷವು ಪ್ರತಿಪಕ್ಷ ನಾಯಕನ ಆಯ್ಕೆ ಮಾಡಲಿದೆ ಎಂದು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ಮೂರು ದಿನಗಳಲ್ಲಿ ಪ್ರತಿಪಕ್ಷ ನಾಯಕ ಸ್ಥಾನದ ಬಗ್ಗೆ ಪಕ್ಷವು ನಿರ್ಧಾರ ಕೈಗೊಳ್ಳಲಿದೆ ಎಂದಿದ್ದಾರೆ. ಈಗಾಗಲೇ ವಿರೋಧ ಪಕ್ಷದ ನಾಯಕನನ್ನು ನೇಮಿಸಿ ಆಗಬೇಕಿತ್ತು. ಆದರೆ ನಮ್ಮ ನಾಯಕರು ಒಡಿಶಾ ರೈಲು ಅಪಘಾತದ ಮೇಲೆ ಗಮನ ಕೇಂದ್ರೀಕರಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ವಿಜಯಪುರ ಶಾಸಕ ಬಸನಗೌಡ ಪಾಟೀಲ ಪ್ರತಿಪಕ್ಷ ನಾಯಕ ▶ 8ನೇ ಪುಟಕ್ಕೆ

ಎಸ್‌ಎಸ್‌ಎಲ್‌ಸಿ ಮರುಮೌಲ್ಯಮಾಪನ ಫಲಿತಾಂಶ ಪ್ರಕಟ

ಬೆಂಗಳೂರು, ಜೂ.6– ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು (KSEEB) ಕರ್ನಾಟಕ SSLC (10ನೇ ತರಗತಿ) ಪರೀಕ್ಷೆ 2023ರ ಮರುಮೌಲ್ಯಮಾಪನ ಮತ್ತು ಮರು ಲೆಕ್ಕಾಚಾರದ ಫಲಿತಾಂಶಗಳನ್ನು ಪ್ರಕಟಿಸಿದೆ. ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ತಮ್ಮ ಫಲಿತಾಂಶಗಳನ್ನು ಅಧಿಕೃತ ವೆಬ್‌ಸೈಟ್ sslc.karnataka.gov.inನಲ್ಲಿ ಪಡೆಯಬಹುದು. ಕರ್ನಾಟಕ SSLC ಮರುಮೌಲ್ಯಮಾಪನ ಫಲಿತಾಂಶ 2023 ವೀಕ್ಷಿಸಲು, ವಿದ್ಯಾರ್ಥಿಗಳು ತಮ್ಮ ಹಾಲ್ ಟಿಕೆಟ್‌ನಲ್ಲಿ ▶ 8ನೇ ಪುಟಕ್ಕೆ

ಹೆಸರಾಂತ ಕರ್ನಾಟಕ ಶಾಸ್ತ್ರೀಯ ಸಂಗೀತ ವಿದುಷಿ ಡಾ.ಗೌರಿ ಕುಪ್ಪುಸ್ವಾಮಿ ನಿಧನ



ಮೈಸೂರು,ಜೂ.6– ಹೆಸರಾಂತ ಕರ್ನಾಟಕ ಶಾಸ್ತ್ರೀಯ ಸಂಗೀತದ ಖ್ಯಾತ ವಿದುಷಿ ಡಾ.ಗೌರಿ ಕುಪ್ಪುಸ್ವಾಮಿ (92) ಅವರು ಮಂಗಳವಾರ ನಿಧನರಾದರು.

ಜಯಲಕ್ಷ್ಮೀಪುರಂನಲ್ಲಿರುವ ಪುತ್ರ ಡಾ.ಎಂ.ಹರಿಹರನ್ ಅವರೊಂದಿಗೆ ನೆಲೆಸಿದ್ದ ಡಾ.ಗೌರಿ ಅವರು ಕಳೆದ ಕೆಲವು ದಿನಗಳಿಂದ ಅಸ್ವಸ್ಥರಾಗಿದ್ದರು. ನಗರದ ಖಾಸಗಿ ಆಸ್ಪತ್ರೆಯಲ್ಲಿ ಮಂಗಳವಾರ ಬೆಳಗ್ಗೆ ನಿಧನರಾದರು. ಸಿಂಗಾಪುರದಲ್ಲಿ ಪೆಥಾಲಜಿಸ್ಟ್ ಆಗಿರುವ ಪುತ್ರಿ ಡಾ. ರಾಧಿಕಾ ಪ್ರಭಾಕರ್, ಸೌದಿ ಅರೇಬಿಯಾದ ಜೆಡ್ಡಾದಲ್ಲಿ ನೆಫ್ರಾಲಜಿಸ್ಟ್ ಆಗಿರುವ ಅಳಿಯ ಡಾ. ಕೆ.ಎಸ್. ಪ್ರಭಾಕರ್, ಪಾಂಡಿಚೇರಿ ಸರ್ಕಾರದ ವಿಶೇಷ ಅಧಿಕಾರಿ (ನಿವೃತ್ತ) ಪುತ್ರ ಡಾ.ಎಂ.ಹರಿಹರನ್, ಗೌರಿ ಕುಪ್ಪುಸ್ವಾಮಿ ಅವರ ಹಳೆ ವಿದ್ಯಾರ್ಥಿಯೇ ಆಗಿದ್ದ ಸೊಸೆ ವಿ.ಎಸ್. ರಮಾ, ಮೊಮ್ಮಕ್ಕಳಾದ ಅಪರ್ಣಾ ಪ್ರಭಾಕರ್ ಮತ್ತು ಮಧುರಾಂಬಿಕಾ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರ ಪತಿ ಕುಪ್ಪುಸ್ವಾಮಿ ಅವರು ತಮ್ಮ 87ನೇ ವಯಸ್ಸಿನಲ್ಲಿ ಅಕ್ಟೋಬರ್ 1, 2010 ರಲ್ಲಿ ನಿಧನರಾದರು. ಗೌರಿ ಕುಪ್ಪುಸ್ವಾಮಿ ಅವರ ಪುತ್ರಿ ಮತ್ತು ಮೊಮ್ಮಗಳು ಸಿಂಗಾಪುರದಿಂದ ಆಗಮಿಸಿದ ನಂತರ ಗೋಕುಲಂನ ಚಿರಶಾಂತಿ ಧಾಮದಲ್ಲಿ ಅಂತ್ಯಕ್ರಿಯೆ ನಡೆಯಲಿದೆ. ತಮಿಳುನಾಡಿನ ಪುದುಕೋಟ್ಟೈ ಜಿಲ್ಲೆಯಲ್ಲಿ ▶ 8ನೇ ಪುಟಕ್ಕೆ

ಪರಿಷತ್‌ನ 3 ಸ್ಥಾನಕ್ಕೆ ಜೂ.30 ಉಪಚುನಾವಣೆ

ಬೆಂಗಳೂರು, ಜೂ.6– ಕರ್ನಾಟಕ ವಿಧಾನಪರಿಷತ್‌ನಲ್ಲಿ ಸದಸ್ಯರ ರಾಜೀನಾಮೆಯಿಂದ ತೆರವಾಗಿರುವ ಮೂರು ಸ್ಥಾನಗಳ ಆಯ್ಕೆಗೆ, ಚುನಾವಣಾ ಆಯೋಗವು ಉಪ ಚುನಾವಣೆ ದಿನಾಂಕ ಪ್ರಕಟಿಸಿದೆ.

ಪರಿಷತ್ ಸದಸ್ಯರಾಗಿದ್ದ ಬಾಬೂರಾವ್ ಚಿಂಚನಸೂರ, ಆರ್.ಶಂಕರ್ ಹಾಗೂ ಲಕ್ಷ್ಮಣ ಸವದಿ ವಿಧಾನಸಭೆ ಚುನಾವಣೆಗೂ ಮುನ್ನ ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿದ್ದರು. ಹೀಗೆ ತೆರವಾಗಿರುವ ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ವಿಧಾನಸಭೆ ಸದಸ್ಯರೇ ಮತದಾನದ ಮೂಲಕ ಪರಿಷತ್ ಸದಸ್ಯರನ್ನು ಆಯ್ಕೆ ಮಾಡಲಿದ್ದಾರೆ. ಜ.13ರಿಂದ 20ರವರೆಗೆ ನಾಮಪತ್ರ ಸಲ್ಲಿಕೆಗೆ ಅವಕಾಶವಿದೆ 21ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, 22ರಂದು ಹಿಂಪಡೆಯಬಹುದಾಗಿದೆ. ಜೂ.30ರಂದು ಮತದಾನ ನಡೆಯಲಿದ್ದು, ಅದೇ ದಿನ ಫಲಿತಾಂಶ ಪ್ರಕಟವಾಗಲಿದೆ.



ಮೈಸೂರಿಗೂ ಉಪನಗರ ರೈಲು ಯೋಜನೆ ವಿಸ್ತರಣೆ

ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸೂಚನೆ

ಬೆಂಗಳೂರು, ಜೂ.6–ಕೇವಲ ಬೆಂಗಳೂರು ನೆರೆಹೊರೆಯ ಪ್ರದೇಶಗಳನ್ನು ಮಾತ್ರ ಗಮನದಲ್ಲಿಟ್ಟುಕೊಂಡು ರೂಪಿಸಿರುವ ಉಪನಗರ ರೈಲು ಯೋಜನೆಯನ್ನು ಸುತ್ತಲಿನ ದೂರದ ನಗರಗಳಿಗೂ ವಿಸ್ತರಿಸಬೇಕು. ಈ ನಿಟ್ಟಿನಲ್ಲಿ ಯೋಜನೆಯನ್ನು ಪರಿಷ್ಕರಿಸಿ, ಹೊಸದಾಗಿ ಪ್ರಸ್ತಾವನೆ ಸಲ್ಲಿಸಬೇಕು. ಹೀಗಾದರೆ ಮಾತ್ರ ಬೆಂಗಳೂರಿನ ಸಂಚಾರ ದಟ್ಟಣೆಯ ಸಮಸ್ಯೆಗೆ ಪರಿಹಾರ ಸಿಗುತ್ತದೆ ಎಂದು ಬೃಹತ್ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಮಂಗಳವಾರ ಅಧಿಕಾರಿಗಳಿಗೆ ಸೂಚಿಸಿದ್ದಾರೆ.




ಮೂಲಸೌಕರ್ಯ ಇಲಾಖೆಯ ಅಧಿಕಾರಿಗಳ ಜತೆ ಖನಿಜ ಭವನದಲ್ಲಿ ಸುದೀರ್ಘ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಈ ಮಹತ್ವದ ನಿರ್ದೇಶನ ನೀಡಿದ್ದಾರೆ.

ಈಗ 148 ಕಿ.ಮೀ. ಉದ್ದದ ಉಪನಗರ ರೈಲು ಯೋಜನೆಯ ಮೊದಲನೇ ಹಂತದ ಕಾಮಗಾರಿ ನಡೆಯುತ್ತಿದ್ದು, ಉದ್ದೇಶಿತ ಒಟ್ಟಾರೆ ಯೋಜನೆಗೆ 15,767 ಕೋಟಿ ರೂ. ವೆಚ್ಚವಾಗುತ್ತಿದೆ. ಆದರೆ ಇದರ ಸದ್ಯದ ಸ್ವರೂಪದಿಂದ ಹೆಚ್ಚಿನ ಪ್ರಯೋಜನವಿಲ್ಲ. ಇದನ್ನು ರಾಮನಗರದಿಂದ ಮೈಸೂರು, ದೊಡ್ಡಬಳ್ಳಾಪುರದಿಂದ ಗೌರಿಬಿದನೂರು–ಹಿಂದೂಪುರ, ಚಿಕ್ಕಬಳ್ಳಾಪುರದಿಂದ ಕೋಲಾರಕ್ಕೆ ವಿಸ್ತರಿಸಬೇಕು. ಈ ಸಂಬಂಧ ಯೋಜನೆಯನ್ನು ಪರಿಷ್ಕರಿಸಿ, ಮಂಡಳಿ ಮುಂದೆ ಹೊಸದಾಗಿ ಪ್ರಸ್ತಾವನೆ ಸಲ್ಲಿಸಬೇಕು ಎಂದು ಅವರು ವಿವರಿಸಿದರು. ಸದ್ಯಕ್ಕೆ ಸಬರ್ಬನ್ ರೈಲು ಯೋಜನೆಯನ್ನು ▶ 8ನೇ ಪುಟಕ್ಕೆ

ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಎನ್‌ಡಿಎ ಭಾಗ

● ಬಿಜೆಪಿ ವರಿಷ್ಠರೊಂದಿಗೆ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಮಾತುಕತೆ ಫಲಶ್ರುತಿ ● ಕಳೆದ ವಿಧಾನಸಭಾ ಚುನಾವಣೆಯಲ್ಲಿ ಅಲ್ಪಸಂಖ್ಯಾತರು ಪಕ್ಷದಿಂದ ದೂರ ಸರಿದ ಹಿನ್ನೆಲೆ ● ಬಿಜೆಪಿ ಜೊತೆಗೆ ಹೊಂದಾಣಿಕೆ ಮಾಡಿಕೊಂಡು ಐದು ಕ್ಷೇತ್ರದಲ್ಲಿ ಸ್ಪರ್ಧಿಸಲು ನಿರ್ಧಾರ



ಅಮಿತ್ ಶಾ



ಹೆಚ್.ಡಿ.ಕುಮಾರಸ್ವಾಮಿ




ಜೆ.ಪಿ.ನಡ್ಡಾ

ಬೆಂಗಳೂರು, ಜೂ.6(ಕೆಎಂಶಿ)– ಮುಂಬರುವ ಲೋಕಸಭಾ ಚುನಾವಣಾ ವೇಳೆಗೆ ಜೆಡಿಎಸ್ ಎನ್‌ಡಿಎ ಮೈತ್ರಿಕೂಟದ ಭಾಗವಾಗಲಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಅಲ್ಪಸಂಖ್ಯಾತರು ಪಕ್ಷದಿಂದ ದೂರ ಸರಿದ ಪರಿಣಾಮ ಕಾಂಗ್ರೆಸ್ ವಿರೋಧಿ ಬಿಜೆಪಿ ನೇತೃತ್ವದ ಎನ್‌ಡಿಎ ಜೊತೆ ಕೈಜೋಡಿಸುವ ನಿಟ್ಟಿನಲ್ಲಿ ಮಾತುಕತೆಗಳು ನಡೆದಿವೆ.

ಬಿಜೆಪಿ ವರಿಷ್ಠರ ಆಹ್ವಾನದ ಮೇರೆಗೆ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಇತ್ತೀಚೆಗೆ ದೆಹಲಿ ಪ್ರವಾಸ ಕೈಗೊಂಡಿದ್ದರು. ಮೂರು ದಿನಗಳ ತಮ್ಮ ದೆಹಲಿ ಪ್ರವಾಸದ ಸಂದರ್ಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಹಾಗೂ ಮತ್ತೊಬ್ಬ ನಾಯಕರನ್ನು ಭೇಟಿಯಾಗಿ, ಜೆಡಿಎಸ್ ಎನ್‌ಡಿಎ ಭಾಗವಾಗುವ ಸಂಬಂಧ ಚರ್ಚೆ ಮಾಡಿದ್ದಾರೆ. ವಿಧಾನಸಭಾ ಚುನಾವಣಾ ಫಲಿತಾಂಶ ಪ್ರಕಟವಾದ ದಿನವೇ ಪ್ರಧಾನಿ ಮೋದಿ ▶ 8ನೇ ಪುಟಕ್ಕೆ

ಲೋಕಸಭೆಗೆ ನಾನು ಸ್ಪರ್ಧಿಸಲ್ಲ



ಬೆಂಗಳೂರು: ಲೋಕಸಭೆ ಚುನಾವಣೆಗೆ ಸ್ವಂತ ಬಲದಿಂದ ಹೋರಾಟ ಮಾಡುವ ಶಕ್ತಿ ಇದೆ ಸದ್ಯ ಗ್ರಾಪಂ., ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆ ನಡೆಯಲಿದೆ, ನಮ್ಮ ಗಮನ ಅದರ ಮೇಲಿರಬೇಕು ಎಂದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಹೇಳಿದ್ದಾರೆ. ಬೆಂಗಳೂರಿನ ಜೆಡಿಎಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಬಿಜೆಪಿ ಜತೆ ಕೈಜೋಡಿಸದೇ ಇರುವ ಯಾವುದಾದರೂ ಒಂದು ಪಕ್ಷವನ್ನು ತೋರಿಸಿ. ಆ ನಂತರ ವಿಪಕ್ಷಗಳ ಒಗ್ಗಟ್ಟಿನ ಬಗ್ಗೆ ಮಾತನಾಡುವೆ ಎಂದು ಹೇಳಿದರು. ನನಗೆ ಈಗ 91 ವರ್ಷ ವಯಸ್ಸು, ಈಗ ಲೋಕಸಭಾ ಚುನಾವಣೆಗೆ ಸ್ಪರ್ಧಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಯಾರು ಅಭ್ಯರ್ಥಿ ಆಗಬೇಕು ಎಂಬುದನ್ನು ಪಕ್ಷ ನಿರ್ಧಾರ ಮಾಡುತ್ತದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ವಿರೋಧ ಪಕ್ಷಗಳನ್ನು ಒಗ್ಗೂಡಿಸಲು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ನಡೆಸುತ್ತಿರುವ ಪ್ರಯತ್ನದಲ್ಲಿ ಜೆಡಿಎಸ್ ಕೈ ಜೋಡಿಸಲಿದೆಯೆ? ಎಂಬ ಪ್ರಶ್ನೆಗೆ ಅವರು ಈ ರೀತಿ ಮರು ಸವಾಲು ಹಾಕಿದರು. ಎಲ್ಲ ಪಕ್ಷಗಳೂ ಬಿಜೆಪಿ ಜತೆ ನೇರವಾಗಿ ಅಥವಾ ಪರೋಕ್ಷವಾಗಿ ಕೈಜೋಡಿಸಿವೆ. ಕಾಂಗ್ರೆಸ್ ಪಕ್ಷದ ಕೆಲವು ನಾಯಕರೂ ಅವರಲ್ಲಿ ಸೇರಿದ್ದಾರೆ ಎಂದರು. ಜೆಡಿಎಸ್ ಈಗ ಲೋಕಸಭಾ ಚುನಾವಣೆ ಬಗ್ಗೆ ಚಿಂತಿಸುವುದಿಲ್ಲ. ಈಗ ಪಕ್ಷದ ಮುಂದೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಬಿಬಿಎಂಪಿ ಚುನಾವಣೆಗಳಿವೆ. ಈ ಚುನಾವಣೆಗಳಲ್ಲಿ ಪಕ್ಷ ಪಡೆಯುವ ಜನಬೆಂಬಲ ಆಧರಿಸಿ ಲೋಕಸಭಾ ಚುನಾವಣೆ ಸ್ಪರ್ಧೆ ಬಗ್ಗೆ ನಿರ್ಧರಿಸುತ್ತೇವೆ.





ಶಿಕಾರಿಪುರದಿಂದ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾಗಿರುವ ಬಿ.ವೈ.ವಿಜಯೇಂದ್ರ ಕುಟುಂಬದವರೊಡನೆ ಮಂಗಳವಾರ ಸುತ್ತೂರು ಶ್ರೀ ಕ್ಷೇತ್ರಕ್ಕೆ ಭೇಟಿ ನೀಡಿ, ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳಿಂದ ಆಶೀರ್ವಾದ ಪಡೆದರು.

ಸಫಾರಿ ಪ್ರಿಯರಲ್ಲಿ ಸಂತಸ ಮೂಡಿಸಿದ ಕಪ್ಪು ಚಿರತೆ

ಮೈಸೂರು, ಜೂ.6– ನಾಗರಹೊಳೆ ಅಭಯಾರಣ್ಯದಲ್ಲಿ ಹಲವು ದಿನಗಳ ಬಳಿಕ ಕಪ್ಪು ಚಿರತೆ(ಬ್ಲಾಕ್ ಪ್ಯಾಂಥರ್) ಸಫಾರಿಗೆ ತೆರಳಿದ್ದವರಿಗೆ ದರ್ಶನ ನೀಡಿದೆ.



ಹಿಂದೆ ಒಟ್ಟಾಗಿ ಕಾಣಿಸಿಕೊಳ್ಳುತ್ತಿದ್ದ ಬ್ಲಾಕ್ ಪ್ಯಾಂಥರ್‌ಗಳು ಹಲವು ದಿನಗಳಿಂದ ಕಾಣಿಸಿಕೊಳ್ಳದಿರುವುದು ಸಫಾರಿ ಪ್ರಿಯರಲ್ಲಿ ಬೇಸರ ತರಿಸಿತ್ತು.

ಆದರೆ ಮಂಗಳವಾರ ಮುಂಜಾನೆ ಜೆಎಲ್‌ಬಿ ವಾಹನದಲ್ಲಿ ಸಫಾರಿಗೆ ತೆರಳಿದ್ದವರಿಗೆ ದಮ್ಮನಕಟ್ಟೆ ರೇಂಜಿನ ಸುಂಕದಕಟ್ಟೆ ಬಳಿ ಒಂಟಿ ಬ್ಲಾಕ್ ಪ್ಯಾಂಥರ್ ದರ್ಶನ ನೀಡಿದೆ. ಇದರಿಂದ ವನ್ಯಜೀವಿ ಪ್ರಿಯರಲ್ಲಿ ಸಂತಸ ಮೂಡಿದೆ. ಜೆಎಲ್‌ಆರ್ ವಾಹನ ಚಾಲಕ ರೇವಣ್ಣ ಅವರೊಂದಿಗೆ ಸಫಾರಿಗೆ ತೆರಳಿದ್ದವರಿಗೆ ಬ್ಲಾಕ್ ಪ್ಯಾಂಥರ್ ಕಾಣಿಸಿಕೊಂಡಿದೆ. ಅದು ಸಫಾರಿ ಲೈನ್ ದಾಟುತ್ತಿರುವ ದೃಶ್ಯವನ್ನು ಮೈಸೂರಿನ ಜೀವನ್ ಕೃಷ್ಣಪ್ಪ ತಮ್ಮ ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದಾರೆ. ಆ ವಿಡಿಯೋವನ್ನು ವನ್ಯಜೀವಿ ಛಾಯಾಗ್ರಾಹಕ ರವಿಶಂಕರ್ ಹಂಚಿಕೊಂಡಿದ್ದಾರೆ.

ವಿದ್ಯಾರ್ಥಿಗಳಿಗೆ ಉಚಿತ ನೋಟ್ ಪುಸ್ತಕ ವಿತರಣೆ



ಹಳೆ ಕೆಸರೆಯಲ್ಲಿ ರಾಘವೇಂದ್ರಸ್ವಾಮಿ ಮಠದ ಮುಂಭಾಗದಲ್ಲಿ ಏರ್ಪಡಿಸಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 139ನೇ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ವಿದ್ಯಾ ವಿಕಾಸ್ ವಿದ್ಯಾಸಂಸ್ಥೆ ಕಾರ್ಯದರ್ಶಿ ಕವೀಶ್‌ಗೌಡ ಮಾತನಾಡಿದರು.

ಮೈಸೂರು, ಜೂ. 6– ಅಗ್ರಗಣ್ಯ ಯುವಕರ ಸಂಘ, ಟೀಂ ಮೈಸೂರು ಪ್ರತಿಷ್ಠಾನ ಹಾಗೂ ಸೂರ್ಯೋದಯ ಸಂಘದ ಸಹಯೋಗದೊಂದಿಗೆ 6ನೇ ವರ್ಷದ ವಿದ್ಯಾರ್ಥಿಗಳಿಗೆ ಉಚಿತ ನೋಟ ಪುಸ್ತಕ ವಿತರಣೆ ಹಾಗೂ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 139ನೇ ಜಯಂತಿ ಕಾರ್ಯಕ್ರಮವನ್ನು ಹಳೆ ಕೆಸರೆಯಲ್ಲಿ ರಾಘವೇಂದ್ರಸ್ವಾಮಿ ಮಠದ ಮುಂಭಾಗದಲ್ಲಿ ಇತ್ತೀಚೆಗೆ ಹಮ್ಮಿಕೊಳ್ಳಲಾಗಿತ್ತು.

ಭಾರತ ಮಾತೆ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮುಖಾಂತರ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಸುಮಾರು 130ಕ್ಕೂ ಹೆಚ್ಚು ಮಕ್ಕಳಿಗೆ ಪುಸ್ತಕ ವಿತರಣೆ ಹಾಗೂ ಗ್ರಾಮದಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು. ವಿದ್ಯಾ ವಿಕಾಸ್ ವಿದ್ಯಾಸಂಸ್ಥೆ ಕಾರ್ಯದರ್ಶಿ ಕವೀಶ್‌ಗೌಡ ಅವರು ನಾಲ್ವಡಿ ಮಹಾರಾಜರ ದೂರದೃಷ್ಟಿಯ ಯೋಜನೆಗಳ ಬಗ್ಗೆ, ಅವರ ಕೊಡುಗೆಗಳ ಬಗ್ಗೆ ವಿಸ್ತಾರವಾಗಿ ಮಾತನಾಡಿದರು.

ಈ ವೇಳೆ ಟೀಂ ಮೈಸೂರಿನ ಸಂಚಾಲಕ ಗೋಕುಲ್ ಗೋವರ್ಧನ, ಡಾ.ಸುಬ್ರಮಣ್ಯ, ಸಾಮಾಜಿಕ ಕಾರ್ಯಕರ್ತರಾದ ಆನಂದ್, ಜಯಶಂಕರ್, ಅಗ್ರಗಣ್ಯ ಯುವಕರ ಸಂಘದ ಸದಸ್ಯರಾದ ಯಶವಂತ್, ಆನಂದ್, ಪ್ರಶಾಂತ್, ಮಲ್ಲೇಶ್, ಸತೀಶ್, ಫ್ರಾನ್ಸ್ ಇತರರು ಹಾಜರಿದ್ದರು.

ಇಂದು ಡಿಪ್ಲೊಮ್ಯಾಟ್ ಐಟಿ, ಸಾಂಸ್ಕೃತಿಕ ಕ್ರೀಡಾ ಉತ್ಸವ



ಮೈಸೂರು, ಜೂ.6(ಸಿಎನ್)–ಪದವಿ ವಿದ್ಯಾರ್ಥಿಗಳಲ್ಲಿ ಕ್ರಿಯಾಶೀಲ ವ್ಯಕ್ತಿತ್ವ ಬೆಳೆಸುವ ಉದ್ದೇಶದಿಂದ ರಾಷ್ಟ್ರೀಯ ಮಟ್ಟದ ಡಿಪ್ಲೊಮ್ಯಾಟ್ 2023 ಮ್ಯಾನೇಜ್‌ಮೆಂಟ್ ಮತ್ತು ಐಟಿ ಹಾಗೂ ಸಾಂಸ್ಕೃತಿಕ ಕ್ರೀಡಾ ಉತ್ಸವವನ್ನು ನಗರದ ಡಿ ಪೌಲ್ ಪದವಿ ಕಾಲೇಜಿನಲ್ಲಿ, ಜೂ.7ರಂದು ಹಮ್ಮಿಕೊಳ್ಳಲಾಗಿದೆ ಎಂದು ಡಿಪ್ಲೊಮ್ಯಾಟ್ ಉತ್ಸವದ ಸಂಚಾಲಕಿ, ಪ್ರಾಧ್ಯಾಪಕಿ ಡಾ.ಸಾದಿಯಾ ತಬಸ್ಸುಮ್ ಮಾಹಿತಿ ನೀಡಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಉತ್ಸವವನ್ನು ಕಾಲೇಜಿನಲ್ಲಿ 5ನೇ ಬಾರಿ ಆಚರಿಸುತ್ತಿದ್ದು, ವಿವಿಧ ವಿಭಾಗಗಳ ಮೂಲಕ ವಿದ್ಯಾರ್ಥಿಗಳಲ್ಲಿನ ಗೌಪ್ಯ ಪ್ರತಿಭೆ ಅನಾವರಣಗೊಳಿಸುವ ಅವಕಾಶ ಮಾಡಿಕೊಡಲಾಗಿದೆ ಎಂದು ತಿಳಿಸಿದರು.

ಈ ಉತ್ಸವವು 5 ವಿಭಾಗಗಳಲ್ಲಿ ನಡೆಯುತ್ತಿದ್ದು ಒಟ್ಟು 11 ಸ್ಪರ್ಧೆಗಳು ನಡೆಯಲಿವೆ. ವಿಭಾಗ 1: ಮ್ಯಾನೇಜ್‌ಮೆಂಟ್ ವಿಭಾಗದಲ್ಲಿ–ಬೆಸ್ಟ್ ಮ್ಯಾನೇಜರ್, ಹ್ಯೂಮನ್ ರಿಸೋರ್ಸ್, ಮಾರ್ಕೆಟಿಂಗ್ ಸ್ಪರ್ಧೆಗಳು ನಡೆಯಲಿವೆ. ವಿಭಾಗ 2ರ ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ ಕೋಡಿಂಗ್ ಈವೆಂಟ್, ಕಾಲ್ ಆಫ್ ಡ್ಯೂಟಿ ನಡೆದರೆ, ವಿಭಾಗ 3ರ ಕ್ರೀಡಾ ವಿಭಾಗದಲ್ಲಿ ಬ್ಯಾಸ್ಕೆಟ್‌ಬಾಲ್ ಸ್ಪರ್ಧೆ, ವಿಭಾಗ 4: ಕಲಾ ವಿಭಾಗದಲ್ಲಿ ಟ್ರೆಷರ್ ಹಂಟ್, ವಿಭಾಗ 5ರ ಸಾಂಸ್ಕೃತಿಕ ವಿಭಾಗದಲ್ಲಿ ನೃತ್ಯ ಸ್ಪರ್ಧೆ, ಅಂತ್ಯಾಕ್ಷರಿ, ಗುಂಪು ನೃತ್ಯ ಹಾಗೂ ಗಾಯನ ಸ್ಪರ್ಧೆ ನಡೆಯಲಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರತಿ ಸ್ಪರ್ಧೆಗಳಿಗೂ ಪ್ರತ್ಯೇಕ ಶುಲ್ಕವಿದ್ದು, ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಆಕರ್ಷಕ ನಗದು ಬಹುಮಾನ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಈಗಾಗಲೇ ಉತ್ಸವದಲ್ಲಿ ಪಾಲ್ಗೊಳ್ಳಲು ಮೈಸೂರು, ಮಂಡ್ಯ, ಬೆಂಗಳೂರು ಸೇರಿದಂತೆ ಸುಮಾರು 10ಕ್ಕೂ ಹೆಚ್ಚು ವಿವಿಧ ಕಾಲೇಜುಗಳಿಂದ ವಿದ್ಯಾರ್ಥಿಗಳು ಹೆಸರನ್ನು ನೋಂದಾಯಿಸಿಕೊಂಡಿದ್ದಾರೆ.

ವಿದ್ಯಾರ್ಥಿ ಸಂಚಾಲಕರಾದ ಜೋಸೆಫ್ – 9872839437, ವಿಹಾರಿಕಾ 99003 91303 ಇವರನ್ನು ಸಂಪರ್ಕಿಸಲು ಕೋರಲಾಗಿದೆ. ಪತ್ರಿಕಾಗೋಷ್ಠಿಯಲ್ಲಿ ಕಾಲೇಜಿನ ಉಪಪ್ರಾಂಶುಪಾಲರಾದ ರೆವರೆಂಡ್ ಫಾದರ್ ಜಾಯ್ ತುರುತ್ತಲ್, ಡೀನ್ ರೆವರೆಂಡ್ ಡಾ.ಶಿಜೋ ಅಂತೋಣಿ, ಬಿ.ಎನ್ ಹೇಮಲತಾ, ಪ್ರಾಧ್ಯಾಪಕರಾದ ಕನ್ನಡ ವಿಭಾಗದ ವಿದ್ಯಾರ್ಥಿಗಳು ಹಾಜರಿದ್ದರು.

ನಿಧನ

ಶ್ರೀಮತಿ ಸೌಭಾಗ್ಯಮ್ಮ



ಮೈಸೂರು, ಜೂ. 6– ಮೈಸೂರಿನ ಗೋಕುಲಂ ಮೂರನೇ ಹಂತದ ನಿವಾಸಿ, ನಿವೃತ್ತ ಡಿಡಿಪಿಐ ಚಿಕ್ಕಮಾದಶೆಟ್ಟಿ ಅವರ ಪತ್ನಿ ಶ್ರೀಮತಿ ಸೌಭಾಗ್ಯಮ್ಮ ಅವರು ಮಂಗಳವಾರ ರಾತ್ರಿ ನಿಧನರಾದರು. ಇವರಿಗೆ 78 ವರ್ಷ ವಯಸ್ಸಾಗಿತ್ತು. ಮೃತರು ಪತಿ, ಮಗ ರವಿಚಂದ್ರ, ಸೊಸೆ, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ನಾಳೆ (ಬುಧವಾರ) ಗೋಕುಲಂನ ರುದ್ರಭೂಮಿಯಲ್ಲಿ ಮಧ್ಯಾಹ್ನ 12 ಗಂಟೆಗೆ ನೆರವೇರಿಸಲಾಗುವುದು ಎಂದು ಕುಟುಂಬದವರು ತಿಳಿಸಿದ್ದಾರೆ.

ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಪ್ರತಿಭಾನ್ವೇಷಣೆ ಕಾರ್ಯಕ್ರಮ

ಕಲಿಕೆ ಜೊತೆ ಕಲೆಯೂ ಕರಗತವಾದರೆ ಭವಿಷ್ಯ ಉಜ್ವಲ: ಹಂಸಲೇಖ



ಮಹಾರಾಜ ಕಾಲೇಜಿನಲ್ಲಿ ಆಯೋಜಿಸಿದ್ದ ಪ್ರತಿಭಾನ್ವೇಷಣೆ ಕಾರ್ಯಕ್ರಮದಲ್ಲಿ ಹಂಸಲೇಖ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಜೂ. 6 (ಎಂಟಿವೈ)– ವಿದ್ಯಾರ್ಥಿಗಳು ಕಲಿಕೆ ಗುಣದೊಂದಿಗೆ ಕಲೆಯನ್ನು ಕರಗತ ಮಾಡಿಕೊಂಡರೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಸಂಗೀತ ನಿರ್ದೇಶಕ ಹಂಸಲೇಖ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಮಹಾರಾಜ ಕಾಲೇಜಿನ ಪಠ್ಯೇತರ ಚಟುವಟಿಕೆಗಳ ಸಮಿತಿ ವತಿಯಿಂದ ಶತಮಾನೋತ್ಸವ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಪ್ರತಿಭಾನ್ವೇಷಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕೇವಲ ವಿದ್ಯೆಯೊಂದಿದ್ದರೆ ಸಾಲದು. ಅದರ ಜೊತೆಗೆ ಕಲೆಯೂ ಇರಬೇಕು. ಕಾಲಕ್ಕೆ ತಕ್ಕಂತೆ ವಿಭಿನ್ನ ಕೌಶಲವೂ ನಮ್ಮಲ್ಲಿರಬೇಕು. ಸಮಾಜದಲ್ಲಿ ಯಾವುದೇ ವ್ಯಕ್ತಿಗೆ ಗುರುತು (ಐಡೆಂಟಿಟಿ) ನೀಡುವುದೇ ಕಲೆ. ಲಕ್ಷ ಲಕ್ಷ ಸಂಬಳ ಪಡೆಯುವ ಸಾಫ್ಟ್‌ವೇರ್ ಇಂಜಿನಿಯರ್‌ಗಳಿಗೆ ಸಮಾಜದಲ್ಲಿ ತಮಗೆ ಐಡೆಂಟಿಟಿ ಇಲ್ಲ ಎಂಬ ಕೊರಗಿದೆ. ಇದರಿಂದಾಗಿ ಹಲವರು ನೃತ್ಯ, ಹಾಡುಗಾರಿಕೆ ಕಲಿಯುವ ಬಯಕೆಯೊಂದಿಗೆ ಕಲಾವಿದರಾಗಿ ಹೊರಹೊಮ್ಮಬೇಕು ಎಂದು ಬಯಸುತ್ತಿದ್ದಾರೆ. ಕಲೆಯಿಂದ ಆತ್ಮವಿಶ್ವಾಸವೂ ಹೆಚ್ಚಾಗುತ್ತದೆ ಅಲ್ಲದೇ, ಬದುಕನ್ನು ರೂಪಿಸಿಕೊಂಡು ಕನ್ನಡ ಭಾಷೆಯನ್ನು ರಕ್ಷಿಸುವುದಕ್ಕೆ ಪಣತೊಡಬಹುದು. ಕಲಿಕೆ ಮತ್ತು ಕಲೆ ಒಟ್ಟಿಗೆ ಸಾಗಿದರೆ ದೇಶದ ಮುಂದಿನ 50 ವರ್ಷದ ಉತ್ತಮ ಭವಿಷ್ಯ ರೂಪಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

> ❝ ಯುವ ಜನರಿಗೆ ಯಾವುದಾದರೂ ಒಂದು ಡಿಗ್ರಿ (ಪದವಿ) ಇರಬೇಕು. ಜೊತೆಗೆ ಒಂದು ಕೆಲಸವೂ ಇರಬೇಕು. ಯಾವ ಕೆಲಸವಾದರೂ ಸರಿ ಮಾಡಲು ಸಜ್ಜಾಗಿರಬೇಕು. ಇದರಿಂದ ತಮ್ಮ ಸೃಜನಶೀಲತೆ, ಕೌಶಲ್ಯ ಮೈಗೂಡಿಸಿಕೊಳ್ಳಬೇಕು. ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಹೇಳಿರುವ ಕೌಶಲವೇ ಬೇರೆ. ವ್ಯಕ್ತಿಯ ಅಂತರ್ಗತವಾಗಿರುವ ಕೌಶಲವೇ ಬೇರೆಯಾಗಿದೆ. ಪ್ರಸ್ತುತ ಸಂದರ್ಭದಲ್ಲಿ ತಾಂತ್ರಿಕತೆ ಜಗತ್ತನ್ನು ಆಳುತ್ತಿದೆ. ಸೆನ್ಸ್‌ಗಿಂತ ಲೆನ್ಸ್ ಮುಂದೆ ಇದೆ. ಲೆನ್ಸ್ ಪ್ರಪಂಚ ದೊಡ್ಡದು. ಧೈರ್ಯ ಇರುವ ಪ್ರತಿಭಾವಂತರು ಸಿನಿಮಾ, ಕಿರುತೆರೆ, ಮಾಧ್ಯಮ ರಂಗದಲ್ಲಿ ಬೆಳೆಯಲು ವಿಫುಲ ಅವಕಾಶಗಳಿವೆ. ಅದಕ್ಕೆ ಬೇಕಾದ ತಾಂತ್ರಿಕ ಪರಿಣತಿ ಕರಗತ ಮಾಡಿಕೊಂಡು ಮುಂದೆ ಬರಬೇಕು. **–ಹಂಸಲೇಖ, ಸಂಗೀತ ನಿರ್ದೇಶಕ**

ಪ್ರಜಾಪ್ರಭುತ್ವ ಅಂದರೇನು, ಒಂದು ಸಾಲಿನಲ್ಲಿ ಉತ್ತರಿಸಿದರೆ, ಈಗ ನಾನು ಇಲ್ಲಿ ನಿಂತಿರುವ ಕಟ್ಟಡ ಮಹಾರಾಜರು ಕಟ್ಟಿಸಿದ್ದು, ಮಹಾರಾಜರ ಕಟ್ಟಡದಲ್ಲಿ ಸಾಮಾನ್ಯರು ದರ್ಬಾರ್ ನಡೆಸುತ್ತಿರುವುದು ಪ್ರಜಾಪ್ರಭುತ್ವ. ಎಲ್ಲ ಸ್ತರಗಳ ಜನರು ಕಲಿತು ದುಡಿದು ಬೆಳೆದು ರಾಷ್ಟ್ರ ಕಟ್ಟಬೇಕು ಎಂದು ಮಹಾರಾಜರು ಕಂಡಿದ್ದ ಕನಸನ್ನು ಎಲ್ಲರೂ ನನಸು ಮಾಡುವತ್ತ ಗಮನ ಹರಿಸಬೇಕು. ಮಹಾರಾಜ ಕಾಲೇಜಿನ ವಿದ್ಯಾರ್ಥಿಗಳು ಸಾಧನೆ ಮಾಡಬೇಕೆಂಬ ಗುರಿಯಿಟ್ಟುಕೊಂಡು ಅಧ್ಯಯನದಲ್ಲಿ ತೊಡಗಬೇಕು ಎಂದರು.

ಕರ್ನಾಟಕ ಸಂಗೀತ ಮತ್ತು ನೃತ್ಯ ಮೈಸೂರು ಅರಮನೆಯ ದಯೆಯಿಂದ ಇಂದು ಎಲ್ಲೆಡೆ ರಾರಾಜಿಸುತ್ತಿದೆ. ಮೈಸೂರು ಭಾಗದ ಮಹಾನ್ ಜಾನಪದ ಕಾವ್ಯ ಮತ್ತು 70 ವರ್ಷಗಳ ಶಾಸ್ತ್ರೀಯ ಸಂಗೀತ ಒಂದೇ ವೇದಿಕೆಯಲ್ಲಿ ಕಲೆತಾಗ ನನಗೆ ರೋಮಾಂಚನವಾಯಿತು. ಶಾಸ್ತ್ರೀಯ ಸಂಗೀತ, ನೃತ್ಯ ಮತ್ತು ಜಾನಪದ ಸಮನ್ವಯದ ಕೊಂಡಿ ಇಲ್ಲಿಯೇ ಇದೆ. ಕೃತಕ ಬುದ್ಧಿ ಯುಗದಲ್ಲಿ ಕರ್ನಾಟಕದ ಜಾನಪದರು ಎಲ್ಲಿದ್ದಾರೆ? ಏನು ಮಾಡುತ್ತಿದ್ದಾರೆ ಎಂಬ ಪ್ರಶ್ನೆ ಕಾಡುತ್ತಿದೆ. ಅವರನ್ನು ನಾವು ಹುಡುಕುತ್ತಾ ಸಾಗಿದರೆ ನಮಗೆ ಸಿಗುವ ಮಾಹಿತಿ ಶೂನ್ಯ. ತಾಂತ್ರಿಕ ಯುಗಕ್ಕೆ ಜಾನಪದ ಅಗತ್ಯತೆ ಇದೆ. ಈ ಹಿನ್ನೆಲೆಯಲ್ಲಿ ಜಾನಪದರ ಹಾಗೂ ಜಾನಪದದ ಬಗ್ಗೆ ಮಾಹಿತಿ ಸಂಗ್ರಹಿಸಿ ಅಪ್‌ಲೋಡ್ ಮಾಡಿದರೆ ಮಾತ್ರ ಮುಂದಿನ ಪೀಳಿಗೆಗೆ ದೊರೆಯುತ್ತದೆ. ಇಲ್ಲವಾದರೆ ಅದು ನಶಿಸುತ್ತದೆ ಎಂದು ಎಚ್ಚರಿಸಿದರು.

ಚಿತ್ರಮಂದಿರ ಭರ್ತಿಯಾದರೆ ಹೌಸ್ ಫುಲ್ ಬೋರ್ಡ್ ಹಾಕುತ್ತಾರೆ. ಇತ್ತೀಚೆಗೆ ಚಿತ್ರಮಂದಿರಗಳು ತುಂಬುತ್ತಿಲ್ಲ. ಮಹಾರಾಜರು ನಡೆದಾಡಿದ ನೆಲದಲ್ಲಿ ನನಗೆ ರಾಜರ ಸ್ವಾಗತ ದೊರೆತಿದೆ. ಇಲ್ಲಿ ದೊರೆತ ಪ್ರೀತಿಯಿಂದ ನನ್ನ ಹೃದಯ ಮಂದಿರ ಭರ್ತಿಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಅತಿಯಾದರೆ ಜನ ಸಹಿಸುವುದಿಲ್ಲ: ಯಾವುದೇ ವಿಚಾರದಲ್ಲಾದರೂ ಅತಿಯಾದುದ್ದನ್ನು ಜನ ಸಹಿಸುವುದಿಲ್ಲ. ಇದನ್ನು ಕನ್ನಡಿಗರು ಮತ್ತೆ ಸಾಬೀತುಪಡಿಸಿದ್ದಾರೆ. ರಾಜ್ಯದಲ್ಲಿ ಕೆಲ ವರ್ಷಗಳಿಂದ ಕೆಲ ವಿಷಯಗಳು ಅತಿಯಾಗುವುದರೊಂದಿಗೆ ಮೀತಿ ಮೀರಿತ್ತು. ಇತ್ತೀಚಿನ ವಿಧಾನ ಸಭಾ ಚುನಾವಣೆಯಲ್ಲಿ ತಕ್ಕ ಉತ್ತರ ನೀಡಿರುವ ಜನರು ದೋಸೆ ತಿರುವಿದಂತೆ ತಿರುವಿ ಹಾಕಿದರು. ಸಮಾಧಾನ ಇದ್ದರೆ ಸಾಕೆಂದು ತೀರ್ಪು ಕೊಟ್ಟರು. ಆ ಮತ, ಈ ಮತ ಬೇಡ. ನಮಗೆ ಮನುಜ ಮತ ಇರಲಿ ಎಂಬ ಸಂದೇಶವನ್ನು ಜನರು ಸಾರಿದ್ದು, ಕುವೆಂಪು ಆಶಯವನ್ನು ಎತ್ತಿ ಹಿಡಿದಿದ್ದಾರೆ ಎಂದು ಅಭಿಪ್ರಾಯಪಟ್ಟರು

ಇದೇ ವೇಳೆ ಮೈಸೂರು ವಿವಿ ಕುಲಸಚಿವೆ ವಿ.ಆರ್.ಶೈಲಜಾ ಮಾತನಾಡಿ, ಭವ್ಯ ಇತಿಹಾಸವಿರುವ ಈ ಕಾಲೇಜಿನ ವಿದ್ಯಾರ್ಥಿಗಳು ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದ್ದಾರೆ. ರಾಷ್ಟ್ರ ರಾಜ್ಯದ ಅಧಿಕಾರದ ಚುಕ್ಕಾಣಿ ಹಿಡಿದಿದ್ದಾರೆ. ಹಾಗಾಗಿ, ನಿಮ್ಮ ಶಕ್ತಿ ಕೇವಲ ಚಪ್ಪಾಳೆ ಮತ್ತು ಶಿಳ್ಳೆಗೆ ಮಾತ್ರ ಸೀಮಿತವಾಗಬಾರದು. ರಾಜ್ಯ, ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡುವಂತಾಗಬೇಕು. ಪ್ರತಿಭೆ ಪಠ್ಯಕ್ಕೆ ಸೀಮಿತವಾಗಬಾರದು. ಪಠ್ಯೇತರ ಚಟುವಟಿಕೆಯಲ್ಲಿಯೂ ಇರಬೇಕು ಎಂದರು.

ಮಹಾರಾಜ ಕಾಲೇಜಿನ ಪ್ರಾಂಶುಪಾಲ ಡಾ.ಸಿ.ಎ.ಶ್ರೀಧರ್ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಆಡಳಿತಾಧಿಕಾರಿ ಡಾ.ವಿ. ಷಣ್ಮುಗಂ, ಪಠ್ಯೇತರ ಚಟುವಟಿಕೆಗಳ ಸಮಿತಿ ಸಂಚಾಲಕ ಡಾ.ಲೋಕೇಶ್ ಇದ್ದರು.

ಗಾಯಕರಾದ ಡಾ.ನಿಂಗರಾಜು, ಎಂ.ಎನ್.ಶ್ರೀಕಾಂತ್, ಮಧುಸೂದನ್, ಸಿದ್ದರಾಜು ತಂಡ ವಿವಿಧ ಗೀತೆಗಳನ್ನು ಹಾಡಿ ರಂಜಿಸಿದರು. ಇದಕ್ಕೂ ಮುನ್ನ ಕಂಸಾಳೆ, ಡೊಳ್ಳು ಕುಣಿತದ ಜಾನಪದ ಕಲಾತಂಡಗಳೊಂದಿಗೆ ಹಂಸಲೇಖ ಅವರನ್ನು ಸ್ವಾಗತಿಸಲಾಯಿತು.

ಜೂ.23ರಿಂದ ಮನೆ ಮನೆ ಸಂಪರ್ಕ ಅಭಿಯಾನ



ಮೈಸೂರು,ಜೂ.6(ಎಂಟಿವೈ)– ದೇಶದ ಪ್ರಧಾನಿಯಾಗಿ ನರೇಂದ್ರ ಮೋದಿ ಅವರ 9 ವರ್ಷಗಳ ಸಾಧನೆಯನ್ನು ತಿಳಿಸುವ ನಿಟ್ಟಿನಲ್ಲಿ ಜೂ.23 ರಿಂದ 29ರವರೆಗೆ ಮನೆ ಮನೆಗೆ ಸಂಪರ್ಕ ಅಭಿಯಾನ ನಡೆಸಲು ಉದ್ದೇಶಿಸಲಾಗಿದೆ ಎಂದು ಬಿಜೆಪಿ ನಗರಾಧ್ಯಕ್ಷ, ಶಾಸಕ ಟಿ.ಎಸ್.ಶ್ರೀವತ್ಸ ತಿಳಿಸಿದ್ದಾರೆ.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಪ್ರಧಾನಿಯಾಗಿ ನರೇಂದ್ರ ಮೋದಿ ಅವರು ಕಳೆದ 9 ವರ್ಷದಿಂದ ಮಾಡಿರುವ ಸಾಧನೆಯ ಮಾಹಿತಿಯುಳ್ಳ ಕರಪತ್ರವನ್ನು ಪ್ರತಿಯೊಬ್ಬ ಕಾರ್ಯಕರ್ತರು ಮನೆ ಮನೆಗಳಿಗೆ ತಲುಪಿಸಬೇಕು. ಆ ಮೂಲಕ ಕೇಂದ್ರ ಸರ್ಕಾರದ ಕಾರ್ಯಕ್ರಮ, ಯೋಜನೆಗಳ ಬಗ್ಗೆ ಜನರಿಗೆ ತಿಳಿಸುವ ಅಗತ್ಯವಿದೆ ಎಂದು ಅವರು ಹೇಳಿದರು.

ಹಲವು ವರ್ಷಗಳಿಂದ ಪಕ್ಷಕ್ಕಾಗಿ ಪ್ರಾಮಾಣಿಕವಾಗಿ ದುಡಿಯುತ್ತಿರುವ ಕಾರ್ಯಕರ್ತರಿಗೆ ಮುಂಬರುವ ಪಾಲಿಕೆ ಚುನಾವಣೆಯಲ್ಲಿ ಟಿಕೆಟ್ ದೊರೆಯಲಿದೆ. ಮೈಸೂರು ಮಹಾನಗರಪಾಲಿಕೆಯಲ್ಲಿ ಬಿಜೆಪಿಯ 23 ಸದಸ್ಯರಿದ್ದಾರೆ. 10ರಿಂದ 12 ವಾರ್ಡ್‌ಗಳಲ್ಲಿ ಕಡಿಮೆ ಮತಗಳ ಅಂತರದಿಂದ ಸೋತಿದ್ದೇವೆ. ಈ ವಾರ್ಡ್‌ಗಳ ಬಗ್ಗೆ ಹೆಚ್ಚು ಗಮನಹರಿಸಬೇಕು. ಮುಂದಿನ ಚುನಾವಣೆಯಲ್ಲಿ ಸ್ವಂತ ಬಲದಿಂದಲೇ ಪಾಲಿಕೆ ಅಧಿಕಾರವನ್ನು ಬಿಜೆಪಿ ಹಿಡಿಯಲೇಬೇಕು, ಅದಕ್ಕಾಗಿ ಸಂಘಟನೆಗೆ ಮುಂದಾಗಬೇಕು ಎಂದರು.

ಮುಂದಿನ ದಿನಗಳಲ್ಲಿ ಸರ್ಕಾರದ ಜನವಿರೋಧಿ ನೀತಿಯನ್ನು ಖಂಡಿಸಿ, ಕಾಂಗ್ರೆಸ್ ನಾಯಕರ ತಪ್ಪುಗಳನ್ನು ಜನ ಸಾಮಾನ್ಯರಿಗೆ ತಿಳಿಸಬೇಕು. ಕಾಂಗ್ರೆಸ್ ಸರ್ಕಾರದ 15 ದಿನಗಳ ಧೋರಣೆಯನ್ನು ಗಮನಿಸಿದರೆ ಬಿಜೆಪಿ ಕಾರ್ಯಕರ್ತರನ್ನು ಜೈಲಿಗೆ ತಳ್ಳುವುದರಲ್ಲಿ ಹಿಂದೆ ಬೀಳುವುದಿಲ್ಲ ಎಂದೆನಿಸುತ್ತದೆ. ಅವರ ಸವಾಲನ್ನು ಸ್ವೀಕರಿಸಿ ಜನ ಸಾಮಾನ್ಯರ ಪರವಾಗಿ ಹೋರಾಟ ಮಾಡಿ, ಜೈಲಿಗೆ ಹೋಗಲು ಅಂಜುವುದಿಲ್ಲ ಎಂಬ ಮನಃಸ್ಥಿತಿ ಇರಬೇಕು ಎಂದು ಹುರಿದುಂಬಿಸಿದರು. ಸಭೆಯಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ, ಮೈಸೂರು ವಿಭಾಗದ ಪ್ರಭಾರಿ ಮೈ.ವಿ. ರವಿಶಂಕರ್, ರಾಜ್ಯ ಅಲ್ಪಸಂಖ್ಯಾತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಡಾ.ಅನಿಲ್ ಥಾಮಸ್, ಮೈಸೂರು ನಗರ ಪ್ರಭಾರಿ ಹಿರೇಂದ್ರ ಷಹಾ, ನಗರ ಪ್ರಧಾನ ಕಾರ್ಯದರ್ಶಿ ಸೋಮಸುಂದರ, ಎಚ್.ಜಿ. ಗಿರಿಧರ್, ಉಪಮೇಯರ್ ಜಿ.ರೂಪ ಭಾಗವಹಿಸಿದ್ದರು.

ಅರ್ಥಪೂರ್ಣ ಬದುಕಿಗೆ ಭಾವನೆಗಳು ಮುಖ್ಯ



ಮೈಸೂರು, ಜೂ.6–ಅರ್ಥಪೂರ್ಣ ಬದುಕಿಗೆ ಭಾವನೆಗಳು ಮುಖ್ಯ. ಈ ಭಾವನೆಗಳ ಅಭಿವ್ಯಕ್ತಿಗೆ ಭಾಷೆಯೇ ಜೀವಾಳ. ಆದ್ದರಿಂದ ಬದುಕಿಗೂ ಭಾಷೆಗೂ ಅವಿನಾಭಾವ ಸಂಬಂಧವಿದೆ. ಈ ಕಾರಣಕ್ಕೆ ಭಾಷೆ ಉಳಿದರೆ ಮಾತ್ರ ಬದುಕು ಮತ್ತು ಭಾವನೆಗಳು ಉಳಿಯಲು ಸಾಧ್ಯ ಎಂದು ಸ್ಪಂದನಾ ಸಾಂಸ್ಕೃತಿಕ ಪರಿಷತ್ತಿನ ಅಧ್ಯಕ್ಷ ಹಾಗೂ ಸಾಹಿತಿ ಟಿ.ಸತೀಶ್ ಜವರೇಗೌಡ ವ್ಯಾಖ್ಯಾನಿಸಿದರು.

ನಾದಬ್ರಹ್ಮ ಸಂಗೀತ ಸಭಾದಲ್ಲಿ ಜಿಲ್ಲಾ ಮತ್ತು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತ್ಯುತ್ಸವದ ಅಂಗವಾಗಿ ನಡೆದ ಕವಿಗೋಷ್ಠಿಗೆ ಚಾಲನೆ ನೀಡಿ ಮಾತನಾಡಿದ ಅವರು, ಭಾಷೆಯಿಂದ ಬದುಕಿಗೆ ಲವಲವಿಕೆ ಒದಗಿಬರುತ್ತದೆ ಎಂದರು.

ವಿದ್ಯಾವಂತರೇ ಕನ್ನಡ ಭಾಷೆಯನ್ನು ಮಲಿನಗೊಳಿಸುತ್ತಿದ್ದಾರೆ. ಇದರಿಂದ ಕನ್ನಡ ಭಾಷೆ ವಿರೂಪಗೊಳ್ಳುತ್ತಿದೆ ಎಂದರು. ತಾಲೂಕು ಕಸಾಪ ಅಧ್ಯಕ್ಷ ಎ.ಸಿ.ಮಂಜುನಾಥ್ ಅಧ್ಯಕ್ಷತೆಯಲ್ಲಿ ನಡೆದ ಕವಿಗೋಷ್ಠಿಯಲ್ಲಿ ಗಣೇಶ್, ಶಿಲ್ಪ , ಪೂರ್ಣಿಮಾ, ದಾ.ಪು. ಚಿಕ್ಕಣ್ಣ, ಪ್ರಭಾ, ಭಾರ್ಗವ ಕೆಂಪರಾಜ್, ಶಕುಂತಲ, ಪ್ರೇಮಾ ಮಾದಪ್ಪ ಕವನ ವಾಚಿಸಿದರು.

ವೇದಿಕೆಯಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ತಿ. ನರಸೀಪುರ ತಾಲೂಕು ಕಸಾಪ ಅಧ್ಯಕ್ಷ ಕನ್ನಡ ಪುಟ್ಟಸ್ವಾಮಿ, ಕವಯಿತ್ರಿ ಶೋಭಾ ನಾಗಶಯನ, ಗೌಡ್ತಿಯರ ಸೇನೆಯ ರಾಜ್ಯ ಉಪಾಧ್ಯಕ್ಷೆ ವೃಂದಾಮಣಿ, ಸಾಹಿತಿ ಟಿ. ತ್ಯಾಗರಾಜು ಇನ್ನಿತರರು ಉಪಸ್ಥಿತರಿದ್ದರು.

ಗ್ಯಾರಂಟಿಗಳ ಬಗ್ಗೆ ವಿಪಕ್ಷಗಳು ಜನರ ಎತ್ತಿ ಕಟ್ಟುತ್ತಿವೆ ಎಂಬ ಸಿಎಂ ಸಿದ್ದರಾಮಯ್ಯ ಹೇಳಿಕೆಗೆ ಮಾಜಿ ಸಿಎಂ ಕುಮಾರಸ್ವಾಮಿ ಕಿಡಿನುಡಿ

ನಾವಿರುವುದೇ ಸರ್ಕಾರದ ತಪ್ಪುಗಳ ಎತ್ತಿ ತೋರಿಸಲು



ಬೆಂಗಳೂರು, ಜೂ.6(ಕೆಎಂಶಿ)– ಉಚಿತ, ಖಚಿತ ಎಂದು ಸುಳ್ಳು ಹೇಳಿಕೊಂಡು ಓಡಾಡಿ ಅಧಿಕಾರಕ್ಕೆ ಬಂದವರು, ಇವತ್ತು ಜನರನ್ನು ವಿದ್ಯುತ್ ದುರ್ಬಳಕೆ ಮಾಡಿಕೊಳ್ಳಲು ಪ್ರತಿಪಕ್ಷಗಳು ಪ್ರಚೋದಿಸುತ್ತಿವೆ ಎಂದು ಹೇಳುತ್ತಿರುವುದು ಹಾಸ್ಯಾಸ್ಪದ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ರಾಜ್ಯ ಕಾಂಗ್ರೆಸ್ ಸರಕಾರದ ವಿರುದ್ಧ ಹರಿಹಾಯ್ದರು.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಸಮಕ್ಷಮದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿದ್ಯುತ್ ಬಳಕೆ ಬಗ್ಗೆ ವಿರೋಧ ಪಕ್ಷಗಳು ಜನರನ್ನು ದಿಕ್ಕು ತಪ್ಪಿಸುತ್ತಿವೆ ಎಂಬ ಮುಖ್ಯಮಂತ್ರಿಗಳ ಹೇಳಿಕೆ ಗಮನಿಸಿದ್ದೇನೆ. ವಿರೋಧ ಪಕ್ಷಗಳು ಗ್ಯಾರಂಟಿ ಯೋಜನೆಗಳ ಬಗ್ಗೆ ಜನರನ್ನು ಎತ್ತಿಕಟ್ಟುತ್ತಿವೆ ಎಂದು ಅವರು ಹೇಳಿದ್ದಾರೆ. ಅಂಥ ಹೇಳಿಕೆ ಮುಖ್ಯಮಂತ್ರಿಗಳಿಗೆ ಶೋಭೆಯಲ್ಲ ಎಂದು ಕಿಡಿಕಾರಿದರು.

ಇದಕ್ಕೆಲ್ಲಾ ವೇದಿಕೆ ಸಿದ್ಧ ಮಾಡಿಕೊಟ್ಟಿದ್ದೇ ನೀವು. ರಾಜ್ಯದ ಜನಕ್ಕೆ ಗ್ಯಾರಂಟಿ ಬಗ್ಗೆ ಸಹಿ ಮಾಡಿ ಕೊಟ್ಟಿದ್ದೀರಿ. ಸುಳ್ಳು ಹೇಳಿ ಮತ ಪಡೆದಿರಿ. ಈಗ ನಿಮಗೆ ಅದರ ಸಾಧಕ–ಬಾಧಕ ಅರ್ಥ ಆಗ್ತಾ ಇದೆ. ಮೊದಲೇ ಈ ಬಗ್ಗೆ ಯೋಚನೆ ಮಾಡಿರಲಿಲ್ಲವಾ, ಪರಿಜ್ಞಾನ ಇರಲಿಲ್ಲವಾ. ಈಗ ಷರತ್ತು ಎನ್ನುತ್ತಿದ್ದಾರೆ. ಇವರಿಗೆ ಆತ್ಮಸಾಕ್ಷಿ ಎನ್ನುವುದು ಇದೆಯಾ ಎಂದು ಕುಮಾರಸ್ವಾಮಿ ಖಾರವಾಗಿ ಪ್ರಶ್ನಿಸಿದರು.

ಈಗಿನ ಮುಖ್ಯಮಂತ್ರಿಗಳು ಸರ್ವವನ್ನೂ ಬಲ್ಲವರು. ಈಗಾಗಲೇ 13 ಬಜೆಟ್‌ಗಳನ್ನು ಮಂಡಿಸಿದ್ದಾರೆ. ಇನ್ನೇನು 14ನೇ ಬಜೆಟ್ ಅನ್ನೂ ಮಂಡಿಸಲಿದ್ದಾರೆ. ರಾಜ್ಯದ ಹಣಕಾಸು ಬಗ್ಗೆ, ಆರ್ಥಿಕತೆ ಬಗ್ಗೆ ಅವರಿಗಿಂತ ಬಲ್ಲ ಜ್ಞಾನಿಗಳು ಯಾರಿದ್ದಾರೆ. ಮುಂದೇನು ಮಾಡಬೇಕು ಎನ್ನುವುದು ಅವರಿಗೆ ಗೊತ್ತಿರಬೇಕು. ಅದು ಬಿಟ್ಟು ಜನರನ್ನು ಪ್ರತಿಪಕ್ಷಗಳು ಎತ್ತಿಕಟ್ಟುವ ಕೆಲಸ ಮಾಡುತ್ತಿವೆ ಎಂದು ಹೇಳುತ್ತಿರುವುದು ಹಾಸ್ಯಾಸ್ಪದ ಎಂದು ಹೇಳಿದರು.

ಎಲ್ಲರಿಗೂ ಉಚಿತ, ನಿಶ್ಚಿತ, ಖಚಿತ ಅಂದವರು ನೀವೇ ಅಲ್ಲವೇ. ನಾನು ಪ್ರತಿಪಕ್ಷದಲ್ಲಿ ಕೂತಿರುವುದು ಸರಕಾರ ಮಾಡುವ ಪ್ರತಿ ಜನವಿರೋಧಿ ಕೆಲಸಗಳಿಗೆ ಕೈ ಎತ್ತುವುದಕ್ಕಲ್ಲ. ಸರಕಾರದ ತಪ್ಪುಗಳನ್ನು ಎತ್ತಿ ತೋರಿಸಿ ಸಮರ ಸಾರುವುದಕ್ಕೆ. ನಮ್ಮದು ನುಡಿದಂತೆ ನಡೆಯುವ ಸರಕಾರ ಎಂದರು, ನುಡಿದಂತೆ ಎಲ್ಲಿ ನಡೆಯುತ್ತಿದೆ. ಈಗ ಉಚಿತ ವಿದ್ಯುತ್ ಅನ್ನು ಬಾಡಿಗೆದಾರರಿಗೆ ಕೊಡುವುದಿಲ್ಲ ಎನ್ನುತ್ತಿದೆ. ಹಾಗಾದರೆ ಅವರ ಪಾಡೇನು ಎಂದರು ಮಾಜಿ ಮುಖ್ಯಮಂತ್ರಿಗಳು.

ಬೆಂಗಳೂರು ನಗರಾಭಿವೃದ್ಧಿ ಸಚಿವರು ಸ್ನೇಹಕ್ಕೂ ಸಿದ್ಧ, ಯುದ್ಧಕ್ಕೂ ಸಿದ್ಧ ಅಂದಿದ್ದಾರೆ. ನಾವು ಇಲ್ಲಿ ಕೂತಿರೋದು ಸ್ನೇಹ ಮಾಡೋಕ್ಕಲ್ಲ. ಜನರಿಗೆ ಕಷ್ಟ ಬಂದರೆ ಯುದ್ಧ ಮಾಡುವುದಕ್ಕೆ ಹಿಂಜರಿಯುವುದಿಲ್ಲ. ನಾವು ಕೈಕಟ್ಟಿ ಕೂರಲು ಸಾಧ್ಯವಿಲ್ಲ ಎಂದು ಎಚ್ಚರಿಸಿದರು.

ವಿದ್ಯುತ್ ದರ ಏರಿಕೆಗೆ ಸಂಬಂಧಿಸಿ ಬಿಜೆಪಿ ನಾಯಕರು ಇಡೀ ರಾಜ್ಯದಲ್ಲಿ ಸೋಮವಾರ ಧರಣಿ ಮಾಡಿದ್ದಾರೆ. ಇವರು ಯಾವ ಕಾರಣಕ್ಕಾಗಿ ಧರಣಿ ಪ್ರತಿಭಟನೆ ಮಾಡಿದ್ದಾರೆ ಎನ್ನುವುದೇ ಸೋಜಿಗ. ಬಿಜೆಪಿ ಸರಕಾರದ ಕಾಲದಲ್ಲಿಯೇ ವಿದ್ಯುತ್ ದರ ಹೆಚ್ಚಳಕ್ಕೆ ಅಸ್ತು ಎಂದಿದ್ದು. ಇವತ್ತು ನೋಡಿದರೆ ಪ್ರತಿಭಟನೆ ಅಂತ ಕಣ್ಣೊರೆಸುವ ನಾಟಕ ಆಡುತ್ತಿದ್ದಾರೆ. ಜನರು ಎರಡೂ ರಾಷ್ಟ್ರೀಯ ಪಕ್ಷಗಳ ಈ ನಡವಳಿಕೆ ಗಮನಿಸಬೇಕು ಎಂದು ಮಾಜಿ ಸಿಎಂ ಹೇಳಿದರು.

ರಾಷ್ಟ್ರೀಯ ಪಕ್ಷಕ್ಕೆ ಮತ ಹಾಕಿದ ಪರಿಣಾಮ ಏನು ಎನ್ನುವುದು ಜನರಿಗೆ ಚೆನ್ನಾಗಿ ಅರ್ಥ ಆಗಿದೆ. ಎಲ್ಲದಕ್ಕೂ ಅರ್ಜಿ ಹಿಡಿದುಕೊಂಡು ದೆಹಲಿಗೆ ಹೋಗಬೇಕಿದೆ ಎಂದು ಲೇವಡಿ ಮಾಡಿದ ಮಾಜಿ ಸಿಎಂ, ಐದು ಗ್ಯಾರಂಟಿಗಳ ಬಗ್ಗೆ ನಾನು ಈಗಲೇ ಚರ್ಚೆ ಮಾಡಲ್ಲ. ನಾನು ಕಾಯುತ್ತೇನೆ. ಕಾಂಗ್ರೆಸ್‌ನವರು ಗ್ಯಾರಂಟಿ ಕೊಟ್ಟಿದ್ದು ತಪ್ಪಲ್ಲ, ಆದರೆ ಈಡೇರಿಸಬೇಕು. ಅದು ಆಡಳಿತ ಪಕ್ಷದ ಹೊಣೆ ಎಂದು ಸ್ಪಷ್ಟ ಮಾತುಗಳಲ್ಲಿ ಹೇಳಿದರು.

ಈ ಸರಕಾರಕ್ಕೆ ನಮ್ಮ ಬೆಂಬಲ, ವಿರೋಧ ವಿಷಯಾಧಾರಿತ ಆಗಿರುತ್ತದೆ. ನೀರಾವರಿ ಯೋಜನೆಗಳನ್ನು ಎಲ್ಲವನ್ನೂ ಈಡೇರಿಸಬೇಕು. ನೀರಾವರಿಗೆ ಸಂಬಂಧಿಸಿದಂತೆ ಈ ಸರಕಾರ ಮುಂದಿನ 5 ವರ್ಷಗಳ ಕಾಲ ಯಾವ ರೀತಿ ಕೆಲಸ ಮಾಡುತ್ತದೆಯೋ ನೋಡೋಣ. ಮೇಕೆದಾಟು, ಮಹದಾಯಿ ಯೋಜನೆಗಳನ್ನು ಸಂಪೂರ್ಣ ಮಾಡುತ್ತೇವೆ ಎಂದು ಅವರು ಭರವಸೆ ನೀಡಿದ್ದಾರೆ. ಇದಕ್ಕೆ ನಮ್ಮ ಬೆಂಬಲ ಇದೆ. ಇದನ್ನು ಬಿಟ್ಟು ಬರೀ ಹೇಳಿಕೆಗೆ ಸೀಮಿತವಾದರೆ ನಾವು ಮತ್ತೆ ಜನರನ್ನು ಜಾಗೃತಗೊಳಿಸುವ ಬಗ್ಗೆ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

7.6.2023 ಬುಧವಾರ, ಮಳೆ ನಕ್ಷತ್ರ: ರೋಹಿಣಿ, 25.05.2023ರಿಂದ 07.06.2023 ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ, ತಿಥಿ:ಚೌತಿ, ನಕ್ಷತ್ರ: ಉಷಾ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** "ಹೈಪೋಥೈರಾಯ್ಡಿಸಮ್" ಚಿಕಿತ್ಸಾ ಶಿಬಿರ, ಆಲನಹಳ್ಳಿ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9.30ರಿಂದ 4.30.
- **ಮೈಸೂರು ವಿಶ್ವವಿದ್ಯಾನಿಲಯ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ :** ಬುದ್ಧ ಬಸವ ಅಂಬೇಡ್ಕರ್ ಜಯಂತಿ, ಉದ್ಘಾಟನೆ : ಮೈಸೂರು ವಿಶ್ವವಿದ್ಯಾನಿಲಯ ಪರೀಕ್ಷಾಂಗ ಕುಲಸಚಿವ ಪ್ರೊ. ಕೆ.ಎಂ. ಮಹದೇವನ್, ಮುಖ್ಯ ಅತಿಥಿಗಳು : ನಿವೃತ್ತ ಪ್ರಾಧ್ಯಾಪಕರಾದ ಪ್ರೊ. ಬಿ.ಪಿ. ಮಹೇಶ್‌ಚಂದ್ರ ಗುರು, ಸಹಾಯಕ ಪ್ರಾಧ್ಯಾಪಕ ಡಾ. ಕೆ.ಎಲ್. ಚಂದ್ರಶೇಖರ, ಪ್ರಾಧ್ಯಾಪಕರಾದ ಡಾ. ಸಿ.ಕೆ. ಪುಟ್ಟಸ್ವಾಮಿ, ಡಾ. ಎನ್. ಮಮತಾ, ಅಧ್ಯಕ್ಷತೆ : ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥರಾದ ಪ್ರೊ. ಎಂ.ಎಸ್. ಸಪ್ನಾ, ಸ್ಥಳ: ಇಎಂಎಂಆರ್‌ಸಿ ಸಭಾಂಗಣ, ಬೆಳಗ್ಗೆ 10.30ಕ್ಕೆ.
- **ಶ್ರೀ ರಾಘವೇಂದ್ರಸ್ವಾಮಿ ಬೃಂದಾವನ ಸನ್ನಿಧಾನ:** ಶ್ರೀ ರಾಘವೇಂದ್ರ ಸ್ವಾಮಿ 76ನೇ ಬೃಂದಾವನ ಪ್ರತಿಷ್ಠಾಪನಾ ವರ್ಧಂತ್ಯುತ್ಸವ ಜ್ಞಾನಸತ್ರ, ಪಂಡಿತ್ ವಿದ್ವಾವಾಚಸ್ಪತಿ ಶ್ರೀ ಪ್ರಭಂಜನಾಚಾರ್ಯ ವ್ಯಾಸನಕೆರೆ, ಬೆಂಗಳೂರು ಅವರಿಂದ ಶ್ರೀ ಮನ್ಮಹಾಭಾರತ ಪ್ರವಚನ, ಸ್ಥಳ: ಶ್ರೀ ರಾಯರ ಮಠ, ಕೃಷ್ಣಮೂರ್ತಿಪುರಂ, ಸಂಜೆ 6ಕ್ಕೆ.
- **ರೋಟರಿ ಮೈಸೂರು ಮಿಡ್‌ಟೌನ್ :** ಟ್ರಿನಿಟಿ ಅಕಾಡೆಮಿಕ್ ಎಕ್ಸಲೆನ್ಸ್ ಅವಾರ್ಡ್ ಪ್ರಶಸ್ತಿ ಪ್ರದಾನ ಸಮಾರಂಭ, ಮುಖ್ಯ ಅತಿಥಿಗಳು : ರಾಮಕೃಷ್ಣ ಆಶ್ರಮದ ಅಧ್ಯಕ್ಷ ಶ್ರೀ ಸ್ವಾಮಿ ಮುಕ್ತಿದಾನಂದಜಿ, ಪ್ರಶಸ್ತಿ ಪುರಸ್ಕೃತರು : ಎಸ್. ಅಜಯ್ (ಎಸ್‌ಎಸ್‌ಎಲ್‌ಸಿ 621/625), ರೋಹಿತ್ ಕಲ್ಯಾಣಪುರ್ (ಪಿಯುಸಿ 592/600), ಸ್ಥಳ: ರೋಟರಿ ಕೇಂದ್ರ, ಜೆಎಲ್‌ಬಿ ರಸ್ತೆ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.30 ಮೈಸೂರಿನ ಯೋಗ ವಿದ್ಯಾಪರಂಪರೆ ಬಾನುಲಿ ಸರಣಿ, ಪ್ರಸ್ತುತಿ–ಡಾ.ಎ.ಎಸ್. ಚಂದ್ರಶೇಖರ್, 6.35 ಅಮೃತ ಸ್ವಾತಂತ್ರ್ಯ ಮಾಲಿಕೆಯಲ್ಲಿ ಜೆಎಸ್‌ಎಸ್ ಯೋಗದ ಮಾತು–ಬಾನುಲಿ ಸರಣಿ, ಪ್ರಸ್ತುತಿ–ಡಿ.ಶ್ರೀಹರಿ, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ–ಕಲಿಕೆಯ ವಿಶಿಷ್ಟಬಾನುಲಿ ಸರಣಿ, ಪ್ರಸ್ತುತಿ– ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, 9.00 ನಂದನ–ಪ್ರಾಯೋಜಿತ ಕಾರ್ಯಕ್ರಮ, ವಿಷಯ–IUI ಮತ್ತು IVF ತಜ್ಞರು, ಡಾ.ಮಾಧುರಿ ಎನ್.ಗೈನಕಾಲಜಿಸ್ಟ್ ಮತ್ತು ಫರ್ಟಿಲಿಟಿ ಸ್ಪೆಷಲಿಸ್ಟ್, 10.00 ಹಿಂದೂಸ್ಥಾನಿ ಸಂಗೀತ–ಪಂಡಿತ್ ಎಂ.ವೆಂಕಟೇಶಕುಮಾರ್–ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 1.20 ಭಾವಗೀತೆ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಲಯ ಸಂಭ್ರಮ–ಪಾಶ್ಚಾತ್ಯ ಲಯ ವಾದ್ಯಗಳ ಪರಿಚಯ, ಪ್ರಸ್ತುತಿ–ಹೆಚ್.ಎಲ್.ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ. ಭಾಗವಹಿಸುವವರು–ರಂಗಭೂಮಿ ಕಲಾವಿದೆ ಹಾಗೂ ಚಲನಚಿತ್ರ ನಟಿ ಇಂದಿರಾ ನಾಯರ್, 4.45 ಹಿಂದಿ ಪಾಠ–ಡಾ.ಎಸ್.ಪಿ.ವಿದ್ಯಾಕುಮಾರ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ–ಮಾನವ ಹಾಗೂ ವನ್ಯಜೀವಿ ಸಂಘರ್ಷದಿಂದ ರೈತರ ಮೇಲಾಗುವ ಪರಿಣಾಮಗಳು ಮತ್ತು ಪರಿಹಾರ ಈ ಬಗ್ಗೆ ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದ, ಹೆಡಿಯಾಲ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕೆ. ಪರಮೇಶ್ ಅವರೊಂದಿಗೆ ಸಂದರ್ಶನ, 10.00 ಜನಪದ ಸಂಗೀತ–ಮದ್ದುರಮ್ಮ ಮತ್ತು ತಂಡ, 10.30 ಸವಿನೆನಪು

ಹೃದಯ ರಕ್ತನಾಳ ಸುಧಾರಿತ ಚಿಕಿತ್ಸಾ ವ್ಯವಸ್ಥೆ ಕುರಿತು ಅಪೋಲೊ ಬಿಜಿಎಸ್ ಆಸ್ಪತ್ರೆ ವತಿಯಿಂದ ವಿಚಾರ ಸಂಕಿರಣ



ಮೈಸೂರು, ಜೂ.6(ಎಸ್‌ಬಿಡಿ)– ಮೈಸೂರಿನ ಅಪೋಲೊ ಬಿಜಿಎಸ್ ಆಸ್ಪತ್ರೆಯ ವತಿಯಿಂದ 'ಅಪೋಲೊ ಕಾರ್ಡಿಯೋವಾಸ್ಕುಲರ್ ಸಿಂಪೋಸಿಯಮ್ 2023'(ಹೃದಯ ರಕ್ತನಾಳ ಕುರಿತ ವಿಚಾರ ಸಂಕಿರಣ) ಆಯೋಜಿಸಲಾಗಿತ್ತು.

ನಗರದ ಖಾಸಗಿ ಹೋಟೆಲ್(ರ್‍ಯಾಡಿಸನ್ ಬ್ಲೂ) ಸಭಾಂಗಣದಲ್ಲಿ ವಿಚಾರ ಸಂಕಿರಣದಲ್ಲಿ ಹೃದ್ರೋಗಿಗಳು ಶೀಘ್ರವಾಗಿ ಚೇತರಿಸಿಕೊಳ್ಳುವ ನಿಟ್ಟಿನಲ್ಲಿ ಹೃದಯ ರಕ್ತನಾಳ ಚಿಕಿತ್ಸೆಯಲ್ಲಿ ಉತ್ತಮ ಫಲಿತಾಂಶ ನೀಡುವ ಅತ್ಯಾಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಸಂಬಂಧ ತಜ್ಞರು ಮಹತ್ವದ ಚರ್ಚೆ ನಡೆಸಿದರು.

ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕೆ.ಹೆಚ್.ಪ್ರಸಾದ್, ಹೃದ್ರೋಗ ಚಿಕಿತ್ಸಾ ಕ್ಷೇತ್ರದಲ್ಲಿ ಕ್ಷಿಪ್ರ ಬೆಳವಣಿಗೆಗಳಾಗುತ್ತಿದ್ದು, ನಾವು ಹೊಸ ಆವಿಷ್ಕಾರಗಳು ಹಾಗೂ ತಂತ್ರಜ್ಞಾನಗಳ ಬಗ್ಗೆ ತಿಳಿದುಕೊಳ್ಳುವುದು ಅತ್ಯಗತ್ಯ. ಈ ನಿಟ್ಟಿನಲ್ಲಿ ಅಪೋಲೊ ಆಸ್ಪತ್ರೆ ವತಿಯಿಂದ ಈ ವಿಚಾರ ಸಂಕಿರಣ ಏರ್ಪಡಿಸಿರುವುದು ಸ್ತುತ್ಯಾರ್ಹ ಎಂದು ಪ್ರಶಂಸೆ ವ್ಯಕ್ತಪಡಿಸಿದರು. ಮೈಸೂರು ಅಪೋಲೊ ಬಿಜಿಎಸ್ ಆಸ್ಪತ್ರೆಯ ಉಪಾಧ್ಯಕ್ಷರೂ ಆದ ಯೂನಿಟ್ ಹೆಡ್ ಭರತೀಶ ರೆಡ್ಡಿ ಮಾತನಾಡಿ, ನಾವು ಹೃದ್ರೋಗ ಚಿಕಿತ್ಸಾ ವಿಧಾನದಲ್ಲಿ ಅತ್ಯಾಧುನಿಕ ಓಸಿಟಿ, ಟಿಎವಿಆರ್, ಎಫ್‌ಎಫ್‌ಆರ್, ಜೈವಿಕವಾಗಿ ಹೀರಿಕೊಳ್ಳುವ ಸ್ಟೆಂಟ್‌ಗಳು, ರೊಟೇಶನಲ್ ಅಥೆರೆಕ್ಟಮಿ, ಸಿಆರ್‌ಟಿಡಿ, ಎಲ್‌ಬಿಬಿಪಿ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವಲ್ಲಿ ಮುಂಚೂಣಿಯಲ್ಲಿದ್ದೇವೆ. ಈ ಮೂಲಕ ತುರ್ತು ಸಂದರ್ಭಗಳಲ್ಲಿ ಬದುಕುಳಿಸಬಲ್ಲ ಸೌಲಭ್ಯಗಳನ್ನು ಕೈಗೆಟುಕುವಂತೆ ಮಾಡಿದ್ದೇವೆ ಎಂದು ತಿಳಿಸಿದರು.

ಅಪೋಲೊ ಹಾರ್ಟ್ ಇನ್‌ಸ್ಟಿಟ್ಯೂಟ್ ಮುಖ್ಯಸ್ಥ ಹಾಗೂ ಮುಖ್ಯ ಹೃದ್ರೋಗ ತಜ್ಞ ಡಾ.ಅರುಣ್ ಶ್ರೀನಿವಾಸ್ ಮಾತನಾಡಿ, ಕ್ಯಾತ್ ಲ್ಯಾಬ್ ವ್ಯವಸ್ಥೆ ಇಲ್ಲದ ಸಂದರ್ಭದಲ್ಲಿ ಹೃದ್ರೋಗ ತುರ್ತು ಚಿಕಿತ್ಸೆ ಹಾಗೂ ಹೃದಯಾಘಾತಕ್ಕೆ ಅಗತ್ಯ ಚಿಕಿತ್ಸೆ ಕಲ್ಪಿಸಲು ಆದ್ಯತೆ ನೀಡಿದ್ದು ಅಪೋಲೊ ಆಸ್ಪತ್ರೆ ಹೆಗ್ಗಳಿಕೆಯಾಗಿದೆ. ಆರ್ಹೆತ್ಮಿಯಾ ಮತ್ತು ಪಲ್ಮನರಿ ಎಂಬಾಲಿಸಮ್‌ನಿಂದ ಹಠಾತ್ ಹೃದ್ರೋಗ ಮರಣ ಪ್ರಮಾಣವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಸುಧಾರಿತ ರೋಗನಿರ್ಣಯ ಮತ್ತು ಚಿಕಿತ್ಸಕ ತಂತ್ರಗಳ ಮೂಲಕ ನಮ್ಮ ಪ್ರಯತ್ನ ಸಾಗಿದೆ ಎಂದರು.

ವಿಚಾರ ಮಂಡನೆ: ಮೈಸೂರು ಅಪೋಲೊ ಬಿಜಿಎಸ್ ಆಸ್ಪತ್ರೆಯ ಡಾ.ಅರುಣ್ ಶ್ರೀನಿವಾಸ್ 'ವೆನಸ್ ಥ್ರಂಬೋಎಂಬಾಲಿಸಮ್– ಹಠಾತ್ ಸಾವಿಗೆ ಪ್ರಮುಖ ಕಾರಣ', ಡಾ.ಚೇತನ್ ಭಾರದ್ವಜ್ ಮತ್ತು ಡಾ.ಹೆಚ್.ಜಿ.ಗೌತಮ್ 'ಹೃದ್ರೋಗ ರೋಗಿಗಳ ಚಿಕಿತ್ಸೆಯಲ್ಲಿ ಹೊಸ ತಂತ್ರಗಳ ಬಳಕೆ ಮತ್ತು ಪ್ರಾಥಮಿಕ ಆಂಜಿಯೋಪ್ಲಾಸ್ಟಿ', ಬೆಂಗಳೂರು ಫೋರ್ಟಿಸ್ ಆಸ್ಪತ್ರೆಯ ಡಾ.ಆರ್.ಕೇಶವ್ 'ಕ್ಯಾತ್ ಲ್ಯಾಬ್ ವ್ಯವಸ್ಥೆ ಇಲ್ಲದೆಡೆ ಎಸಿಎಸ್ ನಿರ್ವಹಣೆ', ಡಾ.ಎಸ್.ಜಯಪ್ರಕಾಶ್ ಶೆಂಥರ್ 'ಚಿಕಿತ್ಸೆ ನೀಡುವಲ್ಲಿ ಕಾರ್ಡಿಯಾಕ್ ಆರ್ಹೆತ್ಮಿಯಾ ನಿರ್ವಹಣೆ', ಶೇಷಾದ್ರಿಪುರಂ ಅಪೋಲೊ ಆಸ್ಪತ್ರೆಯ ಡಾ.ಬಿ.ಸಿ.ಶ್ರೀನಿವಾಸ್ 'ಟಾವಿ – ವಯಸ್ಸಾದವರ ತೀವ್ರವಾದ ಮಹಾಪಧಮನಿಯ ಸ್ಟೆನೋಸಿಸ್‌ಗೆ ಒಂದು ವರದಾನ', ಡಾ.ಆನಂದ್ ಸುಬ್ರಮಣ್ಯಂ 'ಹೃದಯ ವೈಫಲ್ಯ ಮತ್ತು ಹೃದಯ ಕಸಿಗೆ ಶಸ್ತ್ರಚಿಕಿತ್ಸೆ' ಹಾಗೂ ಬೆಂಗಳೂರು ಮಣಿಪಾಲ್ ಆಸ್ಪತ್ರೆಯ ಡಾ.ಕಾರ್ತಿಕ್ ವಾಸುದೇವನ್ 'ದೀರ್ಘಕಾಲದ ಹೃದಯ ವೈಫಲ್ಯಕ್ಕೆ ಹೊಸ ಆವಿಷ್ಕಾರದ ಚಿಕಿತ್ಸೆಗಳು' ಕುರಿತು ವಿಚಾರ ಮಂಡಿಸಿದರು.



ಅರಣ್ಯ ಇಲಾಖೆ ಮೈಸೂರು ಪ್ರಾದೇಶಿಕ ವಲಯ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ ಹಾಗೂ ನೆಕ್ಸಸ್ ಸೆಂಟರ್ ಸಿಟಿ ಮಾಲ್ ಸಹಯೋಗದಲ್ಲಿ ಬಿತ್ತೋತ್ಸವ ಕಾರ್ಯಕ್ರಮದ ಮೂಲಕ ಚಾಮುಂಡಿಬೆಟ್ಟದ ಅರಣ್ಯ ಪ್ರದೇಶದಲ್ಲಿ ಸಾವಿರಾರು ಬೀಜಗಳ ಬಿತ್ತುವುದರ ಜೊತೆಗೆ ಸ್ಥಳೀಯ ಜಾತಿ ಸಸಿಗಳನ್ನು ನೆಡುವ ಮೂಲಕ ವಿಶ್ವ ಪರಿಸರ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



ನಕ್ಕರೆ ಅದೇ ಸ್ವರ್ಗ

ಈತ : "ಸಾರ್, ನನಗೊಂದು ಸಿಗರೇಟ್ ಕೊಡಿ"
ಆತ : "ಸಿಗರೇಟ್ ಸೇದೋದು ಬಿಟ್ಟುಬಿಟ್ಟೆ ಅಂದ್ರಿ"
ಈತ : "ನಾನಿನ್ನೂ ಫಸ್ಟ್ ಸ್ಟೇಜ್‌ನಲ್ಲಿದ್ದೀನಿ"
ಆತ : "ಹಾಗಂದರೆ?"
ಈತ : "ಅಂದರೆ, ಕೊಂಡುಕೊಳ್ಳೋದು ಬಿಟ್ಟಿದ್ದೀನಿ"

ಮೈಸೂರು ಮಿತ್ರ

ಬುಧವಾರ, 7 ಜೂನ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಇತರರ ಸುಖವನ್ನು ಬಯಸುವುದು ನಾವು ಸುಖವನ್ನು ಪಡೆಯುವುದಕ್ಕಿಂತ ಸುಲಭ ಮಾರ್ಗ – ಸ್ವಾಮಿ ವಿವೇಕಾನಂದ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತಾಯಿಯಂತೆ ಮಗಳು, ನೂಲಿನಂತೆ ಸೀರೆ.

ನಿಮ್ಮ ಪತ್ರಗಳು

ಜಾತಿ–ಧರ್ಮದ ಹೆಸರಲ್ಲಿ ಜನರನ್ನು ಬೇರ್ಪಡಿಸಬೇಡಿ

ಮಾನ್ಯರೆ,

ಭಾರತ, ಹಲವು ಸಂಸ್ಕೃತಿ ಹಾಗೂ ವಿವಿಧ ಜಾತಿ–ಧರ್ಮದ ಜನರನ್ನು ಹೊಂದಿರುವ ದೇಶವಾಗಿದೆ. ಆದರೆ ಇದೆಲ್ಲಕ್ಕಿಂತ ಮೊದಲು ನಾವೆಲ್ಲರೂ ಮಾನವ ಧರ್ಮದವರು. ಎಲ್ಲರೂ ಉತ್ತಮವಾದ ಜೀವನವನ್ನು ನಡೆಸಲು ದುಡಿಯುತ್ತಾರೆ. ಮೇಲು – ಕೀಳು ಎಲ್ಲಿಯೂ ಬರುವುದಿಲ್ಲ. ಅರ್ಹತೆಗೆ ತಕ್ಕಂತೆ ಕೆಲಸವನ್ನು ಮಾಡಿಕೊಂಡು ಎಲ್ಲರೂ ಒಂದೇ ಎಂಬ ಮನೋಭಾವದಿಂದ ಬದುಕುತ್ತಿದ್ದೇವೆ. ಆದರೆ ಇತ್ತೀಚಿನ ದಿನಗಳಲ್ಲಿ ಧರ್ಮದ ಹೆಸರಿನಲ್ಲಿ ಜನರ ನಡುವೆ ತಂದಿಡುವ ಕೆಲಸಗಳು ನಡೆಯುತ್ತಿವೆ. ಇದರ ಸಲುವಾಗಿಯೇ ಕೊಲೆ–ಸುಲಿಗೆಗಳು ತಾಂಡವವಾಡುತ್ತಿವೆ. ಇದನ್ನೆಲ್ಲ ಗಮನಿಸಿದಾಗ ಮುಂದೊಂದು ದಿನ ನಮ್ಮ ದೇಶವು ಅಶಾಂತಿಯಿಂದ ಛಿದ್ರವಾಗುವ ಸಮಯ ಬಹಳ ದೂರವೇನಿಲ್ಲ ಎಂದೆನಿಸುತ್ತದೆ. ಎಲ್ಲಾ ಜನರನ್ನು ಒಂದುಗೂಡಿಸಿ ಸಹಬಾಳ್ವೆ ನಡೆಸಬೇಕು ಎಂದು ಹೇಳಬೇಕಾಗಿರುವ ಸರ್ಕಾರವೇ ಇಂದು ಭೇದ–ಭಾವ ಮಾಡಿ ದೇಶವನ್ನು ಒಡೆಯಲು ಮುಂದಾಗುತ್ತಿರುವುದು ಅಸಮಂಜಸವಾದ ಸಂಗತಿಯೇ ಸರಿ.

ಭಾರತ ಸಂಪೂರ್ಣವಾಗಿ ಹಿಂದೂ ರಾಷ್ಟ್ರವಾಗಬೇಕೆಂಬುದು ಎಲ್ಲರ ಕನಸಲ್ಲ ಬದಲಾಗಿ ನಮ್ಮ ರಾಷ್ಟ್ರವು ಪ್ರಪಂಚಕ್ಕೆ ಮಾದರಿಯಾಗುವಂತೆ ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ರಾಜಕೀಯವಾಗಿ ಮುಂದುವರೆಯು ಬೇಕೆಂಬುದಾಗಿದೆ. ಇದನ್ನೇ ನಮ್ಮ ಸಂವಿಧಾನವು ಸಹ ಹೇಳುತ್ತದೆ. ಹಾಗಾಗಿ ಸರ್ಕಾರ, ರಾಜಕೀಯ ವ್ಯಕ್ತಿಗಳು ಹಾಗೂ ಇನ್ನಿತರರು ದೇಶವನ್ನು ಒಡೆಯಲು ಮುಂದಾಗಿರುವವರು ಈ ರೀತಿಯ ಚಟುವಟಿಕೆಯನ್ನು ಹುರಿದುಂಬಿಸದೆ ದೇಶದ ಏಳಿಗೆಗಾಗಿ ದುಡಿಯುವ ಕೈ ಜೋಡಿಸಿ ಶಾಂತಿ ಹಾಗೂ ಸೌಹಾರ್ದಯುತ ಭಾರತವನ್ನು ನಿರ್ಮಾಣ ಮಾಡಬೇಕಾಗಿದೆ.

– ಐಶ್ವರ್ಯ, ಮಾನಸಗಂಗೋತ್ರಿ, ಮೈಸೂರು

ತ್ವರಿತವಾಗಿ ಬಸ್ ತಂಗುದಾಣ ಪುನರ್ ನಿರ್ಮಾಣ ಪೂರ್ಣಗೊಳಿಸಿ

ಮಾನ್ಯರೇ,

ರಾಜ್ಯ ವಿಧಾನಸಭಾ ಚುನಾವಣೆಗೆ ಒಂದು ತಿಂಗಳ ಮುನ್ನ ಹಳೆಯದಾಗಿದ್ದ ಮೈಸೂರಿನ ಬಹುತೇಕ ನಗರ ಸಾರಿಗೆ ಬಸ್ ಪ್ರಯಾಣಿಕರ ತಂಗುದಾಣಗಳನ್ನು ಒಡೆದು ಹಾಕಲಾಗಿತ್ತು. ಪುನರ್ ನಿರ್ಮಾಣ ಮಾಡುವ ಕಾರ್ಯವೂ ಆರಂಭವಾಗಿತ್ತು. ಆದರೆ ಇದ್ದಕ್ಕಿದ್ದಂತೆ ಸ್ಥಗಿತಗೊಂಡಿತು. ಈಗ ಚುನಾವಣೆ ಮುಗಿದು ಒಂದು ತಿಂಗಳಾದರೂ ಇನ್ನೂ ಈ ತಂಗುದಾಣಗಳ ನಿರ್ಮಾಣ ಕಾರ್ಯ ಆರಂಭವಾಗಿಲ್ಲ. ಜನರು ಬಿರು ಬಿಸಿಲಿನಲ್ಲಿ ಬಸ್ಸಿಗಾಗಿ ನಿಂತುಕೊಂಡು ಕಾಯುವ ಪರಿಸ್ಥಿತಿ ಉಂಟಾಗಿದೆ. ಕಾಮಗಾರಿಗೆ ಸಂಗ್ರಹಿಸಲಾಗಿದ್ದ ವಸ್ತುಗಳು ಅಲ್ಲಿಯೇ ಬಿದ್ದಿವೆ. ಆದರೂ ಕೆಲಸ ಮಾತ್ರ ಆರಂಭವಾಗಿಲ್ಲ. ಚುನಾವಣೆಯಲ್ಲಿ ಗೆದ್ದ ಶಾಸಕರು ಸಾರ್ವಜನಿಕರಿಂದ ಸನ್ಮಾನ ಸ್ವೀಕರಿಸುವ ಭರಾಟೆಯಲ್ಲಿ ಸಾರ್ವಜನಿಕರ ಸಮಸ್ಯೆ ಕಡೆ ಗಮನಹರಿಸಬೇಕಿದೆ.

ಬಲ್ಲಾಳ್ ವೃತ್ತದ ಬಸ್ ತಂಗುದಾಣ (ಮಹೇಶ್ ಪ್ರಸಾದ್ ಹೋಟೇಲ್ ಮುಂದೆ)ವು ಪೂರ್ಣಗೊಂಡಿದ್ದು, ಕುಳಿತುಕೊಳ್ಳುವ ಬೆಂಚುಗಳು ಬಹಳ ಕೆಳಮಟ್ಟದಲ್ಲಿದ್ದು, ಇದರಿಂದ ಪ್ರಯಾಣಿಕರಿಗೆ ಅನುಕೂಲಕಾರಿಯಾಗಿಲ್ಲ. ಇನ್ನು ಉಳಿದಿರುವ ಬಸ್ ತಂಗುದಾಣಗಳನ್ನು ಆದಷ್ಟು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕಿದೆ. ಹಾಗೂ ಕುಳಿತುಕೊಳ್ಳುವ ಬೆಂಚುಗಳು ಸ್ವಲ್ಪ ಎತ್ತರಕ್ಕೆ ಇದ್ದರೆ ಪ್ರಯಾಣಿಕರಿಗೆ ಅನುಕೂಲವಾಗುತ್ತದೆ. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಸ್ಪಂದಿಸುತ್ತಾರೆಂದು ಆಶಿಸುತ್ತೇನೆ.

– ಜಿ.ಪಿ.ಹರೀಶ್, ವಿ.ವಿ.ಮೊಹಲ್ಲ, ಮೈಸೂರು

ಗ್ಯಾರಂಟಿಗಳಿಗೆ ಅತಿಯಾದ ನಿಯಮಗಳು ಬೇಡ


ಮಾನ್ಯರೆ,

ಸದ್ಯಕ್ಕೆ ಕರ್ನಾಟಕದಲ್ಲಿ ಸ್ಪಷ್ಟ ಬಹುಮತ ಪಡೆದು ಕಾಂಗ್ರೆಸ್ ಸರ್ಕಾರದ ಆಡಳಿತ ಬಂದಿದೆ. ಇದು ಈ ಹಿಂದೆ ಇದ್ದ ಬಿಜೆಪಿ ಸರಕಾರದ ಅಗತ್ಯ ವಸ್ತುಗಳ ಬೆಲೆಯೇರಿಕೆ, ಮತ್ತಿತರ ಪ್ರಮುಖ ಕಾರಣಗಳಿಂದ ಬೇಸತ್ತ ಜನರು ಕಾಂಗ್ರೆಸ್‌ನ್ನು ಗೆಲ್ಲಿಸಿದ್ದಾರೆ. ಚುನಾವಣಾ ಪೂರ್ವ ಪ್ರಣಾಳಿಕೆಗಳಲ್ಲಿ ಹಲವು ಗ್ಯಾರಂಟಿಗಳನ್ನು ನೀಡಿ ಜನರ ಮನವೊಲಿಸಿ ಗೆದ್ದು ಈಗ ಸರಳ ಸರ್ಕಾರ ರಚನೆ ಮಾಡಿದ್ದು, ಬರುವ ತಿಂಗಳಲ್ಲಿ ಆ ಗ್ಯಾರಂಟಿ ಕಾರ್ಡ್‌ನ ಜಾರಿಗೆ ಜನರು ಎದುರು ನೋಡುತ್ತಿದ್ದಾರೆ. ಹಿಂದುಳಿದ ವರ್ಗಗಳ ಜನನಾಯಕರಾದ ಸಿದ್ಧರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾರೆ. ಅವರ ಶುದ್ಧಹಸ್ತದ ಆಡಳಿತವನ್ನು ಜನರು ಮೆಚ್ಚಿದ್ದಾರೆ. ಉತ್ತಮ ಆಡಳಿತ ವ್ಯವಸ್ಥೆ ಸಿಕ್ಕೇ ಸಿಗುವ ಜನರ ನಂಬಿಕೆಯನ್ನು ಅವರು ಎಂದಿಗೂ ಕಳೆದುಕೊಳ್ಳುವುದಿಲ್ಲ ಎಂಬ ವಿಶ್ವಾಸ ಅಗಾಧವಾಗಿದೆ.

ಈಗ ಉಚಿತ ಗ್ಯಾರಂಟಿ ಯೋಜನೆಗಳ ಜಾರಿಗೆ ಇರುವ ಹತ್ತು ಹಲವಾರು ನೀತಿ ನಿಯಮಗಳನ್ನು ಸರಿಯಾಗಿ ವಿವೇಚಿಸಿ ಆನಂತರ ಅವುಗಳನ್ನು ಆದೇಶವಾಗಿಸಬೇಕು. ಇಲ್ಲವಾದರೆ ಜನರು ಪ್ರತಿಭಟನೆ ಮಾಡುವುದು ಅನಿವಾರ್ಯ ಆಗುತ್ತದೆ. ಇದಕ್ಕೆ ಸರಕಾರ ಅನುವು ಮಾಡಿಕೊಡಬಾರದು. ಈ ಬಗ್ಗೆ ವಿವೇಚನೆಯುತ ಜಾಣ್ಮೆಯ ಅಗತ್ಯತೆ ಇದೆ. ಅತಿಯಾದ ನಿಯಮಗಳನ್ನು ರಚಿಸಿದಾಗ ಕೆಲವೇ ಜನಕ್ಕೆ ತಲುಪಿದರೆ ಆ ಯೋಜನೆ ಎಂದಿಗೂ ಯಶಸ್ವಿ ಆಗುವುದಿಲ್ಲ. ಇದನ್ನು ತಜ್ಞರು ಮನವರಿಕೆ ಮಾಡಿಕೊಡುವ ಕೆಲಸ ಆಗಬೇಕಿದೆ. ಒಂದು ಬಾರಿ ಜಾರಿಗೊಳಿಸುವ ಯೋಜನೆಯನ್ನು ನಂತರ ಅದಕ್ಕೆ ವಿರೋಧ ವ್ಯಕ್ತವಾದಾಗ ಮತ್ತೆ ಸರಿಪಡಿಸಲು ಹೋದರೆ ಸರ್ಕಾರ ಮುಜುಗರಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚಾಗಿ ಇರುವುದರಿಂದ ಒಮ್ಮೆ ಯೋಚಿಸಿ ಜಾರಿಗೆ ತಂದರೆ ಒಳಿತು. ಈ ಬಗ್ಗೆ ಹಣಕಾಸು ಇಲಾಖೆಯ ಜತೆಗೆ ಸಮಗ್ರ ಚರ್ಚೆ ನಡೆದು ಮುಂದುವರೆಯುವುದನ್ನು ಹಣಕಾಸು ಖಾತೆ ಹೊಂದಿರುವ ಮುಖ್ಯಮಂತ್ರಿಗಳಿಗೆ ಯಾರೂ ಹೇಳಿಕೊಡಬೇಕಾಗಿಲ್ಲ. ಜುಲೈ ತಿಂಗಳಲ್ಲಿ ಇವರದೇ ಆದ ಒಂದು ಬಜೆಟ್ ಮಂಡನೆಗೆ ಈಗಾಗಲೇ ಪೂರ್ವ ತಯಾರಿ ನಡೆಯುತ್ತಿರುವುದು ಗಮನಾರ್ಹ ಅಂಶವೇ ಸರಿ.

ಜನರ ನಂಬಿಕೆಯನ್ನು ಹುಸಿ ಮಾಡದಂತೆ ನೋಡಿಕೊಳ್ಳುವುದು ಪ್ರಸ್ತುತ ಇರುವ ಕಾಂಗ್ರೆಸ್ ಸರ್ಕಾರದ ಉನ್ನತ ಮಟ್ಟದ ಜವಾಬ್ದಾರಿ ಆಗಿದೆ. ಇಲ್ಲಿ ಗೆದ್ದರೆ ಪದೇಪದೆ ಅವರೇ ಆಡಳಿತಕ್ಕೆ ಬರುವಂತೆ ಜನರು ನೋಡಿಕೊಳ್ಳುತ್ತಾರೆ. ಈ ಬಗ್ಗೆ ಸರ್ಕಾರ ಗಮನವಿಡಲಿ ಎಂಬ ಸದಾಶಯ ನನ್ನದು...

–ಎ.ಎಸ್. ಗೋವಿಂದೇಗೌಡ, ಅರೇನಹಳ್ಳಿ, ಪಿರಿಯಾಪಟ್ಟಣ ತಾ.




ಕೆಬಿಜೆಯವರ

ಭೂಮಂತ್ರ... ಭೂಮಂತ್ರ... ಭೂಮಂತ್ರ...

ಹೊಸ ಕಾಂಗ್ರೆಸ್ ಸರ್ಕಾರ, ಹೊಸ ಬೆಳಕು

ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಸಾಂವಿಧಾನಿಕ ಧರ್ಮದ ಅನ್ವಯ ಮತದಾನದ ಬದಲು ಎಲ್ಲೋ ಒಂದು ಕಡೆ ವ್ಯಾಪಾರ ಧರ್ಮದ ಪ್ರಕಾರ ಮತ ವಿನಿಮಯ ಆಗಿದೆಯಾ?



ಹಿಂದೂ ಪುರಾಣಗಳು ಹಾಗೂ ನಮ್ಮ ಮಹಾಕಾವ್ಯಗಳಾದ **ರಾಮಾಯಣ** ಮತ್ತು **ಮಹಾಭಾರತ**ಗಳಲ್ಲಿ ಒಬ್ಬ ವ್ಯಕ್ತಿ ತನ್ನ ದೈವಿಭಕ್ತಿಯಿಂದಲೋ ಅಥವಾ ಕಠಿಣ ತಪಸ್ಸಿನ ಶಕ್ತಿಯಿಂದಲೋ ದೇವರ ವರ ಪಡೆಯುತ್ತಿದ್ದ. 'ಎಲೇ ಭಕ್ತನೇ, ನಿನ್ನ ತಪಸ್ಸಿಗೆ ನಾನು ಮೆಚ್ಚಿದ್ದೇನೆ. ಏನು ವರ ಬೇಕು ಕೇಳುವಂತವನಾಗು?' ಎಂದು ಭಗವಂತ ಪ್ರತ್ಯಕ್ಷನಾಗಿ ಕೇಳುತ್ತಾನೆ. ಆಗ ಆ ತಪಸ್ವಿ ತನ್ನ ಭಾವನೆಗೆ, ಇಚ್ಛೆಗೆ ತಕ್ಕಂತೆ ವರವನ್ನು ಕೇಳುತ್ತಾನೆ. ಅದು ಸ್ವಾರ್ಥಕ್ಕಾಗಿಯೂ ಇರಬಹುದು ಇಲ್ಲವೇ ಲೋಕ ಕಲ್ಯಾಣಾರ್ಥವಾಗಿಯೂ ಇರಬಹುದು.

ಒಮ್ಮೆ ಒಬ್ಬ ವ್ಯಕ್ತಿ ಪಕ್ಕದ ಮನೆಯವನೊಡನೆ ಜಗಳವಾಡಿ ಸೋತು, ಬೇಸತ್ತು ಕೊನೆಗೆ ದೇವರ ಮೊರೆ ಹೋಗಲು ತಪಸ್ಸಿಗೆ ಕೂರುತ್ತಾನೆ. ಅವನ ತಪಸ್ಸಿಗೆ ಮೆಚ್ಚಿ ದೇವರು ಪ್ರತ್ಯಕ್ಷನಾಗಿ 'ಭಕ್ತ, ನಿನಗೇನು ವರ ಬೇಕು ಕೇಳು. ಆದರೆ ನೀನು ಕೇಳಿದ ವರದ ಅರ್ಧದಷ್ಟು ಮಾತ್ರ ನಿನಗೆ ಕೊಡಬಲ್ಲೆ' ಎಂದು ದೇವರು ಹೇಳುತ್ತಾನೆ. ಇದನ್ನು ಕೇಳಿ ಭಕ್ತನಿಗೆ ಕಸಿವಿಸಿ ಆಗುತ್ತದೆ. ಆದರೂ ಅವನು ತನ್ನ ಪಕ್ಕದ ಮನೆಯವನಿಗೆ ತಕ್ಕ ಪಾಠ ಕಲಿಸಲು, ಅವನಿಗೆ ಹಾನಿ ಮಾಡಲು ಇದೊಂದು ಅವಕಾಶ ಎಂದು ಯೋಚಿಸಿ ಈ ರೀತಿ ವರ ಕೇಳುತ್ತಾನೆ; "ದೇವರೇ, ನನ್ನ ಪಕ್ಕದ ಮನೆಯವನ ಎರಡೂ ಕಣ್ಣುಗಳು ಕುರುಡಾಗಲಿ".

ಆಗ ದೇವರು ಆಶ್ಚರ್ಯದಿಂದ, "ಎಲೇ ಮೂರ್ಖನೇ, ಅವನ ಎರಡು ಕಣ್ಣು ಕುರುಡಾದರೆ ನಿನ್ನ ಒಂದು ಕಣ್ಣು ಸಹ ಕುರುಡಾಗುತ್ತದೋ' ಎಂದು ಎಚ್ಚರಿಸುತ್ತಾನೆ. ಆದರೆ ಈ ಪ್ರತಿಕಾರಾತ್ಮಕ ಮನೋಭಾವದ ವ್ಯಕ್ತಿ ಎಳ್ಳಷ್ಟು ಅನುಕಂಪವಿಲ್ಲದೆ ಹೇಳುತ್ತಾನೆ, "ದೇವರೇ, ನನ್ನ ಒಂದು ಕಣ್ಣು ಹೋದರೂ ಪರವಾಗಿಲ್ಲ. ಆದರೆ ಅವನ ಎರಡೂ ಕಣ್ಣು ಹೋಗಲಿ. ಇದೇ ನಾನು ಬೇಡುವ ವರ". ತಕ್ಷಣ "ತಥಾಸ್ತು" ಎಂದ ಭಗವಂತ.

ಇದು ಸ್ವಾರ್ಥಕ್ಕಾಗಿ ಬೇಡಿ ಪಡೆದುಕೊಳ್ಳುವ ವರ. ಇದಕ್ಕೆ ತದ್ವಿರುದ್ಧವಾಗಿ ಋಷಿಮುನಿಗಳು, ರಾಜ ಮಹಾರಾಜರುಗಳು ಲೋಕ ಕಲ್ಯಾಣಾರ್ಥವಾಗಿ ವರವನ್ನು ಬೇಡಿ ಪಡೆದ ದೃಷ್ಟಾಂತಗಳೂ ಇವೆ. ಉದಾಹರಣೆಗೆ ಬರಗಾಲದಲ್ಲಿ ಮಳೆ ಬರಲೆಂದು ಬೇಡಿಕೊಳ್ಳುವ ವರ, ಯುದ್ಧದಲ್ಲಿ ಜಯವಾಗಲಿ ಎಂದು ಬೇಡಿಕೊಳ್ಳುವಂತಹ ವರ, ಒಟ್ಟಿನಲ್ಲಿ ಲೋಕ ಕಲ್ಯಾಣಕ್ಕಾಗಿ ಬೇಡಿಕೊಳ್ಳುವ ವರ. ಇದು ನಮ್ಮ ಪ್ರಾಚೀನ, ಪುರಾಣ ಕಾಲದ ಕಥೆ.

ಆದರೆ ಇಂದು ನಮ್ಮ ದೇಶವನ್ನು ಆಳುವವರು ಪರಕೀಯರಲ್ಲ. ರಾಜ–ಮಹಾರಾಜರೂ ಅಲ್ಲ. ಇದು **ಪ್ರಜಾಪ್ರಭುತ್ವ** (Democracy). ಇಲ್ಲಿ ಪ್ರಜೆಗಳೇ ಪ್ರಭುಗಳು. ಅಂದರೆ ಕೆಲವು ಬುದ್ಧಿಜೀವಿಗಳೆಂದು ಪರಿಗಣಿಸಿಕೊಂಡವರು 'ಆಯ್ಕೆಯಾಗಿ' ಬಂದು ರಚಿಸಿದ **ಸಂವಿಧಾನ** (Constitution) ಎಂಬ ಪುಸ್ತಕದಲ್ಲಿ ಅಡಕವಾಗಿರುವ ಕಾನೂನು, ನೀತಿ, ನಿಯಮಗಳನ್ನು ದೇಶದ ಎಲ್ಲಾ ಜನರು, **'ಪ್ರಜಾಭಿಮತ'** ಇಲ್ಲದಿದ್ದರೂ (without referendum), ಒಪ್ಪಿ ಅದು ನಮ್ಮ **ದೇಶದ ಮೂಲ ಕಾನೂನು** (mother of all laws) ಎಂದು ಪರಿಗಣಿಸಿರುವುದು. ಅದರ ಆಧಾರದ ಮೇಲೆಯೇ ಇಂದು ನಮ್ಮ ದೇಶದ ಸರಕಾರಗಳು ನಡೆಯುತ್ತಿರುವುದು.

ಇದರಲ್ಲಿ ಬಹುಮುಖ್ಯವಾದ ಭಾಗ ಎಂದರೆ ಐದು ವರ್ಷಕ್ಕೊಮ್ಮೆ ನಮ್ಮನ್ನು ಆಳುವವರನ್ನು, ರಾಜಕೀಯ ಪಕ್ಷಾಧಾರಿತವಾಗಿ ಆಗಲಿ ಅಥವಾ ಸ್ವತಂತ್ರ ಅಭ್ಯರ್ಥಿಗಳಾಗಿಯಾಗಲೀ, ನಾವು ಅಂದರೆ ಪ್ರಜೆಗಳು ಚುನಾವಣೆಯ ಮೂಲಕ ಮತ ಹಾಕಿ ಆಯ್ಕೆ ಮಾಡುವುದು. ಇಲ್ಲಿ ಒಬ್ಬ ವ್ಯಕ್ತಿ ಸಾರ್ವಭೌಮನಾಗಲು ಸಾಧ್ಯವಿಲ್ಲ. ಚುನಾಯಿತರು **ಸಾಮೂಹಿಕ ಜವಾಬ್ದಾರಿ** (Collective responsibility)ಯಿಂದ ಆಡಳಿತವನ್ನು ನಡೆಸಬೇಕಾಗುತ್ತದೆ. ಇದಕ್ಕೆ ಸಂಬಂಧಪಟ್ಟ ಬೇರೆ ಬೇರೆ ಕಾನೂನು ನಿಯಮಗಳು ಸಂವಿಧಾನದನ್ವಯ ಇದೆ ಎಂಬುದನ್ನು ಬೇರೆ ಹೇಳಬೇಕಿಲ್ಲ.

ಈ ಎಲ್ಲಾ ಪ್ರಕ್ರಿಯೆಗಳನ್ವಯ ಇದೇ 13.5.2023ರಂದು **ಕಾಂಗ್ರೆಸ್ ಪಕ್ಷ ಕರ್ನಾಟಕದಲ್ಲಿ ಅಧಿಕಾರಕ್ಕೆ ಬಂತು**. ಚುನಾವಣೆಯ ಸಂದರ್ಭದಲ್ಲಿ ಪ್ರಚಾರ ಮಾಡುವಾಗ ಹಾಗೂ ತಮ್ಮ ಚುನಾವಣಾ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷವು ಕೆಲವು **ಆಶ್ವಾಸನೆ**ಗಳನ್ನು ಮತದಾರರಿಗೆ ಕೊಟ್ಟು, ಮತ ಯಾಚಿಸಿತು. ಬೇರೆ ಪಕ್ಷಗಳು ಕಾಂಗ್ರೆಸ್‌ನವರು ನೀಡಿದಂತಹ ಭಾರೀ ಭರವಸೆಯನ್ನು ಕೊಡುವ ಧೈರ್ಯ ಮಾಡಲಿಲ್ಲ. ಬೇರೆ ಪಕ್ಷದವರು ಕೂಡ ಇದಕ್ಕೂ ಮಿಗಿಲಾದ ಭರವಸೆಯನ್ನು ಕೊಡಬಹುದಿತ್ತೇನೋ. ಉದಾಹರಣೆಗೆ ಅನ್ನಭಾಗ್ಯ ಕಾಂಗ್ರೆಸ್ ಕೊಟ್ಟ ಭರವಸೆ. ಬಿಪಿಎಲ್ ಕುಟುಂಬದ ಪ್ರತಿ ಸದಸ್ಯರಿಗೆ 10 ಕೆ.ಜಿ. ಆಹಾರ ಧಾನ್ಯ. ಬಿಜೆಪಿ ಅಥವಾ ಜೆಡಿಎಸ್ ಪಕ್ಷ ಕೂಡ ಈ ಭರವಸೆಯನ್ನು 15 ಕೆಜಿಗೆ ಏರಿಸಬಹುದಿತ್ತು. ಅಡ್ಡಿ ಇಲ್ಲ. ಕಾಂಗ್ರೆಸ್ ಐದು ಭರವಸೆಗಳ ಜೊತೆಗೆ ಇನ್ನೊಂದೆರಡು, ಮೂರೂ ಸೇರಿಸಿ ಕೊಡಬಹುದಿತ್ತು. ಮೊದಲು, ಮತದಾರರಿಗೆ ಈ **'ಉಚಿತ'**ಗಳ ಭರವಸೆ ಕೊಟ್ಟು ಮತ ಕಿತ್ತು ಗೆದ್ದು ಬರುವ. ಆಮೇಲೆ **'ಉಚಿತ'** ಭರವಸೆಗಳನ್ನು ಈಡೇರಿಸುವ ಪ್ರಯತ್ನ ಮಾಡುವ ಎಂದು ಯೋಚಿಸಬಹುದಿತ್ತು.

ಆದರೆ ಬೇರೆ ಪಕ್ಷದವರು ಹಾಗೆ ಯೋಚನೆ ಮಾಡಲಿಲ್ಲ. ಬಹುಶಃ ಬೇರೆ ಪಕ್ಷದವರಾದ ಬಿಜೆಪಿ ಹಾಗೂ ಜೆಡಿಎಸ್ ಈ ಮೊದಲು ರಾಜ್ಯವನ್ನು ಆಳಿದುದರಿಂದ ಅವರಿಗೆ ಈ **'ಉಚಿತ'** ಭಾಗ್ಯಗಳನ್ನು ಈ ಪ್ರಮಾಣದಲ್ಲಿ ಐದು ವರ್ಷ (ಸರಕಾರದ ಸಾಂವಿಧಾನಿಕ ಅವಧಿ) ಕೊಡುವುದು ಕಷ್ಟ ಸಾಧ್ಯವೆಂಬ ಅರಿವಿದ್ದಿರಬಹುದು. ಅಷ್ಟೇ ಅಲ್ಲ, ಈ ರೀತಿ ತೆರಿಗೆದಾರನ ಹಣವನ್ನು ಬಡತನದ ಆಧಾರದ ಮೇಲೆ, ಲಿಂಗದ ಆಧಾರದ ಮೇಲೆ (ಇಲ್ಲಿ ಸ್ತ್ರೀಲಿಂಗ), ವಿದ್ಯೆ ಇದ್ದು ಕೆಲಸ ಇಲ್ಲದೆ ಇರುವವರಿಗೆ ಉಚಿತವಾಗಿ ಹಣ ಕೊಟ್ಟರೆ ರಾಜ್ಯದ ಬೊಕ್ಕಸದ ಮೇಲೆ ಆಗುವ ಪರಿಣಾಮವೇನು ಎಂದು ಮೊದಲಾಗಿ ಯೋಚಿಸಬೇಕಾಗುತ್ತದೆ. ಯಾರೂ ಬೇಕಾದರು, ಬೇರೆಯವರ ಸಹಾಯದಿಂದ ಕುದುರೆಯನ್ನು ಏರಬಹುದು. ಆದರೆ ನಂತರ ಅದನ್ನು ನಿಯಂತ್ರಿಸಿ ಸವಾರಿ ಮಾಡಬಲ್ಲನೆ ಎಂಬ ಪ್ರಶ್ನೆ ಉದ್ಭವಿಸುತ್ತದೆ.

ಅದೇನೆ ಇರಲಿ, ಈ ಐದು ಭರವಸೆಗಳು ಬಡವರು ಹೆಚ್ಚಿರುವ ನಮ್ಮ ರಾಜ್ಯಕ್ಕೆ ಒಂದು ವರದಾನವೆಂದೇ ಹೇಳಬಹುದು. ಆದರೆ ಮಾತು ಕೊಡುವಾಗ ಮುಂದಾಲೋಚನೆ ಇರಬೇಕು. ರಾಮಾಯಣದಲ್ಲಿ ದಶರಥನ ಫಜೀತಿ ಗೊತ್ತಲ್ಲ. ಇದೊಂದು ರೀತಿಯಲ್ಲಿ 'ದುಡುಕಿ ಮಾತು ಕೊಡು, ನಂತರ ನಿಧಾನವಾಗಿ ವ್ಯಥೆಪಡು' ಎಂಬ ಮಾತಿನಂತಿದೆ. ಈ ಐದು 'ಗ್ಯಾರಂಟಿ' ಭರವಸೆಗಳಿಗೆ ಹೆಸರುಕೊಟ್ಟವರ ಮೆಚ್ಚಲೇಬೇಕು. ಎಷ್ಟು ಅರ್ಥಗರ್ಭಿತ, ಅರ್ಥಪೂರ್ಣವಾದ ಹೆಸರುಗಳು –1. **ಅನ್ನಭಾಗ್ಯ** 2. **ಗೃಹಲಕ್ಷ್ಮಿ** 3. **ಗೃಹ ಜ್ಯೋತಿ** 4. **ಶಕ್ತಿ (ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ)** 5. **ಯುವನಿಧಿ**. ಆಶ್ಚರ್ಯವೆಂದರೆ ಸಿದ್ಧರಾಮಯ್ಯನವರು ಈ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ (2013–2018) ಇದೇ ರೀತಿಯ ಕೆಲವು ಸಾಮಾಜಿಕ ನ್ಯಾಯ ಒದಗಿಸುವ ಕಾರ್ಯವನ್ನು ಕೈಗೊಂಡಿದ್ದರು. ಇಂದಿರಾ ಕ್ಯಾಂಟೀನ್‌ನಿಂದ ಅನ್ನಭಾಗ್ಯ ಮೊದಲಾಗಿ. ಆದರೆ 2018ರ ಚುನಾವಣೆಯಲ್ಲಿ ಕಾಂಗ್ರೆಸ್ಸಿಗೆ ಈಗಿನಂತೆ (2023) ಸ್ಪಷ್ಟವಾದ ಬಹುಮತ ಬರಲಿಲ್ಲ. ಈ ಬಾರಿ ಇಷ್ಟೊಂದು ದೊಡ್ಡ ಬಹುಮತ (135) ಪಡೆದು ಗೆದ್ದು ಬರಬೇಕಾದರೆ ಒಂದೇ ಕಾರಣ– ಈ ಐದು ಭರವಸೆಗಳ ಪರಿಣಾಮ. ಚುನಾವಣೆಯ ಕಡೇ ದಿನಗಳಲ್ಲಿ ಕಾಂಗ್ರೆಸ್ ಬಿಟ್ಟ ಬ್ರಹ್ಮಾಸ್ತ್ರ. ಅದೊಂದು ಕೋವಿಡ್ –19ರ ದಿನಗಳಲ್ಲಿ ಕೊಡುತ್ತಿದ್ದ **ಬೂಸ್ಟರ್ ಡೋಸ್** (Booster Dose) ಕೊಟ್ಟ ಹಾಗೆ. ಬಡ ಮತ್ತು ಮಧ್ಯಮ ವರ್ಗದವರು ಸುಲಭವಾಗಿ ಈ ಪಂಚ ಮಂತ್ರಕ್ಕೆ ಮಾರುಹೋದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದೇ ಬಿಟ್ಟಿತು. ಸಂತೋಷ.

ಪ್ರಜಾಪ್ರಭುತ್ವದ ಪ್ರಯೋಜನ ಮತ್ತು ಮಹತ್ವ ಇರೋದೇ ಬದಲಾವಣೆಯಲ್ಲಿ. ಇಲ್ಲದಿದ್ದರೆ 2014ರವರೆಗೆ ನಮ್ಮ ದೇಶ ಒಂದೇ ಕುಟುಂಬದ, ಒಂದೇ ಪಕ್ಷದ ಆಡಳಿತದಿಂದ ನೊಂದು, ಬೆಂದು ಸ್ವಾತಂತ್ರ್ಯ ಸಿಕ್ಕಿ 65 ವರ್ಷಗಳಾದರೂ ನಮ್ಮನ್ನು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಕೇವಲ ಹಿಂದುಳಿದ ದೇಶವೆಂದು ಕರೆಸಿಕೊಳ್ಳುತ್ತಿದ್ದೆವು. (ನಿಜವೂ ಹೌದು). ಅದೇ ಸ್ಥಿತಿ ಮುಂದುವರಿಯುತ್ತಿತ್ತು. ಕೇಂದ್ರದಲ್ಲಿ 2014ರಲ್ಲಿ ಬದಲಾವಣೆ ಬಂದುದರಿಂದ ನಮ್ಮ ದೇಶದ ಆರ್ಥಿಕ ಬೆಳವಣಿಗೆ ಹಾಗೂ ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಅತೀವ ಗೌರವವನ್ನು ಪಡೆಯಲು ಸಾಧ್ಯವಾಯಿತು.

ಈಗ ಕಾಂಗ್ರೆಸ್ ನಮ್ಮ ರಾಜ್ಯದಲ್ಲಿ ಒಂದು **ಸ್ಥಿರವಾದ ಸರಕಾರ**ವನ್ನು ಸ್ಥಾಪಿಸಿದೆ. ಈ ಸ್ಥಿರತೆ, ರಾಜ್ಯದ ಆರ್ಥಿಕ ಬೆಳವಣಿಗೆ ಹಾಗೂ ಸಾಮಾಜಿಕ ಸುಧಾರಣೆಗೆ ತುಂಬಾ ಸಹಕಾರಿಯಾಗುತ್ತದೆ. ಆದರೆ ಈ ಸ್ಥಿರತೆ ದುಡುಕಿ ಕೊಟ್ಟ ಐದು 'ಗ್ಯಾರಂಟಿ' ಭರವಸೆಗಳಿಂದಾಗಿ ಅಸ್ಥಿರತೆಗೆ ದಾರಿ ಮಾಡಿಕೊಡಬಾರದು. ನೆನಪಿರಲಿ! ಬಿಜೆಪಿ ಸರಕಾರ (2019–2023) ತುಂಬಾ ಭ್ರಷ್ಟ ಹಾಗೂ ದುರ್ಬಲ ಸರ್ಕಾರವಾಗಿತ್ತು. ಅಡ್ಡಿ ಇಲ್ಲ. ಬಿಜೆಪಿಯ ವಿವಿಧ ಜಾತಿ ಪಂಗಡಗಳಿಗೆ ಸೇರಿದ ನಾಯಕರುಗಳಲ್ಲಿ ಸಮನ್ವಯವಾಗಲೀ, ಚುನಾವಣೆ ಎದುರಿಸಲು ಇರಬೇಕಾದ ಛಲವಾಗಲೀ ಇರಲಿಲ್ಲ. ಮೋದಿಯ ನಾಮದ ಬಲವೊಂದಿದ್ದರೆ ಸಾಕು ಎಂದು ನಂಬಿದ್ದರು. ಪ್ರತಿಯೊಬ್ಬ ಶಾಸಕ ಅವನೇ ಪಕ್ಷದ ವಕ್ತಾರ (Spokesperson) ಎಂಬಂತೆ ಅಸಂಬದ್ಧವಾಗಿ ಹೇಳಿಕೆಗಳನ್ನು ನೀಡುತ್ತಿದ್ದರು. ಅದರ ಮಧ್ಯೆ ಬಿ.ಎಸ್.ಯಡಿಯೂರಪ್ಪನವರನ್ನು ಮೂಲೆಗುಂಪು ಮಾಡಿದರು. ದೆಹಲಿ ನಾಯಕರು ಬಂದಾಗ ಅವರೆಲ್ಲ ಯಡಿಯೂರಪ್ಪನವರನ್ನು ನಾಟಕೀಯವಾಗಿ ಹೊಗಳಿ, ತೃಪ್ತಿಪಡಿಸಲು ಯತ್ನಿಸಿದರು. ಆದರೆ ಪಳಗಿದ ಕರ್ನಾಟಕ ರಾಜ್ಯದ ಹಿರಿಯ ಬಿಜೆಪಿ ನಾಯಕರಿಗೆ ಇದೆಲ್ಲಾ ಅರ್ಥವಾಗುವುದಿಲ್ಲವೆ? ರಾಜ್ಯ ರಾಜಕೀಯದಲ್ಲಿ ದೆಹಲಿ ನಾಯಕರಿಗಿಂತ ಸ್ಥಳೀಯ ನಾಯಕರೇ ನಿರ್ಣಾಯಕ. ಕರ್ನಾಟಕದಲ್ಲಿ ಕಾಂಗ್ರೆಸ್ ಇಷ್ಟೊಂದು ಬಹುಮತದಿಂದ ಗೆಲ್ಲಲು ಇದೂ ಒಂದು ಕಾರಣ. ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರ 24x7 ದುಡಿಮೆ. ಅವರದು **ಸೋಲಿಸಲಾಗದ ಸಂಯೋಗ** (un beatable combination). ಆ ಶ್ರಮದ ಜೊತೆಗೆ ಕಡೇ ಗಳಿಗೆಯಲ್ಲಿ ದಕ್ಕಿದ ಅದೃಷ್ಟ ಎಂದರೆ ಆ ಪಂಚಸೂತ್ರ – 5 'ಗ್ಯಾರಂಟಿ'ಗಳು. ಅದೇನೇ ಇರಲಿ. ಈ ಪಂಚಸೂತ್ರಗಳು ಕಾಂಗ್ರೆಸ್ಸಿನ ಮಾಜಿ ಪ್ರಧಾನಮಂತ್ರಿ ನೆಹರು ಅವರು ಚೀನಾದೊಡನೆ ಅಂದಿನ ದಿನಗಳಲ್ಲಿ ರೂಪಿಸಿದ 'ಪಂಚಶೀಲ' ಎಂಬ ಒಡಂಬಡಿಕೆಯಂತೆ ಆಗದಿರಲಿ ಎಂದು ಆಶಿಸೋಣ.

ಕೇಂದ್ರದಲ್ಲಿ ಗೃಹಮಂತ್ರಿ ಅಮಿತ್ ಶಾ ಹೇಗೆ ರಾಜಕೀಯ ಚಾಣಕ್ಯ ಎಂಬ ಗುಣವಾಚಕ (epithet) ಹೆಸರನ್ನು ಪಡೆದಿದ್ದರೋ, ಅದೇ ರೀತಿ ಕರ್ನಾಟಕದಲ್ಲಿ ಆ ರೀತಿಯ ಹೆಸರು ಪಡೆದವರು ಸಿದ್ದರಾಮಯ್ಯನವರು. ಈಗಿರುವ ಬಹುಮತವನ್ನು ನೋಡಿದರೆ, ಸಿದ್ದರಾಮಯ್ಯನವರು ಐದು ಗ್ಯಾರಂಟಿಗಳನ್ನು ತಿರುವು–ಮುರುಗು, ಮೇಲೆ ಕೆಳಗೆ ಮಾಡಿ, ಜನರ ಸಂಶಯಗಳನ್ನು ಮೋಡಿಗಾರನಂತೆ ಹೋಗಲಾಡಿಸಿ ಸಮಾಧಾನ ಮಾಡುವುದರಲ್ಲಿ ಸಂಶಯವಿಲ್ಲ.

ಇದಿಷ್ಟು ಹೇಳಿದ ಮೇಲೆ, ನನದೊಂದು ಕಡೆಯ ಯೋಚನೆ. ಈ ರೀತಿಯ 'ಗ್ಯಾರಂಟಿ'ಗಳಿಂದ ಸಮಾಜದ ಮೇಲೆ ಏನು ಪರಿಣಾಮ ಬೀರಬಹುದು? ಕೇವಲ ಭರವಸೆಯ ಬಲೆಗೆ ಬಿದ್ದು ಮತ ಹಾಕಿದವರಿಗೆ ಈ ಪ್ರಶ್ನೆ. ಗಂಡಸರು ಸೋಮಾರಿಗಳಾಗಿ ಮನೆಯಲ್ಲೇ ಹೆಚ್ಚು ದಿನ ಕೂರುವುದಿಲ್ಲವೇ? ಹೊಲ, ಗದ್ದೆ, ಕಾಫಿ ತೋಟಗಳಲ್ಲಿ ಕೆಲಸ ಮಾಡಲು ಈಗಾಗಲೇ ಕೂಲಿ ಕಾರ್ಮಿಕರು ಅಗತ್ಯವಿರುವಷ್ಟು ಸಂಖ್ಯೆಯಲ್ಲಿ ಸಿಗುತ್ತಿಲ್ಲ. ಬಂದರೆ ವಾರಕ್ಕೆ 4–5 ದಿನ ಕೆಲಸ ಮಾಡುತ್ತಾರೆ. ಹಾಗಾಗಿ, ಅಸ್ಸಾಂ, ಬಿಹಾರ್ ರಾಜ್ಯಗಳಿಂದ ಇಲ್ಲಿಗೆ ಕೆಲಸಕ್ಕೆ ಜನ ಬರುತ್ತಿದ್ದಾರೆ. ಕೆಲವು ಮನೆಗಳಲ್ಲಿ ಅತ್ತೆ–ಸೊಸೆಯಂದಿರ ಮಧ್ಯೆ ಇರುವ ಅಸಮಾಧಾನ ಸಾಲದೆಂಬಂತೆ ಈಗ ಮತ್ತೊಂದು ಸಮಸ್ಯೆ ಹುಟ್ಟಿಕೊಂಡಿದೆಯಂತೆ. ಯಾರು ನಿಜವಾದ ಮನೆ ಯಜಮಾನಿ? ಇದು **'ಗೃಹಲಕ್ಷ್ಮಿ'** ಭಾಗ್ಯದ ಕೊಡುಗೆ.

ಇಂದು ನಮ್ಮ ಅನೇಕ ಜನರ ಮನಸ್ಥಿತಿ ಹೇಗಿದೆ ಅಂದರೆ ಏನಾದರು ಉಚಿತವಾಗಿ ಸಿಗುವುದಾದರೆ, ತಾನು ಅರ್ಹನಲ್ಲದಿದ್ದರೂ, ಹೇಗಾದರೂ ಮಾಡಿ ಶತಾಯಗತಾಯ ಉಚಿತವಾಗಿ ಸಿಗುವ ಭಾಗ್ಯವನ್ನು ತನ್ನದಾಗಿಸಿಕೊಳ್ಳುವುದು. ಅಬ್ಬಾ! ಏನಿದು ಐದು ವರ್ಷಕ್ಕೆ ಒಂದು ಬಾರಿ ನಮಗೆ ಸಿಗುವ ಒಂದು ಮತದ ಶಕ್ತಿ? ಜೀವನ ನಡೆಸಲು ಬೇಕಾದ ಅವಶ್ಯಕತೆಗಳ ಉಚಿತ ಪೂರೈಕೆ! ಆದರೆ ಈ ಉಚಿತ ಬಳುವಳಿಯ ಆಡಳಿತ ಕ್ರಮ ಯಾವ ಗಳಿಗೆಯಲ್ಲಿ ಕಾಂಗ್ರೆಸ್ ಸರಕಾರವನ್ನು ಕಚ್ಚಬಹುದು ಎಂಬುದನ್ನು ಕಾದು ನೋಡೋಣ. ಕಚ್ಚದೆ ಇದ್ದರೆ, ಇರಲಿ ಸಿದ್ದರಾಮಯ್ಯನವರಿಗೆ ನಮ್ಮ ಮೆಚ್ಚುಗೆ. ಇಲ್ಲ ಅಂದರೆ ಇನ್ನೊಂದು ಚುನಾವಣೆ. ಮತ್ತೆ ಮತದಾರನಿಗೆ ಇನ್ನೊಮ್ಮೆ ಮಹಾ ಭರವಸೆಗಳ ಅಮೃತಧಾರೆ. ಇದೇ ಪ್ರಜಾಪ್ರಭುತ್ವದ (Democracy) ವಿಸ್ಮಯ!

ನಮ್ಮ ಗುರುಗಳಾದ **ಪ್ರೊ ಜಿ.ಟಿ. ನಾರಾಯಣ ರಾಯರು** (ಖಂಡಿತವಾದಿ, ನಾಸ್ತಿಕರು) ನನಗೆ ಯಾವಾಗಲೂ ಹೇಳುತ್ತಿದ್ದರು : **ಜೀವನದಲ್ಲಿ ಉಚಿತವಾಗಿ ಸಿಗುವುದು ಕೇವಲ ಎರಡೇ; ಒಂದು ಬೆಳಕು, ಇನ್ನೊಂದು ಗಾಳಿ**. ಹಾಗಾದರೆ ನಮ್ಮ ರಾಜ್ಯದ ಬಡವರಿಗೆ ಕಾಂಗ್ರೆಸ್ ಸರ್ಕಾರ ಕೊಡುತ್ತಿರುವುದು ಉಚಿತವಲ್ಲವೋ? ಖಂಡಿತ ಉಚಿತವಲ್ಲ. ಯಾವ ಮತದಾರರಿಗೆ ಸರಕಾರದಿಂದ ಈ ರೀತಿಯ ಉಚಿತ ಪದಾರ್ಥಗಳು ಬೇಕಿದ್ದವೋ ಅವರು ತಮ್ಮ ಮತವನ್ನು ಸಂವಿಧಾನದ ಪ್ರಕಾರ ಅರ್ಹರಿಗೆ ದಾನ ಮಾಡುವುದರ ಬದಲು ತಮ್ಮ ಮತವನ್ನು ವ್ಯಾಪಾರ ಮಾಡಿದಂತೆ ವಿನಿಮಯ ಮಾಡಿಕೊಂಡಿದ್ದಾರೆ ಅಷ್ಟೆ (Bartered the vote). ಇರಲಿ, ಬಡತನದ ಚಿಂತೆಯಿರುವವರಿಗೆ ರಾಜ್ಯದ ಚಿಂತೆ ಏಕೆ? ಆದರೆ ಸಿದ್ದರಾಮಯ್ಯ–ಡಿ.ಕೆ.ಶಿವಕುಮಾರ್ ಜೋಡಿ ಈ ಉಚಿತ ದೇಣಿಗೆಯಿಂದ ನಮ್ಮ ಬಡವರನ್ನು ಅವರ ಬದುಕಿನ ಸಮಸ್ಯೆಗಳಿಂದ ಪಾರು ಮಾಡಿ ಜೊತೆಗೆ ನಮ್ಮ ರಾಜ್ಯದ ಸರ್ವತೋಮುಖ ಅಭಿವೃದ್ಧಿ ಕುಂಠಿತವಾಗದ ಹಾಗೆ ಆಡಳಿತ ನಡೆಸಿದರೆ ಅದೇ ನಮ್ಮ ಭಾಗ್ಯ.

email:
voice@starofmysore.com

ರುಡ್‌ಸೆಟ್‌ನಲ್ಲಿ ವಿವಿಧ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು,ಜೂ.6–ರುಡ್‌ಸೆಟ್ ಸಂಸ್ಥೆ, ಮೈಸೂರಿನಲ್ಲಿ ಗ್ರಾಮೀಣ ಪ್ರದೇಶದ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಸ್ವಉದ್ಯೋಗ ಮಾಡಲು ವಿವಿಧ ರೀತಿಯ ಕೌಶಲ್ಯ ತರಬೇತಿಗಳನ್ನು ಜೂನ್ ಮತ್ತು ಜುಲೈ ತಿಂಗಳಲ್ಲಿ ಪ್ರಾರಂಭಿಸಲಾಗುವುದು. ಆಸಕ್ತರು ಸಂಸ್ಥೆಗೆ ಖುದ್ದು ಬಂದು ಇಲ್ಲವೇ ದೂರವಾಣಿ ಮುಖಾಂತರ ತರಬೇತಿಗೆ ಹೆಸರು ನೊಂದಾಯಿಸಲು ತಿಳಿಸಲಾಗಿದೆ. ಬ್ಯೂಟಿಪಾರ್ಲರ್ ನಿರ್ವಹಣೆ (19.06.2023ರಿಂದ 18.07.2023ವರೆಗೆ –30 ದಿನಗಳು) ಕಂಪ್ಯೂಟರ್ ಹಾರ್ಡ್‌ವೇರ್ ಮತ್ತು ನೆಟ್‌ವರ್ಕಿಂಗ್ (04.07.2023ರಿಂದ 17.08.2023 ವರೆಗೆ–45 ದಿನಗಳು) ವಿದ್ಯುತ್ ಮೋಟಾರ್ ರಿವೈಂಡಿಂಗ್ ಮತ್ತು ಪಂಪ್‌ಸೆಟ್ ರಿಪೇರಿ (20.07.2023ರಿಂದ 19.08.2023ವರೆಗೆ–30 ದಿನಗಳು) ಅಭ್ಯರ್ಥಿಗಳ ಅರ್ಹತೆ: 18ರಿಂದ 45 ವರ್ಷಗಳ ವಯೋಮಿತಿ ಹೊಂದಿರಬೇಕು. ಆಸಕ್ತರು ಮೊಬೈಲ್ ನಂಬರ್‌ವುಳ್ಳ ಸ್ವವಿಳಾಸದ ಅರ್ಜಿಯೊಂದಿಗೆ, ಆಧಾರ್ ಕಾರ್ಡ್, ಬಿಪಿಎಲ್ ರೇಷನ್ ಕಾರ್ಡ್ ಜೆರಾಕ್ಸ್ ಪ್ರತಿಗಳೊಂದಿಗೆ ಮೇಲ್ಕಾಣಿಸಿದ ಪ್ರಾರಂಭಿಕ ದಿನಾಂಕದೊಳಗಾಗಿ ಸಂಪರ್ಕಿಸಿ. ತರಬೇತಿಗೆ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ನೇರ ಸಂದರ್ಶನ ಮೂಲಕ ನಡೆಸಲಾಗುವುದು. ಮಾಹಿತಿಗೆ 0821–2519663, 9844013948, 9880196581, 9964096406, 9740430061, 8746803006

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ ಬುಧವಾರ 7 ಜೂನ್ 2023

ಮಂಜುನಾಥ್ ಪ್ರಸಾದ್ ಸೇರಿ 11 ಐಎಎಸ್ ಅಧಿಕಾರಿಗಳ ವರ್ಗಾವಣೆ

ಬೆಂಗಳೂರು,ಜೂ.6–ಹಿರಿಯ ಅಧಿಕಾರಿ ಮಂಜುನಾಥ್ ಪ್ರಸಾದ್ ಸೇರಿದಂತೆ 11 ಐಎಎಸ್ ಅಧಿಕಾರಿಗಳನ್ನು ವರ್ಗಾವಣೆಗೊಳಿಸಿ ರಾಜ್ಯ ಸರ್ಕಾರ ಮಂಗಳವಾರ ಆದೇಶ ಹೊರಡಿಸಿದೆ.

ಐಎಎಸ್ ಅಧಿಕಾರಿ ಕಪಿಲ್ ಮೋಹನ್ ಅವರನ್ನು ಪ್ರವಾಸೋದ್ಯಮ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯನ್ನಾಗಿ, ಐಎಎಸ್ ಅಧಿಕಾರಿ ಎಸ್.ಆರ್. ಉಮಾಶಂಕರ್ ಅವರನ್ನು ಸಹಕಾರ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹುದ್ದೆಯಿಂದ ಉನ್ನತ ಶಿಕ್ಷಣ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾಗಿ ವರ್ಗಾಯಿಸಲಾಗಿದೆ.

ಉಮಾಶಂಕರ್ ಅವರ ವರ್ಗಾವಣೆಯಿಂದ ತೆರವಾದ ಸಹಕಾರ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಸ್ಥಾನಕ್ಕೆ ಮಂಜುನಾಥ ಪ್ರಸಾದ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ (ಕೆಎಸ್ಆರ್‌ಟಿಸಿ) ವ್ಯವಸ್ಥಾಪಕ ನಿರ್ದೇಶಕ ವಿ.ಅನ್ಬುಕುಮಾರ್ ಅವರನ್ನು ಕೃಷಿ ಇಲಾಖೆ ಕಾರ್ಯದರ್ಶಿಯನ್ನಾಗಿ ನೇಮಿಸಲಾಗಿದೆ.

ವರ್ಗಾವಣೆಗೊಂಡ ಐಎಎಸ್ ಅಧಿಕಾರಿಗಳ ಪಟ್ಟಿ: ಕಪಿಲ್ ಮೋಹನ್–ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಪ್ರವಾಸೋದ್ಯಮ, ಉಮಾಶಂಕರ್– ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಮಂಜುನಾಥ್ ಪ್ರಸಾದ್–ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಅನ್ಬುಕುಮಾರ್– ಕಾರ್ಯದರ್ಶಿ, ಕೃಷಿ ಇಲಾಖೆ, ಮೋಹನ್ ರಾಜ್–ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ರಿಚರ್ಡ್ ಡಿಸೋಜ–ಕಾರ್ಯದರ್ಶಿ, ಎಂಎಸ್ಎಂಇ ಮತ್ತು ಮೈನ್ ಇಲಾಖೆ, ಗಿರೀಶ್–ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ, ಕರೇಗೌಡ–ಅಟಲ್ ಜನಸ್ನೇಹಿ ಕೇಂದ್ರ, ನಿರ್ದೇಶಕರು, ಪಾಟೀಲ್ ಯಲಗೌಡ ಶಿವನಗೌಡ–ಕೃಷಿ ಇಲಾಖೆ, ಆಯುಕ್ತ, ಜಗದೀಶ್–ಎಂಡಿ, ಪ್ರವಾಸೋದ್ಯಮ, ಡಾ. ಮಹೇಶ್– ಸಿಇಒ, ಕೆಐಎಡಿಬಿ.

ನಮ್ಮ ಅನುಕೂಲಕ್ಕೆ ಮರ ಕಡಿದರೆ ಅದರ ಪರಿಣಾಮವನ್ನು ನಾವೇ ಅನುಭವಿಸಬೇಕು

● ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಎಚ್ಚರಿಕೆ ● ಕೂರ್ಗಳ್ಳಿಯಲ್ಲಿ ಪರಿಸರ ದಿನಾಚರಣೆ



ಮೈಸೂರು, ಜೂ.6(ಎಸ್‌ಬಿಡಿ)– ಮರ ಗಿಡ ಬೆಳೆಸುವುದು ಜೀವನದ ಭಾಗವಾಗಬೇಕು ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಆಶಿಸಿದರು.

ಹೂಟಗಳ್ಳಿ ನಗರಸಭೆ ಮತ್ತು ಅರಣ್ಯ ಇಲಾಖೆ ಮೈಸೂರು ಪ್ರಾದೇಶಿಕ ವಲಯದ ಸಹಯೋಗದಲ್ಲಿ ಕೂರ್ಗಳ್ಳಿ ಗ್ರಾಮದ ಶ್ರೀ ಬಿಲ್ಲೇಶ್ವರ ದೇವಸ್ಥಾನದ ಆವರಣದಲ್ಲಿ ಏರ್ಪಡಿಸಿದ್ದ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪರಿಸರ ಪ್ರೇಮ ಒಂದು ದಿನಕ್ಕೆ ಸೀಮಿತವಾಗದೆ ನಿರಂತರವಾಗಿರಬೇಕೆಂದು ಸಲಹೆ ನೀಡಿದರು.

ವಿಶ್ವ ಪರಿಸರ ದಿನಾಚರಣೆ ನೆಪದಲ್ಲಿ ಒಂದು ದಿನ ಗಿಡ ನೆಟ್ಟು ನೀರೆರೆದರೆ ಸಾಲದು. ಮರಗಿಡಗಳನ್ನು ಪೋಷಿಸಿ, ಬೆಳೆಸುವುದು ಜೀವನದ ಒಂದು ಭಾಗವಾಗಿರಬೇಕು. ಮನೆ ಮರೆಯಾಗುತ್ತದೆ ಎಂತಲೋ ಅಥವಾ ಸ್ವಚ್ಛತೆಯ ನೆಪದಲ್ಲೋ ಸುತ್ತಮುತ್ತಲಿನ ಗಿಡಮರಗಳನ್ನು ಕಡಿಯಬೇಡಿ. ಹೀಗೆ ಹಸಿರು ನಾಶ ಮಾಡಿ ಮೈದಾನವಾಗಿಸುವುದರ ಪರಿಣಾಮವನ್ನು ನಾವೇ ಅನುಭವಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮನೆಯ ಆವರಣ ಹಾಗೂ ಆಸುಪಾಸಿನಲ್ಲಿರುವ ಮರಗಳನ್ನು ಉಳಿಸಿಕೊಂಡು ಹೂದೋಟ ಅಥವಾ ಕೈತೋಟಗಳನ್ನು ನಿರ್ಮಿಸಿಕೊಳ್ಳಬಹುದು. ಈ ಮೂಲಕ ಸಾವಯವ ವಿಧಾನದಲ್ಲಿ ಉತ್ತಮ ತರಕಾರಿಗಳನ್ನು ಬೆಳೆಯಬಹುದು. ಒಳ್ಳೆಯ ಪರಿಸರದಿಂದ ಉತ್ತಮ ಆರೋಗ್ಯ ಲಭಿಸಲಿದೆ. ಪರಿಸರ ಹಾಳಾದಷ್ಟು ನಮ್ಮ ಆರೋಗ್ಯವೂ ಹಾಳಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಪರಿಸರ ನಾಶ ಹೆಚ್ಚಾಗುತ್ತಿದೆ. ಈಗಿನಿಂದಾದರೂ ಪರಿಸರವನ್ನು ಉಳಿಸುವ ಜವಾಬ್ದಾರಿಯನ್ನು ಎಲ್ಲರೂ ನಿರ್ವಹಿಸಬೇಕು. ಮುಖ್ಯವಾಗಿ ಪ್ಲಾಸ್ಟಿಕ್ ಬಳಕೆ ತ್ಯಜಿಸುವ ಬಗ್ಗೆ ಎಲ್ಲರೂ ದೃಢ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮೈಸೂರು ಪ್ರಾದೇಶಿಕ ವಲಯದ ಡಿಸಿಎಫ್ ಬಸವರಾಜು, ಎಸಿಎಫ್ ಲಕ್ಷ್ಮಿಕಾಂತ, ಆರ್‌ಎಫ್‌ಓ ಸುರೇಂದ್ರ, ಪರಿಸರವಾದಿ ನಾಣಯ್ಯ, ಹೂಟಗಳ್ಳಿ ನಗರಸಭೆ ಪೌರಾಯುಕ್ತ ನರಸಿಂಹಮೂರ್ತಿ, ಗ್ರಾಮದ ಮುಖಂಡ ನಂಜುಂಡೇಗೌಡ, ರಾಮಣ್ಣ, ರಾಣಿ, ಸತೀಶ್ ಬಾಬು, ಜಿವನ್ ರಾಮು, ಮಾದೇಶ್, ಮದ್ದೇಗೌಡ, ಬೋರೇಗೌಡ, ಕುಮಾರ್, ಸಿದ್ದರಾಮು, ದೇವೇಗೌಡ, ಶಿವರಾಮು, ಸೋಮಶೇಖರ್, ದೇವು, ನಾಗಣ್ಣ, ವಸಂತಕುಮಾರ್, ಮಂಜು, ಭಕ್ತವತ್ಸಲ, ಕೃಷ್ಣಪ್ಪ, ಕುಮಾರ್, ಜೆ.ರವಿ ಮತ್ತಿತರರು ಉಪಸ್ಥಿತರಿದ್ದರು.

ನೈತಿಕ ಪೊಲೀಸ್‌ಗಿರಿ ತಡೆಯಲು ಆ್ಯಂಟಿ ಕಮ್ಯುನಲ್ ವಿಂಗ್ ಸ್ಥಾಪನೆ



ಮಂಗಳೂರು, ಜೂ.6–ಮಂಗಳೂರು ಕಮಿಷನರೇಟ್ ವ್ಯಾಪ್ತಿಯಲ್ಲಿ ನೈತಿಕ ಪೊಲೀಸ್‌ಗಿರಿ ತಡೆಯಲು ಆ್ಯಂಟಿ ಕಮ್ಯುನಲ್ ವಿಂಗ್ ಸ್ಥಾಪನೆ ಮಾಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಂಗಳವಾರ ಹೇಳಿದ್ದಾರೆ.

ಕರಾವಳಿ ಜಿಲ್ಲೆಗಳ ಪ್ರವಾಸದಲ್ಲಿರುವ ಪರಮೇಶ್ವರ್, ಕಮಿಷನರೇಟ್ ವ್ಯಾಪ್ತಿಯ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಬಳಿಕ ಪೊಲೀಸ್ ಕಮಿಷನರ್ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಗೃಹ ಸಚಿವರು, ಮಂಗಳೂರಿನಲ್ಲಿ ಎದುರಿಸುತ್ತಿರುವ ಸವಾಲುಗಳು ಮತ್ತು ಸಮಸ್ಯೆಗಳನ್ನು ಪರಿಶೀಲಿಸಿದ್ದೇನೆ. ಇದು ನನಗೆ ಹೊಸ ಹುದ್ದೆ ಅಲ್ಲ. ಹೊಸ ಸವಾಲುಗಳು ಹುಟ್ಟಿಕೊಂಡಿವೆ ಮತ್ತು ಸಮಾಜದಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಪೊಲೀಸ್ ಇಲಾಖೆಗೂ ಹೊಸ ಸವಾಲುಗಳು ಎದುರಾಗಿವೆ ಎಂದರು.

ನೈತಿಕ ಪೊಲೀಸ್‌ಗಿರಿ ತಡೆಯಲು ಮಂಗಳೂರು ಕಮಿಷನರೇಟ್ ವ್ಯಾಪ್ತಿಯಲ್ಲಿ ಆ್ಯಂಟಿ ಕಮ್ಯುನಲ್ ವಿಂಗ್ ಎಂಬ ಹೊಸ ಘಟಕ ಸ್ಥಾಪಿಸುತ್ತೇವೆ. ಈ ವಿಂಗ್‌ನಲ್ಲಿ ಸಮರ್ಥ ಅಧಿಕಾರಿಗಳು ಇರಲಿದ್ದಾರೆ.

ಕರಾವಳಿ ಭಾಗದಲ್ಲಿ ಒಳ್ಳೆಯ ಜನರು ಇದ್ದಾರೆ ಅಂತಾ ನಂಬಿದ್ದೇವೆ. ಈ ಭಾಗದಲ್ಲಿ ಭಯದ ವಾತಾವರಣವಿದೆ ಅಂತಾ ಜನ ಮಾತಾಡ್ತಿದ್ದಾರೆ. ಕೋಮು ಸೌಹಾರ್ದತೆಯನ್ನು ತರಲು ಪೊಲೀಸರಿಗೆ ಸೂಚನೆ ನೀಡಿದ್ದೇನೆ ಎಂದರು.

ಕರಾವಳಿ ಭಾಗದಲ್ಲಿ ನೈತಿಕ ಪೊಲೀಸ್‌ಗಿರಿ ತುಂಬಾ ನಡೆಯುತ್ತಿದೆ. ಇದನ್ನು ತಡೆಯದಿದ್ದರೆ ಇಲಾಖೆ ಮತ್ತು ರಾಜ್ಯಕ್ಕೆ ಕೆಟ್ಟ ಹೆಸರು. ಹಾಗಾಗಿ ನೈತಿಕ ಪೊಲೀಸ್‌ಗಿರಿ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ಆಗಸ್ಟ್ 15ರೊಳಗೆ ಕರಾವಳಿ ಭಾಗ ಡ್ರಗ್ಸ್ ಮುಕ್ತ ಪ್ರದೇಶವಾಗಬೇಕು ಎಂದು ಪೊಲೀಸರಿಗೆ ಸೂಚನೆ ನೀಡಿದರು.

ಸುಮ್ಮನೆ ಪ್ರಲಾಪ ಬಿಜೆಪಿಗೆ ಶೋಭೆಯಲ್ಲ



ಮೈಸೂರು,ಜೂ.6(ಪಿಎಂ)– ನಾಡಿನ ಅಭಿವೃದ್ಧಿಗೆ ಪೂರಕ ಕಾರ್ಯಕ್ರಮಗಳನ್ನು ಕೊಡಲು ಮುಂದಾಗಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಸುಮ್ಮನೆ ಪ್ರಲಾಪ ಮಾಡುವುದು ಬಿಜೆಪಿಗೆ ಶೋಭೆಯಲ್ಲ ಎಂದು ವಿಧಾನಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಹೇಳಿದರು.

ಐದು ಗ್ಯಾರಂಟಿಗಳ ಬಗ್ಗೆ ವಿಧಿಸಿರುವ ಷರತ್ತುಗಳನ್ನು ಕೈಬಿಡಬೇಕೆಂದು ಬಿಜೆಪಿ ಒತ್ತಾಯಿಸುತ್ತಿರುವ ಬಗ್ಗೆ ಮೈಸೂರಿನ ಕುವೆಂಪುನಗರದ ಡಿ.ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದ ಆವರಣದಲ್ಲಿ ಮಂಗಳವಾರ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದರು.

ಚುನಾವಣಾ ಪೂರ್ವದಲ್ಲಿ ಐದು ಗ್ಯಾರಂಟಿಗಳನ್ನು ಜಾರಿಗೊಳಿಸುವುದಾಗಿ ಕಾಂಗ್ರೆಸ್ ಭರವಸೆ ನೀಡಿತ್ತು. ಇದರ ಮೇಲೆ ವಿಶ್ವಾಸವಿಟ್ಟು ನಾಡಿನ ಜನತೆ ಕಾಂಗ್ರೆಸ್‌ಗೆ ಆಶೀರ್ವಾದ ಮಾಡಿದರು. ಈಗಾಗಲೇ ಐದು ಗ್ಯಾರಂಟಿಗಳನ್ನು ಜನತೆಗೆ ತಲುಪಿಸುವ ಸಂಬಂಧ ಸಂಪುಟದಲ್ಲಿ ತೀರ್ಮಾನ ಕೈಗೊಂಡು ಸರ್ಕಾರಿ ಆದೇಶ ಕೂಡ ಹೊರಡಿಸಲಾಗಿದೆ. ಆದರೆ ಬಿಜೆಪಿಯವರು ಸುಮ್ಮನೆ ಆರೋಪ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಬಿಜೆಪಿಯವರಿಗೆ ಮಾಡಲು ಕೆಲಸವಿಲ್ಲ. ಅವರ ಆಡಳಿತಾವಧಿಯಲ್ಲಿ ಏನೂ ಮಾಡಲಿಲ್ಲ. ಮೂರೂವರೆ ವರ್ಷ ಭ್ರಷ್ಟಾಚಾರ ನಡೆಸಿ, ದಂಧೆ ಮಾಡಿಕೊಂಡಿದ್ದರು ಹೊರತು ನಾಡಿಗೆ ಯಾವುದೇ ಉಪಕಾರ ಮಾಡಲಿಲ್ಲ ಎಂದು ವಿಶ್ವನಾಥ್ ಹೇಳಿದರು.

ಸರ್ಕಾರಿ ವಕೀಲರ ನೇಮಕಾತಿ ಅಕ್ರಮ: ಇಲಾಖಾ ತನಿಖೆಗೆ ಸಿಎಂ ಆದೇಶ

ಬೆಂಗಳೂರು: ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದ ಸಹಾಯಕ ಸರ್ಕಾರಿ ಅಭಿಯೋಜಕರು, ಸಹಾಯಕ ಸರ್ಕಾರಿ ವಕೀಲರ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ಆರೋಪ ಕೇಳಿಬಂದಿದ್ದು, ಕೂಡಲೇ ಈ ಬಗ್ಗೆ ಇಲಾಖಾ ಹಂತದ ತನಿಖೆ ಕೈಗೊಂಡು 10 ದಿನಗಳಲ್ಲಿ ವರದಿ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಿಸಿದ್ದಾರೆ. ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದ ಭ್ರಷ್ಟಾಚಾರಗಳನ್ನು ಹಾಗೂ ನೇಮಕಾತಿಗಳಲ್ಲಿ ನಡೆದ ಅಕ್ರಮಗಳನ್ನು ತನಿಖೆಗೆ ಒಳಪಡಿಸುವುದಾಗಿ ಹೇಳಿದ್ದ ಕಾಂಗ್ರೆಸ್ ಸರ್ಕಾರ ಈಗ ಸಹಾಯಕ ಸರ್ಕಾರಿ ಅಭಿಯೋಜಕರು, ಸಹಾಯಕ ಸರ್ಕಾರಿ ವಕೀಲರ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ಆರೋಪ ಕೇಳಿಬಂದಿದ್ದು, ಇಲಾಖಾ ತನಿಖೆ ಮಾಡುವಂತೆ ಸಿಎಂ ಟಿಪ್ಪಣಿ ಹೊರಡಿಸಿದ್ದಾರೆ. ಸರ್ಕಾರಿ ಅಭಿಯೋಜಕರ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ಆರೋಪ ಕೇಳಿಬಂದಿತ್ತು. 23–07–22 ಮತ್ತು 24–07–22 ರಂದು ನಡೆದ ಸಹಾಯಕ ಸರ್ಕಾರಿ ಅಭಿಯೋಜಕರ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ನಡೆದಿದ್ದು, ಈ ಬಗ್ಗೆ ಮರುಪರೀಕ್ಷೆ ಮಾಡುವಂತೆ ಸಾಕಷ್ಟು ವಕೀಲ ಆಕಾಂಕ್ಷಿಗಳು ಮನವಿ ಮಾಡಿದ್ದರು. ಜೊತೆಗೆ, ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ಮಾಡಲಾಗಿದೆ ಎಂದು ದೂರುಗಳನ್ನು ನೀಡಿದ್ದರು. ಈ ಹಿನ್ನೆಲೆಯಲ್ಲಿ ಇಲಾಖಾ ತನಿಖೆಗೆ ವಹಿಸಿದ್ದಾರೆ ಎಂದು ಕೇಳಿಬಂದಿದೆ.

ತಿ.ನರಸೀಪುರ ಬಳಿ ಭೀಕರ ಅಪಘಾತ

ಬಳ್ಳಾರಿಯ ಅಪ್ಪ–ಮಗ ಪ್ರಾಣಾಪಾಯದಿಂದ ಪಾರು

ಬಸ್ಸಿನ ಕಿಟಕಿಯಿಂದ ಹಾರಿದ್ದ ಗೌರವ್ ಸಹ ಗುಣಮುಖ

ಮೈಸೂರು, ಜೂ.6(ಆರ್‌ಕೆ)–ತಿ.ನರಸೀಪುರ ಬಳಿ ಮೈಸೂರು–ಕೊಳ್ಳೇಗಾಲ ರಾಷ್ಟ್ರೀಯ ಹೆದ್ದಾರಿಯಲ್ಲಿ ಇತ್ತೀಚೆಗೆ ಸಂಭವಿಸಿದ್ದ ಭೀಕರ ರಸ್ತೆ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಬಳ್ಳಾರಿ ಮೂಲದ ಜನಾರ್ಧನ, ಪುತ್ರ ಪುನೀತ್ ಹಾಗೂ ಬಸ್ಸಿನಲ್ಲಿದ್ದ ಚಾಮರಾಜನಗರ ಜಿಲ್ಲೆಯ ಗೌರವ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಬಳ್ಳಾರಿ ಜಿಲ್ಲೆ ಸಂಗನಕಲ್ ಗ್ರಾಮದವರಾದ ಜನಾರ್ಧನ ಮತ್ತು ಪುನೀತ್‌ಗೆ ತಲೆ ಮತ್ತು ಎದೆ ಭಾಗಕ್ಕೆ ಗಾಯಗಳಾಗಿತ್ತು. ಜನಾರ್ಧನ ಕೆ.ಆರ್.ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಪುತ್ರ ಪುನೀತ್ ಚೆಲುವಾಂಬ ಆಸ್ಪತ್ರೆಯ ಮಕ್ಕಳ ವಿಭಾಗದ ಐಸಿಯುನಲ್ಲಿ ದಾಖಲಾಗಿದ್ದಾನೆ. ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಇಬ್ಬರೂ ಚಿಕಿತ್ಸೆ ನಂತರ ಇದೀಗ ಗುಣಮುಖರಾಗಿದ್ದಾರೆ. ಘಟನೆಯಲ್ಲಿ ಖಾಸಗಿ ಬಸ್ ಕಿಟಕಿ ಬದಿ ಕುಳಿತಿದ್ದ ಚಾಮರಾಜನಗರದ ಗೌರವ್ ಕೆಳಕ್ಕೆ ಹಾರಿದ್ದ ಪರಿಣಾಮ ತೀವ್ರವಾಗಿ ಗಾಯಗೊಂಡಿದ್ದ. ಆತನೂ ಚಿಕಿತ್ಸೆಗೆ ಸ್ಪಂದಿಸುತ್ತಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾನೆ. ಮೂರ್ನಾಲ್ಕು ದಿನದಲ್ಲಿ ಮೂವರೂ ಆಸ್ಪತ್ರೆಯಿಂದ ಬಿಡುಗಡೆ ಆಗಲಿದ್ದಾರೆ.

ಟೊಯೋಟಾ ಇನ್ನೋವಾ ಮತ್ತು ಖಾಸಗಿ ಬಸ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಕಾರು ಚಾಲಕ ಸೇರಿ ಸ್ಥಳದಲ್ಲೇ 10 ಮಂದಿ ಸಾವನ್ನಪ್ಪಿದರೆ, ಆಸ್ಪತ್ರೆಯಲ್ಲಿ ಒಬ್ಬರು ಕೊನೆಯುಸಿರೆಳೆದಿದ್ದರು. ಕಾರಿನಲ್ಲಿದ್ದ 13 ಮಂದಿ ಪೈಕಿ 11 ಮಂದಿ ಸಾವನ್ನಪ್ಪಿದ್ದಾರೆ.

ವಸತಿ ಯೋಜನೆಗಳ ಅನುಷ್ಠಾನಕ್ಕೆ ಕಾಲಮಿತಿ ಕಡ್ಡಾಯ

● ಸಚಿವ ಜಮೀರ್ ಅಹಮದ್ ಅಧಿಕಾರಿಗಳಿಗೆ ಗಡುವು ● ಒಂದು ಯೋಜನೆ ಪೂರ್ಣಗೊಂಡ ನಂತರವೇ ಮತ್ತೊಂದು ಯೋಜನೆ ಕೈಗೆತ್ತಿಕೊಳ್ಳಲು ಸಲಹೆ



ಬೆಂಗಳೂರು, ಜೂ.6– ಬಡವರಿಗಾಗಿ ರೂಪಿಸಿರುವ ವಸತಿ ಯೋಜನೆಗಳನ್ನು ಪೂರ್ಣಗೊಳಿಸಲು ಕಾಲಮಿತಿ ಹಾಕಿಕೊಳ್ಳಲು ವಸತಿ ಸಚಿವ ಜಮೀರ್ ಅಹಮದ್ ಗಡುವು ನೀಡಿದ್ದಾರೆ.

ವಸತಿ ಇಲಾಖೆ ವ್ಯಾಪ್ತಿಗೆ ಬರುವ ರಾಜೀವ್ ಗಾಂಧಿ ವಸತಿ ನಿಗಮದ ಪ್ರಗತಿ ಪರಿಶೀಲನೆ ನಡೆಸಿದ ಅವರು ಒಂದೊಂದು ಯೋಜನೆ ವರ್ಷಗಳ ಕಾಲ ವಿಳಂಬ ಆದರೆ ಬಡವರಿಗೆ ಸೂರು ಕಲ್ಪಿಸುವ ಉದ್ದೇಶ ಈಡೇರುವುದಿಲ್ಲ. ಯಾವುದೇ ಕಾರಣಕ್ಕೂ ವಿಳಂಬ ಸಹಿಸುವುದಿಲ್ಲ ಎಂದು ತಾಕೀತು ಮಾಡಿದರು.

ಒಂದೊಂದು ಯೋಜನೆಗೆ ನಿಗದಿತ ಕಾಲಮಿತಿ ಹಾಕಿಕೊಂಡು ಅದನ್ನು ಪೂರ್ಣಗೊಳಿಸಿದ ಬಳಿಕವೇ ಮತ್ತೊಂದು ಯೋಜನೆ ಕೈಗೆತ್ತಿಕೊಳ್ಳಬೇಕು. ಪ್ರತಿ ಯೋಜನೆಗೆ ಬೇಕಾದ ಹಣಕಾಸು ಹೊಂದಿಸಿಕೊಂಡು ಪೂರ್ಣಗೊಳಿಸಿ ಫಲಾನುಭವಿಗಳಿಗೆ ಹಂಚಿಕೆ ಆದ ನಂತರವಷ್ಟೇ ಮತ್ತೊಂದು ಯೋಜನೆ ಪ್ರಾರಂಭಿಸಬೇಕು. ಆಗ ಮಾತ್ರ ನಂಬಿಕೆ ಬರಲು ಸಾಧ್ಯ. ಇದು ಕಡ್ಡಾಯವಾಗಿ ಪಾಲನೆ ಆಗಲೇಬೇಕು ಎಂದು ಸೂಚನೆ ನೀಡಿದರು.

ಪ್ರಧಾನಮಂತ್ರಿ ಅವಾಸ್ ಯೋಜನೆಯ ಅವಧಿ ಜೂನ್‌ಗೆ ಮುಗಿಯಲಿದ್ದು, 37 ಸಾವಿರ ಮನೆಗಳಿಗೆ ಮಾತ್ರ ಅನುಮತಿ ದೊರೆತಿದೆ. ಚುನಾವಣೆ ಮತ್ತಿತರ ಕಾರಣಕ್ಕೆ ತಡವಾಗಿದ್ದರೆ ತಕ್ಷಣ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಸಮಯ ವಿಸ್ತರಣೆಗೆ ಅನುಮತಿ ಪಡೆದುಕೊಳ್ಳಿ. ಅಗತ್ಯವಾದರೆ ದೆಹಲಿಗೆ ತೆರಳಿ ಕೇಂದ್ರ ಸಚಿವರ ಜತೆಯೂ ಚರ್ಚೆ ಮಾಡುತ್ತೇನೆ ಎಂದು ವಸತಿ ಸಚಿವ ಜಮೀರ್ ಅಹಮದ್ ಸೂಚನೆ ನೀಡಿದರು.

ಬಸವ ವಸತಿ, ಅಂಬೇಡ್ಕರ್ ನಿವಾಸ್, ದೇವರಾಜ ಅರಸು ನಗರ ಮತ್ತು ಗ್ರಾಮೀಣ ವಸತಿ ಯೋಜನೆಯಡಿ ಹಲವು ವರ್ಷ ಕಳೆದರೂ ಘಟಕ ಪೂರ್ಣಗೊಳ್ಳದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಯೋಜನೆ ಜಾರಿಯಾದ ವರ್ಷದಿಂದ ಇದುವರೆಗಿನ ಸಮಗ್ರ ಮಾಹಿತಿ ನೀಡುವಂತೆ ನಿರ್ದೇಶನ ನೀಡಿದರು.

ಸ್ಥಳೀಯ ಮಟ್ಟದ ಸಮಸ್ಯೆ ಬಗೆಹರಿಸಿಕೊಂಡು ಯೋಜನೆ ಅನುಷ್ಠಾನಕ್ಕೆ ಮುಂದಾಗಬೇಕು. ನೂರಾರು ಕೋಟಿ ವೆಚ್ಚ ಮಾಡಿದರೂ ಶೇ.30 ರಷ್ಟು ಪ್ರಗತಿ ಆದರೆ ಏನು ಪ್ರಯೋಜನ ಎಂದು ಪ್ರಶ್ನೆ ಮಾಡಿದರು. ವಸತಿ ಯೋಜನೆಗಳ ಜಾರಿ ವಿಳಂಬಕ್ಕೆ ಫಲಾನುಭವಿಗಳ ಪಾಲಿನ ಹಣ ತುಂಬುವಲ್ಲಿ ಸಮಸ್ಯೆ ಆಗುತ್ತಿರುವ ಬಗ್ಗೆ ಅಧಿಕಾರಿಗಳು ಗಮನಕ್ಕೆ ತಂದಾಗ, ಬ್ಯಾಂಕ್‌ಗಳ ಜತೆ ಮಾತನಾಡಿ ಸಾಲ ಸೌಲಭ್ಯ ಕೊಡಿಸುವ ಬಗ್ಗೆ ತುರ್ತು ಸಭೆ ನಡೆಸಿ ಎಂದು ಸೂಚನೆ ನೀಡಿದರು.

ಅಸಮಾಧಾನ: ಮುಖ್ಯಮಂತ್ರಿಗಳ ಒಂದು ಲಕ್ಷ ಯೋಜನೆ ನಿರೀಕ್ಷಿತ ಮಟ್ಟದಲ್ಲಿ ಪ್ರಗತಿಯಾಗದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, 2017ರಲ್ಲಿ ಆರಂಭವಾದ ಯೋಜನೆ ಇನ್ನೂ ಮುಗಿದಿಲ್ಲ. 1040 ಎಕರೆ ಪೈಕಿ 553 ಎಕರೆ ಮಾತ್ರ ಸ್ವಾಧೀನ ಪಡೆದಿದ್ದು 50797 ಅರ್ಜಿದಾರರಲ್ಲಿ 12158 ಮಂದಿ ಆರಂಭಿಕ ಹಣ ಪಾವತಿಸಿದ್ದು ಐದು ಸಾವಿರ ಮನೆ ಪೂರ್ಣಗೊಳಿಸಲಾಗಿದೆ. ಇನ್ನೂ ಫಲಾನುಭವಿಗಳಿಗೆ ಕೊಟ್ಟಿಲ್ಲ, ಹೀಗಾದರೆ ನಂಬಿಕೆ ಬರುವುದಾದರೂ ಹೇಗೆ ಎಂದು ಕೇಳಿದರು. ಈ ಯೋಜನೆಯಡಿಯಲ್ಲಿ ಇನ್ನೂ ಆರಂಭವಾಗದ ಕಡೆ ಜಂಟಿ ಸಹಭಾಗಿತ್ವದಡಿ ಅನುಷ್ಠಾನ ಸಾಧ್ಯವಾ ಯೋಚಿಸಿ ಎಂದು ಸಲಹೆ ನೀಡಿದರು.

ಚಿಕ್ಕಬಳ್ಳಾಪುರ ಹಕ್ಕುಪತ್ರ ವಿತರಣೆ ತನಿಖೆಗೆ ಸೂಚನೆ

ಚಿಕ್ಕಬಳ್ಳಾಪುರದಲ್ಲಿ ಮುಖ್ಯಮಂತ್ರಿಗಳ ನಿವೇಶನ ಯೋಜನೆಯಡಿಯಲ್ಲಿ ವಿಧಾನಸಭೆ ಚುನಾವಣೆ ವೇಳೆ ಕಾನೂನುಬಾಹಿರವಾಗಿ ಹಿಂದಿನ ಶಾಸಕರ ಭಾವಚಿತ್ರ ಹಾಕಿ 10,500 ಹಕ್ಕುಪತ್ರ ಹಂಚಿಕೆ ಮಾಡಿದ್ದು ಅದು ಸಿಂಧುವಲ್ಲ. ಈ ಬಗ್ಗೆ ಮೊದಲೇ ತಿಳಿಸಲಾಗಿತ್ತು. ಆದರೂ ಹಂಚಿಕೆ ಮಾಡಲಾಗಿದೆ ಎಂಬ ವಿಚಾರ ಪ್ರಸ್ತಾಪವಾಗಿ ಸರ್ಕಾರ ಸಿದ್ದಪಡಿಸಿದ್ದ ಮುಖ್ಯಮಂತ್ರಿ ಹಾಗೂ ವಸತಿ ಸಚಿವರ ಭಾವಚಿತ್ರವುಳ್ಳ ಮಾದರಿಯ ಹಕ್ಕುಪತ್ರ ಮಾತ್ರ ಮಾನ್ಯ ಎಂದು ಅಧಿಕಾರಿಗಳು ತಿಳಿಸಿದರು. ಬಡವರಿಗೆ ಅನ್ಯಾಯ ಆಗಬಾರದು. ಆ ಪ್ರಕರಣದಲ್ಲಿ ತಪ್ಪಾಗಿದ್ದರೆ ವರದಿ ತರಿಸಿಕೊಂಡು ಪರಿಶೀಲಿಸಿ ಕ್ರಮ ಕೈಗೊಳ್ಳಿ ಎಂದು ಸಭೆಯಲ್ಲಿ ಸಚಿವ ಜಮೀರ್ ಅಹಮದ್ ಸೂಚನೆ ನೀಡಿದರು.


ರಾಜೀವ್ ಗಾಂಧಿ ವಸತಿ ನಿಗಮದ ಯೋಜನೆಗಳಿಗೆ ಅಗತ್ಯವಾದ ಆರ್ಥಿಕ ನೆರವು ಈ ವರ್ಷ ಪೂರ್ಣಗೊಳಿಸಬಹುದಾದ ಯೋಜನೆ ಬಗ್ಗೆ ಟಿಪ್ಪಣಿ ತಯಾರಿಸಿ. ಬಜೆಟ್ ಮಂಡನೆಗೆ ಮುಂಚೆ ಮುಖ್ಯಮಂತ್ರಿ ಅವರ ಬಳಿ ಚರ್ಚಿಸುತ್ತೇನೆ ಎಂದು ಹೇಳಿದರು.

ಸರ್ಕಾರದಿಂದ ಒಂದು ಸಾವಿರ ಕೋಟಿ ರೂ. ಅನುದಾನ ತಕ್ಷಣಕ್ಕೆ ದೊರೆತರೆ ಯೋಜನೆಗಳು ಪೂರ್ಣಗೊಳ್ಳಲಿವೆ ಎಂದು ಅಧಿಕಾರಿಗಳು ತಿಳಿಸಿದರು. ಸರ್ಕಾರದ ಖಾತರಿಯೊಂದಿಗೆ ಬ್ಯಾಂಕ್‌ಗಳಲ್ಲಿ ಸಾಲ ಪಡೆಯುವ ಬಗ್ಗೆಯೂ ಚಿಂತನೆ ನಡೆಸಿ ಎಂದು ಸಲಹೆ ನೀಡಿದರು.

ನಿಗಮದ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ್, ವಸತಿ ಇಲಾಖೆ ಕಾರ್ಯದರ್ಶಿ ರವಿಕುಮಾರ್ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಅರ್ಚಕ ಹುದ್ದೆಗೆ ತಂದೆ ಕಡೆಯಿಂದ ಉತ್ತರಾಧಿಕಾರ

ಬೆಂಗಳೂರು: ವಂಶಪಾರಂಪರ್ಯವಾಗಿ ಅರ್ಚಕ ವೃತ್ತಿ ಪಡೆಯಲು ತಂದೆ ಕಡೆಯಿಂದ ಉತ್ತರಾಧಿಕಾರ ಅಗತ್ಯ ಎಂದು ಬೆಂಗಳೂರಿನ ಹೈಕೋರ್ಟ್ ಹೇಳಿದೆ.




ದೇವಾಲಯವೊಂದರಲ್ಲಿ ತಾಯಿಯ ತಂದೆ ಮತ್ತು ತಂದೆ ಹಲವು ವರ್ಷಗಳ ಕಾಲ ಅರ್ಚಕರಾಗಿ ಪೂಜಾ ಕಾರ್ಯಗಳಲ್ಲಿ ತೊಡಗಿದ್ದು, ಅದೇ ವೃತ್ತಿಗೆ ತಮ್ಮನ್ನು ನಿಯೋಜನೆ ಮಾಡಲು ನಿರ್ದೇಶನ ನೀಡಬೇಕು ಎಂದು ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿತ್ತು.

ವಂಶಪಾರಂಪರ್ಯವಾಗಿ ದೇವಾಲಯವೊಂದರ ಅರ್ಚಕ ವೃತ್ತಿ ಪಡೆದುಕೊಳ್ಳಲು ಉತ್ತರಾಧಿಕಾರ ಸಂಬಂಧ ತಂದೆಯ ಕಡೆಯಿಂದ ಇರಬೇಕು. ತಾಯಿ ಕಡೆಯಿಂದ ಇದ್ದಲ್ಲಿ ಪರಿಗಣಿಸಲಾಗದು ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ನ್ಯಾಯಪೀಠ, ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ.

ಎಂಎಸ್ ರವಿ ದೀಕ್ಷಿತ್ ಮತ್ತು ಅವರ ಸಹೋದರ ಎಂಎಸ್ ವೆಂಕಟೇಶ್ ದೀಕ್ಷಿತ್ ಅವರು ಆಗಸ್ಟ್ 2016ರಲ್ಲಿ ತಮ್ಮನ್ನು ದೇವಾಲಯದ ಆನುವಂಶಿಕ ಅರ್ಚಕರು ಎಂದು ಪರಿಗಣಿಸಲು ನಿರಾಕರಿಸಿದ ಆದೇಶವನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಿದರು. ಅವರು ತಮ್ಮ ತಾಯಿಯ ಅಜ್ಜನ ನಂತರ ತಮ್ಮ ತಂದೆ ಅರ್ಚಕರಾಗಿ ಮುಂದುವರೆದರು ಮತ್ತು ಆದ್ದರಿಂದ ಈ ಹುದ್ದೆಗೆ ನಮ್ಮನ್ನು ಪರಿಗಣಿಸಬೇಕು ಎಂದು ಅರ್ಜಿಯಲ್ಲಿ ತಿಳಿಸಿದರು.

ಕ್ಷುಲ್ಲಕ ಕಾರಣಕ್ಕೆ ಇರಿತಕ್ಕೆ ಒಳಗಾದ ನಂ.ಗೂಡು ಯುವಕನ ಭೇಟಿ ಮಾಡಿದ ಬಿಜೆಪಿ ನಿಯೋಗ

ಕೆ.ಆರ್.ಆಸ್ಪತ್ರೆಯಲ್ಲಿ ಯುವಕನ ಆರೋಗ್ಯ ವಿಚಾರಿಸಿದ ಮಾಜಿ ಸಚಿವ ಡಾ.ಅಶ್ವಥ್ ನಾರಾಯಣ ನೇತೃತ್ವದ ತಂಡ



ಮೈಸೂರು, ಜೂ.6(ಎಂಕೆ)– ನಂಜನಗೂಡು ನೀಲಕಂಠನಗರದ ಲಿಂಗಣ್ಣ ವೃತ್ತದಲ್ಲಿ ಹುಟ್ಟುಹಬ್ಬ ಆಚರಣೆ ವೇಳೆ ಇರಿತಕ್ಕೊಳಗಾಗಿ ಕೆ.ಆರ್.ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಯುವಕ ಪ್ರಸಾದ್‌ನನ್ನು ಮಂಗಳವಾರ ಸಂಜೆ ಭೇಟಿ ಮಾಡಿದ ಮಾಜಿ ಸಚಿವ ಡಾ.ಸಿ.ಎನ್. ಅಶ್ವಥ್‌ನಾರಾಯಣ ನೇತೃತ್ವದ ಬಿಜೆಪಿ ನಿಯೋಗ, ಆರೋಗ್ಯ ವಿಚಾರಿಸಿತು.

ಈ ವೇಳೆ ಕೆ.ಆರ್.ಆಸ್ಪತ್ರೆ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಹೆಚ್.ಎನ್. ದಿನೇಶ್ ಅವರಿಂದ ಚಿಕಿತ್ಸೆ ಕುರಿತು ಮಾಹಿತಿ ಪಡೆದರಲ್ಲದೆ ಯುವಕನಿಗೆ ಧೈರ್ಯ ತುಂಬಿ, ಘಟನೆಯ ವಿವರ ಪಡೆದುಕೊಂಡರು.

ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಮಾಜಿ ಸಚಿವ ಅಶ್ವಥ್ ನಾರಾಯಣ, ಮಾರಾಕಾಸ್ತ್ರಗಳಿಂದ ಯುವಕನಿಗೆ ಹಲ್ಲೆ ಮಾಡಿರುವ ಘಟನೆ ಖಂಡನೀಯ. ಹಲ್ಲೆ ಮಾಡಿದವರ ವಿರುದ್ಧ ತೀವ್ರ ಕ್ರಮಕೈಗೊಳ್ಳಬೇಕು. ಗಾಯಾಳುವನ್ನು ಭೇಟಿ ಮಾಡಿ ಧೈರ್ಯ ತುಂಬುವ ಕೆಲಸ ಮಾಡಿದ್ದೇವೆ ಎಂದರು.

ನಂಜನಗೂಡಿನ ಲಿಂಗಣ್ಣ ವೃತ್ತದಲ್ಲಿ ಸಾಮಾನ್ಯವಾಗಿ ನಾನಾ ಆಚರಣೆಗಳು ನಡೆಯುತ್ತಿರುತ್ತವೆ. ಅದಕ್ಕೆ ಅಡ್ಡಿಪಡಿಸಿರುವುದು ಆಕ್ಷೇಪಾರ್ಹ. ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಜೋಶ್‌ನಲ್ಲಿ ಈ ರೀತಿ ಕಾನೂನು ಕೈಗೆತ್ತಿಕೊಂಡು ಮಾರಕಾಸ್ತ್ರ ಬಳಸುವುದು ಸರಿಯಲ್ಲ. ಅಶಾಂತಿ ಸೃಷ್ಟಿಗೆ ಕುಮ್ಮಕ್ಕು ನೀಡುವವರ ವಿರುದ್ಧ ಕಾನೂನು ಕ್ರಮ ಆಗಬೇಕು. ಅಮಾಯಕ ಯುವಕನ ಮೇಲೆ ಮಾರಕಾಸ್ತ್ರಗಳನ್ನು ಬಳಕೆ ಮಾಡಲಾಗಿದೆ. ಆತನ ಅದೃಷ್ಟ ಜೀವಕ್ಕೇನು ಅಪಾಯವಾಗಿಲ್ಲ. ಹೊಟ್ಟೆಯ ಬಲಭಾಗಕ್ಕೆ ಗಾಯವಾಗಿದೆ. ಗಾಯಾಳು ಪೈಂಟಿಂಗ್ ಕೆಲಸ ಮಾಡಿಕೊಂಡು ಜೀವನ ನಡೆಸುತ್ತಿದ್ದಾನೆ. ಈ ರೀತಿಯ ಘಟನೆಗಳು ಮರುಕಳಿಸಬಾರದು. ಆರೋಪಿಗಳಿಗೆ ಶಿಕ್ಷೆಯಾಗಬೇಕು. ಈ ಬಗ್ಗೆ ಹೆಚ್ಚಿನ ತನಿಖೆಯಾಗಬೇಕು ಎಂದು ಒತ್ತಾಯಿಸಿದರು.

ಸಮಿತಿ ರಚನೆ: ಬಿಜೆಪಿ ರಾಜ್ಯಾಧ್ಯಕ್ಷರು ಈ ಹಲ್ಲೆ ಸಂಬಂಧ ನನ್ನನ್ನು ಸೇರಿ ಎನ್. ಮಹೇಶ್, ಹರ್ಷವರ್ಧನ್, ಶ್ರೀವತ್ಸ ಪ್ರತಾಪಸಿಂಹ ಅವರನ್ನೊಳಗೊಂಡ 5 ಜನರ ಸಮಿತಿ ಮಾಡಿದ್ದಾರೆ. ಹಲ್ಲೆಗೊಳಗಾದ ಯುವಕನ ಭೇಟಿ ಮಾಡಿದ್ದು, ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಮಾಹಿತಿ ಪಡೆದುಕೊಂಡು ವರಿಷ್ಠರಿಗೆ ಮಾಹಿತಿ ನೀಡಲಿದ್ದೇವೆ. ಜವಾಬ್ದಾರಿಯುತ ರಾಜಕೀಯ ಪಕ್ಷಗಳು ಈ ತರಹದ ಘಟನೆಗಳು ನಡೆದಾಗ ಜನರಿಗೆ ಭರವಸೆ ನೀಡುವ ಕಾರ್ಯ ಮುಖ್ಯವಾಗಿದ್ದು, ಈ ನಿಟ್ಟಿನಲ್ಲಿ ಹಲ್ಲೆಗೊಳಗಾದ ಯುವಕನ ಆರೋಗ್ಯ ವಿಚಾರಿಸಿದ್ದೇವೆ ಎಂದು ತಿಳಿಸಿದರು.

ಮಾಜಿ ಶಾಸಕ ಹರ್ಷವರ್ಧನ್ ಮಾತನಾಡಿ, ಹುಟ್ಟುಹಬ್ಬ ಆಚರಣೆ ವೇಳೆ ಭಾರತ್ ಮಾತಾಕಿ ಜೈ ಎಂದು ಘೋಷಣೆ ಕೂಗಿದ ಬಳಿಕ ಮುಸ್ಲಿಂ ಯುವಕರ ಗುಂಪು ಹಲ್ಲೆ ಮಾಡಿದೆ. ಗಾಯಾಳು ಯುವಕ ಘಟನೆ ನಡೆದಾಗ ಸಮೀಪದ ಅಂಗಡಿಯಲ್ಲಿ ಬಜ್ಜಿ ತಿನ್ನಲು ಬಂದಿದ್ದ. 4 ಜನ ಈತನನ್ನು ಹಿಡಿದು ಡ್ರ್ಯಾಗರ್‌ನಿಂದ ಹಲ್ಲೆ ಮಾಡಿದ್ದಾರೆ. ಘಟನೆ ಬಳಿಕ 4 ಜನರನ್ನು ಪೊಲೀಸರು ಬಂಧಿಸಿದ್ದು, ಅವರೂ ಪ್ರತಿ ದೂರು ದಾಖಲಿಸಿದ್ದಾರೆ. ಹಲ್ಲೆ ನಡೆಸಿದ ಯುವಕರ ಮುಖ ಪರಿಚಯವೂ ಇದೆ ಎಂದು ಯುವಕ ಹೇಳಿದ್ದಾನೆ. ಆದ್ದರಿಂದ ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು. ಆ ಸ್ಥಳ ಸೂಕ್ಷ್ಮ ಪ್ರದೇಶವಾಗಿದ್ದು, ಕಳೆದ 5 ವರ್ಷಗಳಿಂದ ಶಾಂತಿ ನೆಲೆಸುವಂತೆ ಮಾಡಿದ್ದೆ ಎಂದರು. ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಸಚಿವ ಕೆ.ಸಿ. ನಾರಾಯಣಗೌಡ, ಮಾಜಿ ಶಾಸಕ ಎನ್. ಮಹೇಶ್, ಎಎಸ್ಪಿ ನಂದಿನಿ ಇದ್ದರು.

ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಜೂ. 6– ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರವನ್ನು ಪ್ರೀತಿ ಕ್ಯಾನ್ಸರ್ ಸೆಂಟರ್, ನಂ. 873, ವಾಣಿವಿಲಾಸ ರಸ್ತೆ (ಎಂ.ಜಿ. ರಸ್ತೆ), ಲಕ್ಷ್ಮೀಪುರಂ, ಮೈಸೂರು ಇಲ್ಲಿ ಜುಲೈ 8 (ಗುರುವಾರ)ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆವರೆಗೆ ಏರ್ಪಡಿಸಲಾಗಿದೆ.

ಒಂದು ತಿಂಗಳಿಗೂ ಮೇಲ್ಪಟ್ಟ ವಾಸಿಯಾಗದ ಗಾಯ, ರಕ್ತಸ್ರಾವ, ಊತ, ಗಡಸುತನ, ನುಂಗುವಾಗಿನ ತೊಂದರೆ, ಗಂಟಲಲ್ಲಿ ಉರಿ ಅಥವಾ ತಡೆತ, ಧ್ವನಿ ಬದಲಾವಣೆ ಇರುವ ರೋಗಿಗಳು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು.

ಕ್ಯಾನ್ಸರ್ ಪತ್ತೆಯಾದ ರೋಗಿಗಳಿಗೆ ಚಿಕಿತ್ಸೆಯನ್ನು ರಿಯಾಯಿತಿ ದರದಲ್ಲಿ ನೀಡಲಾಗುವುದು. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ: 0821–4259259 ಸಂಪರ್ಕಿಸಬಹುದು.

ವಿದ್ಯುತ್ ದರ ಹೆಚ್ಚಳ ವಿರೋಧಿಸಿ ಬಿಜೆಪಿ ಪ್ರತಿಭಟನೆ



ಮೈಸೂರು,ಜೂ.6(ಎಂಟಿವೈ)– ರಾಜ್ಯ ಸರ್ಕಾರ ವಿದ್ಯುತ್ ದರ ಹೆಚ್ಚಳ ಮಾಡಿರುವುದನ್ನು ಹಿಂಪಡೆದು, ಘೋಷಣೆ ಮಾಡಿರುವಂತೆ ಎಲ್ಲರಿಗೂ 200 ಯೂನಿಟ್ ವಿದ್ಯುತ್ ಉಚಿತವಾಗಿ ನೀಡುವಂತೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಚಾಮರಾಜ ಮೊಹಲ್ಲಾದಲ್ಲಿರುವ ಬಿಜೆಪಿ ಕಚೇರಿ ಮುಂದೆ ಬಿಜೆಪಿ ನಗರಾಧ್ಯಕ್ಷ, ಶಾಸಕ ಟಿ.ಎಸ್.ಶ್ರೀವತ್ಸ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಚುನಾವಣೆಗೂ ಮುನ್ನ ಕಾಂಗ್ರೆಸ್ ಎಲ್ಲರಿಗೂ ಉಚಿತವಾಗಿ 200 ಯೂನಿಟ್ ವಿದ್ಯುತ್ ನೀಡುವುದಾಗಿ ಗ್ಯಾರಂಟಿ ಕಾರ್ಡ್ ನೀಡಿತ್ತು. ಆದರೆ, ಅಧಿಕಾರಕ್ಕೆ ಬಂದ ಬಳಿಕ ಷರತ್ತು ವಿಧಿಸುತ್ತಿದೆ. 200 ಯೂನಿಟ್ ಎಂದು ಹೇಳಿ ಇದೀಗ ಷರತ್ತುಗಳನ್ನು ಹಾಕುತ್ತಿದೆ. ವಾರ್ಷಿಕ ಸರಾಸರಿ ಬಳಕೆಯ ಮೇಲೆ ಶೇ.10ರಷ್ಟು ಉಚಿತವಾಗಿ ನೀಡುವುದಾಗಿ ಸರ್ಕಾರ ಹೇಳಿದೆ. ಚುನಾಚಣಾ ಪೂರ್ವ ನೀಡಿದ್ದ ಭರವಸೆಯಂತೆ 200 ಯೂನಿಟ್ ವಿದ್ಯುತ್ ಉಚಿತವಾಗಿ ನೀಡಬೇಕು. ಯಾವುದೇ ಕಾರಣಕ್ಕೂ ವಿದ್ಯುತ್ ದರ ಏರಿಕೆ ಮಾಡಬಾರದು ಎಂದು ಆಗ್ರಹಿಸಿದರು. ಇದೇ ಸಂದರ್ಭದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಚುನಾವಣೆಗೂ ಮುನ್ನ ಪ್ರತಿ ಮನೆಗೆ 200 ಯೂನಿಟ್ ಉಚಿತ ವಿದ್ಯುತ್ ನೀಡುವುದಾಗಿ ಕಾಂಗ್ರೆಸ್ ಭರವಸೆ ನೀಡಿತ್ತು. ಇದೀಗ ಕೆಲ ಷರತ್ತು ವಿಧಿಸುತ್ತಿದೆ. ಚುನಾವಣೆ ಪೂರ್ವದಲ್ಲಿ ಹೇಳಿದಂತೆ ಕಾಂಗ್ರೆಸ್ ನಡೆಯಬೇಕು. ಒಂದು ಆರ್‌ಆರ್ ನಂಬರ್‌ಗೆ ಮಾತ್ರ ಉಚಿತ ವಿದ್ಯುತ್ ಯೋಜನೆ ಸೀಮಿತ ಎನ್ನುತ್ತಿದೆ. ಹಾಗಾದರೆ ಬಾಡಿಗೆದಾರರು ಎಲ್ಲಿಗೆ ಹೋಗಬೇಕು. ಉಚಿತ ವಿದ್ಯುತ್ ಯೋಜನೆ ಎಲ್ಲರಿಗೂ ಸಿಗುವವರೆಗೆ ಬಿಜೆಪಿಯ ಪ್ರತಿಭಟನೆ ಹೋರಾಟ ಮುಂದುವರೆಯುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಮೇಯರ್ ಶಿವಕುಮಾರ್, ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ, ಗ್ರಾಮಾಂತರ ಅಧ್ಯಕ್ಷೆ ಮಂಗಳಾ ಸೋಮಶೇಖರ್, ಪಾಲಿಕೆ ಸದಸ್ಯರಾದ ಬಿ.ವಿ.ಮಂಜುನಾಥ್, ಮಾ.ವಿ.ರಾಂಪ್ರಸಾದ್, ಎ.ಕೆ.ಸುಬ್ಬಯ್ಯ, ಮಾಜಿ ಮೇಯರ್ ಸುನಂದಾ ಪಾಲನೇತ್ರ, ಮುಖಂಡರಾದ ಅಪ್ಪಣ್ಣ, ಗಿರಿಧರ್, ಡಾ.ವಸಂತ್‌ಕುಮಾರ್, ಮಹೇಶ್, ಮಹೇಶ್‌ರಾಜೇಅರಸ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ವಿಜೃಂಭಣೆಯ ಶ್ರೀಲಕ್ಷ್ಮಿನರಸಿಂಹಸ್ವಾಮಿ ರಥೋತ್ಸವ

ಮಳವಳ್ಳಿ, ಜೂ.6– ಪಟ್ಟಣದ ಹೊರವಲಯದ ಮಾರೇಹಳ್ಳಿಯ ಇತಿಹಾಸ ಪ್ರಸಿದ್ಧ ಶ್ರೀಲಕ್ಷ್ಮಿನರಸಿಂಹಸ್ವಾಮಿ ರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು.

ರಥೋತ್ಸವ ಅಂಗವಾಗಿ ರಾಜ್ಯದ ವಿವಿಧೆಡೆಗಳಿಂದ ಆಗಮಿಸಿದ್ದ ಸಾವಿರಾರು ಭಕ್ತರು ಮುಂಜಾನೆಯೇ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಮಧ್ಯಾಹ್ನ 1 ಗಂಟೆಗೆ ಉತ್ಸವ ಮೂರ್ತಿಗೆ ದೇವಸ್ಥಾನದಲ್ಲಿ ಸಾಂಪ್ರದಾಯಿಕ ಪೂಜೆ ಸಲ್ಲಿಸಿ, 1.30ಕ್ಕೆ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ಈ ವೇಳೆ ರಥೋತ್ಸವಕ್ಕೆ ಶಾಸಕ ಪಿ.ಎಂ.ನರೇಂದ್ರಸ್ವಾಮಿ, ತಹಸೀಲ್ದಾರ್ ಕೆ.ಎನ್.ಲೋಕೇಶ್ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಈ ವೇಳೆ ನೆರೆದಿದ್ದ ಸಾವಿರಾರು ಭಕ್ತರು ದೇವಾಲಯದ ಆವರಣದಲ್ಲಿ ರಥ ಎಳೆದು ಸಂಭ್ರಮಿಸಿದರು. ಅಲ್ಲದೇ ಹಣ್ಣು ಜವನ ಎಸೆದು ಭಕ್ತಿಭಾವ ಮೆರೆದರು. ಮಧ್ಯಾಹ್ನ 2 ಗಂಟೆ ವೇಳೆಗೆ ರಥ ಸ್ವಸ್ಥಾನ ತಲುಪಿತು. ದೇವಸ್ಥಾನದ ವತಿಯಿಂದ ಭಕ್ತರಿಗೆ ಸಿಹಿ ಪೊಂಗಲ್, ಬಿಸಿ ಬೇಳೆಬಾತ್, ಮೊಸರನ್ನ ಹಾಗೂ ಸಿಹಿ ವಿತರಿಸಲಾಯಿತು. ಹರಕೆ ಹೊತ್ತವರು ದೇವಾಲಯದ ಆವರಣದಲ್ಲಿ ಭಕ್ತರಿಗೆ ಪ್ರಸಾದ ವಿತರಿಸಿದರು. ಯಾವುದೇ ಅಹಿತಕರ ಘಟನೆ ನಡೆಯದಂತೆ ಸಿಪಿಐ ಎಂ.ಜಗದೀಶ್ ನೇತೃತ್ವದಲ್ಲಿ ಗ್ರಾಮಾಂತರ ಪೊಲೀಸರು ಸೂಕ್ತ ಬಂದೋಬಸ್ತ್ ಮಾಡಿದ್ದರು.

ಈ ವೇಳೆ ಪುರಸಭೆ ಸದಸ್ಯರಾದ ಎಂ.ಎಸ್.ಶಿವಸ್ವಾಮಿ, ಸಿದ್ದರಾಜು, ಪುಟ್ಟಸ್ವಾಮಿ, ಮುಖ್ಯಾಧಿಕಾರಿ ಎಂ.ಎಸ್. ಮಹದೇವ, ಪುರಸಭೆ ಮಾಜಿ ಅಧ್ಯಕ್ಷರಾದ ದೊಡ್ಡಯ್ಯ, ಗಂಗರಾಜೇ ಅರಸು, ಜಿಪಂ ಮಾಜಿ ಸದಸ್ಯ ಆರ್.ಎನ್.ವಿಶ್ವಾಸ್, ತಾಪಂ ಮಾಜಿ ಉಪಾಧ್ಯಕ್ಷ ಸಿ.ಮಾಧು, ಟಿಎಪಿಸಿಎಂಎಸ್ ಅಧ್ಯಕ್ಷ ಕೆ.ಎಸ್.ದ್ಯಾಪೇಗೌಡ ಇದ್ದರು.



ಕೆಎಸ್‌ಒಯುನಿಂದ ತರಬೇತಿ

ಮಂಡ್ಯ, ಜೂ.6– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದಿಂದ ಬ್ಯಾಂಕ್ ಅಧಿಕಾರಿಗಳ ಮತ್ತು ಗುಮಾಸ್ತರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗೆ ಜೂ.8ರಿಂದ 45 ದಿನಗಳ ತರಬೇತಿ ಪ್ರಾರಂಭಿಸಲಾಗುತ್ತಿದೆ. ಆಸಕ್ತರು ಜೂ.7ರೊಳಗೆ ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಮೈಸೂರಿನ ಕೇಂದ್ರ ಕಚೇರಿಗೆ ಆಗಮಿಸಿ ತಮ್ಮ ಹೆಸರನ್ನು ನೋಂದಾಯಿಸಿ ತರಬೇತಿ ಪಡೆಯಬಹುದು ಎಂದು ಪ್ರಕಟಣೆ ತಿಳಿಸಿದೆ. ಮಾಹಿತಿಗೆ ದೂ.0821–2515944/9964760090 ಅನ್ನು ಸಂಪರ್ಕಿಸಿ.

ಜೂ.19ರಿಂದ ಕುಷ್ಠರೋಗ ಪತ್ತೆ ಆಂದೋಲನ

ಜಿಲ್ಲಾಧಿಕಾರಿ ಡಾ.ಹೆಚ್.ಎನ್.ಗೋಪಾಲಕೃಷ್ಣ ಮಾಹಿತಿ



ಮಂಡ್ಯ, ಜೂ.6– ಆರೋಗ್ಯ ಇಲಾಖೆ ವತಿಯಿಂದ ಜೂ.19 ರಿಂದ ಜು.6 ರವರೆಗೆ ಜಿಲ್ಲೆಯಲ್ಲಿ ಕುಷ್ಠರೋಗ ಪತ್ತೆ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಹೆಚ್.ಎನ್. ಗೋಪಾಲಕೃಷ್ಣ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕುಷ್ಠರೋಗ ಸಮಾಜದ ಪಿಡುಗಾಗಿದ್ದು, ಅದನ್ನು ಪತ್ತೆ ಹಚ್ಚಿ ಅಗತ್ಯ ಚಿಕಿತ್ಸೆ ನೀಡಲು ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದರು.

ಆರೋಗ್ಯ ಕಾರ್ಯಕರ್ತೆಯರು ಜಿಲ್ಲೆಯ ಪ್ರತಿ ಮನೆಗೆ ಭೇಟಿ ನೀಡಿ ರೋಗ ಲಕ್ಷಣಗಳ ಬಗ್ಗೆ ಮಾಹಿತಿ ಪಡೆಯಲಿದ್ದಾರೆ. ಸಾರ್ವಜನಿಕರು ನಿಖರ ಮಾಹಿತಿ ನೀಡಿ. ರೋಗ ಲಕ್ಷಣ ಕಂಡು ಬಂದರೆ ವೈದ್ಯರು ಪರೀಕ್ಷಿಸಿ ಉತ್ತಮ ಚಿಕಿತ್ಸೆ ನೀಡಲಿದ್ದಾರೆ ಎಂದರು.

ಸಾರ್ವಜನಿಕ ಶಿಕ್ಷಣ ಇಲಾಖೆ ವಿದ್ಯಾರ್ಥಿಗಳಿಗೆ ರೋಗ ಲಕ್ಷಣಗಳ ಬಗ್ಗೆ ಅರಿವು ಮೂಡಿಸಲು ಮುಂದಾಗಬೇಕು. ಅಂಗನವಾಡಿ ಕಾರ್ಯಕರ್ತೆಯರು ತಾವು ಕಾರ್ಯ ನಿರ್ವಹಿಸುವ ವ್ಯಾಪ್ತಿಯಲ್ಲಿ ಆಂದೋಲನದ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ತಿಳಿಸಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಧನಂಜಯ್ ಮಾತನಾಡಿ, ಕುಷ್ಠರೋಗ ಪತ್ತೆ ಆಂದೋಲನಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಆರೋಗ್ಯ ಇಲಾಖೆ ಸಿಬ್ಬಂದಿ ಮನೆಗೆ ಭೇಟಿ ನೀಡಿದ ಸಂದರ್ಭ ತಮ್ಮ ದೇಹದ ಮೇಲೆ ಯಾವುದೇ ರೀತಿಯ ಮಚ್ಚೆಗಳಿದ್ದಲ್ಲಿ ಮಾಹಿತಿ ನೀಡಿ ಪರೀಕ್ಷೆ ಮಾಡಿಸಿಕೊಳ್ಳಿ. ಈ ಮೂಲಕ 2030ರ ವೇಳೆಗೆ ಕುಷ್ಠರೋಗವನ್ನು ಸಂಪೂರ್ಣ ನಿರ್ಮೂಲನೆ ಮಾಡುವ ಗುರಿ ಹೊಂದಲಾಗಿದೆ ಎಂದರು.

ಸಭೆಯಲ್ಲಿ ಜಿಪಂ ಸಿಇಓ ಶೇಕ್ ತನ್ವೀರ್ ಆಸೀಫ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ನಾಗರಾಜು, ಆರ್‌ಸಿಹೆಚ್ ಅಧಿಕಾರಿ ಡಾ.ಅನಿಲ್ ಸೇರಿದಂತೆ ಇನ್ನಿತರಿದ್ದರು.

ನಿರಾಶ್ರಿತರಿಗೆ ಆಶ್ರಯ ನೀಡಿ: ಡಿಸಿ

ಮಂಡ್ಯ, ಜೂ.6– ನಿರಾಶ್ರಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಿರಾಶ್ರಿತರ ತಾಣ ನಿರ್ಮಿಸಲಾಗಿದೆ. ಹೀಗಾಗಿ ಹೆಚ್ಚು ನಿರಾಶ್ರಿತರಿಗೆ ಆಶ್ರಯ ನೀಡುವಂತೆ ಜಿಲ್ಲಾಧಿಕಾರಿ ಡಾ.ಹೆಚ್.ಎನ್.ಗೋಪಾಲಕೃಷ್ಣ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಪಿಎಂ ಸ್ವನಿಧಿ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ, ಜನ್‌ಧನ್ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ, ಜನನಿ ಸುರಕ್ಷಾ ಯೋಜನೆ, ಮಾತೃ ವಂದನಾ ಯೋಜನೆ, ಒಂದು ದೇಶ– ಒಂದು ಕಾರ್ಡ್, ಶ್ರಮ ಯೋಗಿ ಮನಧನ್ ಯೋಜನೆ, ಕಟ್ಟಡ ಮತ್ತು ಇತರೆ ಕಾರ್ಮಿಕರ ನೋಂದಣಿ ಕಾರ್ಯಕ್ರಮಗಳ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ನಗರಸಭೆ ವತಿಯಿಂದ ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ ನಡೆಸಿ ಅವರಿಗೆ ದೊರಕಬೇಕಾದ ಎಲ್ಲಾ ಸವಲತ್ತುಗಳನ್ನು ಆದಷ್ಟು ಬೇಗ ಒದಗಿಸಿಕೊಡಲು ಸೂಚನೆ ಕೊಟ್ಟ ಡಿಸಿ ಡಾ.ಹೆಚ್.ಎನ್.ಗೋಪಾಲಕೃಷ್ಣ, ಬೀದಿ ಬದಿ ವ್ಯಾಪಾರಿಗಳಿಗೆ ನೆರವಾಗಲು ಅನೇಕ ಬ್ಯಾಂಕ್‌ಗಳ ಸಹಾಯದಿಂದ ಸಾಲ ಸೌಲಭ್ಯಗಳನ್ನು ಕಲ್ಪಿಸಲು ಈ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದರು. ರಾತ್ರಿ ವೇಳೆ ಬೀದಿ ಬದಿ ಮಲಗುವ ವಸತಿ ರಹಿತರಿಗೆ ಡೇ–ನಲ್ಮ್ ಯೋಜನೆಯಡಿ ಆಶ್ರಯ ತಾಣ ನಿರ್ಮಿಸಲಾಗಿದೆ. ಈ ಆಶ್ರಯ ತಾಣದಲ್ಲಿ 30 ಜನರು ಆಶ್ರಯ ಪಡೆಯುವ ಸೌಲಭ್ಯವಿದೆ. ಇಲ್ಲಿ ಎಲ್ಲಾ ಮೂಲ ಸೌಕರ್ಯಗಳು ಇದೆ. ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕವಾದ ವಸತಿ ತಾಣದ ವ್ಯವಸ್ಥೆ ಇರುತ್ತದೆ. ನಿರಾಶ್ರಿತರು ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಈ ವೇಳೆ ನಗರಸಭಾ ಆಯುಕ್ತ ಖ.ಮಂಜುನಾಥ್, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಡಾ.ಸಿದ್ದಲಿಂಗೇಶ್, ಕೇಂದ್ರ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ತುಷಾರಮಣಿ, ಲೀಡ್ ಬ್ಯಾಂಕ್ ಮ್ಯಾನೇಜರ್ ದೀಪಕ್, ಎನ್‌ಜಿಓ ಕ್ರೆಡಿಟ್ ಐ ಸಂಸ್ಥೆ ಮುಖ್ಯಸ್ಥ ಡಾ.ವರ್ಷ, ಜಿಲ್ಲೆಯ ಎಲ್ಲಾ ಇಲಾಖೆ ಅಧಿಕಾರಿಗಳು ಹಾಗೂ ಬ್ಯಾಂಕ್ ವ್ಯವಸ್ಥಾಪಕರು ಸೇರಿದಂತೆ ಇನ್ನಿತರರಿದ್ದರು.

ಕೆ.ಆರ್.ಪೇಟೆಯಲ್ಲಿ ವಿಶ್ವ ಪರಿಸರ ಜಾಗೃತಿ ಜಾಥಾ

ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆಗೆ ಮುಂದಾಗಿ: ಪುರಸಭಾಧ್ಯಕ್ಷೆ ಮಹಾದೇವಿ

ಕೆ.ಆರ್.ಪೇಟೆ, ಜೂ.6– ಪಟ್ಟಣದ ಪುರಸಭೆ ಹಾಗೂ ಪ್ರಗತಿ ಹಿರಿಯ ಪ್ರಾಥಮಿಕ ಶಾಲೆ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಜಾಗೃತಿ ಜಾಥಾ, ಸಸಿಗಳ ವಿತರಣೆ ಹಾಗೂ ಸಸಿ ನೆಡುವ ಕಾರ್ಯಕ್ರಮ ನಡೆಯಿತು.



ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಪುರಸಭಾಧ್ಯಕ್ಷೆ ಮಹಾದೇವಿ ನಂಜುಂಡ, ಪ್ರಸ್ತುತ ನಾವು ಪರಿಸರದ ಮೇಲೆ ದೌರ್ಜನ್ಯ ನಡೆಸುತ್ತಿದ್ದೇವೆ. ಕಾಡು ನಾಶಗೊಳಿಸಿ ನಗರೀಕರಣಕ್ಕೆ ಮುಂದಾಗಿರುವುದರಿಂದ ಕಾಲ ಕಾಲಕ್ಕೆ ಮಳೆ ಆಗದೇ ಸಂಕಷ್ಟ ಎದುರಿಸುತ್ತಿದ್ದೇವೆ. ಗಾಳಿ, ನೀರು ಹಾಗೂ ಆಹಾರ ಕಲುಷಿತವಾಗುತ್ತಿದೆ. ಅಲ್ಲದೇ ನಾವು ಅನೇಕ ಸಾಂಕ್ರಮಿಕ ರೋಗಳಿಗೆ ತುತ್ತಾಗಿ ನಮ್ಮ ಅಮೂಲ್ಯವಾದ ಜೀವ ಕಳೆದು ಕೊಳ್ಳುತ್ತಿದ್ದೇವೆ. ಅನಾಹುತ ಸಂಭವಿಸುವ ಮುನ್ನ ಎಚ್ಚೆತ್ತುಕೊಳ್ಳದಿದ್ದರೇ ನಮ್ಮ ಬದುಕು ಸರ್ವನಾಶವಾಗಲಿದೆ ಎಂದು ಎಚ್ಚರಿಕೆ ನೀಡಿದರು.

ಪರಿಸರದ ಜೊತೆ ಅವಿನಾಭಾವ ಸಂಬಂಧ ಹೊಂದಿರುವ ನಾವು ಪರಿಸರ ಸಂರಕ್ಷಣೆ ಮಾಡುವ ಮಾಡುವ ಜೊತೆಗೆ ಗಿಡಗಳನ್ನು ನೆಟ್ಟು ಮಕ್ಕಳಂತೆ ಕಾಪಾಡಿ ಪರಿಸರ ಸಮತೋಲನ ಕಾಯ್ದುಕೊಳ್ಳಬೇಕು. ಆ ಮೂಲಕ ಪ್ರತಿಯೊಬ್ಬರೂ ಪರಿಸಂರಕ್ಷಣೆಗೆ ಮುಂದಾಗಬೇಕು ಎಂದರು.

ಪುರಸಭೆ ಮುಖ್ಯಾಧಿಕಾರಿ ಬಸವರಾಜು ಮಾತನಾಡಿ, ಪಟ್ಟಣದ ಜನತೆ ತಮ್ಮ ಮನೆ ಹಾಗೂ ಸುತ್ತಮುತ್ತಲ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಕಸವನ್ನು ಎಲ್ಲೆಂದರಲ್ಲಿ ಬಿಸಾಡದೇ ಹಸಿ ಹಾಗೂ ಒಣಕಸವನ್ನು ಪ್ರತ್ಯೇಕವಾಗಿ ವಿಂಗಡಿಸಿ ಪುರಸಭೆ ಕಸ ಸಾಗಾಣಿಕೆ ವಾಹನಕ್ಕೆ ನೀಡಬೇಕು. ಮನೆ ಸುತ್ತಮುತ್ತ ನೀರು ನಿಂತು ಸೊಳ್ಳೆಗಳು ಉತ್ಪತ್ತಿಯಾಗದಂತೆ ಎಚ್ಚರ ವಹಿಸಬೇಕು. ವೈಯಕ್ತಿಕ ಸ್ವಚ್ಛತೆಗೆ ಒತ್ತು ನೀಡಬೇಕು. ಕುಡಿಯಲು ಶುದ್ಧವಾದ ನೀರನ್ನೇ ಬಳಸುವ ಮೂಲಕ ಆರೋಗ್ಯ ಸಂವರ್ಧನೆಗೆ ಮುಂದಾಗಬೇಕು ಎಂದರು. ಈ ಸಂದರ್ಭ ಉಪಾಧ್ಯಕ್ಷೆ ಗಾಯತ್ರಿ, ಸದಸ್ಯ ರಾದ ಡಿ.ಪ್ರೇಮಕುಮಾರ್, ಗಿರೀಶ್, ಇಂದ್ರಾಣಿ, ವಿಶ್ವನಾಥ್, ಶೋಭಾ, ಶುಭ, ಅರ್ಚನಾ ಆರಾಧ್ಯ, ಎಂ.ಕೆ.ಮೋನಿಕಾ, ರವಿಕುಮಾರ್, ಸೋಮಶೇಖರ್, ಮಂಜುಳಾ ಸೇರಿದಂತೆ ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ಮಕ್ಕಳ ಪೋಷಕರಿದ್ದರು.

ಮೈಸೂರು ರಾಜ್ಯಕ್ಕೆ ನಾಲ್ವಡಿ ಕೊಡುಗೆ ಅಪಾರ: ನಾರಾಯಣ



ಶ್ರೀರಂಗಪಟ್ಟಣ, ಜೂ.6– ಅಂದಿನ ಮೈಸೂರು ರಾಜ್ಯವನ್ನು ಇಡೀ ದೇಶವೇ ತಿರುಗಿ ನೋಡುವಂತೆ ಮಾಡಿದ ಕೀರ್ತಿ ನಾಲ್ವಡಿ ಕೃಷ್ಣರಾಜ ಒಡೆಯರ್‌ಗೆ ಸಲ್ಲುತ್ತದೆ ಎಂದು ಶ್ರೀಕೃಷ್ಣ ರಾಜೇಂದ್ರ ಸಹಕಾರ ಸಂಘದ ಅಧ್ಯಕ್ಷ ವಿ.ನಾರಾಯಣ ತಿಳಿಸಿದರು.

ಪಟ್ಟಣದ ಶ್ರೀಕೃಷ್ಣರಾಜೇಂದ್ರ ಸಹಕಾರ ಸಂಘದ ಕಚೇರಿಯಲ್ಲಿ ನಡೆದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯಲ್ಲಿ ಮಾತನಾಡಿದ ಅವರು, ಕೃಷಿ, ಕೈಗಾರಿಕೆ, ನೀರಾವರಿ, ಜಲ ವಿದ್ಯುತ್, ಶಿಕ್ಷಣ, ಆರೋಗ್ಯ ಸೇರಿದಂತೆ ಹಲವು ವಲಯಗಳಲ್ಲಿ ಅಂದಿನ ಮೈಸೂರು ರಾಜ್ಯ ಮುಂಚೂಣಿಯಲ್ಲಿತ್ತು. ಇದರ ಹಿಂದೆ ನಾಲ್ವಡಿಯವರ ಕೊಡುಗೆ ಅಪಾರವಾಗಿತ್ತು ಎಂದರು. ಉಪಾಧ್ಯಕ್ಷ ಜಿ.ವಿ.ನಾರಾಯಣಸ್ವಾಮಿ ಮಾತನಾಡಿ, ಪ್ರತಿನಿತ್ಯ ಕನ್ನಡಿಗರು ನೆನೆಸಿಕೊಳ್ಳಬೇಕಾದ ಮಹನೀಯರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕೂಡ ಒಬ್ಬರು. ಆಧುನಿಕ ಮೈಸೂರಿನ ನಿರ್ಮಾಣಕ್ಕೆ, ಕರುನಾಡಿನ ಅಭಿವೃದ್ಧಿಗೆ ಒಡೆಯರ್ ಕೊಡುಗೆ ಅಪಾರ. ಅಂದಿನ ಕಾಲದಲ್ಲೆ ಬೆಂಗಳೂರು, ಮೈಸೂರು ನಗರಗಳು ಎಲ್ಲರ ಆಕರ್ಷಣೆಯ ಕೇಂದ್ರವಾಗುವಂತೆ ಮಾಡಿದ್ದರು. ಶಿಕ್ಷಣವೇ ಎಲ್ಲರ ಅಭಿವೃದ್ಧಿಗೂ ಮೂಲ ಎಂದು ಭಾವಿಸಿ, ಶಿಕ್ಷಣಕ್ಕೆ ಹೆಚ್ಚು ಒತ್ತುಕೊಟ್ಟಿದ್ದರು. 1916ರಲ್ಲಿ ಮೈಸೂರು ವಿಶ್ವವಿದ್ಯಾನಿಲಯ ಪ್ರಾರಂಭಿಸಿದರು ಎಂದರು.

ಈ ವೇಳೆ ನಿರ್ದೇಶಕರಾದ ಹೆಚ್.ಎ.ಅಶೋಕ್ ಕುಮಾರ್, ಎಸ್.ಕೆ ಕುಬೇರ್‌ಸಿಂಗ್, ಕೆ.ಲಿಂಗಯ್ಯ, ಎಸ್.ಕೆ ಲಕ್ಷ್ಮಣ್ ಸಿಂಗ್, ಎಸ್.ರಘು, ಭಾನುಮತಿ ಚಂದ್ರಶೇಖರ್, ಸಾಯಿಲೀಲಾ, ಎಸ್.ಟಿ ರಾಜು, ಈ. ಪರಮೇಶ, ಕಾರ್ಯದರ್ಶಿ ವಸಂತ ಕುಮಾರ್ ಸೇರಿದಂತೆ ಸಿಬ್ಬಂದಿ ವರ್ಗ ಇದ್ದರು.

ವಿಶ್ವ ಪರಿಸರ ದಿನಾಚರಣೆ



ಸುತ್ತೂರು ಶ್ರೀ ಕ್ಷೇತ್ರದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಗಳ ಸಮ್ಮುಖದಲ್ಲಿ ಮೈಸೂರು ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರಾದ ಪ್ರೊ.ಎ.ಹೆಚ್.ಎಂ. ವಿಜಯಲಕ್ಷ್ಮಿ ಅವರು ಗಿಡ ನೆಡುವುದರ ಮೂಲಕ ಚಾಲನೆ ನೀಡಿದರು. ಬೆಂಗಳೂರಿನ ಎಂ.ಎಸ್.ರಾಮಯ್ಯ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಪ್ರೊ. ಎ.ಎಂ. ನಾಗಭೂಷಣ್ ಮತ್ತಿತರರು ಈ ವೇಳೆ ಹಾಜರಿದ್ದರು.



ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪಡುವಾರಳ್ಳಿಯಲ್ಲಿರುವ ಡಾ.ಬಾಬು ಜಗಜೀವನರಾಂ ಭವನದ ಆವರಣದಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಪಿಸಿಓ ಎನ್. ಮುನಿರಾಜು, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಬಿ. ರಂಗೇಗೌಡ ಗಿಡಗಳನ್ನು ನೆಡುವುದರ ಮೂಲಕ ಪರಿಸರ ದಿನಾಚರಣೆ ಆಚರಿಸಲಾಯಿತು. ಚಿತ್ರದಲ್ಲಿ ಹನುಮಂತಪ್ಪ, ರಮೇಶ್, ವೆಂಕಟರಾಜು ಮತ್ತಿತರರನ್ನು ಕಾಣಬಹುದು.

ಮೈಸೂರಿನ ಜಯದೇವ ಆಸ್ಪತ್ರೆಯ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಕೆ.ಎಸ್. ಸದಾನಂದ್ ಗಿಡಗಳನ್ನು ನಡೆಲಾಯಿತು. ಚಿತ್ರದಲ್ಲಿ ಡಾ. ರಾಜೇಶ್, ಆರ್.ಎಂ.ಓ. ಪಶುಪತಿ, ನರ್ಸಿಂಗ್ ಅಧೀಕ್ಷಕ ಹರೀಶ್ ಕುಮಾರ್, ಪಿಆರ್‌ಓ ವಾಣಿ ಮೋಹನ್, ಇಂಜಿನಿಯರ್‌ಗಳನ್ನು ಕಾಣಬಹುದು.



ನಿಧನ



ಶ್ರೀಮತಿ ಭಾಗ್ಯರತ್ನ

ಮೈಸೂರು, ಜೂ.6– ಮೈಸೂರಿನ ಗಾಯತ್ರಿಪುರಂ ನಿವಾಸಿ ಶ್ರೀಮತಿ ಭಾಗ್ಯರತ್ನ(64) ಅವರು ಮಂಗಳವಾರ ನಿಧನರಾದರು. ಮೃತರು ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಯ ಹಿರಿಯ ವರದಿಗಾರ ಲಾರೆನ್ಸ್ ಮಿಲ್ಟನ್ ಸೇರಿ ಮೂವರು ಪುತ್ರರು ಸೇರಿದಂತೆ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಉದಯಗಿರಿ ಮಹದೇವಪುರ ರಸ್ತೆಯ ಸಿಎಸ್‌ಐ ಸಮಾಧಿಯಲ್ಲಿ ಬುಧವಾರ ಮಧ್ಯಾಹ್ನ 3.30ಕ್ಕೆ ಮೃತರ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಚಾಮುಂಡಿಬೆಟ್ಟದಲ್ಲಿ ತಡೆಗೋಡೆ ನಿರ್ಮಾಣ, ಮೂರು ತಿಂಗಳಲ್ಲಿ ಪೂರ್ಣ

ನೂತನ ತಂತ್ರಜ್ಞಾನ ಬಳಸಿ ಭೂ ಕುಸಿತಕ್ಕೆ ಶಾಶ್ವತ ಪರಿಹಾರವಾಗಿ ತಡೆಗೋಡೆ ನಿರ್ಮಾಣ

ಮೈಸೂರು, ಜೂ.6(ಆರ್‌ಕೆ)– ಅತೀ ಮಳೆಯಿಂದಾಗಿ ಭೂಕುಸಿತವಾಗಿದ್ದ ಮೈಸೂರಿನ ಚಾಮುಂಡಿಬೆಟ್ಟದ ನಂದಿ ಪ್ರತಿಮೆಗೆ ಹೋಗುವ ರಸ್ತೆಯಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ.






ಭೂಕುಸಿತವಾಗಿ 10 ತಿಂಗಳು ಕಳೆದಿದ್ದು, ತಡೆಗೋಡೆ ಕಾಮಗಾರಿ ಈಗಾಗಲೇ ಶೇ.40 ರಷ್ಟು ಮುಗಿದಿದ್ದು, ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಆಸಕ್ತಿ ವಹಿಸಿ ಅತೀ ಶೀಘ್ರ ಕಾಮಗಾರಿ ಪೂರ್ಣಗೊಳಿಸಲು ಪ್ರಯತ್ನಿಸುತ್ತಿದ್ದಾರೆ. ಕುಸಿತವಾಗಿದ್ದ ಸ್ಥಳದಲ್ಲಿ ಸುಮಾರು 20 ಅಡಿ ಆಳದಿಂದ ಮಣ್ಣನ್ನು ಹೊರ ಹಾಕಿ, ಸಿಮೆಂಟ್ ಕಾಂಕ್ರೀಟ್ ಬೆಡ್ ಮೇಲೆ ತಡೆಗೋಡೆ ನಿರ್ಮಿಸುತ್ತಿರುವುದರಿಂದ ಸ್ವಲ್ಪ ತಡವಾಗುತ್ತಿದೆ ಎಂದು ಲೋಕೋಪ ಯೋಗಿ ಇಲಾಖೆ ಎಕ್ಸಿಕ್ಯೂಟಿವ್ ಇಂಜಿ ನಿಯರ್ ರಾಜು ತಿಳಿಸಿದ್ದಾರೆ. ಕಬ್ಬಿಣ ಮತ್ತು ಸ್ಟೀಲ್ ಫ್ಯಾಬ್ರಿಕೇಷನ್ ಮತ್ತು ಕಾಂಕ್ರೀಟ್ ಮೆಟೀರಿಯಲ್‌ಗಳ ಸ್ಥಳದಲ್ಲಿ ಸಂಗ್ರಹಿಸಿದ್ದು, ಅಳವಡಿಸುವ ಕಾರ್ಯ ಮಾತ್ರ ಬಾಕಿ ಉಳಿದಿದೆ. ಇನ್ನು ಮೂರು ತಿಂಗಳೊಳಗಾಗಿ ತಡೆಗೋಡೆ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸುವುದಾಗಿ ಅವರು ತಿಳಿಸಿದ್ದಾರೆ. 2022ರ ಆಗಸ್ಟ್ ತಿಂಗಳಲ್ಲಿ ಆರಂಭವಾಗಿದ್ದ ಈ ಕಾಮಗಾರಿಗೆ ಹಿಂದಿನ ಬಿಜೆಪಿ ಸರ್ಕಾರವು 10 ಕೋಟಿ ರೂ. ಅನುದಾನ ನೀಡಿತ್ತಾದರೂ, ಕಳೆದ ವರ್ಷ ಡಿಸೆಂಬರ್ ವರೆಗೂ ಭಾರೀ ಮಳೆ ಸುರಿಯುತ್ತಿದ್ದರಿಂದ ಡಿಸೆಂಬರ್ ತಿಂಗಳವರೆಗೆ ಕಾಮಗಾರಿ ಕೈಗೊಳ್ಳಲು ಸಾಧ್ಯವಾಗಿರಲಿಲ್ಲ. ಮಣ್ಣು ತೆಗೆದು ತಡೆ ಗೋಡೆಗೆ ಕಬ್ಬಿಣ ಅಳವಡಿಸುವ ಕೆಲಸ ನಡೆಯುತ್ತಿದೆ ಎಂದು ಅವರು ತಿಳಿಸಿದರು. ಭೂಮಿ ಕುಸಿದಿರುವ ಸ್ಥಳದಲ್ಲಿ ಸುಮಾರು 30 ಅಡಿ ಆಳದಿಂದ ಮಣ್ಣನ್ನು ತೆಗೆದು ಅಲ್ಲಿಂದ ಕಲ್ಲು ಬಂಡೆಗಳಿಗೆ ಗ್ರೊಮಾಡಿ ಕಬ್ಬಿಣದ ರಾಡ್‌ಗಳನ್ನು ಅಳವಡಿಸಿ ರೀಟೇನಿಂಗ್ ವಾಲ್‌ಗೆ ಜೋಡಣೆ ಮಾಡಿ ಅಲ್ಲಿಂದ ಕಾಂಕ್ರೀಟ್ ತಡೆಗೋಡೆ ನಿರ್ಮಿಸಲಾಗುತ್ತಿದೆ. ಮಳೆ ಎಷ್ಟೇ ಬಂದರೂ, ರಭಸದಿಂದ ನೀರು ಹರಿದರೂ ರೀಟೇನಿಂಗ್ ವಾಲ್ ಕುಸಿಯುವುದಿಲ್ಲ ಎಂದು ರಾಜು ತಿಳಿಸಿದ್ದಾರೆ. ಚಾಮುಂಡಿ ಬೆಟ್ಟದ ವ್ಯೂ ಪಾಯಿಂಟ್ ಸರ್ಕಲ್‌ನಿಂದ ನಂದಿ ಪ್ರತಿಮೆ ಸರ್ಕಲ್ ನಡುವೆ 2ನೇ ವ್ಯೂ ಪಾಯಿಂಟ್ ಬಳಿ ಸುಮಾರು 300 ಅಡಿ ಉದ್ದ ಭೂಮಿ ಕುಸಿದಿದ್ದು, ಆ ಮಾರ್ಗ ವಾಹನ ಸಂಚಾರವನ್ನು ಬಂದ್ ಮಾಡಲಾಗಿದೆ. ತಡೆಗೋಡೆಗೆ ಅಗತ್ಯವಾದ ಕಬ್ಬಿಣ, ಸಿಮೆಂಟ್ ಕಾಂಕ್ರೀಟ್ ಬ್ಲಾಕ್‌ಗಳನ್ನು ಸಿದ್ಧ ಮಾಡಿ ಸ್ಥಳದಲ್ಲಿರಿಸಲಾಗಿದೆ ಎಂದು ಎಕ್ಸಿಕ್ಯೂಟಿವ್ ಇಂಜಿನಿಯರ್ ತಿಳಿಸಿದರು.

ಮೆಟೀರಿಯಲ್ ಸಿದ್ಧವಿರುವುದರಿಂದ ಕೆಲಸ ವಿಳಂಬವಾಗುವುದಿಲ್ಲ. ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ (IISC) ತಜ್ಞ ವಿಜ್ಞಾನಿಗಳು ನೀಡಿದ ಸಲಹೆ, ವಿನ್ಯಾಸದಂತೆ ತಡೆಗೋಡೆ ಕಾಮಗಾರಿ ನಿರ್ಮಿಸುತ್ತಿದ್ದು, ಮಣ್ಣು ಪರೀಕ್ಷೆ, ನಿರ್ಮಾಣದ ಕೌಶಲತೆ ಚಾಚೂ ತಪ್ಪದೆ ಅನುಸರಿಸುತ್ತಿರುವುದರಿಂದ ಕೆಲಸ ವಿಳಂಬವಾಗಿದೆ. ಇನ್ನು 90 ದಿನದೊಳಗಾಗಿ ಕಾಮಗಾರಿ ಪೂರ್ಣಗೊಳಿಸುತ್ತೇವೆ ಎಂದು ರಾಜು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ. ಕಾಮಗಾರಿ ಪ್ರಗತಿಯಲ್ಲಿ ರುವುದರಿಂದ ನಂದಿ ಪ್ರತಿಮೆ ಹಾಗೂ ವ್ಯೂ ಪಾಯಿಂಟ್ ಸರ್ಕಲ್ ಬಳಿ ಬ್ಯಾರಿಕೇಡ್ ಅಳವಡಿಸಿ ಆ ಮಾರ್ಗದಲ್ಲಿ ಸಂಚಾರವನ್ನು ನಿರ್ಬಂಧಿಸಲಾಗಿದೆ.

ವಿದ್ಯಾವರ್ಧಕ ತಾಂತ್ರಿಕ ವಿದ್ಯಾಲಯದಲ್ಲಿ ಮುಕ್ತ ದಿನ ಆಚರಣೆ

ಮೈಸೂರು, ಜೂ. 6– ಮೈಸೂರಿನ ವಿದ್ಯಾವರ್ಧಕ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಂದು ನಡೆದ ಮುಕ್ತ ದಿನ (ಓಪನ್ ಡೇ) ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಪಿಯು ವಿದ್ಯಾರ್ಥಿಗಳಿಗೆ ವಿಶೇಷವಾಗಿ ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ ಇಂಜಿನಿಯರಿಂಗ್ ಕಲಿಕೆ ಮತ್ತು ಸವಾಲುಗಳ ಕುರಿತು ನುರಿತ ತಜ್ಞರು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು. ಐಟಿ ಕ್ಷೇತ್ರದಲ್ಲಿ ಇರುವ ಅವಕಾಶಗಳು, ನವ ತಂತ್ರಜ್ಞಾನಗಳಾದ ಕೃತಕ ಬುದ್ಧಿಮತ್ತೆ (ಆರ್ಟಿಫಿಷಿಯಲ್ ಇಂಟಲಿಜೆನ್ಸ್), ಮಷೀನ್ ಲರ್ನಿಂಗ್, ಸೈಬರ್ ಟೆಕ್ನಾಲಜಿ, ಬ್ಲಾಕ್ ಚೈನ್, ಐಓಟಿ (ಇಂಟರ್ನೆಟ್ ಆಫ್ ಥಿಂಗ್ಸ್), ವಿಆರ್ ಮತ್ತು ಎಆರ್ (ವೈರ್ಚುಯಲ್ ರಿಯಾಲಿಟಿ ಮತ್ತು ಆಗಮೆಂಟೆಡ್ ರಿಯಾಲಿಟಿ) ಮುಂತಾದವುಗಳ ಬಗ್ಗೆ ವಿಸ್ತರವಾಗಿ ತಜ್ಞರಾದ ಅಚ್ಯುತ್ ಕುಮಾರ್ ಹಾಗೂ ಮುರಳಿಧರ್ ರಾವ್ ಉಪನ್ಯಾಸ ನೀಡಿದರು. ಇಂದು ಭಾರತದಲ್ಲಿ 2857 ಇಂಜಿನಿಯರಿಂಗ್ ಕಾಲೇಜುಗಳಿದ್ದು, ಪ್ರತಿ ವರ್ಷ ಸುಮಾರು 13 ಲಕ್ಷಕ್ಕೂ ಹೆಚ್ಚು ಇಂಜಿನಿಯರಿಂಗ್ ಪದವೀಧರರು ವಿಶ್ವವಿದ್ಯಾಲಯಗಳಿಂದ ಹೊರಬರುತ್ತಿದ್ದಾರೆ. ಕರ್ನಾಟಕದಲ್ಲಿ 208 ಕಾಲೇಜುಗಳಿದ್ದು, ಕಳೆದ ವರ್ಷ 1.7 ಲಕ್ಷ ವಿದ್ಯಾರ್ಥಿಗಳು ಸಿಇಟಿ ಬರೆದಿದ್ದು, ಈ ವರ್ಷ 2 ಲಕ್ಷಕ್ಕೆ ದಾಟಿದೆ. ಕಳೆದ ಬಾರಿ 55 ಸಾವಿರ ಕಾಮೆಡ್–ಕೆ ಪರೀಕ್ಷೆ ಬರೆದಿದ್ದು ಅದು ಈ ವರ್ಷ ದ್ವಿಗುಣವಾಗಿದೆ ಎಂದು ಇಂಜಿನಿಯರಿಂಗ್ ಕೋರ್ಸ್ ಬಗ್ಗೆ ವಿದ್ಯಾರ್ಥಿಗಳಲ್ಲಿ ಹೆಚ್ಚುತ್ತಿರುವ ಆಸಕ್ತಿಯ ಬಗ್ಗೆ ವಿವಿಸಿಇ ಯ ಪ್ರಾಂಶುಪಾಲರಾದ ಡಾ. ಬಿ ಸದಾಶಿವೇಗೌಡ ಹೇಳಿದರು.



ಇಂದು ಮೈಸೂರಿನ ಒಟ್ಟು 11 ಇಂಜಿನಿಯರಿಂಗ್ ಕಾಲೇಜುಗಳಿಂದ ಒಟ್ಟು 5310 ಸೀಟ್‌ಗಳು ಇದ್ದು, ಅದರಲ್ಲಿ 2580 ಐಟಿ ಮತ್ತು 2730 ಇತರೆ ಇಂಜಿನಿಯರಿಂಗ್ ಕೋರ್ಸ್‌ಗಳ ಸೀಟ್ ಲಭ್ಯತೆ ಹಾಗೂ ವಿಭಾಗಗಳನ್ನು ಆರಿಸುವ ಬಗೆಗೆ ಯಾವೆಲ್ಲ ಮಾನದಂಡಗಳನ್ನು ಬಳಸಬೇಕು, ಬರೇ ಐಟಿ ಕ್ಷೇತ್ರದಲ್ಲಿ ಮಾತ್ರ ಉದ್ಯೋಗ ಅವಕಾಶಗಳು ಹೇರಳ ಬೇರೆ ಕ್ಷೇತ್ರಗಳಲ್ಲಿ ಕಡಿಮೆ ಎಂದು ತಪ್ಪು ಭಾವಿಸಬಾರದು, ಇತರೆ ವಿಭಾಗಗಳಾದ ಸಿವಿಲ್, ಮೆಕ್ಯಾನಿಕಲ್, ಎಲೆಕ್ಟ್ರಿಕಲ್‌ಗಳಂತಹ ಕೋರ್ಸ್‌ಗಳಿಗೆ ಬೇಕಾದ ಆಸಕ್ತಿ ಹಾಗೂ ಅಂತಹ ಕೈಗಾರಿಕೆಗಳಿಗೆ ಇಂದಿನ ದಿನದಲ್ಲಿ ಬೇಕಾಗಿರುವ ಹೊಸ ತಂತ್ರಜ್ಞಾನ, ನಿಪುಣತೆಗಳ ಬೆಳಸಿಕೊಳ್ಳುವುದರ ಬಗ್ಗೆ ವಿದ್ಯಾರ್ಥಿಗಳ ಹಾಗೂ ಪೋಷಕರ ಪ್ರಶ್ನೆಗಳಿಗೆ ಆಯಾ ವಿಭಾಗದ ಮುಖ್ಯಸ್ಥರು ಹಾಗೂ ತಜ್ಞರು ಉತ್ತರಿಸಿದರು.

ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ)ನೋಡಲ್ ಆಫೀಸರ್ ಆದ ಎನ್ ಉದಯಕುಮಾರ್ ಸಿಇಟಿ ನಂತರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವುದು, ಕಾಲೇಜುಗಳ ಆಯ್ಕೆ, ವಿಭಾಗಗಳ ಆಯ್ಕೆ, ಆದಾಯ ಮತ್ತು ಜಾತಿ ಪ್ರಮಾಣ ಪತ್ರ ಪಡೆಯುವ ವಿಧಾನ ಮತ್ತು ಈ ವರ್ಷ ತಂದಿರುವ ಸುಧಾರಣೆಗಳ ಬಗ್ಗೆ ವಿಸ್ತರವಾಗಿ ಅರಿವು ಮೂಡಿಸಿದರು.

ಗ್ರಾಮೀಣ ಮತ್ತು ಕನ್ನಡ ಮಾಧ್ಯಮ, ಎನ್‌ಎಸ್‌ಎಸ್, ಎನ್‌ಸಿಸಿ, ಕ್ರೀಡೆ, ಅಂಗವಿಕಲರಿಗೆ ಇರುವ ಕೋಟಾದ ಬಗ್ಗೆ ತಿಳಿಸಿದರು ಹಾಗೂ ಅದರ ಪ್ರಮಾಣ ಪತ್ರವನ್ನು ಪಡೆಯುವ ವಿಧಾನವನ್ನು ತಮ್ಮ ಕಾರ್ಯಾಗಾರದಲ್ಲಿ ವಿವರಿಸಿದರು.

ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ನೂರಾರು ವಿದ್ಯಾರ್ಥಿಗಳು, ಪೋಷಕರು ಕಾಲೇಜಿನ ವಿವಿಧ ವಿಭಾಗಗಳಿಗೆ ಭೇಟಿ ಕೊಟ್ಟು ಪ್ರಾಜೆಕ್ಟ್, ಸಂಶೋಧನಾ ಕ್ರಿಯೆ, ಸ್ಟಾರ್ಟ್ ಅಪ್ ಹಬ್, ಸ್ಟೂಡೆಂಟ್ಸ್ ಕ್ಲಬ್ಸ್, ಸಂಸ್ಥೆಯ ಆವರಣದಲ್ಲಿ ನಡೆಯುತ್ತಿರುವ ನವ ಉದ್ಯಮಗಳ ಬಗ್ಗೆ ಉಪಯುಕ್ತ ಮಾಹಿತಿ ಪಡೆದರು.

ಮೈಸೂರು ಮಿತ್ರ



ಕಾವಲುಗಾರ-ವರ್ತಕನ ನಡುವಿನ ಕಲಹದ ಹಿನ್ನೆಲೆ

ಪ್ರವಾಸಿತಾಣ ರಾಜಾಸೀಟ್ ಸುತ್ತಲಿನ ಅಂಗಡಿಗಳ ತೆರವು

ಜಿಲ್ಲಾಧಿಕಾರಿ ಸೂಚನೆ ಮೇರೆಗೆ ಸ್ವಯಂ ತೆರವುಗೊಳಿಸಿದ ವ್ಯಾಪಾರಿಗಳು

ಮಡಿಕೇರಿ, ಜೂ.6– ನಗರದ ಪ್ರಮುಖ ಪ್ರವಾಸಿತಾಣಗಳಲ್ಲಿ ಒಂದಾದ ರಾಜಾಸೀಟ್ ಹೊರಭಾಗದಲ್ಲಿದ್ದ ಅಂಗಡಿಗಳನ್ನು ಜಿಲ್ಲಾಧಿಕಾರಿಗಳು ತೆರವುಗೊಳಿಸಿದ್ದಾರೆ.

ರಾಜಾಸೀಟ್ ಆವರಣದಲ್ಲಿ ಭಾನುವಾರ ರಾತ್ರಿ ವರ್ತಕ ಹಾಗೂ ಕಾವಲುಗಾರನ ನಡುವೆ 'ಒಂದು ಆಲೂಗಡ್ಡೆ ಚಿಪ್ಸ್' ಖರೀದಿಯ ವಿಚಾರಕ್ಕೆ ನಡೆದ ಕಲಹದ ಘಟನೆಯ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ಬಳಿಕ ರಾಜಾಸೀಟ್ ಆವರಣದಲ್ಲಿದ್ದ ಸುಮಾರು 20 ಅಂಗಡಿಗಳನ್ನು ತೆರವುಗೊಳಿಸುವಂತೆ ಜಿಲ್ಲಾಧಿಕಾರಿ ಡಾ.ಬಿ.ಸಿ. ಸತೀಶ ನಿರ್ದೇಶನ ನೀಡಿದ್ದರು.

ಈ ಹಿನ್ನೆಲೆಯಲ್ಲಿ ತೋಟಗಾರಿಕಾ ಇಲಾಖೆ ಅಧಿಕಾರಿಗಳು ನಗರ ಪೊಲೀಸರ ಸಹಾಯ ಪಡೆದು ಎಲ್ಲಾ ಅಂಗಡಿಗಳನ್ನು ತೆರವುಗೊಳಿಸಿದರು. ಕಳೆದ ಹತ್ತು ಹಲವು ವರ್ಷಗಳಿಂದ ತಳ್ಳುವ ಗಾಡಿಗಳ ಮೂಲಕ ರಾಜಾಸೀಟು ಆವರಣದಲ್ಲಿ ಬದುಕು ಕಟ್ಟಿಕೊಂಡಿದ್ದವರು ವಿಧಿ ಇಲ್ಲದೇ ಸ್ಥಳದಿಂದ ತೆರವು ಮಾಡಿದರು. ಚುರುಮುರಿ, ಗೋಬಿ ಮಂಚೂರಿ, ಆಟಿಕೆ ಸಾಮಾನುಗಳು, ಅಲಂಕಾರಿಕ ವಸ್ತುಗಳು, ಚಿಪ್ಸ್, ಚಾಟ್ಸ್ ಅಂಗಡಿಗಳನ್ನು ಖಾಲಿ ಮಾಡಿ, ವಾಹನಗಳಲ್ಲಿ ತುಂಬಿಕೊಂಡು ಅದರ ಮಾಲೀಕರು ತಮ್ಮ ಮನೆಯ ದಾರಿ ಹಿಡಿದರು. ಇದೀಗ ಎಲ್ಲಾ 20 ಅಂಗಡಿಗಳನ್ನು ತೆರವುಗೊಳಿಸಿ ಮುಂಭಾಗದ ರಾಜಾಸೀಟ್ ಹೊರ ಆವರಣದ ಮುಖ್ಯ ಗೇಟ್‌ಗೆ ಬೀಗ ಜಡಿಯಲಾಗಿದೆ.

6 ರಾಜಾಸೀಟಿಗೆ ದೇಶ ವಿದೇಶಗಳಿಂದಲೂ ನೂರಾರು ಪ್ರವಾಸಿಗರು ಆಗಮಿಸುತ್ತಾರೆ. ಇನ್ನು ಗ್ರೇಟರ್ ರಾಜಾಸೀಟು ದಿನದಿಂದ ದಿನಕ್ಕೆ ಅಭಿವೃದ್ಧಿಯಾಗುತ್ತಿದ್ದು, ಇಂತಹ ಸ್ಥಳದಲ್ಲಿ ವ್ಯಾಪಾರಕ್ಕೆ ಅವಕಾಶವಿಲ್ಲ. ಇಲ್ಲಿಯೂ 'ಸ್ಟ್ರೀಟ್‌ಫುಡ್' ಮಾದರಿಯಲ್ಲಿ ಅಭಿವೃದ್ಧಿ ಮಾಡಲಾಗುತ್ತದೆ. ಜಿಲ್ಲೆಯ ಕೆಲವು ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಂದ ದುಬಾರಿ ಹಣ ಪಡೆಯಲಾಗುತ್ತಿದೆ ಎಂಬ ಮಾಹಿತಿ ಲಭಿಸಿದೆ. ಅಂತಹ ಕೃತ್ಯಗಳಿಗೆ ಕಡಿವಾಣ ಹಾಕಲಾಗುತ್ತದೆ.
-ಡಾ.ಬಿ.ಸಿ.ಸತೀಶ, ಡಿಸಿ ಕೊಡಗು.

ಎಲ್ಲರಿಗ್ಯಾಕೆ ಶಿಕ್ಷೆ: ಇದರಿಂದ ಅತಂತ್ರ ಸ್ಥಿತಿಗೆ ಸಿಲುಕಿರುವ 20 ಅಂಗಡಿಗಳ ವರ್ತಕರು ಇದೀಗ ಪರದಾಡುವಂತಾಗಿದೆ. ಏಕಾಏಕಿ ಈ ನಿರ್ಧಾರದಿಂದ ನಷ್ಟಕ್ಕೆ ತುತ್ತಾಗಿರುವ ವರ್ತಕರು ಅಂಗಡಿಗಳಲ್ಲಿದ್ದ ವಸ್ತುಗಳು, ಆಹಾರ ಉತ್ಪನ್ನ, ತರಕಾರಿ, ಹಣ್ಣುಗಳನ್ನು ಖಾಲಿ ಮಾಡಿ ತಮ್ಮ ಅಸಹಾಯಕತೆಯನ್ನು ತೋಡಿಕೊಂಡರು.



ಟೆಂಡರ್ ಮೂಲಕ ಹಂಚಿಕೆ...

ರಾಜಾಸೀಟ್ ಆವರಣದಲ್ಲಿ ಅಂಗಡಿಗಳ ತೆರವಿಗೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿದ ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಅವರು, ಎರಡು ದಿನಗಳ ಹಿಂದೆ ಕ್ಷುಲ್ಲಕ ಕಾರಣಕ್ಕೆ ರಾಜಾಸೀಟ್ ಕಾವಲುಗಾರ ಹಾಗೂ ವರ್ತಕನ ನಡುವೆ ಕಲಹ ನಡೆದಿದೆ. ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ. ಕಾವಲುಗಾರನ ಮೇಲೆ ನಡೆದ ಹಲ್ಲೆ ಪ್ರಕರಣವನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಗ್ರೇಟರ್ ರಾಜಾಸೀಟ್ ಉದ್ಘಾಟನೆಯಾದ ಬಳಿಕ ಅಭಿವೃದ್ಧಿಯಾಗುತ್ತಿದೆ. ಇಲ್ಲಿರುವ ಅಂಗಡಿಗಳನ್ನು ಅಭಿವೃದ್ಧಿ ಮಾಡಬೇಕು ಎಂಬ ಚಿಂತನೆ ಇತ್ತಾದರೂ ಇದೊಂದು ಘಟನೆ ನಡೆದ ಬಳಿಕ ಯಾವುದೇ ಅನುಮತಿ ಇಲ್ಲದ ಅನಧಿಕೃತ ಅಂಗಡಿಗಳನ್ನು ಮುಚ್ಚಿಸಲಾಗಿದೆ. ಮುಂದಿನ ದಿನಗಳಲ್ಲಿ ರಾಜಾಸೀಟ್ ಆವರಣವನ್ನು ಅಭಿವೃದ್ಧಿಗೊಳಿಸಿ ಅಂಗಡಿಗಳನ್ನು ನಿರ್ಮಿಸಿ ಟೆಂಡರ್ ಮೂಲಕ ನಿಯಮಾನುಸಾರವಾಗಿ ಮಳಿಗೆಗಳನ್ನು ಹಂಚಿಕೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಬಿ.ಸಿಸತೀಶ ಅವರು ಸ್ಪಷ್ಟಪಡಿಸಿದರು.

ಕಳೆದ 20–25 ವರ್ಷಗಳಿಂದ ಇದನ್ನೇ ನಂಬಿ ಬದುಕು ಕಟ್ಟಿಕೊಂಡಿರುವ ನಮಗೆ ಯಾಕೆ ಇಂತಹ ಶಿಕ್ಷೆ ಎಂದು ಬೇಸರ ವ್ಯಕ್ತಪಡಿಸುವ ಮೂಲಕ ಅಸಹಾಯಕತೆ ತೋಡಿಕೊಂಡರು.

ಅಂಗಡಿಗಳ ತೆರವುಗೊಳಿಸುವ ದಿಢೀರ್ ಕ್ರಮದಿಂದ ನಮ್ಮ ಬದುಕಿನ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ. ಜಿಲ್ಲಾಧಿಕಾರಿಗಳು ಕ್ಷಮೆ ನೀಡಿ ಒಬ್ಬ ಮಾಡಿದ ತಪ್ಪಿಗೆ ಎಲ್ಲರಿಗೂ ಶಿಕ್ಷೆ ನೀಡಬಾರದು ಎಂದು ಮಾಧ್ಯಮಗಳ ಮೂಲಕ ಮನವಿ ಮಾಡಿದರು.

ಕಾವಲುಗಾರನಿಂದ ಹಲ್ಲೆ: ರಾಜಾಸೀಟ್ ಆವರಣದಲ್ಲಿ ವರ್ತಕ ಹಾಗೂ ಕಾವಲುಗಾರನ ನಡುವೆ ನಡೆದ ಹಲ್ಲೆ ಘಟನೆಗೆ ಸಂಬಂಧಿಸಿದಂತೆ ವರ್ತಕ ಹಲ್ಲೆ ನಡೆಸಿದ ವಿಡಿಯೋಗಳು ಮಾತ್ರ ವೈರಲ್ ಆಗಿದೆ ಎಂದು ರಾಜಾಸೀಟ್‌ನ ಮತ್ತೋರ್ವ ವರ್ತಕ ಖಲಂದರ್ ಹೇಳಿದ್ದಾರೆ. ಘಟನೆ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಲೂಗಡ್ಡೆ ಚಿಪ್ಸ್ ತೆಗೆದುಕೊಂಡ ಕಾವಲುಗಾರ ಜಯಣ್ಣ ಬಳಿ ವರ್ತಕ ಜಮ್‌ಶಾದ್ ಹಣ ಕೇಳಿದ್ದರು.

ಈ ಸಂದರ್ಭ ನಾನೂ ಕೂಡ ಹಣ ನೀಡಬೇಕೆ ಎಂದು ಕಾವಲುಗಾರ ಜಯಣ್ಣ ಪ್ರಶ್ನಿಸಿದ್ದಾರೆ. ಮಾತ್ರವಲ್ಲದೇ ಜಯಣ್ಣ ಅವರು ಹಣ ನೀಡಿ ಹೋಗುವಾಗ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದರು. ಬಳಿಕ ಹೊರಗಡೆ ಮಾತಿಗೆ ಮಾತು ಬೆಳೆದು ಗಲಾಟೆ ನಡೆದಿದೆ. ಕಾವಲುಗಾರ ಹೆಲ್ಮೆಟ್‌ನಲ್ಲಿ ಹಲ್ಲೆ ನಡೆಸಿದ್ದಾನೆ ಎಂದು ಖಲಂದರ್ ಆರೋಪಿಸಿದರು.

ಅಕ್ರಮವಾಗಿ ಎಂಡಿಎಂಎ ಮಾದಕ ವಸ್ತು ಮಾರಾಟಕ್ಕೆ ಯತ್ನ: ಒಬ್ಬನ ಬಂಧನ



ಮಡಿಕೇರಿ, ಜೂ.6– ಅಕ್ರಮವಾಗಿ ಎಂಡಿಎಂಎ ಮಾದಕ ವಸ್ತುವನ್ನು ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದ ಓರ್ವನನ್ನು ಮಡಿಕೇರಿ ಗ್ರಾಮಾಂತರ ಪೊಲೀಸರು ಮಾಲು ಸಹಿತ ಬಂಧಿಸಿದ್ದಾರೆ. ಮೂರ್ನಾಡು ನಿವಾಸಿ ಅಲ್ತಾಫ್ ಹುಸೇನ್(34) ಬಂಧಿತ ಆರೋಪಿ. ಆತನ ಬಳಿಯಿದ್ದ 12.150 ಗ್ರಾಂ ನಿಷೇಧಿತ ಎಂಡಿಎಂಎ ಮಾದಕ ವಸ್ತುವನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿ ಮಡಿಕೇರಿ ತಾಲೂಕು ಎಂ.ಬಾಡಗ ಗ್ರಾಮದ ಕಿಗ್ಗಾಲು ರಸ್ತೆಯ ಜಂಕ್ಷನ್ ಬಳಿ ಮಾದಕ ವಸ್ತು ಮಾರಾಟ ಮಾಡಲು ಯತ್ನಿಸುತ್ತಿರುವ ಕುರಿತು ಮಡಿಕೇರಿ ಗ್ರಾಮಾಂತರ ಪೊಲೀಸರಿಗೆ ಖಚಿತ ಮಾಹಿತಿ ಲಭಿಸಿತ್ತು. ಈ ಹಿನ್ನೆಲೆಯಲ್ಲಿ ದಾಳಿ ನಡೆಸಿ ಆರೋಪಿಯನ್ನು ಬಂಧಿಸಲಾಗಿದ್ದು, ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಜಿಲ್ಲೆಯ 103 ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷರ ಮೀಸಲಾತಿ ಪ್ರಕ್ರಿಯೆ ಜೂ.12ರಿಂದ ಆರಂಭ



ಮಡಿಕೇರಿ, ಜೂ.6– ಜಿಲ್ಲೆಯ 103 ಗ್ರಾಪಂಗಳ ಎರಡನೇ ಅವಧಿಗೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಮೀಸಲಾತಿ ನಿಗದಿ ಮಾಡಬೇಕಿದ್ದು, ಆ ನಿಟ್ಟಿನಲ್ಲಿ ಇದೇ ಜೂನ್ 12ರಿಂದ ಪ್ರಕ್ರಿಯೆಗಳು ಆರಂಭವಾಗಲಿದೆ. ಆದ್ದರಿಂದ ಆಯಾಯ ತಾಲೂಕಿಗೆ ಸಂಬಂಧಿಸಿದ ಗ್ರಾಪಂ ಸದಸ್ಯರು ಮೀಸಲಾತಿ ನಿಗದಿಪಡಿಸುವ ಸಭೆಗೆ ಆಗಮಿಸುವಂತೆ ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಕೋರಿದ್ದಾರೆ.

ನಗರದ ಗಾಂಧಿ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಜಿಲ್ಲಾಧಿಕಾರಿಗಳು ಕೊಡಗು ಜಿಲ್ಲೆಯ ಐದು ತಾಲೂಕುಗಳ ಎಲ್ಲಾ ಗ್ರಾಪಂಗಳ ಚುನಾಯಿತ ಸದಸ್ಯರ ಸಮ್ಮುಖದಲ್ಲಿ ಗ್ರಾಪಂ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಮೀಸಲಾತಿ ಸ್ಥಾನ ನಿಗದಿಪಡಿಸಲಾಗುತ್ತದೆ ಎಂದರು.

ಆ ದಿಸೆಯಲ್ಲಿ ಜೂ.12 ರಂದು ಬೆಳಗ್ಗೆ 11 ಗಂಟೆಗೆ ವಿರಾಜಪೇಟೆಯ ಸಂತ ಅನ್ನಮ್ಮ ಪದವಿ ಪೂರ್ವ ಕಾಲೇಜು, ಮಧ್ಯಾಹ್ನ 3 ಗಂಟೆಗೆ ಪೊನ್ನಂಪೇಟೆ ತಾಲೂಕಿನ ಗೋಣಿಕೊಪ್ಪ ಪರಿಮಳ ಮಂಗಳ ವಿಹಾರದಲ್ಲಿ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ನಿಗದಿ ಮಾಡುವ ಸಭೆ ನಡೆಯಲಿದೆ.

ಜೂನ್, 13 ರಂದು ಬೆಳಗ್ಗೆ 11 ಗಂಟೆಗೆ ಕುಶಾಲನಗರ ಎಪಿಸಿಎಂಸಿ ಸಭಾಂಗಣ, ಮಧ್ಯಾಹ್ನ 3 ಗಂಟೆಗೆ ಸೋಮವಾರಪೇಟೆಯ ಜಾನಕಿ ಕನ್ವೆನ್ಷನ್ ಹಾಲ್‌ನಲ್ಲಿ ಸಭೆ ನಡೆಯಲಿದೆ. ಜೂ.14 ರಂದು ಬೆಳಗ್ಗೆ 11 ಗಂಟೆಗೆ ನಗರದ ಕೊಡಗು ಜಿಪಂ ಸಭಾಂಗಣ ದಲ್ಲಿ ಗ್ರಾಪಂ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನ ನಿಗದಿ ಮಾಡುವ ಸಭೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ವಿವರಿಸಿದರು.

ರಾಜ್ಯ ಚುನಾವಣಾ ಆಯೋಗವು ಕೊಡಗು ಜಿಲ್ಲೆಯ ಮಡಿಕೇರಿ, ಸೋಮವಾರಪೇಟೆ, ವಿರಾಜಪೇಟೆ, ಕುಶಾಲನಗರ ಮತ್ತು ಪೊನ್ನಂಪೇಟೆ ತಾಲೂಕಿನ ಗ್ರಾಪಂಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆ/ಸ್ಥಾನದ ವರ್ಗವಾರು ಸಂಖ್ಯೆಯನ್ನು ನಿಗದಿ ಮಾಡಿದೆ ಎಂದು ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಮಾಹಿತಿ ನೀಡಿದರು.

ವಿದ್ಯುತ್ ದರ ಏರಿಕೆ ಖಂಡಿಸಿ ಮಡಿಕೇರಿಯಲ್ಲಿ ಬಿಜೆಪಿ ಪ್ರತಿಭಟನೆ

ಗ್ಯಾರಂಟಿ ಜಾರಿಗೂ ಮೀನ–ಮೇಷಕ್ಕೆ ಭಾರೀ ಆಕ್ರೋಶ



ಮಡಿಕೇರಿ, ಜೂ.6– ಉಚಿತ ಗ್ಯಾರಂಟಿಗಳನ್ನು ಮತದಾರರಿಗೆ ನೀಡುವ ಮೂಲಕ ಅಧಿಕಾರಕ್ಕೆ ಬಂದಿರುವ ರಾಜ್ಯ ಕಾಂಗ್ರೆಸ್ ಸರಕಾರ ಇದೀಗ ಉಚಿತ ಗ್ಯಾರಂಟಿಗಳನ್ನು ಜಾರಿ ಮಾಡಲು ಮೀನ ಮೇಷ ಎಣಿಸುತ್ತಿದೆ. ಮಾತ್ರವಲ್ಲದೇ ಏಕಾಏಕಿ ವಿದ್ಯುತ್ ಬಿಲ್ ಮೊತ್ತವನ್ನು ಏರಿಕೆ ಮಾಡಿದೆ ಎಂದು ಆರೋಪಿಸಿ ಜಿಲ್ಲಾ ಬಿಜೆಪಿ ಮಡಿಕೇರಿಯಲ್ಲಿ ಪ್ರತಿಭಟನೆ ನಡೆಸಿತು.

ನಗರದ ಜನರಲ್ ತಿಮ್ಮಯ್ಯ ವೃತ್ತದಲ್ಲಿ ಜಮಾಯಿಸಿದ ಬಿಜೆಪಿ ಪ್ರಮುಖರು ಮತ್ತು ಕಾರ್ಯಕರ್ತರು ರಾಜ್ಯ ಕಾಂಗ್ರೆಸ್ ಸರಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಮೊಳಗಿಸಿದರು. ಎಲ್ಲರಿಗೂ ಉಚಿತ ಎಂದು ಚುನಾವಣಾ ಪೂರ್ವ ಗ್ಯಾರಂಟಿ ಕಾರ್ಡ್‌ಗಳನ್ನು ನೀಡಿದ ಕಾಂಗ್ರೆಸ್ ಇದೀಗ ಯೋಜನೆ ಜಾರಿಗೆ ಷರತ್ತುಗಳನ್ನು ವಿಧಿಸುತ್ತಿದೆ. ಯಾವುದೇ ಷರತ್ತುಗಳಿಲ್ಲದೇ ಈ ಗ್ಯಾರಂಟಿ ಯೋಜನೆಗಳನ್ನು ತಕ್ಷಣವೇ ಜಾರಿಗೆ ತರಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ರಾಬಿನ್ ದೇವಯ್ಯ, ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು 15 ದಿನಗಳಲ್ಲಿ ಸರಕಾರದ ವಿರುದ್ಧ ಬಿಜೆಪಿ ಬೀದಿಗಿಳಿದು ಪ್ರತಿಭಟನೆ ಮಾಡಬೇಕಾದ ಸ್ಥಿತಿ ಬರಲಿದೆ ಎಂದು ನಿರೀಕ್ಷೆ ಮಾಡಿರಲಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರಕಾರ ಹಿಂದೂ ವಿರೋಧಿ ನೀತಿ ಅನುಸರಿಸುತ್ತಿದೆ. ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಕಸಿಯುವ ಪ್ರಯತ್ನ ನಡೆಸುತ್ತಿದೆ ಎಂದು ಆರೋಪಿಸಿದರು. ಉಚಿತ ವಿದ್ಯುತ್ ಸಹಿತ 5 ಗ್ಯಾರಂಟಿಗಳನ್ನು ಜಾರಿ ಮಾಡುವ ಬದಲಿಗೆ ಅದರಿಂದ ನುಣುಚಿಕೊಳ್ಳುತ್ತಿದ್ದಾರೆ ಎಂದು ಟೀಕಿಸಿದರು. ವಿದ್ಯುತ್ ಉಚಿತ ನೀಡುವುದಾಗಿ ಹೇಳಿ ಇದೀಗ 75 ಪೈಸೆ ಏರಿಕೆ ಮಾಡಿ ಜನಸಾಮಾನ್ಯರ ಮೇಲೆ ಬರೆ ಎಳೆದಿದೆ. ಗೋಹತ್ಯೆ ನಿಷೇಧವಿದ್ದರೂ ಕೂಡ ಅದನ್ನು ಹಿಂಪಡೆಯುವ ಮೂಲಕ ಗೋ ಹಂತಕರಿಗೆ ಕಾಂಗ್ರೆಸ್ ಬೆಂಬಲ ನೀಡುತ್ತಿದೆ ಎಂದು ಆರೋಪಿಸಿದರು.

ಜೈಲಿಗೆ ಹೋಗಲು ಸಿದ್ಧ: ಚಿಂತಕ ಚಕ್ರವರ್ತಿ ಸೂಲಿಬೆಲೆ ಅವರ ಹೇಳಿಕೆಯೊಂದನ್ನು ಆಧರಿಸಿ ಅವರನ್ನು ಜೈಲಿಗೆ ಅಟ್ಟುವುದಾಗಿ ಬೆದರಿಕೆ ಹಾಕಲಾಗುತ್ತಿದೆ. ಇದು ವಾಕ್ ಸ್ವಾತಂತ್ರ್ಯದ ಹರಣವಾಗಿದೆ ಎಂದು ರಾಬಿನ್ ದೇವಯ್ಯ ಆರೋಪಿಸಿದರು. ಹಿಂದೂ ಸಂಘಟನೆಗಳ ಹಲವು ಹೋರಾಟಗಳು ಜೈಲಿನಿಂದಲೇ ಆರಂಭವಾಗಿದೆ. ಬಿಜೆಪಿ ಸೇರಿದಂತೆ ಹಿಂದೂ ಸಂಘಟನೆಗಳ ಕಾರ್ಯಕರ್ತರಿಗೆ ಜೈಲಿಗೆ ಹೋಗಲು ಯಾವುದೇ ಹಿಂಜರಿಕೆ ಇಲ್ಲ, ಅದಕ್ಕೂ ಸಿದ್ಧ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಅಭಿವ್ಯಕ್ತಿ ಸ್ವಾತಂತ್ರ್ಯದ ದಮನ ನೀತಿಯ ವಿರುದ್ಧ ಬೃಹತ್ ಪ್ರತಿಭಟನೆ ನಡೆಸುವುದಾಗಿ ಹೇಳಿದರು. ತಕ್ಷಣವೇ ಯಾವುದೇ ಷರತ್ತಿಲ್ಲದೇ, ಎಲ್ಲಾ ಗ್ಯಾರಂಟಿ ಗಳನ್ನು ಜಾರಿಗೆ ತರಬೇಕೆಂದು ರಾಬಿನ್ ದೇವಯ್ಯ ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ನಾಪಂಡ ರವಿ ಕಾಳಪ್ಪ ಅನಿತಾ ಪೂವಯ್ಯ, ಸವಿತಾ ರಾಕೇಶ್, ಮಹೇಶ್ ಜೈನಿ, ಮನು ಮಂಜುನಾಥ್, ಉಮೇಶ್ ಸುಬ್ರಮಣಿ, ಕವನ್ ಕಾರ್ಯಪ್ಪ, ಅರುಣ್ ಶೆಟ್ಟಿ, ಬಿಜೆಪಿ ಪ್ರಮುಖರಾದ ಬೆಪ್ಪುರನ ಮೇದಪ್ಪ, ಅರುಣ್ ಕುಮಾರ್, ಜಗದೀಶ್ ಸೇರಿದಂತೆ ಮತ್ತಿತರರು ಹಾಜರಿದ್ದರು.

ಇಂದು ವಿದ್ಯುತ್ ವ್ಯತ್ಯಯ

ಮಡಿಕೇರಿ, ಜೂ.6– ವಿದ್ಯುತ್ ವಿತರಣಾ ಕೇಂದ್ರ ಮತ್ತು ಮಾರ್ಗದಲ್ಲಿ ತುರ್ತು ನಿರ್ವಹಣೆ ಮತ್ತು ದುರಸ್ತಿ ಕಾರ್ಯ ನಿರ್ವಹಿಸಬೇಕಿರುವುದರಿಂದ ಜೂ.7 ರಂದು ಬೆಳಗ್ಗೆ 9.30 ರಿಂದ ಸಂಜೆ 4 ಗಂಟೆಯವರೆಗೆ ಕುಶಾಲನಗರ, ಕೂಡಿಗೆ, ನಂಜರಾಯಪಟ್ಟಣ, ಸುಂಟಿಕೊಪ್ಪ ಚೆಟ್ಟಳ್ಳಿ, ಸೋಮವಾರಪೇಟೆ, ಶಾಂತಳ್ಳಿ, ಕುಮಾರಹಳ್ಳಿ, ಗೌಡಳ್ಳಿ, ಹೆಗ್ಗಡಮನೆ ಅಬ್ಬೂರುಕಟ್ಟೆ ಐಗೂರು, ಹೊಸಗುತ್ತಿ, ಗಣಗೂರು, ಗೋಣಿಮರೂರು, ಆಲೂರು ಸಿದ್ದಾಪುರ, ಮಾಲಂಬಿ, ಸಿದ್ದಲಿಂಗಪುರ, ಮಡಿಕೇರಿ ಪಟ್ಟಣ, ಬೋಯಿಕೇರಿ ಗಾಳಿಬೀಡು, ಕುಂಡಮೇಸ್ತ್ರಿ, ಮೇಕೇರಿ, ಕಡಗದಾಳು, ಸಂಪಾಜೆ, ಭಾಗಮಂಡಲ ಹಾಗೂ ಸುತ್ತಮುತ್ತಲ ವ್ಯಾಪ್ತಿಯ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಗ್ಯಾರಂಟಿಗಳನ್ನು ಜಾರಿಗೊಳಿಸಿ ನುಡಿದಂತೆ ನಡೆದಿದ್ದೇವೆ

ಪಶು ಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್



ಗುಂಡ್ಲುಪೇಟೆ, ಜೂ.6– ಚುನಾವಣೆ ವೇಳೆ ಕಾಂಗ್ರೆಸ್ ಪಕ್ಷ ನೀಡಿದ್ದ ಭರವಸೆಯಂತೆ ಐದು ಗ್ಯಾರಂಟಿಗಳನ್ನು ಜಾರಿಗೊಳಿಸಿ ನುಡಿದಂತೆ ನಡೆದಿದ್ದೇವೆ ಎಂದು ಪಶು ಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದ ಎದುರಿನ ಹೆಚ್‌ಎಂಜಿ ಗ್ರೌಂಡ್‌ನಲ್ಲಿ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಮತದಾರರ ಕೃತಜ್ಞತಾ ಸಮಾರಂಭದಲ್ಲಿ ಮಾತನಾಡಿದ ಅವರು, ಮಹಿಳೆಯರಿಗೆ ಜೂ.11ರಿಂದ ಸಾರಿಗೆ ಬಸ್‌ಗಳಲ್ಲಿ ಉಚಿತ ಪ್ರಯಾಣ, ಜು.1ರಿಂದ ಬಿಪಿಎಲ್ ಕಾರ್ಡ್ ಹೊಂದಿರುವ ಕುಟುಂಬದ ಸದಸ್ಯರಿಗೆ ಹತ್ತು ಕೆಜಿ ಅಕ್ಕಿ, 200 ಯೂನಿಟ್ ಉಚಿತ ವಿದ್ಯುತ್, ಆ.15ರಿಂದ ಮಹಿಳೆಯರಿಗೆ ಮಾಸಿಕ 2 ಸಾವಿರ ರೂ. ಸೇರಿದಂತೆ ಐದೂ ಗ್ಯಾರಂಟಿಗಳನ್ನು ನಿಶ್ಚಿತವಾಗಿ ಜಾರಿಗೆ ತರಲಾಗುವುದು ಎಂದರು.

ಮಲ್ಲಿಕಾರ್ಜುನ ಖರ್ಗೆ ಎಐಸಿಸಿ ಅಧ್ಯಕ್ಷರಾದ ಬಳಿಕ ರಾಜ್ಯದಲ್ಲಿ ಕಾಂಗ್ರೆಸ್ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದೆ. ಕಾಂಗ್ರೆಸ್ ಪಕ್ಷವನ್ನು ಸೋಲಿಸಬೇಕು ಎಂದು ಕೇಂದ್ರ ಸಚಿವರು, ಬಿಜೆಪಿ ಮುಖಂಡರು ರಾಜ್ಯದಲ್ಲಿ ಪ್ರಚಾರ ನಡೆಸಿದರೂ ಸಾಧ್ಯವಾಗಲಿಲ್ಲ. ಸಿದ್ದರಾಮಯ್ಯ ಮುಂದೆ ಪ್ರಧಾನಿ ಮೋದಿ ಮತ್ತು ಬಿಜೆಪಿಯವರ ಯಾವ ಆಟವೂ ನಡೆಯಲಿಲ್ಲ ಎಂದು ವ್ಯಂಗ್ಯವಾಡಿದರು.

ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಅಲ್ಪಸಂಖ್ಯಾತ ಮತ್ತು ಹಿಂದುಳಿದ ಸಮುದಾಯಗಳು ಕಾಂಗ್ರೆಸ್ ಪಕ್ಷಕ್ಕೆ ಬೆನ್ನೆಲುಬಾಗಿ ನಿಂತಿದ್ದು ಪಕ್ಷದ ಗೆಲುವಿಗೆ ವರದಾನವಾಯಿತು. ಗಣೇಶ್ ಪ್ರಸಾದ್ ತಂದೆ ಅಭಿವೃದ್ಧಿ ಕಾರ್ಯಗಳನ್ನು ಮುಂದುವರೆಸುವ ಮೂಲಕ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲಿದ್ದಾರೆ. ಪ್ರಧಾನಿ ಮೋದಿ ಪ್ರತಿಯೊಬ್ಬರ ಜನಧನ್ ಖಾತೆಗಳಿಗೆ 15 ಲಕ್ಷ ಹಾಕಿದ ನಂತರ ಕಾಂಗ್ರೆಸ್ ಗ್ಯಾರಂಟಿಗಳ ಬಗ್ಗೆ ಮಾತನಾಡಲಿ. ಗಣೇಶ್ ಪ್ರಸಾದ್ ಅವರು ಮಹದೇವ ಪ್ರಸಾದ್ ಅವರಿಗಿಂತ ಹೆಚ್ಚಿನ ಮತಗಳ ಅಂತರದಿಂದ ಜಯಶಾಲಿಯಾಗುವ ಮೂಲಕ ತಂದೆಗೆ ತಕ್ಕ ಮಗ ಎಂದು ನಿರೂಪಿಸಿದ್ದಾರೆ ಎಂದರು.

ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಮಾತನಾಡಿ, ಬಿಜೆಪಿಯವರು ಮಾಡುತ್ತಿದ್ದ ವೈಯುಕ್ತಿಕ ಹಾಗೂ ಯಾವುದೇ ಟೀಕೆಗಳಿಗೆ ನಾನು ಉತ್ತರಿಸದೆ ಸುಮ್ಮನಿದ್ದೆ. ಜನತೆಯೇ ತಕ್ಕ ಉತ್ತರ ನೀಡಿದ್ದಾರೆ. ಭ್ರಷ್ಟಾಚಾರ ರಹಿತ ಆಡಳಿತ ನಡೆಸುವ ಮೂಲಕ ಮಾದರಿ ಕ್ಷೇತ್ರ ಮಾಡಲಾಗುವುದು ಎಂದರು.

ಮಾಜಿ ಸಚಿವೆ ಡಾ.ಗೀತಾ ಮಹದೇವ ಪ್ರಸಾದ್ ಮಾತನಾಡಿದರು. ಈ ವೇಳೆ ಶಾಸಕರಾದ ಅನಿಲ್ ಚಿಕ್ಕಮಾದು, ದರ್ಶನ್ ಧ್ರುವನಾರಾಯಣ್, ರವಿಕುಮಾರ್, ಮಾಜಿ ಶಾಸಕ ಡಾ.ಯತೀಂದ್ರ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಮರಿಸ್ವಾಮಿ, ಮಾಜಿ ಸಂಸದರಾದ ಎ.ಸಿದ್ದರಾಜು, ಕಾಗಲವಾಡಿ ಶಿವಣ್ಣ, ಕಾಡಾ ಮಾಜಿ ಅಧ್ಯಕ್ಷ ಎಚ್.ಎಸ್.ನಂಜಪ್ಪ, ಚಾಮುಲ್ ನಿರ್ದೇಶಕ ಹೆಚ್.ಎಸ್. ನಂಜುಂಡಪ್ರಸಾದ್, ನಾಜಿಮುದ್ದೀನ್, ಮುನಿರಾಜು, ಎಚ್.ಎನ್.ಬಸವರಾಜು, ಮಹೇಶ್, ನವೀನ್ ಇನ್ನಿತರರಿದ್ದರು.

ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಹಸ್ರಾರು ಮಂದಿಗೆ ಹೋಳಿಗೆ ಊಟ ಊಟದ ವ್ಯವಸ್ಥೆ ಮಾಡಲಾಗಿತ್ತು.

ಈ ಬಾರಿಯೂ ಹೊರಗಿನವರೇ ಜಿಲ್ಲಾ ಉಸ್ತುವಾರಿ

▸ ರಾಜಕೀಯ ವಲಯದಲ್ಲಿ ವ್ಯಾಪಕ ಚರ್ಚೆ ▸ ನಾಲ್ವರ ಹೆಸರು ಮುನ್ನಲೆಗೆ




ಹೆಚ್.ಸಿ. ಮಹದೇವಪ್ಪ



ಕೆ. ವೆಂಕಟೇಶ್



ದಿನೇಶ್ ಗುಂಡೂರಾವ್



ಕೃಷ್ಣ ಭೈರೇಗೌಡ

● ಸಿದ್ದಲಿಂಗಸ್ವಾಮಿ

ಚಾಮರಾಜನಗರ, ಜೂ.6– ಗಡಿ ಜಿಲ್ಲೆ ಚಾಮರಾಜನಗರಕ್ಕೆ ಸಚಿವ ಸ್ಥಾನ ದೊರೆಯದ ಹಿನ್ನೆಲೆಯಲ್ಲಿ ಈ ಬಾರಿಯೂ ಹೊರಗಿನವರೇ ಜಿಲ್ಲಾ ಉಸ್ತುವಾರಿ ಸಚಿವರಾಗುವುದು ಬಹುತೇಕ ಖಚಿತವಾಗಿದ್ದು, ಯಾರಿಗೆ ಸಚಿವ ಸ್ಥಾನ ದೊರೆಯಲಿದೆ ಎಂಬ ವ್ಯಾಪಕ ಚರ್ಚೆ ಜಿಲ್ಲೆಯ ರಾಜಕೀಯ ವಲಯದಲ್ಲಿ ನಡೆಯುತ್ತಿದೆ.

ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಮೂವರು ಶಾಸಕರಾಗಿ ಆಯ್ಕೆಯಾಗಿದ್ದಾರೆ. ಈ ಪೈಕಿ ಹಿರಿಯರಾದ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ದೊರೆಯಲಿದ್ದು, ಅವರೇ ಜಿಲ್ಲಾ ಉಸ್ತುವಾರಿಯಾಗಲಿದ್ದಾರೆ ಎಂದು ಅಂದಾಜಿಸಲಾಗಿತ್ತು. ಆದರೆ ಬದಲಾದ ರಾಜಕೀಯ ಸನ್ನಿವೇಶದಲ್ಲಿ ಶಾಸಕ ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ಕೈತಪ್ಪಿತು. ಉಳಿದಂತೆ ಕೊಳ್ಳೇಗಾಲ ಶಾಸಕ ಎ.ಆರ್. ಕೃಷ್ಣಮೂರ್ತಿ, ಗುಂಡ್ಲುಪೇಟೆ ಶಾಸಕ ಎಚ್.ಎಂ. ಗಣೇಶಪ್ರಸಾದ್‌ಗೂ ಸಚಿವ ಸ್ಥಾನ ದೊರೆಯದ ಹಿನ್ನೆಲೆಯಲ್ಲಿ ಹೊರಗಿನವರಿಗೇ ಈ ಬಾರಿಯೂ ಉಸ್ತುವಾರಿ ನೀಡುವುದು ಖಚಿತವಾಗಿದೆ.

2013ರ ಸಿದ್ದರಾಮಯ್ಯ ಸರ್ಕಾರದಲ್ಲಿ ಜಿಲ್ಲೆಯವರೇ ಆದ ಹೆಚ್.ಎಸ್. ಮಹದೇವಪ್ರಸಾದ್ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದರು. ಅವರ ಹಠಾತ್ ನಿಧನದ ಬಳಿಕ ಈಗಿನ ಸ್ಪೀಕರ್ ಯು.ಟಿ.ಖಾದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದರು. ಉಪ ಚುನಾವಣೆ ಬಳಿಕ ಎಂ.ಸಿ.ಮೋಹನಕುಮಾರಿ ಉಸ್ತುವಾರಿ ಹೊಣೆ ಹೊತ್ತಿದ್ದರು.

2018ರ ಕಾಂಗ್ರೆಸ್–ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಸಿ.ಪುಟ್ಟರಂಗಶೆಟ್ಟಿ ಜಿಲ್ಲೆಯ ಉಸ್ತುವಾರಿ ಸಚಿವರಾಗಿದ್ದರು. ನಂತರದ ಬಿಜೆಪಿ ಸರ್ಕಾರದಲ್ಲಿ ಎಸ್. ಸುರೇಶ್‌ಕುಮಾರ್ ಮತ್ತು ವಿ.ಸೋಮಣ್ಣ ಜಿಲ್ಲೆಯ ಹೊಣೆ ಹೊತ್ತಿದ್ದರು.

ಪ್ರಸ್ತುತ ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದ್ದು, ಒಟ್ಟು 32 ಮಂದಿ ನೂತನ ಸಚಿವರಾಗಿದ್ದಾರೆ.



ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದು, ಸರ್ಕಾರ ಯಾರಿಗೇ ಸಚಿವ ಸ್ಥಾನ ನೀಡಿದರೂ ಜಿಲ್ಲಾ ಕಾಂಗ್ರೆಸ್‌ನಿಂದ ಸಂಪೂರ್ಣ ಬೆಂಬಲ ನೀಡುವ ಜೊತೆಗೆ ಅವರನ್ನು ಹೃತ್ಪೂರ್ವಕವಾಗಿ ಸ್ವಾಗತಿಸುತ್ತೇವೆ.
– ಪಿ.ಮರಿಸ್ವಾಮಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ.

ಈ ಪೈಕಿ ಯಾರಿಗೆ ಜಿಲ್ಲಾ ಉಸ್ತುವಾರಿ ದೊರೆಯಲಿದೆ ಎಂಬ ಚರ್ಚೆ ನಡೆಯುತ್ತಿದ್ದು, ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಪಶು ಸಂಗೋಪನೆ ಹಾಗೂ ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂ ರಾವ್,

ಇಲ್ಲಿವರೆಗಿನ ಜಿಲ್ಲಾ ಉಸ್ತುವಾರಿ ಸಚಿವರು

- ಹೆಚ್.ನಾಗಪ್ಪ
- ಜಿ.ರಾಜೂಗೌಡ
- ಎಂ.ಮಹದೇವ್
- ಡಿ.ಟಿ.ಜಯಕುಮಾರ್
- ಎಚ್.ಎಸ್.ಮಹದೇವಪ್ರಸಾದ್
- ಹೆಚ್.ಹಾಲಪ್ಪ
- ಸಿ.ಹೆಚ್.ವಿಜಯಶಂಕರ್
- ಪಿ.ಎಂ.ನರೇಂದ್ರಸ್ವಾಮಿ
- ಎಂ.ಪಿ.ರೇಣುಕಾಚಾರ್ಯ
- ವಿ.ಸೋಮಣ್ಣ
- ಹೆಚ್.ಎಸ್.ಮಹದೇವಪ್ರಸಾದ್
- ಯು.ಟಿ.ಖಾದರ್
- ಡಾ.ಗೀತಾ ಮಹದೇವಪ್ರಸಾದ್
- ಸಿ.ಪುಟ್ಟರಂಗಶೆಟ್ಟಿ
- ಎಸ್.ಸುರೇಶ್‌ಕುಮಾರ್
- ವಿ.ಸೋಮಣ್ಣ

ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರ ಹೆಸರು ಮುನ್ನಲೆಗೆ ಬಂದಿದೆ.


ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪ್ರತಿನಿಧಿಸುವ ತಿ.ನರಸೀಪುರ ಕ್ಷೇತ್ರ ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಬರುತ್ತದೆ. ಮುಂಬರುವ ಲೋಕಸಭಾ ಚುನಾವಣೆ ಗಮನದಲ್ಲಿಟ್ಟುಕೊಂಡು ಅವರನ್ನೇ ಉಸ್ತುವಾರಿಯನ್ನಾಗಿ ಮಾಡಲಾಗುತ್ತದೆ ಎಂದು ಕೆಲವು ಕಾಂಗ್ರೆಸ್ ಮುಖಂಡರು ಹೇಳುತ್ತಿದ್ದಾರೆ.

ಮೈಸೂರು ಭಾಗದಲ್ಲಿ ಇಬ್ಬರು ಸಚಿವರಾಗಿರುವುದರಿಂದ ಡಾ.ಹೆಚ್.ಸಿ. ಮಹದೇವಪ್ಪ ಅವರಿಗೆ ಮೈಸೂರು ಜಿಲ್ಲಾ ಉಸ್ತುವಾರಿ ಸ್ಥಾನ ಸಿಗುವುದು ಬಹುತೇಕ ಖಚಿತವಾಗಿದ್ದು, ಮತ್ತೋರ್ವ ಸಚಿವ ಕೆ.ವೆಂಕಟೇಶ್‌ಗೆ ಚಾಮರಾಜನಗರ ಜಿಲ್ಲೆ ಉಸ್ತುವಾರಿ ಸ್ಥಾನ ನೀಡಲಾಗುತ್ತದೆ ಎಂಬ ಚರ್ಚೆಗಳು ನಡೆಯುತ್ತಿವೆ.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಿಲ್ಲೆಯಲ್ಲಿ ನಡೆದ ಆಕ್ಸಿಜನ್ ದುರಂತದ ಮರು ತನಿಖೆಗೆ ಸರ್ಕಾರ ಮುಂದಾಗಿರುವುದರಿಂದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಜಿಲ್ಲಾ ಉಸ್ತುವಾರಿ ನೀಡಲಾಗುತ್ತದೆ ಎನ್ನಲಾಗುತ್ತಿದೆ. ಆದರೆ, ಕಳೆದೆರಡು ದಿನಗಳಿಂದ ಸಾಮಾಜಿಕ ಜಾಲತಾಣಗಳಲ್ಲಿ ಕಂದಾಯ ಸಚಿವ ಕೃಷ್ಣ ಭೈರೇಗೌಡರಿಗೆ ಜಿಲ್ಲಾ ಉಸ್ತುವಾರಿ ನೀಡಲಾಗುತ್ತದೆ ಎಂಬ ವಿಷಯ ಹರಿದಾಡುತ್ತಿದ್ದು, ಈ ನಾಲ್ವರ ಪೈಕಿ ಯಾರಿಗೆ ಉಸ್ತುವಾರಿ ಸಿಗಲಿದೆ ಎಂದು ಕಾದು ನೋಡಬೇಕಿದೆ.

ದೂರದ ಜಿಲ್ಲೆಯವರಿಗೂ ಉಸ್ತುವಾರಿ ಹೊಣೆ: 2017ರಲ್ಲಿ ಮಹದೇವ ಪ್ರಸಾದ್ ನಿಧನರಾದಾಗ ಸಿದ್ದರಾಮಯ್ಯ ಅವರು ದಕ್ಷಿಣ ಕನ್ನಡ ಜಿಲ್ಲೆಯ ಯು.ಟಿ. ಖಾದರ್ ಅವರಿಗೆ ಜಿಲ್ಲೆಯ ಉಸ್ತುವಾರಿ ನೀಡಿದ್ದರು. ಆಗಲೂ ಡಾ.ಹೆಚ್.ಸಿ. ಮಹದೇವಪ್ಪ ಸಂಪುಟದಲ್ಲಿದ್ದರು. ಲೋಕೋಪಯೋಗಿ ಇಲಾಖೆಯ ಜವಾಬ್ದಾರಿ ಹೊತ್ತಿದ್ದ ಅವರು, ಮೈಸೂರಿನ ಉಸ್ತುವಾರಿ ಸಚಿವರಾಗಿದ್ದರು. ಹಾಗಿದ್ದರೂ ಅವರಿಗೆ ಚಾಮರಾಜನಗರದ ಹೊಣೆ ನೀಡಿರಲಿಲ್ಲ. ಹಾಗಾಗಿ, ಈ ವಿಚಾರದಲ್ಲಿ ಏನೂ ಹೇಳಲು ಸಾಧ್ಯವಿಲ್ಲ. ಮುಖ್ಯಮಂತ್ರಿಯವರ ತೀರ್ಮಾನವೇ ಅಂತಿಮವಾಗಿರುತ್ತದೆ ಎಂದು ಹೇಳುತ್ತಾರೆ ಮುಖಂಡರು.

ಆಕ್ಸಿಜನ್ ದುರಂತ: ಸಂತ್ರಸ್ತರೊಂದಿಗೆ ಎಸ್‌ಡಿಪಿಐ ಸಮಾಲೋಚನಾ ಸಭೆ



ಚಾಮರಾಜನಗರ, ಜೂ.6– ಆಕ್ಸಿಜನ್ ದುರಂತದಲ್ಲಿ ಮೃತಪಟ್ಟ ಕುಟುಂಬದ ಸದಸ್ಯರೊಂದಿಗೆ ನಗರದ ಪ್ರವಾಸಿ ಮಂದಿರದಲ್ಲಿ ಎಸ್‌ಡಿಪಿಐ ಜಿಲ್ಲಾ ಘಟಕ ಸಮಾಲೋಚನಾ ಸಭೆ ನಡೆಸಿತು.

ಘಟನೆ ನಡೆದು 2 ವರ್ಷ ಕಳೆಯಿತು. ನಮಗೆ ಸರ್ಕಾರದಿಂದ ಯಾವುದೇ ಸೌಲಭ್ಯ ದೊರೆತಿಲ್ಲ. ಜೀವನ ನಡೆಸುವುದೇ ಕಷ್ಟವಾಗಿದೆ. ಮಕ್ಕಳ ಶಾಲಾ ಶುಲ್ಕ ಕಟ್ಟಲಾಗುತ್ತಿಲ್ಲ ಎಂದು ಮೃತರ ಸಂಬಂಧಿಕರು ತಾವು ಅನುಭವಿಸುತ್ತಿರುವ ಕಷ್ಟ ಹೇಳಿಕೊಂಡು ಕಣ್ಣೀರಾದರು.

ನಾಗವಳ್ಳಿ ಗ್ರಾಮದ ಜಯಮ್ಮ ಮಾತನಾಡಿ, ನನಗೆ ಒಬ್ಬನೇ ಮಗ ಆತ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟಿದ್ದಾನೆ. ವಯಸ್ಸಾಗಿರುವ ನಾನು ಮತ್ತು ನನ್ನ ಪತಿ ಜೀವನ ನಡೆಸಲು ಕಷ್ಟವಾಗಿದೆ. ನಮಗೆ ಸರ್ಕಾರದಿಂದ ಈವರೆಗೆ ಯಾವುದೇ ಸೌಲಭ್ಯ ದೊರಕಿಲ್ಲ. ನನ್ನ ಮಗನ ಸಾವಿಗೆ ಕಾರಣರಾದವರಿಗೆ ಯಾವುದೇ ಶಿಕ್ಷೆಯಾಗಿಲ್ಲ. ನಮಗೆ ದಿಕ್ಕೆ ತೋಚದಂತಾಗಿದೆ ಎಂದು ಅಳಲು ತೋಡಿಕೊಂಡರು.

ಕೊಳ್ಳೇಗಾಲ ಸಮೀಪದ ಮುಂಡಿಗುಂಡದ ಸಿದ್ದರಾಜಮ್ಮ ಮಾತನಾಡಿ, ಘಟನೆಯಲ್ಲಿ ನನ್ನ ಪತಿ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ್ದೇನೆ. ಇಬ್ಬರು ಚಿಕ್ಕ ಮಕ್ಕಳಿದ್ದು, ಅವರಿಗೆ ಶಿಕ್ಷಣ ಕೊಡಿಸಲಾಗುತ್ತಿಲ್ಲ. ಸರ್ಕಾರದಿಂದ ಯಾವುದೇ ಸೌಲಭ್ಯ ಈವರೆಗೂ ಸಿಕ್ಕಿಲ್ಲ. ಈ ಬಗ್ಗೆ ಅಧಿಕಾರಿಗಳನ್ನು ಕೇಳಿದರೆ ಹಾರಿಕೆ ಉತ್ತರ ನೀಡುತ್ತಿದ್ದಾರೆ ಎಂದು ಕಣ್ಣೀರಿಟ್ಟರು.

ಯಳಂದೂರಿನ ಕೆಸ್ತೂರು ಗ್ರಾಮದ ನಾಗರತ್ನ ಮಾತನಾಡಿ, ನಮಗೆಲ್ಲಾ ಸರ್ಕಾರಿ ನೌಕರಿ ನೀಡುತ್ತೇವೆ ಎಂದು ಹಿಂದಿನ ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ಭರವಸೆ ನೀಡಿದ್ದರು. ಆದರೆ, ಇದು ಸಾಧ್ಯವಾಗಿಲ್ಲ. ಘಟನೆ ನಡೆದು 2 ವರ್ಷವಾಯಿತು. ಆದರೂ ಯಾವುದೇ ಸೌಲಭ್ಯ ಸಿಕ್ಕಿಲ್ಲ. ಇನ್ನೂ ಎಷ್ಟು ದಿನ ಕಾಯಬೇಕು ಎಂದು ತಮ್ಮ ಅಸಹಾಯಕತೆ ವ್ಯಕ್ತಪಡಿಸಿದರು.

ಚಾ.ನಗರದ ರಾಘವೇಂದ್ರ ಮಾತನಾಡಿ, ಆಕ್ಸಿಜನ್ ದುರಂತದಲ್ಲಿ ಮೃತರಾದವರ ಪೈಕಿ ಪಾಸಿಟಿವ್ ಇರುವವರಿಗೆ ಪರಿಹಾರ ಬಂದಿಲ್ಲ. ನೆಗೆಟಿವ್ ವರದಿ ಇರುವವರಿಗೆ ಯಾವುದೇ ಪರಿಹಾರ ದೊರಕಿಲ್ಲ. ಈ ಬಗ್ಗೆ ವಿಚಾರಿಸಿದರೆ ಪ್ರಯೋಜನವಾಗಿಲ್ಲ. ಸಂತ್ರಸ್ತರ ಮಕ್ಕಳಿಗೆ ತಿಂಗಳಿಗೆ 2 ಸಾವಿರ ರೂ. ನೀಡುವುದಾಗಿ ಹೇಳಿದ್ದರು. ಅದು ಕೂಡ ನಮ್ಮ ಕೈ ತಲುಪಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸಮಾಲೋಚನಾ ಸಭೆಯಲ್ಲಿ ಸಂತ್ರಸ್ತರಾದ ಕೆರೆಹಳ್ಳಿಯ ರಾಣಿ, ಯರಿಯೂರಿನ ತೇನ್‌ಮೋಳಿ, ರಮೇಶ್ ಬಾಬು, ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಅಬ್ರಾರ್ ಅಹಮ್ಮದ್, ನಗರಸಭೆ ಸದಸ್ಯ ಮಹೇಶ್, ಖಲೀಲ್ ಉಲ್ಲಾ, ಮುಖಂಡರಾದ ಸೈಯದ್ ಆರೀಫ್, ಇಸ್ರಾರ್, ಮಹಮ್ಮದ್ ಅಮೀಕ್, ನಯಾಜ್ ಇತರರಿದ್ದರು.

ಸಂತ್ರಸ್ತರಿಗೆ ಸರ್ಕಾರಿ ನೌಕರಿಗೆ ಆಗ್ರಹ

ಚಾಮರಾಜನಗರ: ಆಕ್ಸಿಜನ್ ದುರಂತದಲ್ಲಿ ಮೃತಪಟ್ಟವರ ಕುಟುಂಬದ ಓರ್ವ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡಬೇಕು. ಜೊತೆಗೆ 50 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಎಸ್‌ಡಿಪಿಐ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ಆಗ್ರಹಿಸಿದರು. ಸಭೆಯಲ್ಲಿ ಮಾತನಾಡಿದ ಅವರು, ದುರಂತದ ಬಗ್ಗೆ ಮತ್ತೊಮ್ಮೆ ತನಿಖೆ ಬೇಕಿಲ್ಲ. ನ್ಯಾಯ ಮೂರ್ತಿ ವೇಣುಗೋಪಾಲಗೌಡ ನೇತೃತ್ವದ ತನಿಖಾ ತಂಡ ನೀಡಿರುವ ವರದಿ ಆಧರಿಸಿ ಕ್ರಮ ಕೈಗೊಳ್ಳಬೇಕು. ಘಟನೆಗೆ ಕಾರಣರಾದವರಿಗೆ ಶಿಕ್ಷೆವಿಧಿಸಬೇಕು ಎಂದು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಸರ್ಕಾರಿ ನೌಕರಿ ನೀಡುವುದಾಗಿ ಹೇಳಿದ್ದರು. ಅದರಂತೆ ನಡೆದುಕೊಳ್ಳಬೇಕು ಎಂದು ಆಗ್ರಹಿಸಿದರು. ಶೀಘ್ರದಲ್ಲೇ ಸಂತ್ರಸ್ತರ ಜೊತೆಗೂಡಿ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಗುವುದು. ರಾಹುಲ್ ಗಾಂಧಿ ಅವರಿಗೆ ಪತ್ರ ಬರೆಯಲಾಗುವುದು ಎಂದರು.

ಮೈಸೂರು ಮಿತ್ರ

ಸಕಾರಣವಿಲ್ಲದೆ ನೌಕರರನ್ನು ಕೆಲಸದಿಂದ ವಜಾ: ಆರೋಪ

ಮೈಸೂರು,ಜೂ.6(ಪಿಎಂ)– ಅರಣ್ಯ ಇಲಾಖೆಯ ಮೈಸೂರು ಪ್ರಾದೇಶಿಕ ವಿಭಾಗದಲ್ಲಿ ದಿನಗೂಲಿ ನೌಕರರಾಗಿ ಕೆಲಸ ಮಾಡುತ್ತಿದ್ದ ದಲಿತ ಮತ್ತು ಹಿಂದುಳಿದ ವರ್ಗಕ್ಕೆ ಸೇರಿದ ಹಲವು ನೌಕರರನ್ನು ಸಕಾರಣವಿಲ್ಲದೇ ಕೆಲಸದಿಂದ ತೆಗೆದು ಹಾಕಲಾಗಿದೆ ಎಂದು ದಲಿತ ಸಂಘರ್ಷ ಸಮಿತಿ ಆರೋಪಿಸಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ದಲಿತ ಸಂಘರ್ಷ ಸಮಿತಿ ಸಂಚಾಲಕ ಚೋರನಹಳ್ಳಿ ಶಿವಣ್ಣ, ದಿನಗೂಲಿ ನೌಕರರಾದ ಪರಿಶಿಷ್ಟ ಜಾತಿಗೆ ಸೇರಿದ ಬಸವರಾಜು, ನಾಗರಾಜು, ಸಣ್ಣಸ್ವಾಮಿ, ಕುರುಬ ಸಮುದಾಯಕ್ಕೆ ಸೇರಿದ ಕೆ.ಮಹದೇವಸ್ವಾಮಿ, ನಿಂಗರಾಜು ಮತ್ತು ಮಹದೇವಸ್ವಾಮಿ ಅವರನ್ನು ಸಕಾರಣವಿಲ್ಲದೇ ಏಕಾಏಕಿ ಕೆಲಸದಿಂದ ತೆಗೆಯಲಾಗಿದೆ ಎಂದು ದೂರಿದರು. ಪಿಸಿಪಿ ದಿನಗೂಲಿ ನೌಕರರನ್ನು ಇಲಾಖಾಧಿಕಾರಿಗಳು ತಮ್ಮ ಅನುಕೂಲಕ್ಕೆ ತಕ್ಕಂತೆ ಬಳಸಿಕೊಳ್ಳುತ್ತಿದ್ದಾರೆ. ಸರ್ಕಾರವು ಪ್ರತಿವರ್ಷ ನೀಡುವ ಬ್ಯಾಟರಿ, ಶೂ, ಬ್ಯಾಗ್, ಟೋಪಿ ಮತ್ತು ಸಮವಸ್ತ್ರ ಇತ್ಯಾದಿ ಮೂಲಸೌಕರ್ಯದ ಸಾಮಗ್ರಿಗಳನ್ನು ಕೊಡದೇ ಅಧಿಕಾರಿಗಳು ದಿನಗೂಲಿ ನೌಕರರನ್ನು ವಂಚಿಸುತ್ತಿದ್ದಾರೆ. ಕೆಲಸದಿಂದ ತೆಗೆದ ನೌಕರರನ್ನು ವಾರದೊಳಗೆ ಮರು ನೇಮಕ ಮಾಡಿಕೊಳ್ಳಬೇಕು. ಇಲ್ಲವಾದರೆ ತೀವ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಸಂಘಟನೆ ಮುಖಂಡರಾದ ಶಿವಮೂರ್ತಿ, ಕಿರಂಗೂರು ಸ್ವಾಮಿ ಮತ್ತಿತರರು ಗೋಷ್ಠಿಯಲ್ಲಿದ್ದರು.

ಒಂದನೇ ಪುಟದಿಂದ

ಯಜಮಾನಿಯೇ 'ಗೃಹಲಕ್ಷ್ಮಿ'

ಮೇ 5ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ನೀಡಿದ ತಾತ್ವಿಕ ಅನುಮೋದನೆ ಮೇರೆಗೆ, ಕರ್ನಾಟಕ ರಾಜ್ಯದ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2 ಸಾವಿರ ರೂ. ನೀಡುವ "ಗೃಹಲಕ್ಷ್ಮಿ ಯೋಜನೆ"ಯನ್ನು ಜಾರಿಗೆ ತರಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿ, ವಿವರವಾದ ರೂಪುರೇಷೆ ಹಾಗೂ ಯೋಜನೆಯ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದೆಂದು ತಿಳಿಸಲಾಗಿತ್ತು. ಅದರಂತೆ ಇಂದು ಮಾರ್ಗಸೂಚಿ ಒಳಗೊಂಡ ಆದೇಶವನ್ನು ಸರ್ಕಾರ ಪ್ರಕಟಿಸಿದೆ.

ಜೆಡಿಎಸ್ ಎನ್‌ಡಿಎ ಭಾಗ

ಅವರು ದೇವೇಗೌಡರನ್ನು ಸಂಪರ್ಕಿಸಿ ಎರಡೂ ಪಕ್ಷಗಳಿಗೆ ಆಗಿರುವ ಸೋಲಿನ ಬಗ್ಗೆ ಸಹಾನುಭೂತಿ ವ್ಯಕ್ತಪಡಿಸಿದ್ದರು. ಆ ನಂತರ ರಾಜ್ಯ ಹಾಗೂ ರಾಷ್ಟ್ರೀಯ ಕಾರ್ಯಕಾರಿಣಿ ಸಭೆ ನಡೆಸಿದ ಜೆಡಿಎಸ್, ಬದಲಾಗುವ ರಾಜಕೀಯ ಸನ್ನಿವೇಶದಲ್ಲಿ ಪಕ್ಷದ ನಾಯಕರು ತೀರ್ಮಾನ ತೆಗೆದುಕೊಳ್ಳುವ ನಿರ್ಣಯವನ್ನು ಕೈಗೊಳ್ಳಲಾಗಿತ್ತು. ತದ ನಂತರ ಕುಮಾರಸ್ವಾಮಿ ಅವರು ಲೋಕಸಭಾ ಚುನಾವಣೆಗೆ ತಯಾರಿ ನಡೆಸುವುದರ ಜತೆಗೆ ಎನ್‌ಡಿಎ ಮೈತ್ರಿಕೂಟ ನೀಡಿರುವ ಆಹ್ವಾನವನ್ನು ಸ್ವೀಕರಿಸಿದ್ದರು.

ಉನ್ನತ ಮೂಲಗಳ ಪ್ರಕಾರ ರಾಜ್ಯದ 28 ಲೋಕಸಭಾ ಕ್ಷೇತ್ರಗಳ ಪೈಕಿ ಬಿಜೆಪಿ ಜೊತೆ ಹೊಂದಾಣಿಕೆ ಮಾಡಿಕೊಂಡು 5 ಕ್ಷೇತ್ರಗಳಲ್ಲಿ ಕಣಕ್ಕಿಳಿಯಲಿದೆ. ಚುನಾವಣೆ ಮತ್ತು ಮೈತ್ರಿಗೆ ಸಂಬಂಧಿಸಿದಂತೆ ಉಭಯ ನಾಯಕರು ಸಮ್ಮತಿ ನೀಡಿದ್ದರೂ ಅದರ ರೂಪುರೇಷೆಗಳು ಅಂತಿಮ ಗೊಂಡಿಲ್ಲ. ಈ ಮಧ್ಯೆ ಮಂಗಳವಾರ ಪತ್ರಿಕಾಗೋಷ್ಠಿ ನಡೆಸಿದ ಮಾಜಿ ಪ್ರಧಾನಿ ಹಾಗೂ ಜೆಡಿಎಸ್‌ನ ಅಧಿನಾಯಕ ಹೆಚ್.ಡಿ. ದೇವೇಗೌಡರು ರಾಷ್ಟ್ರದಲ್ಲಿ ಬಿಜೆಪಿ ಜೊತೆ ಕೈಜೋಡಿಸದೇ ಇರುವ ಯಾವುದಾದರೂ ಪಕ್ಷ ಇದೆಯೇ ತೋರಿಸಿ ಎಂದು ಸವಾಲು ಹಾಕಿದರು. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಜತೆ ಜೆಡಿಎಸ್ ಕೈಜೋಡಿಸಲಿದೆಯೇ ಎಂಬ ಪ್ರಶ್ನೆಗೆ ನೇರ ಉತ್ತರ ನೀಡದ ಗೌಡರು, ಕಾಂಗ್ರೆಸ್‌ನ ಕೆಲವು ನಾಯಕರು ಬಿಜೆಪಿಯೊಂದಿಗೆ ಸಂಬಂಧವಿಟ್ಟುಕೊಂಡಿದ್ದಾರೆ. ಎಲ್ಲಾ ಪಕ್ಷಗಳು ಆ ಪಕ್ಷದೊಂದಿಗೆ ಸಂಬಂಧವಿರಿಸಿಕೊಂಡಿರುವಾಗ ವಿಪಕ್ಷಗಳ ಒಗ್ಗಟ್ಟಿನ ಬಗ್ಗೆ ನಾನೇನು ಹೇಳಲಿ ಎಂದು ಪ್ರಶ್ನಿಸಿದರು. ಎಲ್ಲಾ ಪಕ್ಷಗಳು ಬಿಜೆಪಿ ಜತೆ ಪ್ರತ್ಯಕ್ಷ ಇಲ್ಲವೇ ಪರೋಕ್ಷವಾಗಿ ಕೈ ಜೋಡಿಸಿವೆ. ಜೆಡಿಎಸ್ ಈಗ ಲೋಕಸಭಾ ಚುನಾವಣೆ ಬಗ್ಗೆ ಚಿಂತಿಸುವುದಿಲ್ಲ. ಈಗ ನಮ್ಮ ಮುಂದೆ ಇರುವುದು ಜಿಲ್ಲಾ ಮತ್ತು ತಾಲೂಕು ಪಂಚಾಯ್ತಿ ಚುನಾವಣೆಗಳು. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತದಾರರು ಯಾವ ರೀತಿ ಸ್ಪಂದಿಸುತ್ತಾರೆ ಎಂಬುದನ್ನು ನೋಡಿಕೊಂಡು ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು. ಲೋಕಸಭೆಯಲ್ಲಿ ಎಷ್ಟು ಸ್ಥಾನಕ್ಕೆ, ಎಲ್ಲಿ ಸ್ಪರ್ಧಿಸಬೇಕು ಎಂಬುದರ ಬಗ್ಗೆ ಪಕ್ಷ ತೀರ್ಮಾನಿಸಲಿದೆ. ಆದರೆ ನನಗೆ 91 ವರ್ಷ ವಯಸ್ಸಾಗಿದ್ದು, ಈಗ ಸ್ಪರ್ಧೆ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ಹೇಳಿದರು.

ಮರುಮೌಲ್ಯಮಾಪನ ಫಲಿತಾಂಶ ಪ್ರಕಟ

ನಮೂದಿಸಿರುವಂತೆ ತಮ್ಮ ನೋಂದಣಿ ಸಂಖ್ಯೆಗಳು ಮತ್ತು ಜನ್ಮ ದಿನಾಂಕಗಳನ್ನು ನಮೂದಿಸಬೇಕಾಗುತ್ತದೆ. ಈ ವರ್ಷ ಒಟ್ಟು 8,35,102 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾಗಿದ್ದರು. ಒಟ್ಟಾರೆ ಉತ್ತೀರ್ಣ ಶೇಕಡಾ 83.89 ರಷ್ಟಿದ್ದು, 7,00,619 ವಿದ್ಯಾರ್ಥಿಗಳು ಯಶಸ್ವಿಯಾಗಿ ಉತ್ತೀರ್ಣರಾಗಿದ್ದಾರೆ. ಫಲಿತಾಂಶವು ಗ್ರೇಡಿಂಗ್ ವ್ಯವಸ್ಥೆಯನ್ನು ಒಳಗೊಂಡಿದೆ, 1,47,634 ವಿದ್ಯಾರ್ಥಿಗಳು ಎ ಗ್ರೇಡ್ ಮತ್ತು 61,003 ವಿದ್ಯಾರ್ಥಿಗಳು ಎ+ಗ್ರೇಡ್ ಅನ್ನು ಸಾಧಿಸಿದ್ದಾರೆ.

3 ದಿನದಲ್ಲಿ ಪ್ರತಿಪಕ್ಷ ನಾಯಕನ ಆಯ್ಕೆ

ಸ್ಥಾನದ ಆಕಾಂಕ್ಷಿಗಳಾಗಿದ್ದಾರೆ ಎಂದು ಹೇಳಲಾಗುತ್ತಿದೆ. ಬಿಜೆಪಿ ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರನ್ನು ಬದಲಾಯಿಸುವ ಕುರಿತು ಕೇಳಿದಾಗ, ಪಕ್ಷವು ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಜೋಶಿ ಹೇಳಿದ್ದಾರೆ.

ಪಕ್ಷದ ರಾಜ್ಯ ಘಟಕದ ಅಧ್ಯಕ್ಷರ ಅಧಿಕಾರಾವಧಿ ಈಗಾಗಲೇ ಮುಗಿದಿದೆ ಮತ್ತು ಪಕ್ಷವು ಸರಿಯಾದ ಸಮಯದಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಜೋಶಿ ಹೇಳಿದ್ದಾರೆ. ಪಕ್ಷದ ರಾಜ್ಯಾಧ್ಯಕ್ಷ ನಳಿನ್ ಕುಮಾರ್‌ಕಟೀಲ್ ಅವರ ಅವಧಿ ಕಳೆದ ವರ್ಷ ಆಗಸ್ಟ್‌ನಲ್ಲಿ ಕೊನೆಗೊಂಡಿತ್ತು. ವಿಧಾನಸಭಾ ಚುನಾವಣೆಯ ಕಾರಣದಿಂದ ಅವಧಿಯನ್ನು ವಿಸ್ತರಿಸಲಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜುಲೈ 7 ರಂದು ಬಜೆಟ್ ಅಧಿವೇಶನ ನಡೆಸುವ ಸಾಧ್ಯತೆ ಇದ್ದು ಅದಕ್ಕೂ ಮುನ್ನ ತೆರವಾಗಿರುವ ಸ್ಥಾನವನ್ನು ಬಿಜೆಪಿ ತುಂಬುವ ನಿರೀಕ್ಷೆ ಇದೆ.

ಡಾ.ಗೌರಿ ಕುಪ್ಪುಸ್ವಾಮಿ ನಿಧನ

ಆರ್.ನಟೇಶನ್ ಮತ್ತು ಬಾಲಕುಜಂ ದಂಪತಿಗೆ 1931ರ ಆ.3ರಂದು ಜನಿಸಿದ ಗೌರಿ ಅವರಿಗೆ ಬಾಲ್ಯದಿಂದಲೇ ಸಂಗೀತದ ಮೇಲೆ ಅಪಾರ ಆಸಕ್ತಿ ಇತ್ತು. ಪುದುಕೋಟೈನಲ್ಲಿರುವ ಅಜ್ಜಿಯ ಮನೆಯಲ್ಲಿ ಬಾಲ್ಯ ಕಳೆದ ವೇಳೆಯಲ್ಲಿ ಸಂಗೀತ ಇವರ ಮೈಮನದಲ್ಲಿ ಬೇರೂರಿತು. ಬೆಂಗಳೂರಿನಲ್ಲಿ ವಿಜ್ಞಾನಿಯಾಗಿ ಕೆಲಸ ಮಾಡುತ್ತಿದ್ದ ಹಾಗೂ 1950ರಲ್ಲಿ ಮೈಸೂರಿನಲ್ಲಿ ಹೊಸದಾಗಿ ಸ್ಥಾಪಿಸಲಾದ ಕೇಂದ್ರ ಆಹಾರ ತಂತ್ರಜ್ಞಾನ ಸಂಶೋಧನಾ ಸಂಸ್ಥೆಗೆ (CFTRI) ಸೇರಿಕೊಂಡ ಕುಪ್ಪುಸ್ವಾಮಿ ಅವರೊಂದಿಗೆ ಗೌರಿ ಅವರ ವಿವಾಹವು ಜೂನ್ 3, 1946 ರಂದು ಪುದುಕೋಟೈನಲ್ಲಿ ನೆರವೇರಿತು.

50 ವರ್ಷಗಳಿಂದ ನಿರಂತರ ಸಂಗೀತ ಸೇವೆ ಸಲ್ಲಿಸಿದ ಗೌರಿ ಕುಪ್ಪುಸ್ವಾಮಿ ಅವರು ಆಕಾಶವಾಣಿಯ ಮೈಸೂರು, ಧಾರವಾಡ, ಮದ್ರಾಸ್ ಮತ್ತು ಪಾಂಡಿಚೇರಿ ಕೇಂದ್ರಗಳಿಂದ ನಿಯಮಿತವಾಗಿ ಕಾರ್ಯಕ್ರಮಗಳನ್ನು ನೀಡುವುದರ ಜೊತೆಗೆ ತಾಷ್ಕೆಂಟ್, ಸಿಂಗಾಪುರ ಮತ್ತು ತಿರುವನಂತಪುರ ಟಿವಿ ಕಾರ್ಯಕ್ರಮಗಳಲ್ಲಿ ವಿಶೇಷ ಕಛೇರಿಗಳನ್ನು ನಡೆಸಿಕೊಟ್ಟು ಸಂಗೀತಾಸಕ್ತರ ಮನಸೂರೆಗೊಂಡಿದ್ದಾರೆ.

ಡಾ. ಗೌರಿ ಕುಪ್ಪುಸ್ವಾಮಿ ಅವರು 1982ರಲ್ಲಿ ಅಮೆರಿಕದ ಅರಿಝೋನಾ ವಿಶ್ವವಿದ್ಯಾನಿಲಯದಿಂದ 'ಕಂಪ್ಯಾರಿಟೀವ್ ಸ್ಟಡಿ ಆಫ್ ಸ್ಕೇಲ್ಸ್ ಆಫ್ ಕರ್ನಾಟಕ ಅಂಡ್ ವೆಸ್ಟರ್ನ್ ಮ್ಯೂಸಿಕ್" ಪ್ರಬಂಧಕ್ಕಾಗಿ ಪಿಎಚ್‌ಡಿ ಪದವಿ ಪಡೆದಿದ್ದಾರೆ. ಡಾ.ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾನಿಲಯ ಮಾರ್ಚ್ 7, 2017 ರಂದು ಗೌರವ ಡಾಕ್ಟರೇಟ್ ನೀಡಿ ಗೌರವಿಸಿದೆ. ಕರ್ನಾಟಕ ಶಾಸ್ತ್ರೀಯ ಸಂಗೀತ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿರುವ ಡಾ. ಗೌರಿ ಕುಪ್ಪುಸ್ವಾಮಿ ಅವರನ್ನು ಇತ್ತೀಚೆಗೆ ಸಂಗೀತ ನಾಟಕ ಅಕಾಡೆಮಿ ಅಮೃತ್ ಪ್ರಶಸ್ತಿ-2022ಗೆ ಆಯ್ಕೆ ಮಾಡಲಾಗಿದೆ.

ರೈಲು ಯೋಜನೆ ವಿಸ್ತರಣೆ

ರಾಮನಗರ, ಚಿಕ್ಕಬಾಣಾವರ, ದೊಡ್ಡಬಳ್ಳಾಪುರ, ವೈಟ್‌ಫೀಲ್ಡ್ ವರೆಗೆ ತಲುಪಿಸುವ ಗುರಿ ಇದೆ. ಆದರೆ ಇವೆಲ್ಲವೂ ಬೆಂಗಳೂರಿನ ಭಾಗವಾಗಿವೆ. ಆದ್ದರಿಂದ ರಾಜಧಾನಿಯ ಸುತ್ತಲಿನ ನೂರು ಕಿ.ಮೀ. ಸುತ್ತಳತೆಯಲ್ಲಿ ಇರುವ ನಗರಗಳಿಗೆ ಸಬರ್ಬನ್ ರೈಲು ಸೌಕರ್ಯ ಒದಗಿಸಬೇಕು. ಬೆಂಗಳೂರಿನ ಉದ್ದಿಮೆಗಳಿಗೆ ಬೇಕಾದ ಜನರು ಈ ಊರುಗಳಿಂದ ಸುಗಮವಾಗಿ ದಿನವೂ ಓಡಾಡುವಂತೆ ಆಗಬೇಕು. ಇದು ಸಂಚಾರ ದಟ್ಟಣೆಯ ಜತೆಗೆ ವಲಸೆಯ ಸಮಸ್ಯೆಗೂ ಕಡಿವಾಣ ಹಾಕುತ್ತದೆ ಎಂದು ಸಚಿವರು ವಿವರಿಸಿದ್ದಾರೆ.

ಹಂತ-1ರ ಅಡಿಯಲ್ಲಿ ಈಗಾಗಲೇ ಚಿಕ್ಕಬಾಣಾವರ ಮತ್ತು ಬೆನ್ನಿಗಾನಹಳ್ಳಿ ನಡುವೆ ಕಾಮಗಾರಿ ನಡೆಯುತ್ತಿದೆ. ಇದನ್ನು ತುಮಕೂರಿನ ಕಡೆಯಲ್ಲಿ ಡಾಬಸಪೇಟೆಯ ತನಕ ವಿಸ್ತರಿಸಬೇಕು. ಅಲ್ಲಿ ಕೈಗಾರಿಕಾ ಪ್ರದೇಶ ಇರುವ ಹಿನ್ನೆಲೆಯಲ್ಲಿ ಇದು ಅತ್ಯಗತ್ಯವಾಗಿದೆ. ಈ ಕೆಲಸವನ್ನು ಮೊದಲ ಹಂತದಲ್ಲೇ ಮಾಡಬೇಕು ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ. ಪ್ರತೀ ಹತ್ತು ನಿಮಿಷಕ್ಕೆ ಒಂದರಂತೆ ಸಬರ್ಬನ್ ರೈಲು ಸೇವೆ ಒದಗಿಸುವುದು ನಮ್ಮ ಗುರಿಯಾಗಿದೆ. ಸುಗಮ ಸಂಚಾರ ವ್ಯವಸ್ಥೆಯ ಜಾಲವನ್ನು ಬೆಳೆಸುವುದು ಮೂಲಸೌಲಭ್ಯ ಅಭಿವೃದ್ಧಿಯ ಹೆಗ್ಗುರಿಗಳಲ್ಲಿ ಒಂದಾಗಿದೆ ಎಂದು ಪಾಟೀಲ್ ಹೇಳಿದ್ದಾರೆ. ಸಭೆಯಲ್ಲಿ ಕೆ-ರೈಡ್ ವ್ಯವಸ್ಥಾಪಕ ನಿರ್ದೇಶಕ ಮತ್ತು ಮೂಲಸೌಲಭ್ಯ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ರೈಲ್ವೆ ಇಲಾಖೆಯ ಉನ್ನತ ಅಧಿಕಾರಿಗಳು ಹಾಜರಿದ್ದರು.

ಫಲಾನುಭವಿಗಳಿಂದಲೇ ಅರಸು ಗುಣಗಾನ

● ಘನತೆ ಬದುಕು ಕಲ್ಪಿಸಿಕೊಟ್ಟ ಅರಸು ; 41ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಸ್ಮರಣೆ

● ಅಂಬೇಡ್ಕರ್ ವಿಚಾರಧಾರೆಯನ್ನು ಅಕ್ಷರಶಃ ಪಾಲಿಸಿದ ಅರಸರು ; ಎಂಎಲ್‌ಸಿ ವಿಶ್ವನಾಥ್ ನುಡಿ ನಮನ

ಮೈಸೂರು,ಜೂ.6(ಪಿಎಂ)– ಡಿ.ದೇವರಾಜ ಅರಸು ಅವರು ಮುಖ್ಯಮಂತ್ರಿಗಳಾಗಿ ನೀಡಿದ ಜನಪರ ಯೋಜನೆಗಳಿಂದ ಫಲಾನುಭವಿಗಳಾದವರು ಅದೆಷ್ಟೋ. ಅವರೆಲ್ಲರ ಕುಟುಂಬಗಳಿಂದು ಸುಸ್ಥಿತಿಯಲ್ಲಿ ಘನತೆಯಿಂದ ಬದುಕಲು ಸಾಧ್ಯವಾಗಿದೆ. ಇಂತಹ ಫಲಾನುಭವಿಗಳ ಪೈಕಿ ಮೈಸೂರು ಮತ್ತು ಸುತ್ತಮುತ್ತಲ ಕೆಲವರು ಅರಸು ಅವರನ್ನು ಸ್ಮರಿಸಿ, ಆರಾಧಿಸಿದರು.

ಮುತ್ಸದ್ದಿ ರಾಜಕಾರಣಿ ದಿವಂಗತ ಡಿ.ದೇವರಾಜ ಅರಸು ಹಿಂದುಳಿದ ಮತ್ತು ಶೋಷಿತ ಸಮುದಾಯಗಳ ಶ್ರೇಯೋಭಿವೃದ್ಧಿಗೆ ಶ್ರಮಿಸಿದವರು. ಅವರ 41ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಈ ಫಲಾನುಭವಿಗಳೇ ವೇದಿಕೆಯಲ್ಲಿದ್ದ ಅತಿಥಿಗಳು ಎಂಬುದೇ ವಿಶೇಷ. ಮೈಸೂರಿನ ಕುವೆಂಪುನಗರದ ಡಿ.ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯದ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಇಂತಹ ವಿಶೇಷ ಕಾರ್ಯಕ್ರಮ ನಡೆಯಿತು.

ಉಳುವವನನ್ನೇ ಹೊಲದೊಡೆಯನಾಗಿಸಲು ಅರಸು ದಿಟ್ಟ ನಿಲುವು ತಳೆದವರು. ಇದರಿಂದ ಲಕ್ಷಾಂತರ ಕೃಷಿ ಕಾರ್ಮಿಕರು ಉಳುಮೆ ಮಾಡುತ್ತಿದ್ದ ಭೂಮಿಗೆ ಮಾಲೀಕರಾದರು. ಅಂತಹವರ ಪೈಕಿ ಡಿ.ಸಾಲುಂಡಿ ಗ್ರಾಮದ ರೈತ ಮಹದೇವು ಅವರ ತಾತ ಕೂಡ ಒಬ್ಬರು. ಇಂದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಡಿ.ಸಾಲುಂಡಿಯ ರೈತ ಮಹದೇವು, ದೇವರಾಜ ಅರಸು ಅವರ ದಿಟ್ಟ ನಿಲುವಿನಿಂದಾಗಿ ಕೇವಲ ಕೂಲಿ ಆಳುಗಳಾಗಿದ್ದವರು ಭೂಮಿಗೆ ಅವರೇ ಒಡೆಯರಾದರು. ಅಂತೆಯೇ ನಮ್ಮ ತಾತನಿಗೆ 1 ಎಕರೆ 30 ಗುಂಟೆ ಭೂಮಿ ದೊರೆಯಿತು. ಇಂದಿಗೂ ಅದೇ ಜಮೀನಿನಿಂದ ನಮ್ಮ ಕುಟುಂಬ ಅನ್ನ ತಿನ್ನುತ್ತಿದೆ. ಅದೇ ಜಮೀನಿನಲ್ಲಿ ಕುರಿ ಸಾಕಾಣಿಕೆ, ಮೇಕೆ ಫಾರಂ ಮಾಡಿದ್ದೇನೆ. ಜೊತೆಗೆ ಹೆಚ್ಚುವರಿಯಾಗಿ ಇನ್ನೂ ಒಂದು ಎಕರೆ ಭೂಮಿ ಮಾಡಿಕೊಂಡಿದ್ದೇವೆ ಎಂದು ಹೇಳಿದರು.

ಇಂದು ಘನತೆಯಿಂದ ಬದುಕು ಮಾಡಲು ದೇವರಾಜ ಅರಸು ಯೋಜನೆಗಳಿಂದ ಸಾಧ್ಯವಾಗಿದೆ. ಅರಸು ಅವರ ಹಾದಿಯಲ್ಲೇ ಇಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಗುತ್ತಿದ್ದು, ಬಡವರ ಕಷ್ಟಕ್ಕೆ ಸ್ಪಂದಿಸುತ್ತಿದ್ದಾರೆ ಎಂದು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಕುವೆಂಪುನಗರ ನಿವಾಸಿ, ವೈದ್ಯ ಡಾ.ನಾಗೇಶ್ ಮಾತನಾಡಿ, ನಾನು ಮೂಲತಃ ಟಿ.ನರಸೀಪುರ ತಾಲೂಕು ಬನ್ನೂರು ಹೋಬಳಿ ದಾಸೇಗೌಡನಕೊಪ್ಪಲು ಎಂಬ ಕುಗ್ರಾಮದವನು. ನನ್ನ ವಿದ್ಯಾರ್ಥಿ ಜೀವನದ ಸಂದರ್ಭದಲ್ಲಿ ಊರಿನಿಂದ ಕೇವಲ 30 ಕಿ.ಮೀ. ದೂರದ ಮೈಸೂರಿಗೆ ಪ್ರತಿನಿತ್ಯ ಬರಲೂ ಹಣದ ಕೊರತೆ ಇತ್ತು. ಈ ಸಂದರ್ಭದಲ್ಲಿ ಮೈಸೂರಿನಲ್ಲಿ ಉಳಿದು ವ್ಯಾಸಂಗ ಮಾಡಲು ಬಿಸಿಎಂ ಹಾಸ್ಟೆಲ್‌ನಲ್ಲಿ ಆಶ್ರಯ ದೊರೆಯಿತು ಎಂದು ಹೇಳಿದರು.

ರಾಜನಾಯಕ ಎಂಬುವವರು ಮಾತನಾಡಿ, ಉಳುವವನೇ ಹೊಲದೊಡೆಯ ಯೋಜನೆಯಿಂದ ನಮ್ಮ ಕುಟುಂಬಕ್ಕೂ ಒಂದಿಷ್ಟು ಕೃಷಿ ಭೂಮಿ ದೊರೆಯಿತು. ಇಂದಿಗೂ ಅವರ ಹೆಸರು ಹೇಳಿಕೊಂಡು ಅನ್ನ ತಿನ್ನುತ್ತಿದ್ದೇವೆ ಎಂದು ಸ್ಮರಿಸಿದರೆ, ನಿಂಗಪ್ಪ ಎಂಬುವವರು ಮಾತನಾಡಿ, ನಮ್ಮ ತಂದೆಯವರಿಗೂ ಜಮೀನು ಇರಲಿಲ್ಲ. ಅರಸು ಅವರ ಆಡಳಿತದಲ್ಲಿ ನಮ್ಮ ಕುಟುಂಬ ಭೂಮಿಯ ಮಾಲೀಕತ್ವ ಪಡೆಯುವಂತಾಯಿತು ಎಂದು ಸ್ಮರಿಸಿದರು.

ಕೆಆರ್ ನಗರ ತಾಲೂಕಿನ ಕುಮಾರಿ ಮಾತನಾಡಿ, ಹಿಂದೆ ನೂರಾರು ಎಕರೆಗೆ ಒಬ್ಬರೇ ಒಡೆಯರು ಆಗಿರುತ್ತಿದ್ದರು. ದೇವರಾಜ ಅರಸು ಅವರು ಕೃಷಿ ಭೂಮಿಯಲ್ಲಿ ದುಡಿಯುವವರನ್ನೇ ಭೂಮಿಗೆ ಮಾಲೀಕರನ್ನಾಗಿ ಮಾಡಿದರು. ಅದರಲ್ಲಿ ನಮ್ಮ ಕುಟುಂಬವೂ ಒಂದು ಎಂದು ನೆನೆದರು.

ಅಂಬೇಡ್ಕರ್ ಹೇಳಿದ್ದನ್ನು ಅಕ್ಷರಶಃ ಪಾಲಿಸಿದ ಅರಸು: ಇದಕ್ಕೂ ಮುನ್ನ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್, ಡಾ.ಅಂಬೇಡ್ಕರ್ ಏನೆಲ್ಲಾ ಹೇಳಿದ್ದರೋ ಅದನ್ನು ಅಕ್ಷರಶಃ ಪಾಲನೆ ಮಾಡಿದ ಕೀರ್ತಿ ಪುರುಷ ದೇವರಾಜ ಅರಸು ಎಂದು ಸ್ಮರಿಸಿದರು.

ದೇವರಾಜ ಅರಸು ತಮ್ಮ ಅಧಿಕಾರದ ಅವಧಿಯಲ್ಲಿ ಹಲವು ಕಾರ್ಯಕ್ರಮಗಳನ್ನು ನಾಡಿಗೆ ಕೊಟ್ಟಿದ್ದಾರೆ. ವಿಶೇಷವಾಗಿ ಗ್ರಾಮಾಂತರ ಪ್ರದೇಶದ ಹಿಂದುಳಿದ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಕಲ್ಪಿಸಿದರು. ಅಲ್ಲದೆ, ಇವರದೇ ಆಡಳಿತದಲ್ಲಿ ಹಾವನೂರು ಆಯೋಗದ ವರದಿ ಆಧಾರದಲ್ಲಿ ಹಿಂದುಳಿದವರಿಗೆ ಮೀಸಲಾತಿ ದೊರಕಿತು. ಇದರ ಆಧಾರದಲ್ಲಿ ಹಿಂದುಳಿದ ವರ್ಗಗಳಲ್ಲಿ ತಹಸೀಲ್ದಾರ್, ಜಿಲ್ಲಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಸೇರಿದಂತೆ ಉನ್ನತ ಅಧಿಕಾರಿಗಳಾದರು ಎಂದು ಹೇಳಿದರು.

ಜೊತೆಗೆ ಜೀತವಿಮೋಚನೆ, ಸಾಲವಿಮೋಚನೆ ಸೇರಿದಂತೆ ಹಿಂದುಳಿದ ಕುಟುಂಬಗಳ ಶ್ರೇಯೋಭಿವೃದ್ಧಿ ಸಾಧ್ಯವಾಯಿತು. 21 ಲಕ್ಷ ಎಕರೆ ಭೂಮಿಯನ್ನು ಉಳುವವನೇ ಹೊಲದೊಡೆಯ ಯೋಜನೆಯಡಿ ಕೃಷಿಯನ್ನೇ ನಂಬಿದ್ದ ಭೂರಹಿತರಿಗೆ ಕೊಟ್ಟರು. ದೇವರಾಜ ಅರಸು ಕೃಪೆಯಿಂದ ಹಳ್ಳಿಯಿಂದ ಬಂದ ವಿದ್ಯಾರ್ಥಿಗಳು ಹಾಸ್ಟೆಲ್‌ನಲ್ಲಿ ಆಶ್ರಯ ಪಡೆದು ವಿದ್ಯಾವಂತರಾಗಿ ಉನ್ನತ ಅಧಿಕಾರಿಗಳಾಗಿದ್ದಾರೆ. ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳು ಅನ್ನ, ಅಕ್ಷರ ಕೊಡುವ ಜೊತೆಗೆ ಉದ್ಯೋಗ ದಕ್ಕಿಸಿಕೊಳ್ಳಲು ಸಾಧ್ಯ ಮಾಡಿವೆ. ಇಷ್ಟೆಲ್ಲಾ ಸಾಧಿಸಿ ತೋರಿಸಿದ ಹಿನ್ನೆಲೆಯಲ್ಲಿ ಅರಸು ಅವರನ್ನು 'ಸಾಮಾನ್ಯ ಜನರ ಅರಸ ದೇವರಾಜ ಅರಸು' ಎಂದೇ ಬಣ್ಣಿಸಲಾಗಿದೆ ಎಂದು ಹೇಳಿದರು.

ಇಎಸ್‌ಐ ಆಸ್ಪತ್ರೆ ವೈದ್ಯ ಡಾ.ಮಾಲೇಗೌಡ, ಪ್ರವಾಸೋದ್ಯಮ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ, ಮೈಸೂರು ವಿವಿ ಕುಲಸಚಿವರಾದ ವಿ.ಆರ್.ಶೈಲಜಾ, ರಾಜಮ್ಮ, ಪಿ.ಎಸ್.ನಿಂಗಪ್ಪ ಕೆಟಿ.ಶಿವಣ್ಣ ಚಂದ್ರೇಗೌಡ, ರಾಜೇಗೌಡ ವಿದ್ಯಾರ್ಥಿಗಳಾದ ಯೋಗೀಶ್, ಮಹಮ್ಮದ್ ಅರ್ಫತ್, ವಿಠ್ಠಲ್ ಮೊದಲಾದವರೂ ಪಡೆದ ಸವಲತ್ತುಗಳ ಬಗ್ಗೆ ಮಾಹಿತಿ ಹಂಚಿಕೊಂಡರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಮಹೇಶ್, ಪಾಲಿಕೆ ಮಾಜಿ ಸದಸ್ಯ ಸೋಮಸುಂದರ್, ಕಾಂಗ್ರೆಸ್ ಮುಖಂಡರಾದ ಹೆಚ್.ಎ.ವೆಂಕಟೇಶ್, ಡಾ.ಬಿ.ಜೆ.ವಿಜಯ್‌ಕುಮಾರ್, ಆರ್.ಮೂರ್ತಿ, ಶಿವಣ್ಣ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್.ಶಿವರಾಮು ಮತ್ತಿತರರು ಹಾಜರಿದ್ದರು.



ಮೈಸೂರಿನ ಕುವೆಂಪುನಗರದ ಡಿ.ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯದ ಆವರಣದಲ್ಲಿ ಜಿಲ್ಲಾಡಳಿತ ಮಂಗಳವಾರ ಹಮ್ಮಿಕೊಂಡಿದ್ದ ದೇವರಾಜ ಅರಸು ಅವರ 41ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ದೇವರಾಜ ಅರಸು ಆಡಳಿತಾವಧಿಯ ಯೋಜನೆಗಳ ಫಲಾನುಭವಿಗಳು ಪುಷ್ಪ ನಮನ ಸಲ್ಲಿಸಿದರು.

ಒಂದೊಂದು ತುತ್ತು ಅನ್ನ ತಿನ್ನುವಾಗಲೂ ಅರಸು ನೆನೆಯಬೇಕು

ಮೈಸೂರು,ಜೂ.6(ಪಿಎಂ)– ದೇವರಾಜ ಅರಸು ಅವರ ಕೊಡುಗೆಗಳಿಂದಾಗಿ ನಾನು ಮೂರು ರೀತಿಯಲ್ಲಿ ಫಲಾನುಭವಿ. ಒಂದೊಂದು ತುತ್ತು ಅನ್ನ ತಿನ್ನುವಾಗಲೂ ಅರಸು ಅವರನ್ನು ನೆನೆಯಬೇಕು ಎಂದು ಪ್ರವಾಸೋದ್ಯಮ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ ಹೇಳಿದರು.

1978ರಲ್ಲಿ ನಮ್ಮ ತಾತ ಭೂ ಸುಧಾರಣೆ ಕಾಯ್ದೆಯಡಿ ಮೂರು ಎಕರೆ ಕೃಷಿ ಭೂಮಿಯ ಫಲಾನುಭವಿಯಾದರು. ಅದೇ ಭೂಮಿ ಅವರ ಮೂವರು ಮಕ್ಕಳಿಗೆ ತಲಾ ಒಂದೊಂದು ಎಕರೆ ಹಂಚಿಕೆಯಾಗಿದೆ. ಮೊಮ್ಮಕ್ಕಳಿಗೆ ಪಾಲು ಮಾಡುವ ಹಂತಕ್ಕೆ ಇಂದು ಬಂದಿದೆ. ನಮ್ಮ ತಂದೆಯವರಿಗೆ ಸಿಕ್ಕಿದ ಒಂದು ಎಕರೆ ಭೂಮಿಯನ್ನು ಅರ್ಧ ಎಕರೆ ನನ್ನ ಮದುವೆಗಾಗಿ ಮಾರಾಟ ಮಾಡಿದರು. ಇನ್ನುಳಿದ ಅರ್ಧ ಎಕರೆಯಲ್ಲಿ ದುಡಿದು ನನಗೆ ವಿದ್ಯಾಭ್ಯಾಸ ಕೊಡಿಸಿದರು. ಇದೆಲ್ಲದರ ಹಿನ್ನೆಲೆಯಲ್ಲಿ ನಾನಿಂದು ಒಂದು ಉನ್ನತ ಹುದ್ದೆ ಅಲಂಕರಿಸುವಂತಾಗಿದೆ ಎಂದರು.

ಅಲ್ಲದೆ, ಇದೇ ಹಾಸ್ಟೆಲ್‌ನಲ್ಲಿ ಐದು ವರ್ಷ ಕಾಲ ನನ್ನ ವಿದ್ಯಾರ್ಥಿ ಜೀವನ ಕಳೆದಿದ್ದೇನೆ. ಆ ದಿನಗಳು ಮರೆಯಲಾಗದ ಸುವರ್ಣ ದಿನಗಳವು. 1999-2002ರವರೆಗೆ ಇಲ್ಲಿ ಆಶ್ರಯ ಪಡೆದಿದ್ದೆ. ಆ ಬಳಿಕ ಉದ್ಯೋಗದಲ್ಲಿ ಮೀಸಲಾತಿ ಸೌಲಭ್ಯ ಪಡೆದೆ. ಬಿಸಿಎಂ ವರ್ಗದಡಿ ಮೀಸಲಾತಿ ದೊರೆಯಿತು ಎಂದು ಹೇಳಿದರು.

ನಾವು ನಮ್ಮಲ್ಲಿರುವ ಅಶಕ್ತರಿಗೆ ಆಸರೆಯಾಗಬೇಕು

ಮೈಸೂರು,ಜೂ.6(ಪಿಎಂ)– ಶ್ರಮಿಕ ವರ್ಗದ ಶ್ರೇಯೋಭಿವೃದ್ಧಿಗೆ ಶ್ರಮಿಸಿದವರು ದೇವರಾಜ ಅರಸು. ಅವರ ಕಾರ್ಯಕ್ರಮಗಳ ಫಲಾನುಭವಿಗಳಾದ ನಾವು ನಮ್ಮಲ್ಲಿರುವ ಅಶಕ್ತರಿಗೆ ಆಸರೆಯಾಗಬೇಕು. ಮುಂದಿನ ಪೀಳಿಗೆಗೆ ನಮ್ಮ ಕೈಲಾದ ಸಹಾಯಹಸ್ತ ಚಾಚುವ ನಿಲುವು ತಾಳಬೇಕು ಎಂದು ಇಎಸ್‌ಐ ಆಸ್ಪತ್ರೆ ವೈದ್ಯ ಡಾ.ಮಾಲೇಗೌಡ ಹೇಳಿದರು.

ನಾನು ಕೂಡ ಅರಸು ಅವರ ಯೋಜನೆಗಳ ಫಲಾನುಭವಿ. ನಾನಿಂದು ವೈದ್ಯನಾಗಿ ಸೇವೆ ಸಲ್ಲಿಸುತ್ತಿದ್ದರೆ ಅದಕ್ಕೆ ಕಾರಣ ದೇವರಾಜ ಅರಸು ಅವರ ಯೋಜನೆಗಳು. ನಾನು 1988ರಿಂದ 1994ರವರೆಗೆ ಮೈಸೂರಿನ ಸರಸ್ವತಿಪುರಂನ ಮೊದಲ ಮೇನ್‌ನಲ್ಲಿದ್ದ ಬಿಸಿಎಂ ಹಾಸ್ಟೆಲ್‌ನಲ್ಲಿ ಆಶ್ರಯ ಪಡೆದಿದ್ದೆ. ಈ ಹಾಸ್ಟೆಲ್‌ನಲ್ಲಿ ಆಶ್ರಯ ದೊರೆಯದಿದ್ದರೆ ಬಹುಶಃ ನನ್ನ ವಿದ್ಯಾಭ್ಯಾಸ ಮುಂದುವರೆಯುತ್ತಿರಲಿಲ್ಲ. ನನ್ನಂತಹ ಅನೇಕರು ಇಂದು ಉನ್ನತ ಸ್ಥಾನಮಾನ ಅಲಂಕರಿಸಲು ಈ ಬಿಸಿಎಂ ಹಾಸ್ಟೆಲ್‌ಗಳು ಕಾರಣ ಎಂದರು.

ದೇವರಾಜ ಅರಸರ ಸ್ಮರಿಸಿದರಷ್ಟೇ ಸಾಲದು, ಅವರಂತೆಯೇ ನೆರವಾಗಬೇಕು

ಮೈಸೂರು,ಜೂ.6(ಪಿಎಂ)– ದೇವರಾಜ ಅರಸು ಅವರ ಕೊಡುಗೆಗಳನ್ನು ಕೇವಲ ಸ್ಮರಿಸಿದರೆ ಸಾಲದು, ಅವರ ಯೋಜನೆಗಳ ಫಲ ಅನುಭವಿಸಿದವರು ಅದೇ ಮಾದರಿಯ ಕಾರ್ಯ ಮುಖೇನ ಅಸಕ್ತರಿಗೆ ನೆರವಾಗಬೇಕು ಎಂದು ಮೈಸೂರು ವಿವಿ ಕುಲಸಚಿವರಾದ ವಿ.ಆರ್.ಶೈಲಜಾ ಹೇಳಿದರು.

ದೇವರಾಜ ಅರಸು ಅವರು ಆರಂಭಿಸಿದ ಹಾಸ್ಟೆಲ್‌ಗಳಲ್ಲಿ ಆಶ್ರಯ ಪಡೆದು ಶಿಕ್ಷಣ ಪಡೆದ ಲಕ್ಷಾಂತರ ಮಂದಿ ಇಂದು ನಾನಾ ಉನ್ನತ ಹುದ್ದೆಗಳಲ್ಲಿದ್ದಾರೆ. ಇವರೆಲ್ಲರನ್ನೂ ಒಳಗೊಂಡಂತೆ ಹಾಸ್ಟೆಲ್‌ನ ಹಳೆ ವಿದ್ಯಾರ್ಥಿಗಳ ಸಂಘವನ್ನು ಆರಂಭಿಸಬೇಕು. ಈ ಸಂಘದ ಸದಸ್ಯರೆಲ್ಲರೂ ಹಾಸ್ಟೆಲ್‌ನಲ್ಲಿ ಆಶ್ರಯ ಪಡೆದು ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತಮ್ಮ ಕೈಲಾದ ಸಹಾಯ ಮಾಡಬೇಕಿದೆ. ಆರು ವರ್ಷಗಳ ಕಾಲ ನಾನು ಇದೇ ಹಾಸ್ಟೆಲ್‌ನಲ್ಲಿ ಆಶ್ರಯ ಪಡೆದು ವಿದ್ಯಾಭ್ಯಾಸ ಮಾಡಿದೆ ಎಂದು ನೆನೆದರು.

ಮೂಲ ಸೌಕರ್ಯ ಕೊರತೆ: ವಿದ್ಯಾರ್ಥಿಗಳ ಪ್ರತಿಭಟನೆ

ಮೈಸೂರು, ಜೂ.6(ಎಂಕೆ)– ಮೂಲ ಸೌಕರ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿ ಮೈಸೂರು ವಿವಿ ಮಹಾರಾಜ ಕಾಲೇಜಿನ ಹಾಸ್ಟೆಲ್ ವಿದ್ಯಾರ್ಥಿಗಳು ಮಂಗಳವಾರ ಪ್ರತಿಭಟನೆ ನಡೆಸಿದರು.

ಎಐಡಿಎಸ್‌ಓ ಸಹಕಾರದೊಂದಿಗೆ ಕ್ರಾಫರ್ಡ್ ಹಾಲ್ ಎದುರು ಜಮಾಯಿಸಿದ ಹಾಸ್ಟೆಲ್ ವಿದ್ಯಾರ್ಥಿಗಳು, ಮೈಸೂರು ವಿವಿ ಆಡಳಿತದ ವಿರುದ್ಧ ದಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕಳೆದ ಎರಡು ತಿಂಗಳಿಂದ ಕುಡಿಯುವ ನೀರಿನ ಸಮಸ್ಯೆ ಇದೆ. ಶೌಚಾಲಯಗಳಲ್ಲಿ ಸ್ವಚ್ಛತಾ ನಿರ್ವಹಣೆ ಇಲ್ಲದೆ ದುರ್ವಾಸನೆ ಬೀರುತ್ತಿವೆ. ಸರಿಯಾದ ಊಟದ ವ್ಯವಸ್ಥೆ ಇಲ್ಲದೇ ವಿದ್ಯಾರ್ಥಿಗಳು ಬಳಲುತ್ತಿದ್ದಾರೆ. ಹಾಸ್ಟೆಲ್‌ನಲ್ಲಿರುವ ಸಮಸ್ಯೆಗಳ ಕುರಿತು ಮೈಸೂರು ವಿವಿ ಅಧಿಕಾರಿಗಳ ಗಮನಕ್ಕೆ ತಂದಿದ್ದರು ಕೂಡ ಪರಿಹರಿಸದೇ ಸಂಪೂರ್ಣ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಕಿಡಿಕಾರಿದರು.

ಡೀನ್ ಭೇಟಿ: ಹಾಸ್ಟೆಲ್ ವಿದ್ಯಾರ್ಥಿಗಳ ಪ್ರತಿಭಟನೆ ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕಾಗಮಿಸಿದ ವಿದ್ಯಾರ್ಥಿ ಕ್ಷೇಮಪಾಲನ ಅಧಿಕಾರಿ ಚಂದ್ರಶೇಖರ್, ವಾರ್ಡನ್ ನಿಂಗರಾಜು ಕುಡಿಯುವ ನೀರು ಸೇರಿದಂತೆ ಹಾಸ್ಟೆಲ್‌ನಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲಾಗುವುದು. ಕೂಡಲೇ ಪ್ರತಿಭಟನೆ ನಿಲ್ಲಿಸಿ ಎಂದರೂ ಕೇಳದ ವಿದ್ಯಾರ್ಥಿಗಳು, ಕುಲಪತಿಗಳು ಬರಬೇಕು ಎಂದು ಪಟ್ಟು ಹಿಡಿದರು. ಕುಲಪತಿಗಳು ಪ್ರತಿಭಟನಾ ಸ್ಥಳಕ್ಕೆ ಬರುತ್ತಿಲ್ಲವೆಂಬ ಮಾಹಿತಿ ತಿಳಿದ ವಿದ್ಯಾರ್ಥಿಗಳು, ಇನ್ನೆರಡು ದಿನದಲ್ಲಿ ಹಾಸ್ಟೆಲ್‌ನಲ್ಲಿರುವ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಬೇಕು. ಇಲ್ಲದಿದ್ದರೆ ಮತ್ತೆ ಪ್ರತಿಭಟನೆ ಮಾಡುತ್ತೇವೆ ಎಂದು ಎಚ್ಚರಿಕೆ ನೀಡುವ ಮೂಲಕ ಪ್ರತಿಭಟನೆ ಕೈಬಿಟ್ಟರು.

ಪ್ರತಿಭಟನೆಯಲ್ಲಿ ಎಐಡಿಎಸ್‌ಓ ಜಿಲ್ಲಾಧ್ಯಕ್ಷ ಸುಭಾಷ್, ಕಾರ್ಯದರ್ಶಿ ಚಂದ್ರಕಲಾ, ಹಾಸ್ಟೆಲ್‌ನ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಚಾಲಕ ಹುದ್ದೆಗಳಿಗೆ ನೇರ ನೇಮಕಾತಿ

ಮೈಸೂರು, ಜೂ6– ಯುರೋಪ್‌ನಲ್ಲಿರುವ ಪೋಲ್ಯಾಂಡ್ ಮತ್ತು ಹಂಗೇರಿ ದೇಶಗಳಲ್ಲಿ ಭಾರಿ ಟ್ರಕ್/ಟ್ರೈಲರ್ ಮಹಿಳಾ/ಪುರುಷ ಚಾಲಕರ ಹುದ್ದೆಗಳಿಗೆ ಅಂತಾರಾಷ್ಟ್ರೀಯ ವಲಸೆ ಮಾಹಿತಿ ಕೇಂದ್ರ ಕರ್ನಾಟಕದಿಂದ ನೇರ ನಾಮಕಾತಿ ನಡೆಯಲಿದ್ದು, ಜೂನ್ 20 ಮತ್ತು 21 ರಂದು ಬೆಂಗಳೂರಿನ ವಲಸೆ ಕೇಂದ್ರದಲ್ಲಿ (4 ನೇ ಮಹಡಿ ಕಲ್ಯಾಣ ಸುರಕ್ಷಾ ಭವನ, ಪಿ.ಡಿ.ಪಿ ಕಾಂಪೌಂಡ್, ಡೈರಿ ಸರ್ಕಲ್ ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029) ನೇರ ಸಂದರ್ಶನ ನಡೆಸಲಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ನಗರದ ವಿನೋಬಾ ರಸ್ತೆಯಲ್ಲಿರುವ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿಯಲ್ಲಿನ ಅಂತಾರಾಷ್ಟ್ರೀಯ ವಲಸೆ ಮಾಹಿತಿ ಕೇಂದ್ರದ ದೂ.ಸಂ.0821-2970815, 8722399936, 8861529020 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇವರಾಜ ಅರಸು ಎಂದಿಗೂ ಜನ ಸಾಮಾನ್ಯರ ಅರಸ

ಮೈಸೂರು, ಜೂ.6 (ಎಂಟಿವೈ)– ಹಿಂದುಳಿದ ವರ್ಗಗಳ ಹರಿಕಾರ, ಮಾಜಿ ಮುಖ್ಯಮುಖ್ಯಮಂತ್ರಿ ದೇವರಾಜ ಅರಸು ಅವರ ಮಾದರಿಯಲ್ಲಿ ರಾಜ್ಯ ಸರ್ಕಾರ ಜನರಿಗೆ ಉಚಿತವಾಗಿ ಶಿಕ್ಷಣ ಮತ್ತು ಆರೋಗ್ಯ ಸೇವೆ ಒದಗಿಸಲು ಮುಂದಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಸಲಹೆ ನೀಡಿದ್ದಾರೆ.


ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ನಗರ ಹಾಗೂ ಜಿಲ್ಲಾ ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿದ್ದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇವರಾಜ ಅರಸು ಅವರ ಕಾಲದಲ್ಲಿ ಸಾಕಷ್ಟು ಸಂಖ್ಯೆಯಲ್ಲಿ ಶಿಕ್ಷಣ ಸಂಸ್ಥೆಗಳು ಸ್ಥಾಪನೆಯಾದವು. ಇದರಿಂದ ಹೆಚ್ಚಿನ ಸಂಖ್ಯೆಯ ಮಕ್ಕಳು ಶಿಕ್ಷಣ ಪಡೆಯಲು ಸಹಕಾರಿಯಾಯಿತು. ಸಾಮಾನ್ಯ ಜನರ ಅರಸ ದೇವರಾಜ ಅರಸು. ಸಂವಿಧಾನ ಶಿಲ್ಪಿ ಡಾ. ಬಿಆರ್.ಅಂಬೇಡ್ಕರ್ ಅವರ ಆಶಯಗಳನ್ನು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಜಾರಿಗೆ ತಂದವರು. ಅತ್ಯಂತ ಸಣ್ಣ ಸಮುದಾಯಗಳಿಗೂ ರಾಜಕೀಯ ಅಧಿಕಾರ ನೀಡಿದರು. 21 ಲಕ್ಷ ಎಕರೆ ಭೂಮಿಯನ್ನು ಉಳುವವರಿಗೆ ನೀಡಿದರು. ಇಂತಹ ಉತ್ತಮ ಕಾಂಗ್ರೆಸ್ ಚುತ್ತೆಯನ್ನು ಜನರು ಬಳಿಗೆ ಕೊಂಡೊಯ್ಯುವ ಕಾರ್ಯ ಆಗಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಡಿ. ತಿಮ್ಮಯ್ಯ ಮಾತನಾಡಿ, ಸಮಾಜದಲ್ಲಿ ನೊಂದವರು ಹಾಗೂ ಶೋಷಿತರಿಗೆ ಏನಾದರೂ ಸಹಾಯ ಮಾಡಬೇಕು ಎಂಬ ತುಡಿತ ದೇವರಾಜ ಅರಸು ಅವರಲ್ಲಿ ಇತ್ತು. ಈ ಕಾರಣಕ್ಕೆ ಅರಸು ನಮ್ಮಿಂದ ಅಗಲಿ 40 ವರ್ಷಗಳು ಕಳೆದರೂ ಅವರನ್ನು ಜನರು ಇಂದಿಗೂ ಸ್ಮರಿಸಿಕೊಳ್ಳುತ್ತಾರೆ ಎಂದು ತಿಳಿಸಿದರು.

ಮೈಲ್ಯಾಕ್ ಮಾಜಿ ಅಧ್ಯಕ್ಷ ಹೆಚ್.ಎ. ವೆಂಕಟೇಶ್ ಮಾತನಾಡಿ, ರಾಜ್ಯದ ಜನರು ಹಲವಾರು ಮುಖ್ಯಮಂತ್ರಿಗಳನ್ನು ಕಂಡಿದ್ದಾರೆ. ಆದರೆ, ದೇವರಾಜ ಅರಸರು ಮಾತ್ರ ಜನರ ಮನದಲ್ಲಿ ಶಾಶ್ವತವಾಗಿ ಉಳಿದಿದ್ದಾರೆ. ಅವರ ಹಾದಿಯಲ್ಲೇ ಸಿದ್ದರಾಮಯ್ಯ ಅವರು ಕೂಡ ಮುನ್ನಡೆಯುತ್ತಿದ್ದಾರೆ. ಇಬ್ಬರಲ್ಲೂ ಸಾಕಷ್ಟು ಸಾಮ್ಯತೆ ಕಾಣಬಹುದು ಎಂದರು.

ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿ, ದೇವರಾಜ ಅರಸು ನಾಡುಕಂಡ ಧೀಮಂತ ನಾಯಕ. ಅವರ ಗುಣಗಳನ್ನು ಹಾಗೂ ಅವರು ಮಾಡಿದ ಕೆಲಸ ಕಾರ್ಯಗಳನ್ನು ಸ್ಮರಿಸಿಕೊಳ್ಳಬೇಕು. ಅವರ ಕೊಡುಗೆ ರಾಜ್ಯಕ್ಕೆ ಅಪಾರವಾದದ್ದು. ಉಳುವವನೇ ಭೂಮಿಯ ಒಡೆಯ ಕಾನೂನು ಜಾರಿ ದೊಡ್ಡ ಸವಾಲಾಗಿತ್ತು. ಆದರೆ, ಯಶಸ್ವಿಯಾಗಿ ಇದನ್ನು ಅನುಷ್ಠಾನಕ್ಕೆ ತಂದಿದ್ದು ನಿಜಕ್ಕೂ ಉತ್ತಮ ಕಾರ್ಯ ಹೇಳಿದರು.

ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಗ್ರಾಮಾಂತರ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಮಾಜಿ ಮೇಯರ್‌ಗಳಾದ ಮೋದಾಮಣಿ, ಪುಷ್ಪಲತಾ ಚಿಕ್ಕಣ್ಣ, ಎಂ.ಸಿ.ಚಿಕ್ಕಣ್ಣ, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾ ಸಿದ್ದಶೆಟ್ಟಿ, ನಗರಪಾಲಿಕೆ ಮಾಜಿ ಸದಸ್ಯ ಆರ್.ಸೋಮಸುಂದರ್, ಮುಖಂಡರಾದ ಕೆ.ಎಸ್.ಶಿವರಾಮು, ಹಿನಕಲ್ ಉದಯ್, ಪ್ರಧಾನ ಕಾರ್ಯದರ್ಶಿಗಳಾದ ಭಾಸ್ಕರ್ ಎಲ್.ಗೌಡ, ಈಶ್ವರ ಚಕ್ಕಡಿ, ಅಬು ಅಹಮದ್, ಪಾರ್ಥಸಾರಥಿ, ಯೋಗೇಶ್ ಉಪ್ಪಾರ್, ಪ್ರಕಾಶ್ ಕುಂಬಾರ, ಕೆ.ಎಸ್.ಶಿವರಾಂ, ಆರ್.ನಾಗೇಶ್, ಕೆ.ಮಾರುತಿ ಉಪಸ್ಥಿತರಿದ್ದರು.



ಹಿಂದುಳಿದ ಹಾಗೂ ಶೋಷಿತರಿಗೆ ರಾಜಕೀಯ ಅಧಿಕಾರ ನೀಡುವ ಮೂಲಕ ಅವರನ್ನು ಸಾಮಾಜಿಕವಾಗಿ ಮುನ್ನೆಲೆಗೆ ತಂದಿದ್ದರು ದೇವರಾಜ ಅರಸು. ಯಾವುದೇ ಜನಾಂಗ ಸಾಮಾಜಿಕ ಹಾಗೂ ಆರ್ಥಿಕವಾಗಿ ಸಬಲವಾಗಬೇಕಾದರೆ ರಾಜಕೀಯ ಅಧಿಕಾರ ಬಹಳ ಮುಖ್ಯ. ಇದನ್ನು ಮನಗಂಡಿದ್ದ ದೇವರಾಜ ಅರಸು ಅವರು ಸಣ್ಣಪುಟ್ಟ ಜನಾಂಗದವರಿಗೂ ರಾಜಕೀಯ ಅಧಿಕಾರ ನೀಡಿದರು ಎಂದರು.

"-ಹೆಚ್.ವಿಶ್ವನಾಥ್, ವಿಧಾನ ಪರಿಷತ್ ಸದಸ್ಯ"

ವ್ಹೀಲಿಂಗ್ ಮಾಡ್ತಾರೆ... ಹೆಣ್ಣುಮಕ್ಕಳ ಚುಡಾಯಿಸ್ತಾರೆ... ಸಿಸಿ ಕ್ಯಾಮೆರಾಗಳು ಕೆಟ್ಟು ನಿಂತಿದೆ... ಗೂಳಿಗಳು ಕಸಾಯಿಖಾನೆಗೆ, ಲಾಂಗ್ ಹಿಡಿದು ಓಡಾಡ್ತಾರೆ...

ಶಾಂತಿ ಸಭೆಯಲ್ಲಿ ಎಸ್ಪಿ ಮುಂದೆ ದೂರುಗಳ ಸುರಿಮಳೆ



ನಂಜನಗೂಡು, ಜೂ.6– ನೀಲಕಂಠನಗರ ಬಡಾವಣೆಯಲ್ಲಿ ನಡೆದ ಚೂರಿ ಇರಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ಪೊಲೀಸ್ ಸಭಾಭವನದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್ ಅವರ ಅಧ್ಯಕ್ಷತೆಯಲ್ಲಿ ಶಾಂತಿ ಸಭೆ ನಡೆಸಲಾಯಿತು.

ಸಭೆಯಲ್ಲಿ ಮಾತನಾಡಿದ ಬಡಾವಣೆಯ ನಿವಾಸಿ ಅನಂತ್ ಬಡಾವಣೆಯಲ್ಲಿ ದ್ವಿಚಕ್ರ ವಾಹನಗಳಲ್ಲಿ ವ್ಹೀಲಿಂಗ್ ಮಾಡುತ್ತಾ ಹೆಣ್ಣು ಮಕ್ಕಳನ್ನು ಚುಡಾಯಿಸುವ ಕೃತ್ಯಗಳು ನಡೆಯುತ್ತಿವೆ, ಕಳ್ಳತನ ಹೆಚ್ಚಾಗುತ್ತಿದೆ, ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿದ್ದ ಯುವಕರ ಮೇಲೆ ದಾಳಿ ನಡೆಸಿ, ಒಬ್ಬನನ್ನು ಚೂರಿಯಿಂದ ಇರಿಯಲಾಗಿದೆ ಎಂದರು.

ಬಡಾವಣೆಯಲ್ಲಿ ಹೊರರಾಜ್ಯದವರು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಕೆಲ ತಿಂಗಳ ಹಿಂದೆ ಯುವಕನೊಬ್ಬ ಆಕಸ್ಮಿಕವಾಗಿ ನದಿಗೆ ಬಿದ್ದು ತೀರಿಕೊಂಡಾಗ ನನ್ನ ಮೇಲೆ ದೂರು ನೀಡಿ ತೊಂದರೆ ಕೊಟ್ಟಿದ್ದಾರೆ. ಬಡಾವಣೆಯಲ್ಲಿ ಅಳವಡಿಸಲಾಗಿರುವ ಸಿಸಿ ಕ್ಯಾಮೆರಾಗಳು ಕೆಟ್ಟಿವೆ, ಪೊಲೀಸ್ ಗಸ್ತು ಹೆಚ್ಚಿಸಬೇಕು ಎಂದು ಮನವಿ ಮಾಡಿದರು.

ಬಿಜೆಪಿ ಮುಖಂಡ ಬಾಲಚಂದ್ರ ಮಾತನಾಡಿ, ಹುಟ್ಟು ಹಬ್ಬ ಆಚರಿಸಿಕೊಳ್ಳುತ್ತಿದ್ದ ಯುವಕರ ಮೇಲೆ ಮಾರಕಾಸ್ತ್ರಗಳಿಂದ ದಾಳಿ ಮಾಡಿದ್ದಾರೆ. ಪ್ರಕರಣದ ಪ್ರಮುಖ ಆರೋಪಿಯನ್ನು ಪೊಲೀಸರು ಬಂಧಿಸಿಲ್ಲ. ಕೂಡಲೇ ಆರೋಪಿಯನ್ನು ಬಂಧಿಸಬೇಕು ಎಂದು ಹೇಳಿದರು.

ಅಬ್ದುಲ್ ಖಾದರ್ ಮಾತನಾಡಿ, ತಪ್ಪು ಮಾಡಿದವರಿಗೆ ಶಿಕ್ಷೆಯಾಗಲಿ, ಘಟನೆಯ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಅಪಪ್ರಚಾರ ನಡೆಯುತ್ತಿದೆ, ನಂಜನಗೂಡಿನಲ್ಲಿ ಎರಡು ಕೋಮಿನ ಜನ ಅಣ್ಣತಮ್ಮಂದಿರಂತೆ ಬಾಳುತ್ತಿದ್ದೇವೆ. ಕೆಲವು ಕಿಡಿಗೇಡಿಗಳಿಂದ ಅಶಾಂತಿಯ ವಾತಾವರಣ ನಿರ್ಮಾಣವಾಗುತ್ತಿದೆ ಪೊಲೀಸರು ಕ್ರಮವಹಿಸಬೇಕು ಎಂದು ಹೇಳಿದರು.

ಕಿರಣ್ ಮಾತನಾಡಿ, ಶ್ರೀಕಂಠೇಶ್ವರನಿಗೆ ಹರಕೆ ಬಿಟ್ಟ ಗೂಳಿಗಳನ್ನು ರಾತ್ರಿ ವೇಳೆ ಅಪಹರಿಸಿ ಕಸಾಯಿಖಾನೆಗೆ ಸಾಗಿಸಲಾಗುತ್ತಿದೆ, ನೀಲಕಂಠ ನಗರ ಬಡಾವಣೆಯ ಕೆಲವು ಯುವಕರು ಲಾಂಗ್‌ಗಳನ್ನು ಹಿಡಿದು ಓಡಾಡುತ್ತಿರುವ ವಿಡಿಯೋ ಚಿತ್ರೀಕರಣ ಮಾಡಿ ಸಾಮಾಜಿಕ ಜಾಲತಾಣದಲ್ಲಿ ರೀಲ್ಸ್ ಮಾಡಿ ಬೆದರಿಕೆ ಒಡ್ಡುತ್ತಿದ್ದಾರೆ. ಕ್ರಮವಹಿಸಬೇಕು ಎಂದು ಹೇಳಿದರು.

ಈ ಬಗ್ಗೆ ದಲಿತ ಸಂಘರ್ಷ ಸಮಿತಿ ಮುಖಂಡ ಶಂಕರಪುರ ಸುರೇಶ್ ಮಾತನಾಡಿ ನೀಲಕಂಠನಗರ ಬಡಾವಣೆ ಸೂಕ್ಷ್ಮ ಪ್ರದೇಶ, ಬಡಾವಣೆಯಲ್ಲಿ ಪೊಲೀಸ್ ಗಸ್ತು ಹೆಚ್ಚಿಸಬೇಕು, ಹೊರರಾಜ್ಯದವರು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದಾರೆ, ಪೊಲೀಸರು ಸಿ.ಸಿ. ಟಿವಿ ಅಳವಡಿಸಿ ಗಮನಿಸಬೇಕು ಎಂದು ಹೇಳಿದರು.

ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ನೀಲಕಂಠ ನಗರ ಬಡಾವಣೆಯಲ್ಲಿ ಕಳೆದ 3 ವರ್ಷಗಳಿಂದ ಯಾವುದೇ ಗಲಾಟೆ ನಡೆದಿರಲಿಲ್ಲ, ಮೈಸೂರು ಜಿಲ್ಲೆ ಐತಿಹಾಸಿಕ ನಗರ, ಈ ಜಿಲ್ಲೆಯ ನಿವಾಸಿಗಳಾದ ನೀವು ಪುಣ್ಯವಂತರು, ಕ್ಷುಲ್ಲಕ ಕಾರಣಗಳಿಗಾಗಿ ಯುವಕರು ಗಲಭೆಗಳಲ್ಲಿ ಪಾಲ್ಗೊಂಡು ಭವಿಷ್ಯ ಹಾಳುಮಾಡಿಕೊಳ್ಳಬೇಡಿ, ಇಲ್ಲಿನ ಘಟನೆಗಳನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ, ಅಕ್ರಮ ಚಟುವಟಿಕೆ, ಗಲಾಟೆ, ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ನಡೆಸುವವರ ವಿರುದ್ಧ ಕಾನೂನು ಕ್ರಮವಹಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಡಿ.ವೈ.ಎಸ್.ಪಿ. ಗೋವಿಂದರಾಜು, ತಹಶೀಲ್ದಾರ್ ಶಿವಕುಮಾರ್ ಉಪಸ್ಥಿತರಿದ್ದರು.

ಕ್ಷೇತ್ರದ ಮಗನಾಗಿ ಅಭಿವೃದ್ಧಿಪಡಿಸುವೆ

ಶಾಸಕ ದರ್ಶನ ಧ್ರುವನಾರಾಯಣ್ ಭರವಸೆ



ನಂಜನಗೂಡು, ಜೂ.6– ಕಾರ್ಯಕರ್ತರ ಪರಿಶ್ರಮ ಮತ್ತು ಕ್ಷೇತ್ರದ ಜನರು ತೋರಿದ ಪ್ರೀತಿಯ ಸಹಕಾರದಿಂದ ಐತಿಹಾಸಿಕ ಗೆಲುವು ಸಾಧಿಸಿ ಶಾಸಕನಾಗಿ ಆಯ್ಕೆಯಾಗಿದ್ದೇನೆ. ಸಂಕಷ್ಟ ಕಾಲದಲ್ಲಿ ನನ್ನ ಕೈಹಿಡಿದಿರುವ ನಿಮ್ಮನ್ನು ನನ್ನ ಜೀವನದಲ್ಲಿ ಮರೆಯುವುದಿಲ್ಲ, ನಿಮ್ಮ ಮನೆಯ ಮಗನಾಗಿ ದುಡಿದು ಕ್ಷೇತ್ರವನ್ನು ಅಭಿವೃದ್ಧಿಪಡಿಸುತ್ತೇನೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ಭರವಸೆ ನೀಡಿದರು.

ತಾಲೂಕಿನ ಕರಳಾಪುರ, ದೇವಿರಮ್ಮನಹಳ್ಳಿ, ಮಸಗೆ, ದೇವಿರಮ್ಮನಹಳ್ಳಿ ವಿವಿಧ ಬಡಾವಣೆಗಳಲ್ಲಿ ಕೃತಜ್ಞತಾ ಸಭೆಯಲ್ಲಿ ಅವರು ಮಾತನಾಡಿದರು. ತಂದೆತಾಯಿಯನ್ನು ಕಳೆದು ಕೊಂಡು ನೋವು, ದುಃಖದ ವಾತಾವರಣದಲ್ಲಿ ಈ ಚುನಾವಣೆ ಜರುಗಿತು. ಸಂಕಷ್ಟದ ಕಾಲದಲ್ಲಿ ಎಲ್ಲಾ ಜಾತಿ ಜನಾಂಗದವರೂ ಸಹ ಪಕ್ಷ ಭೇದ ಮರೆತು ಅಕ್ಕರೆ, ಪ್ರೀತಿ ತೋರಿಸಿ ನನ್ನ ಕೈಹಿಡಿದು ಶಾಸಕನಾಗಿ ಆಯ್ಕೆ ಮಾಡಿದ್ದೀರಿ ತಂದೆ ತಾಯಿಯನ್ನು ಕಳೆದುಕೊಂಡಿರುವ ನಾನು ನಿಮ್ಮನ್ನೇ ತಂದೆ ತಾಯಿ ಎಂದು ತಿಳಿದು ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸುತ್ತೇನೆ ಎಂದರು.

ಮುಂಬರುವ ದಿನಗಳಲ್ಲಿ ಕ್ಷೇತ್ರದ ಪ್ರತಿ ಗ್ರಾಮಗಳಿಗೆ ಅಧಿಕಾರಿಗಳೊಂದಿಗೆ ತೆರಳಿ ಸ್ಥಳದಲ್ಲೇ ಸಮಸ್ಯೆಗಳನ್ನು ಆಲಿಸಿ ಪರಿಹರಿಸುವ ಕೆಲಸವನ್ನು ಮಾಡುತ್ತೇನೆ. ಜೊತೆಗೆ ಪ್ರತಿ ಮನೆ ಮನೆಗೆ ತೆರಳಿ ಗ್ರಾಮಗಳಲ್ಲಿ ಆಗಬೇಕಿರುವ ಅಭಿವೃದ್ಧಿ ಕೆಲಸಗಳನ್ನು ಪಟ್ಟಿ ಮಾಡಿ ಸರ್ಕಾರದ ಗಮನಸೆಳೆದು ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸುವ ಮೂಲಕ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ರೂಪಿಸಲು ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ಸಭೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕುರಹಟ್ಟಿ ಮಹೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕರಳಾಪುರನಾಗರಾಜು, ತಾಪಂ ಮಾಜಿ ಅಧ್ಯಕ್ಷ ನಾಗೇಶ್‌ರಾಜ್, ಜಿಪಂ ಮಾಜಿ ಸದಸ್ಯೆ ಲತಾಸಿದ್ದಶೆಟ್ಟಿ ಎಸ್ಸಿ ವಿಭಾಗದ ರಾಜ್ಯ ಪ್ರಧಾನಕಾರ್ಯದರ್ಶಿ ದೊರೆಸ್ವಾಮಿನಾಯಕ, ಮುಖಂಡರಾದ ಬಸವಣ್ಣ, ಮುತ್ತುರಾಜು, ನಾಗಶೆಟ್ಟಿ, ಸ್ವಾಮಿ, ವಿಜಯಕುಮಾರ್, ರಂಗಸ್ವಾಮಿ, ಚೇತನ್, ನಾಗೇಶ್, ಚಿನ್ನಶೆಟ್ಟಿ ವೆಂಕಟೇಶ್, ಜವರಶೆಟ್ಟಿ ಸೇರಿದಂತೆ ಕಾರ್ಯಕರ್ತರು ಗ್ರಾಮಸ್ಥರು ಇದ್ದರು.

ದೇವರಾಜ ಅರಸು ಆಡಳಿತ ಚರಿತ್ರಾರ್ಹ

ಅರಸು ಪುಣ್ಯಸ್ಮರಣೆಯಲ್ಲಿ ಶಾಸಕ ಹರೀಶ್‌ಗೌಡ ಬಣ್ಣನೆ



ಹುಣಸೂರು, ಜೂ.6– ರಾಜ್ಯದ ಮುಖ್ಯಮಂತ್ರಿಯಾಗಿ, ದೂರದೃಷ್ಟಿಯುಳ್ಳ ನಾಯಕರಾಗಿ, ಮಾನವೀಯ ತುಡಿತವಿರುವ ಆಡಳಿತಗಾರರಾಗಿ ದಿ. ಮಾಜಿ ಮುಖ್ಯಮಂತ್ರಿ ಡಿ.ದೇವರಾಜು ಅರಸು ಕೈಗೊಂಡ ನಿರ್ಧಾರಗಳು ಚರಿತ್ರಾರ್ಹವಾದವು ಎಂದು ಶಾಸಕ ಜಿ.ಡಿ.ಹರೀಶ್ ಗೌಡ ಬಣ್ಣಿಸಿದ್ದಾರೆ.

ಮಾಜಿ ಮುಖ್ಯಮಂತ್ರಿ ದಿ.ಡಿ.ದೇವರಾಜ ಅರಸು ಅವರ 41ನೇ ಪುಣ್ಯಸ್ಮರಣೆ ಅಂಗವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕಲ್ಲಹಳ್ಳಿಯಲ್ಲಿ ಸಮಾಧಿಗೆ ಮತ್ತು ಹುಣಸೂರಿನಲ್ಲಿ ಅರಸು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಅವರು ಮಾತನಾಡಿದರು.

ಅರಸು ಜಾರಿಗೊಳಿಸಿದ ಭೂ ಸುಧಾರಣಾ ಕಾಯ್ದೆ, ಜೀತ ಮುಕ್ತಿ ಕಾಯ್ದೆ, ಋಣ ಪರಿಹಾರ ಕಾಯ್ದೆಯಂತಹ ಕ್ರಾಂತಿಕಾರಿ ನಿರ್ಧಾರಗಳು ಬಡವರು, ತಳಸಮುದಾಯದವರು, ಕೃಷಿ ಕಾರ್ಮಿಕರು ಸ್ವಾಭಿಮಾನದ ಬದುಕು ಸಾಗಿಸಲು ನೆರವಾದವು. ಸಾಮಾಜಿಕ ನ್ಯಾಯದ ಹರಿಕಾರ ಎಂಬ ಖ್ಯಾತಿಗೆ ಪಾತ್ರರಾದ ಅರಸು ಅವರು, ರಾಜ್ಯದ ಅಸಂಖ್ಯಾತ ಧ್ವನಿ ಇಲ್ಲದ ಜನಾಂಗಗಳನ್ನು ಗುರುತಿಸಿ ಮುಖ್ಯವಾಹಿನಿಗೆ ತಂದರು. ಹಾವನೂರು ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಿ ಹಿಂದುಳಿದ ವರ್ಗಗಳಿಗೆ ಮೀಸಲಾತಿ ಸೌಲಭ್ಯ ದೊರಕಿಸಿಕೊಟ್ಟ ದೇವರಾಜು ಅರಸು ಅವರ ಸಾಧನೆಗೆ ಸಾಟಿಯಿಲ್ಲ ಎಂದು ಬಣ್ಣಿಸಿದರು.

ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರು ಜಾರಿಗೊಳಿಸಿದ್ದ 20 ಅಂಶಗಳ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಕರ್ನಾಟಕದಲ್ಲಿ ಜಾರಿಗೊಳಿಸಿದರು. ಶೋಷಿತರು ಮತ್ತು ಹಿಂದುಳಿದ ಜನಾಂಗಕ್ಕೆ ಶಕ್ತಿ ತುಂಬುವ ಮಹತ್ವಾಕಾಂಕ್ಷೆಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದ ಕೀರ್ತಿ ದೇವರಾಜು ಅರಸು ಅವರಿಗೆ ಸಲ್ಲಬೇಕು. ಹಿಂದುಳಿದ ವರ್ಗಗಳಿಗೆ ಉದ್ಯೋಗದಲ್ಲಿ ಮೀಸಲಾತಿ, ಸಮಾಜದ ದುರ್ಬಲ ವರ್ಗಕ್ಕೆ ಮಾಸಾಶನ ಮೂಲಕ ಬದುಕಿಗೆ ಭದ್ರತೆ, ನಿರುದ್ಯೋಗ ಭತ್ಯೆಯ ಮೂಲಕ ನಿರುದ್ಯೋಗಿ ಯುವಕರಿಗೆ ಬದುಕಿನ ಭರವಸೆಯನ್ನು ಮೂಡಿಸಿದ ಕಾರ್ಯಕ್ರಮ ದೇಶದಲ್ಲಿಯೇ ವಿನೂತನವಾಗಿದೆ ಎಂದರು.

ಮೈಸೂರು ಎಂದಿದ್ದ ರಾಜ್ಯದ ಹೆಸರನ್ನು ಕರ್ನಾಟಕ ಎಂದು ಅಧಿಕೃತವಾಗಿ ಘೋಷಿಸಿದ್ದು, ಕನ್ನಡವನ್ನು ಆಡಳಿತ ಭಾಷೆಯಾಗಿ ಅಂಗೀಕರಿಸಿದ್ದು, ಅಂದಿನ ಮಟ್ಟಿಗೆ ವಿನೂತನವೆನಿಸಿದ್ದ ತೀರ್ಮಾನವಾಗಿತ್ತು. ಹಿಂದುಳಿದ ವರ್ಗಗಳ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಅಭಿವೃದ್ಧಿಗೆ ಸರ್ಕಾರ ಪೂರಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರು. ಇಂತಹ ಮಹಾನ್ ನಾಯಕ ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲಾ ನಡೆದು ಸಮಾಜದ ಸಮಗ್ರ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಹೇಳಿದರು.

ಹೆಚ್.ಡಿ.ಕೋಟೆ ಸರ್ಕಾರಿ ಆಸ್ಪತ್ರೆಯ ಡಯಾಲಿಸಿಸ್ ಯಂತ್ರಕ್ಕೆ ರೋಟರಿಯಿಂದ ಕಂಪ್ಯೂಟರ್ ಕೊಡುಗೆ



> ಹೆಚ್.ಡಿ.ಕೋಟೆ ಸರ್ಕಾರಿ ಆಸ್ಪತ್ರೆಯಲ್ಲಿ ಬಡ ಜನತೆಗೆ ಉತ್ತಮ ರೀತಿಯ ಸೌಲಭ್ಯ ದೊರಕಬೇಕು ಎಂಬ ನಿಟ್ಟಿನಲ್ಲಿ ಕೋಟೆ ರೋಟರಿ ಕ್ಲಬ್ ವತಿಯಿಂದ ಈಗಾಗಲೇ ಡಯಾಲಿಸಿಸ್ ಯಂತ್ರವನ್ನು ನೀಡಲಾಗಿದ್ದು ಅದಕ್ಕೆ ಕಂಪ್ಯೂಟರ್ ಅವಶ್ಯಕತೆ ಇದ್ದ ಕಾರಣ ಅದನ್ನು ಕೂಡ ಆಸ್ಪತ್ರೆಗೆ ನೀಡಲಾಗಿದೆ.
> -ಪ್ರಕಾಶ್ ಕಾರಂತ್,
> ಜಿಲ್ಲಾ ಗವರ್ನರ್

ಹೆಚ್.ಡಿ.ಕೋಟೆ, ಜೂ.6– ತಾಲೂಕಿನಲ್ಲಿ ಅತಿ ಹೆಚ್ಚು ಬಡ ಜನತೆ ಇದ್ದು ಅವರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರೋಟರಿ ಕ್ಲಬ್ ವತಿಯಿಂದ ಸಾರ್ವಜನಿಕ ಆಸ್ಪತ್ರೆಗೆ, ಸಾಕಷ್ಟು ಅನುಕೂಲವಾಗುವ ನಿಟ್ಟಿನಲ್ಲಿ ಸಹಾಯಗಳನ್ನು ಮಾಡಿಕೊಂಡು ಬರಲಾಗುತ್ತಿದೆ ಎಂದು ಡಾ.ಪ್ರಜ್ವಲ್ ತಿಳಿಸಿದರು.

ಪಟ್ಟಣದಲ್ಲಿರುವ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ತಾಲೂಕು ರೋಟರಿ ಕ್ಲಬ್ ವತಿಯಿಂದ ಡಯಾಲಿಸೀಸ್ ಯಂತ್ರಕ್ಕೆ ಕಂಪ್ಯೂಟರ್ ನೀಡಿ, ಅದನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಾಲೂಕಿನ ಬಡ ಕುಟುಂಬದವರು, ಸಾಕಷ್ಟು ಮಂದಿ ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದಾರೆ. ಅವರುಗಳು ಮೈಸೂರು ನಗರಕ್ಕೆ ತೆರಳಿ ಡಯಾಲಿಸಿಸ್ ಮಾಡಿಸಿಕೊಳ್ಳಲು ಕಷ್ಟವಾಗುತ್ತಿತ್ತು. ಈ ಒಂದು ಸಮಸ್ಯೆಯನ್ನು ಸಂಬಂಧಪಟ್ಟ ರೋಟರಿ ಕ್ಲಬ್ ಅವರಿಗೆ ತಿಳಿಸಿದ ಸಂದರ್ಭದಲ್ಲಿ ಬಡ ಜನತೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಕ್ಲಬ್ ವತಿಯಿಂದ ಬೆಂಗಳೂರಿನ ರೋಟರಿ ಕ್ಲಬ್ ಸದಸ್ಯ ಪ್ಯಾಂ ಹಾಗೂ ಅವರ ಪತ್ನಿ ಲತಾ ದಂಪತಿಗಳು ಸುಮಾರು 7 ಲಕ್ಷ ರೂ. ವೆಚ್ಚದ ಡಯಾಲಿಸೀಸ್ ಯಂತ್ರವನ್ನು ಕೊಡುಗೆಯಾಗಿ ನೀಡಿದ್ದಾರೆ, ಅದಕ್ಕೆ ಕಂಪ್ಯೂಟರ್ ಅವಶ್ಯಕತೆ ಇದ್ದ ಕಾರಣ ಅದನ್ನು ತಾಲೂಕು ರೋಟರಿ ಕ್ಲಬ್ ವತಿಯಿಂದ ಉಚಿತವಾಗಿ ನೀಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗವರ್ನರ್ ಪ್ರಕಾಶ್ ಕಾರಂತ್, ತಾಲೂಕು ರೋಟರಿ ಕ್ಲಬ್ ಅಧ್ಯಕ್ಷ ಗಣೇಶ್ ಲಾಡ್, ಕಾರ್ಯದರ್ಶಿ ನಿರಂಜನ್, ಡಾ: ಸೋಮಣ್ಣ, ಡಾ. ಶಿವಕುಮಾರ್, ಡಾ. ಮುರುಗೇಶ್, ಡಾ. ಜಯಂತ್, ಜಿಲ್ಲಾ ಸಂಘದ ಶುಶ್ರೂಷಾ ಅಧ್ಯಕ್ಷ ಪ್ರಶಾಂತ್ ಗಂಗೊಳ್ಳಿ, ವಾಸುದೇವ್, ಮಹೇಶ್, ನಾರಾಯಣ್ ಲಾಲ್, ಆರ್ಮುಗಂ, ಶಿವಣ್ಣ, ಶ್ರಿ ಕಂಠಯ್ಯ, ಗಂಗಾಧರ್, ಮಹದೇವಯ್ಯ, ಶೈಲಾ, ಬಸವರಾಜ್, ಸ್ವಾಮಿ, ರಾಕೇಶ್ ದಾಸ್, ಸತೀಶ್, ಮಹೇಂದ್ರ ಪ್ರಸಾದ್ ಇನ್ನಿತರರು ಹಾಜರಿದ್ದರು.



ಪಿರಿಯಾಪಟ್ಟಣ ತಾಲೂಕಿನ ಹಾರನಹಳ್ಳಿ ಹೋಬಳಿಯಲ್ಲಿ ಕೇರಳ ರಾಜ್ಯಕ್ಕೆ ಮಿತಿಮೀರಿದ ಜಲ್ಲಿ, ಎಂ ಸ್ಯಾಂಡ್ ತುಂಬಿದ ಟಿಪ್ಪರ್, ಲಾರಿಗಳು ಸಂಚರಿಸುತ್ತಿದ್ದು ರಸ್ತೆಗಳು ಹಾಳಾಗುವ ಮುನ್ನ ಅವುಗಳ ಓಡಾಟ ನಿಲ್ಲಿಸುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ನಾಲ್ವಡಿ ಆದರ್ಶದಂತೆ ಜನಪ್ರತಿನಿಧಿಗಳು ಕೆಲಸ ಮಾಡಬೇಕು



ಕೆ.ಆರ್.ನಗರ, ಜೂ.6– ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ದೂರ ದೃಷ್ಟಿಯಿಂದ ಹಳೇ ಮೈಸೂರು ಭಾಗ ಸ್ವಾತಂತ್ರ್ಯ ಪೂರ್ವದಲ್ಲೇ ಅಭಿವೃದ್ಧಿ ಕಂಡಿದ್ದು ಜನತೆ ನೆಮ್ಮದಿಯಿಂದ ಜೀವನ ನಡೆಸಲು ಸಾಧ್ಯವಾಗಿದ್ದು, ಈಗಿನ ಚುನಾಯಿತ ಸದಸ್ಯರು ಇದಕ್ಕೆ ಪೂರಕವಾಗಿ ಕೆಲಸ ಮಾಡಬೇಕು ಎಂದು ಶಾಸಕ ಡಿ.ರವಿಶಂಕರ್ ಹೇಳಿದರು.

ಪಟ್ಟಣದ ಗರುಡಗಂಭ ವೃತ್ತದಲ್ಲಿರುವ ಒಡೆಯರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ನಂತರ ನಡೆದ ವೇದಿಕೆ ಸಮಾರಂಭದಲ್ಲಿ ಮಾತನಾಡಿದ ಅವರು ಒಡೆಯರ್ ಕುಟುಂಬ ರಾಜ ಮನೆತನಕ್ಕೆ ಮಾತ್ರ ಸೀಮಿತಗೊಳ್ಳದೆ ಗ್ರಾಮೀಣ ಭಾಗದ ಜನತೆಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿತ್ತು ಎಂದರು.

ರೈತರಿಗೆ ಅನುಕೂಲ ಕಲ್ಪಿಸುವ ಸಲುವಾಗಿ ನೂರು ವರ್ಷಗಳ ಹಿಂದೆಯೇ ಚಾಮರಾಜ ಎಡ ಮತ್ತು ಬಲ ದಂಡೆ ನಾಲೆಗಳನ್ನು ನಿರ್ಮಾಣ ಮಾಡಿದ್ದರಿಂದ ಕೆಆರ್.ನಗರ ಕ್ಷೇತ್ರ ಭತ್ತದ ಕಣಜ ಎಂದು ಪ್ರಸಿದ್ದಿ ಪಡೆಯಲು ಸಾಧ್ಯವಾಯಿತು ಎಂದು ತಿಳಿಸಿದ ಶಾಸಕರು ರೈತರ ಕೃಷಿ ಜಮೀನು ನೀರಾವರಿ ಪ್ರದೇಶವಾಗಲು ಕಾರಣರಾದ ಒಡೆಯರ್‌ರವರ ಭಾವಚಿತ್ರ ಕ್ಷೇತ್ರದ ಪ್ರತಿ ಮನೆಯಲ್ಲಿರುವುದೇ ಅಭಿವೃದ್ಧಿ ಕಾರ್ಯಕ್ಕೆ ಸಾಕ್ಷಿ ಎಂದು ಬಣಿಸಿದರು.

ಇದೇ ಸಂದರ್ಭದಲ್ಲಿ ತಾಲೂಕು ಕಚೇರಿ ವತಿಯಿಂದ ನೀಡಲಾದ ವಿವಿಧ ಮಾಶಾಸನದ ಆದೇಶ ಪತ್ರಗಳನ್ನು ಫಲಾನುಭವಿಗಳಿಗೆ ಶಾಸಕ ಡಿ.ರವಿಶಂಕರ್ ವಿತರಿಸಿದರು. ಪುರಸಭೆ ಸದಸ್ಯರಾದ ಕೋಳಿಪ್ರಕಾಶ್, ಸೈಯದ್‌ಸಿದ್ದಿಕ್, ಬಿ.ಎಸ್.ತೋಂಟದಾರ್ಯ, ಸೌಮ್ಯ ಲೋಕೇಶ್, ಮುಖ್ಯಾಧಿಕಾರಿ ಸುಧಾರಾಣಿ, ಅಧಿಕಾರಿಗಳಾದ ಲೋಕೇಶ್, ಯೋಗೀಶ್ ಕುಮಾರ್, ರಾಜೇಂದ್ರ, ಸಮಾಜ ಕಲ್ಯಾಣಾಧಿಕಾರಿ ಎಸ್.ಎಂ.ಅಶೋಕ್, ಸಿಡಿಪಿಓ ಪೂರ್ಣಿಮ, ಸಿಪಿಐ ರೇವಣ್ಣ, ಮುಖಂಡರಾದ ಹೆಚ್.ಪಿ.ಪ್ರಶಾಂತ್, ಕೆ.ಪಿ.ಜಗದೀಶ್, ಚೆಲುವರಾಜು, ಹಂಪಾಪುರನಾಗರಾಜು, ಮಹದೇವ್ ಸೇರಿದಂತೆ ಇನ್ನಿತರರು ಹಾಜರಿದ್ದರು.

ಲೋಕಸಭಾ ಚುನಾವಣೆಯಲ್ಲಿ ನನ್ನ ಮಗ ಅರ್ಜುನ್ ಚಾ.ನಗರದಿಂದ ಬಿಜೆಪಿಗೆ ಸೂಕ್ತ ಅಭ್ಯರ್ಥಿ

ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ಮಗನ ಪರ ಬ್ಯಾಟಿಂಗ್



ತಿ.ನರಸೀಪುರ, ಜೂ.6– ಮುಂಬರುವ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ ಮೀಸಲು ಕ್ಷೇತ್ರದಲ್ಲಿ ಗೆಲ್ಲುವ ಸಾಮರ್ಥ್ಯವಿರುವ ಪುರಸಭೆ ಸದಸ್ಯ, ಚಲನಚಿತ್ರ ನಟ ಅರ್ಜುನ್ ರಮೇಶ್ ಅವರು ಬಿಜೆಪಿಗೆ ಸೂಕ್ತವಾದ ಅಭ್ಯರ್ಥಿಯಾಗಿದ್ದು, ಆತನನ್ನು ವರಿಷ್ಠರು ಈ ಬಾರಿ ಕಣಕ್ಕಿಳಿಸಬೇಕು ಎಂದು ಪಕ್ಷದ ಹಿರಿಯ ಮುಖಂಡ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ಒತ್ತಾಯಿಸಿದ್ದಾರೆ.

ಪಟ್ಟಣದ ಡಾ.ಬಾಬು ಜೀವನ್ ರಾಂ ಸಮುದಾಯ ಭವನದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು 2024ರ ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಕೆಲವು ತಿಂಗಳಷ್ಟೇ ಬಾಕಿಯಿದೆ. ಚಾಮರಾಜನಗರ ಕ್ಷೇತ್ರದಲ್ಲಿ ಬಿಜೆಪಿ ಮತ್ತೆ ಗೆಲ್ಲಲೇಬೇಕು. ಪಕ್ಷದ ಹೈಕಮಾಂಡ್ ಚುನಾವಣೆಯಲ್ಲಿ ಯುವಕರಿಗೆ ಆದ್ಯತೆ ಕೊಟ್ಟು ಅವಕಾಶ ಕಲ್ಪಿಸಬೇಕು. ಪಕ್ಷದ ಸಂಘಟನೆ ಹಾಗೂ ಸಮಾಜ ಸೇವೆಯಲ್ಲೂ ಎರಡೂ ಜಿಲ್ಲೆಗಳಲ್ಲಿಯೂ ಪಾಪ್ಯುಲಾರಿಟಿ ಗಳಿಸಿರುವ ಅರ್ಜುನ್ ರಮೇಶ್ ಸ್ಪರ್ಧಿಸಿ, ಗೆಲ್ಲುವಂತಹ ಎಲ್ಲಾ ಅರ್ಹತೆಯಿದೆ. ಹಾಗಾಗಿ ಅವರಿಗೆ ಅವಕಾಶ ನೀಡಬೇಕು ಎಂದು ವರಿಷ್ಠರನ್ನು ಒತ್ತಾಯಿಸಿದರು.

ಬಿಜೆಪಿ ಪಕ್ಷದ ಪ್ರಾಥಮಿಕ ಸದಸ್ಯತ್ವ ಪಡೆಯುವ ಮೂಲಕವೇ ಸಕ್ರಿಯ ರಾಜಕಾರಣ ಆರಂಭಿಸಿದ ಅರ್ಜುನ್ ರಮೇಶ್ ಯುವಮೋರ್ಚಾ ಅಧ್ಯಕ್ಷ, ಜಿಲ್ಲಾ ಉಪಾಧ್ಯಕ್ಷ ಹಾಗೂ ಪ್ರತಾಪ್ ಸಿಂಹ ರಾಜ್ಯಾಧ್ಯಕ್ಷ ಆಗಿದ್ದಾಗ ರಾಜ್ಯ ಕಾರ್ಯಕಾರಿಣಿಯ ಸದಸ್ಯರಾಗಿಯೂ 15 ವರ್ಷಗಳ ಕಾಲ ಪಕ್ಷದಲ್ಲಿ ನಿಷ್ಠೆಯಿಂದ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಗುರುತಿಸಿಕೊಂಡು ದುಡಿದಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರು ಪ್ರತಿನಿಧಿಸುವ ವರುಣ ಕ್ಷೇತ್ರದ ವ್ಯಾಪ್ತಿಯ ಪುರಸಭೆಯ 14 ನೇ ವಾರ್ಡ್‌ನಲ್ಲಿ ಅತ್ಯಧಿಕ ಮತಗಳ ಅಂತರದಲ್ಲಿ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಆದ್ದರಿಂದ ದೆಹಲಿ ನಾಯಕರು ಇವರ ಸಾಮರ್ಥ್ಯ ಮತ್ತು ಅರ್ಹತೆಯನ್ನು ಪರಿಗಣಿಸಿ ಲೋಕಾಸಭಾ ಚನಾವಣೆಯಲ್ಲಿ ಸ್ಪರ್ಧೆಗೆ ಗ್ರೀನ್ ಸಿಗ್ನಲ್ ಕೊಡಬೇಕು ಎಂದು ಆಗ್ರಹಿಸಿದರು.

ಜನರಿಗೆ ಸುಳ್ಳು ಆಶ್ವಾಸನೆ ನೀಡಿ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಲೋಕಸಭಾ ಚುನಾವಣೆ ವೇಳೆಗೆ ಪತನಗೊಳ್ಳಲಿದೆ. ಮುಂದಿನ 9 ತಿಂಗಳಿನಲ್ಲಿ ಬರುವ ಲೋಕಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ ಗೆಲ್ಲಲು ಈಗಿನಿಂದಲೇ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿಯೂ ಸಂಘಟನೆಯ ಕಾರ್ಯವನ್ನು ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರ ಜೊತೆಗೂಡಿ ಆರಂಭಿಸಬೇಕಿದೆ. ಅದಕ್ಕಾಗಿ ಅಭ್ಯರ್ಥಿಯ ಆಯ್ಕೆ ಪ್ರಕ್ರಿಯೆಯೂ ಮುಗಿಯಬೇಕು. ಹೈಕಮಾಂಡ್ ಕೂಡಲೇ ರಾಜ್ಯದ ನಾಯಕರೊಂದಿಗೆ ಚರ್ಚಿಸಿ ನಿರ್ಧಾರ ಕೈಗೊಳ್ಳಬೇಕು. ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಅರ್ಜುನ್ ರಮೇಶ್ ಸ್ಪರ್ಧಿಸಲು ಅವಕಾಶ ಕಲ್ಪಿಸಲೇಬೇಕು ಎಂದು ಸಿ.ರಮೇಶ್ ಒತ್ತಾಯಿಸಿದರು.

ಎಲ್ಲರೂ ವಿದ್ಯಾವಂತರಾಗಿ ಉತ್ತಮ ಪ್ರಜೆಗಳಾಗಿ: ಎಸ್.ಮಹದೇವಯ್ಯ



ಹಲ್ಲಹಳ್ಳಿ, ಜೂ.6– ಪ್ರತಿಯೊಬ್ಬರೂ ವಿದ್ಯಾವಂತರಾದಾಗ ಮಾತ್ರ ಉತ್ತಮ ಪ್ರಜೆಯಾಗಲು ಸಾಧ್ಯ ಎಂದು ಕಾಂಪೋಸ್ಟ್ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ ತಿಳಿಸಿದರು.

ಗ್ರಾಮದ ಶಿವಕುಮಾರ ಕಲ್ಯಾಣ ಮಂಟಪದಲ್ಲಿ ಕನ್ನಡ ರಕ್ಷಣಾ ವೇದಿಕೆಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈ ಹಿಂದೆ ಗ್ರಾಮೀಣ ಬಡ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡಲು ಕಷ್ಟವಿತ್ತು. ಆದರೆ ಪ್ರಸ್ತುತ ಸರ್ಕಾರ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡಿರುವುದರಿಂದ ಗ್ರಾಮೀಣ ವಿದ್ಯಾರ್ಥಿಗಳು ಓದಿನ ಕಡೆಹೆಚ್ಚು ಗಮನ ಹರಿಸಬೇಕು. ಆ ಮೂಲಕ ನಗರ ಪ್ರದೇಶದ ವಿದ್ಯಾರ್ಥಿಗಳಿಗಿಂತ ಹೆಚ್ಚು ಅಂಕ ಪಡೆಯಲು ಮುಂದಾಗಬೇಕು. ಪೋಷಕರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸುವ ಮೂಲಕ ದೇಶದ ಉತ್ತಮ ಪ್ರಜೆಯಾಗಲು ಸಹಕರಿಸಬೇಕು ಎಂದರು.

ಈ ವೇಳೆ ವಾಟಾಳು ಸೂರ್ಯ ಸಿಂಹಾಸನ ಮಠದ ಶ್ರೀಡಾ.ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ, ಮುಖಂಡರಾದ ಕೆ.ಎಂ.ಶಿವಕುಮಾರ್, ಹೆಚ್.ಎಂ.ಬಸವರಾಜ್, ಎಂ.ವಿ.ಬಸವರಾಜಪ್ಪ, ನಾಗೇಶ್, ನದೀಮ್ ಅಹಮ್ಮದ್, ಸಾಜನ್, ತುಕಾರಾಂ, ಅಣ್ಣಯ್ಯಶೆಟ್ಟಿ, ಗುರುಪ್ರಸಾದ್, ಸಾಹಿತಿ ಹುಬೀ ನಾಗರಾಜ್, ಕನ್ನಡ ರಕ್ಷಣಾ ವೇದಿಕೆ ರಾಜ್ಯ ಕಾರ್ಯಾಧ್ಯಕ್ಷ ಇತಿಹಾಸ್ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.



ಮೂಗೂರಿನ ಕೆಪಿಎಸ್ ಶಾಲೆಯ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಿಶ್ವ ಪರಿಸರ ದಿನದಂದು ಶಾಲೆಗೆ ಗಿಡ ವಿತರಣೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಡಾ ರಮೇಶ್, ಮುಖ್ಯ ಪೇದೆ ಮಹದೇವ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾಧಿಕಾರಿ ಹನುಮಂತಪ್ಪ, ಸಮುದಾಯ ಆರೋಗ್ಯ ಅಧಿಕಾರಿ ಸಂಗೀತ, ವಿಚಾರವಾದಿ ಕೆ ಎನ್ ಪ್ರಭುಸ್ವಾಮಿ, ಶಿವಶಂಕರ್, ಉಪಪ್ರಾಂಶುಪಾಲ ಹನುಮಂತಪ್ಪ ತಳವಾರ್ ಮಹಾದೇವ್, ಮಲ್ಲೇಶ್, ಕೇಶವ್, ರಮೇಶ್, ನಿರ್ಮಲಾ, ಕಾವೇರಿ, ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು, ಶಾಲೆಯ ಮಕ್ಕಳು ಹಾಜರಿದ್ದರು.

ಈ ವಾರ ಕೇಂದ್ರದ ವೀಕ್ಷಕರ ಜೊತೆ ಬಿಜೆಪಿಯಿಂದ ಆತ್ಮಾವಲೋಕನ ಸಭೆ

ಬೆಂಗಳೂರು: ಈ ವಾರ ಬಿಜೆಪಿ ಸೋಲಿನ ಆತ್ಮಾವಲೋಕನ ಸಭೆ ನಡೆಸಲು ಮುಂದಾಗಿದೆ. ಜೂನ್ 8 ಅಥವಾ 9 ರಂದು ಬೆಂಗಳೂರಿನಲ್ಲಿ ಆತ್ಮಾವಲೋಕನ ಸಭೆ ನಡೆಯಲಿದ್ದು, ಈ ಸಭೆಗೆ ದೆಹಲಿಯಿಂದ ವಿಶೇಷ ವೀಕ್ಷಕರು ಬರಲಿದ್ದಾರೆ.

ಗೆದ್ದ ಶಾಸಕರ ಜೊತೆ ಮತ್ತು ಪರಾಜಿತ ಶಾಸಕರ ಜತೆ ಪ್ರತ್ಯೇಕ ಆತ್ಮಾವಲೋಕನ ಸಭೆ ನಡೆಯಲಿದೆ. ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಮಾಜಿ ಸಿಎಂ ಯಡಿಯೂರಪ್ಪ, ಮಾಜಿ ಸಿಎಂ ಬೊಮ್ಮಾಯಿ, ಉಸ್ತುವಾರಿ ಅರುಣ್ ಸಿಂಗ್ ಮುಂತಾದವರು ಭಾಗಿಯಾಗಲಿದ್ದಾರೆ.



ಕರ್ನಾಟಕ ಸರ್ಕಾರ
ಮಿರ್ಲೆ ಗ್ರಾಮ ಪಂಚಾಯಿತಿ ಕಾರ್ಯಾಲಯ
ಟೆಂಡರ್ ಕಂ ಬಹಿರಂಗ ಹರಾಜು ಪ್ರಕಟಣೆ
... 05–06–2023 ...
ಸಹಿ/– ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಮಿರ್ಲೆ ಗ್ರಾಮ ಪಂಚಾಯಿತಿ

ನಗರಸಭಾ ಕಾರ್ಯಾಲಯ, ನಂಜನಗೂಡು
ಮೈಸೂರು ಜಿಲ್ಲೆ, ಕಚೇರಿ ದೂರವಾಣಿ :08221–226236, 08221–226888
website:www.nanjanaguducity.mrc.gov.in Email: itstaff_ulb_nanjangud@yahoo.co.in

ಸಂ:ನಸಕಾ/ಕ.ಶಾ/ಪಿ.ಆರ್– / 2023–24 ದಿನಾಂಕ: 06–06–2023

ಸಾರ್ವಜನಿಕ ಪ್ರಕಟಣೆ

ನಂಜನಗೂಡು ನಗರಸಭಾ ವ್ಯಾಪ್ತಿಗೆ ಬರುವ ಆಸ್ತಿ ಮಾಲೀಕರು ಮನೆಗಳು, ವಾಣಿಜ್ಯ ಕಟ್ಟಡ, ವಾಸದ ಕಟ್ಟಡ ಖಾಲಿ ನಿವೇಶನ ಮತ್ತು ಇನ್ನಿತರ ಆಸ್ತಿಗಳನ್ನು ಸರ್ಕಾರದ ಆದೇಶದಂತೆ ಗಣಕೀಕರಣಗೊಳಿಸಲು ನಗರಸಭೆಯಿಂದ ಪ್ರತಿ ವಾರ್ಡಿನ ಮನೆ ಮನೆಗೆ ನಗರಸಭೆ ಸಿಬ್ಬಂದಿಗಳು ಭೇಟಿ ನೀಡಿ, ಸಮೀಕ್ಷೆ ಮಾಡುತ್ತಿದ್ದಾರೆ.

ತಮ್ಮ ಆಸ್ತಿಗೆ ಸಂಬಂಧಿಸಿದಂತೆ ಮೂಲ ದಾಖಲಾತಿಗಳಾದ ಕ್ರಯಪತ್ರ, ಮಾಲೀಕರ ಭಾವಚಿತ್ರ, ಸ್ವತ್ತಿನ ಭಾವಚಿತ್ರ, ಮಾಲೀಕರ ಗುರುತಿನ ದಾಖಲೆಗಳಾದ ಪಾನ್ ಕಾರ್ಡ್, ಮತದಾನದ ಗುರುತಿನ ಚೀಟಿ, ಹಾಗೂ ಪಡಿತರ ಚೀಟಿ, (ಈ ಮೂರರಲ್ಲಿ ಒಂದು) ಆಧಾರ್ ಕಾರ್ಡ್, ತೆರಿಗೆ ಪಾವತಿಸಿರುವ ರಶೀದಿ, ನಗರಸಭೆಯಿಂದ ನೀಡಿರುವ ನಮೂನೆ–3, ಕಟ್ಟಡ ಪರವಾನಿಗೆ, ನಲ್ಲಿ ಸಂಪರ್ಕದ ಕಾರ್ಡ್, ವಿದ್ಯುತ್ ಬಿಲ್‌ಗಳನ್ನು ನಗರಸಭಾ ಸಿಬ್ಬಂದಿಗಳಿಗೆ ನೀಡಬೇಕು.

ಆಸ್ತಿಗಳನ್ನು ಗಣಕೀಕರಣಗೊಳಿಸಲು ನಗರಸಭೆಯೊಂದಿಗೆ ಸಹಕರಿಸಬೇಕು. ನಗರಸಭೆಯಿಂದ ಆಸ್ತಿ ಮಾಹಿತಿ ಸಮೀಕ್ಷೆ ನಮೂನೆ ನೀಡಿದ ನಂತರ ಆ ದಿನವೇ ದಾಖಲಾತಿಗಳನ್ನು ಜೆರಾಕ್ಸ್ ಮಾಡಿ, ನಕಲು ಪ್ರತಿಗಳನ್ನು ಆಸ್ತಿ ಮಾಹಿತಿ ನಮೂನೆಯೊಂದಿಗೆ ಲಗತ್ತಿಸಬೇಕು. ನೀಡದಿದ್ದಲ್ಲಿ ಮುಂದಿನ ದಿನಗಳಲ್ಲಿ ನಿಮ್ಮ ಆಸ್ತಿಗಳನ್ನು ಕ್ರಯಮಾಡಲು, ಇ–ಆಸ್ತಿ ಮಾಡಲು ಮತ್ತು ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಕಷ್ಟವಾಗಲಿದೆ ಎಂದು ತಿಳಿಸುತ್ತಾ ಮೇಲ್ಕಂಡ ದಾಖಲೆಗಳನ್ನು ನೀಡಿ ನಗರಸಭೆಯೊಂದಿಗೆ ಸಹಕರಿಸಲು ಕೋರಿದೆ.

ಸಹಿ/– ಪೌರಾಯುಕ್ತರು, ನಗರಸಭೆ, ನಂಜನಗೂಡು